ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 42 | ಏಪ್ರಿಲ್ 14 ಗುರುವಾರ 2022

ದೂರವಾಣಿ: 2496520, 2496521, 2496526, 2496527, 2496528, ಜಾಹೀರಾತು: 2496522, 2496523,
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸಂಪುಟ: 43 | ಸಂಚಿಕೆ: 354 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com ಜಾಹೀರಾತು: ad@mysurumithra.com ₹4

ಶೇ.5ರಷ್ಟು ರಿಯಾಯಿತಿ: ಕೇವಲ 12 ದಿನದಲ್ಲಿ ಮೈಸೂರು ಪಾಲಿಕೆಯಲ್ಲಿ 14.25 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹ

ಎಲ್ಲಾ 9 ವಲಯ ಕಚೇರಿಗಳಲ್ಲಿ ತೆರಿಗೆ ಪಾವತಿಸಲು ನಾಗರಿಕರ ಉತ್ಸಾಹ, ಪಾಲಿಕೆಯಿಂದ ಸೂಕ್ತ ವ್ಯವಸ್ಥೆ

ಮೈಸೂರು, ಏ.13(ಆರ್‌ಕೆ)– ಶೇ.5ರಷ್ಟು ರಿಯಾಯಿತಿ ನೀಡಿರುವುದರಿಂದ ಆಸ್ತಿ ತೆರಿಗೆ ಪಾವತಿಸಲು ಮಾಲೀಕರು ಉತ್ಸಾಹ ತೋರುತ್ತಿದ್ದಾರೆ. ಇದರಿಂದ ಕೇವಲ 12 ದಿನದಲ್ಲಿ 14.25 ಕೋಟಿ ರೂ. ತೆರಿಗೆ ಸಂಗ್ರಹವಾಗಿದೆ.


ಏ.1ರಿಂದ 12ರವರೆಗೆ ಮೈಸೂರು ಮಹಾನಗರಪಾಲಿಕೆಯ ಎಲ್ಲಾ 9 ವಲಯ ಕಚೇರಿಗಳಲ್ಲಿ ಒಟ್ಟು 14,24,80,145 ರೂ.ಗಳ ಆಸ್ತಿ ತೆರಿಗೆಯನ್ನು ಪಾವತಿಸಲಾಗಿದೆ ಎಂದು ನಗರ ಪಾಲಿಕೆ ಆಯುಕ್ತ ಲಕ್ಷ್ಮೀಕಾಂತರೆಡ್ಡಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಶೇ.5ರಷ್ಟು ರಿಯಾಯಿತಿ ನೀಡಿರುವುದರಿಂದ ಆಸ್ತಿ ಮಾಲೀಕರು ತೆರಿಗೆ ಪಾವತಿಸಲು ಉತ್ಸಾಹ ತೋರುತ್ತಿದ್ದಾರೆ. ಆನ್‌ಲೈನ್ ಮತ್ತು ಆಫ್‌ಲೈನ್‌ನಲ್ಲಿ ತೆರಿಗೆ ಪಾವತಿಗೆ ನಾವು ಸಕಲ ಸೌಲಭ್ಯ ಕಲ್ಪಿಸಿರುವುದಾಗಿಯೂ ತಿಳಿಸಿದರು.

ಏ.12ರಂದು ಒಂದೇ ದಿನ 2,356 ಮಂದಿಯಿಂದ ಒಟ್ಟು 1.85, 91,441ರೂ. ತೆರಿಗೆ ಸಂಗ್ರಹವಾಗಿದೆ. ವಲಯ ಕಚೇರಿ 1ರಲ್ಲಿ 25,68, 745 ರೂ., 2ರಲ್ಲಿ 21,74,488 ರೂ., 3ರಲ್ಲಿ 33,67,505ರೂ., 4ರಲ್ಲಿ 27,61,456ರೂ., 5ರಲ್ಲಿ 14,50,095 ರೂ., 6ರಲ್ಲಿ 29,23,567 ರೂ., 7ರಲ್ಲಿ 6,72,704 ರೂ., 8ರಲ್ಲಿ 11,08,861 ರೂ. ಹಾಗೂ ವಲಯ ಕಚೇರಿ 9ರಲ್ಲಿ 15,64,020 ರೂ. ಆಸ್ತಿ ತೆರಿಗೆ ಸಂಗ್ರಹಿಸಲಾಗಿದೆ. ಒಟ್ಟು 1,85,91,441 ರೂ. ಸಂಗ್ರಹಣೆಯಾಗಿದ್ದು, ನಗದು ರೂಪದಲ್ಲಿ 1.59, 73,637 ರೂ. ಹಾಗೂ ಚೆಕ್ ಮತ್ತು ಡ್ರಾಫ್ಟ್ ಮೂಲಕ 26,17,804 ರೂ. ತೆರಿಗೆ ಪಾವತಿಸಲಾಗಿದೆ. ಉಳಿದಂತೆ ಏ.1ರಿಂದ ಏ.11ರವರೆಗೆ ಒಟ್ಟು 12,38,88,704ರೂ. ತೆರಿಗೆ ವಸೂಲಿ ಮಾಡಲಾಗಿದೆ. ಸರ್ಕಾರಿ ರಜೆ ದಿನವಾದರೂ ಏ.14 ಹಾಗೂ 15ರಂದೂ ತೆರಿಗೆ ಪಾವತಿಸಿಕೊಳ್ಳಲಾಗುವುದು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.



ಆಸ್ತಿ ತೆರಿಗೆ ಪಾವತಿಸಲು ಬರುವವರಿಗೆ ಪಾಲಿಕೆಯ ಎಲ್ಲಾ ವಲಯ ಕಚೇರಿಗಳಲ್ಲಿ ಶಾಮಿಯಾನ, ಕುರ್ಚಿಗಳನ್ನು ಹಾಕಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದ್ದು, ವಲಯಾಧಿಕಾರಿಗಳು, ಕಂದಾಯಾಧಿಕಾರಿಗಳು, ಕಂದಾಯ ಇನ್ಸ್‌ಪೆಕ್ಟರ್‌ಗಳು ಖುದ್ದು ಹಾಜರಿದ್ದು ಸಕಲ ಅನುಕೂಲ ಮಾಡಿಕೊಡುತ್ತಿದ್ದಾರೆ. ಕೆಲವರು ಮನೆಯಲ್ಲೇ ಕುಳಿತು ಆನ್‌ಲೈನ್‌ನಲ್ಲಿ ಪಾಲಿಕೆಗೆ ತೆರಿಗೆ ಪಾವತಿಸುತ್ತಿದ್ದರೆ, ಆ ವ್ಯವಸ್ಥೆಗಳಿಲ್ಲದವರು ತಮ್ಮ ವ್ಯಾಪ್ತಿಯ ವಲಯ ಕಚೇರಿಗಳಿಗೆ ತೆರಳಿ ದಾಖಲಾತಿ ತೋರಿಸಿ ಚಲನ್ ಭರ್ತಿ ಮಾಡಿ ಹಣ ಸಂದಾಯ ಮಾಡುತ್ತಿದ್ದಾರೆ. ಏಪ್ರಿಲ್ ಅಂತ್ಯದವರೆಗೆ ಬಹುತೇಕ ಮಂದಿ ಆಸ್ತಿ ಮಾಲೀಕರು ಶೇ.5ರ ರಿಬೇಟ್ ಅನ್ನು ಬಳಸಿಕೊಂಡು ತೆರಿಗೆ ಪಾವತಿಸಲಿದ್ದು, ಪಾಲಿಕೆಗೆ ಆರ್ಥಿಕ ಸಂಪನ್ಮೂಲ ಕ್ರೋಢೀಕರಣ ಗೊಂಡು ಅದರಿಂದ ಕುಡಿಯುವ ನೀರು, ರಸ್ತೆ, ಒಳಚರಂಡಿ, ಸ್ಮಶಾನ, ಪಾರ್ಕ್ ನಿರ್ವಹಣೆಯಂತಹ ಮೂಲ ಸೌಕರ್ಯ ಕಲ್ಪಿಸಲು ಸಹಕಾರಿಯಾಗಲಿದೆ. ಆಸ್ತಿ, ನೀರಿನ ತೆರಿಗೆ, ಟ್ರೇಡ್ ಲೈಸೆನ್ಸ್, ಜಾಹೀರಾತು ಶುಲ್ಕ, ಕಟ್ಟಡಗಳ ಬಾಡಿಗೆ, ಖಾತೆ ನಕ್ಷೆ ಅನುಮೋದನೆ, ಸಿಆರ್ ಶುಲ್ಕಗಳಿಂದ ಬರುವ ಆದಾಯವನ್ನೇ ಮೈಸೂರು ಮಹಾನಗರಪಾಲಿಕೆ ಅವಲಂಬಿಸಿದ್ದು, ಆ ಪೈಕಿ ಆಸ್ತಿ ತೆರಿಗೆಯಿಂದ ಸಿಂಹಪಾಲು ವರಮಾನ ನಿರೀಕ್ಷಿಸಲಾಗಿದೆ.

> ರೆವಿನ್ಯೂ ಬಡಾವಣೆ ಸೇರಿದಂತೆ ಮೈಸೂರು ನಗರದಲ್ಲಿ ಒಟ್ಟು 1,88,000 ಆಸ್ತಿಗಳು ನಗರ ಪಾಲಿಕೆ ತೆರಿಗೆ ವ್ಯಾಪ್ತಿಗೊಳಪಟ್ಟಿದ್ದು, ಕಳೆದ ವರ್ಷ 2021ರ ಏ.1ರಿಂದ 2022ರ ಮಾ.31ರವರೆಗೆ ಒಟ್ಟು 162.43 ಕೋಟಿ ರೂ. ಆಸ್ತಿ ತೆರಿಗೆಯನ್ನು ವಸೂಲಿ ಮಾಡಲಾಗಿತ್ತು. ನಂತರ 2022ರ ಏ.1ರಿಂದ12ರವರೆಗೆ 14,24,80,145 ರೂ.ಗಳನ್ನು 18,017ಪ್ರಕರಣಗಳಲ್ಲಿ ವಸೂಲಿ ಮಾಡಲಾಗಿದ್ದು, ಮಾಲೀಕರು ಆಸ್ತಿ ತೆರಿಗೆಗೆ ಉತ್ತಮ ಪ್ರತಿಕ್ರಿಯೆ ತೋರುತ್ತಿದ್ದಾರೆ. –ಲಕ್ಷ್ಮೀಕಾಂತ ರೆಡ್ಡಿ, ಪಾಲಿಕೆ ಆಯುಕ್ತರು.



ಇಂದು ಡಾ.ಅಂಬೇಡ್ಕರ್ 131ನೇ ಜನ್ಮ ದಿನಾಚರಣೆ

ಮೈಸೂರು, ಏ.13– ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ತಿ.ನರಸೀಪುರ ಮತ್ತು ಬನ್ನೂರು ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 131ನೇ ಜನ್ಮ ದಿನಾಚರಣೆಯನ್ನು ಏ.14ರಂದು ಬೆಳಗ್ಗೆ 10 ಗಂಟೆಗೆ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ಉದ್ಘಾಟನೆಯನ್ನು ವರುಣಾ ಕ್ಷೇತ್ರದ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ನೆರವೇರಿಸುವರು. ಕಾರ್ಯಕ್ರಮದಲ್ಲಿ ಸಹಕಾರ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಉಪಸ್ಥಿತರಿರುವರು, ಅಧ್ಯಕ್ಷತೆಯನ್ನು ತಿ.ನರಸೀಪುರ ಕ್ಷೇತ್ರದ ಶಾಸಕ ಎಂ.ಅಶ್ವಿನ್‌ಕುಮಾರ್ ವಹಿಸುವರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಚಾಮರಾಜನಗರ ಸಂಸದ ವಿ.ಶ್ರೀನಿವಾಸ ಪ್ರಸಾದ್, ಆಡಳಿತ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ಹಾಗೂ ಬಿ.ಡಬ್ಲ್ಯೂ.ಎಸ್‌ಎಸ್ ಅಧ್ಯಕ್ಷ ಎನ್. ಜಯರಾಂ, ಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ಕೆ.ಟಿ.ಶ್ರೀಕಂಠೇಗೌಡ, ಡಾ.ಡಿ.ತಿಮ್ಮಯ್ಯ, ಕೆ.ವಿ.ನಾರಾಯಣಸ್ವಾಮಿ, ಮರಿತಿಬ್ಬೇಗೌಡ, ಹೆಚ್.ವಿಶ್ವನಾಥ್ ಪಾಲ್ಗೊಳ್ಳುವರು. ತಿ.ನರಸೀಪುರ ಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು, ಬನ್ನೂರು ಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಅನೇಕ ಗಣ್ಯರು ಉಪಸ್ಥಿತರಿರುವರು ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಅಧ್ಯಕ್ಷರು ಹಾಗೂ ತಹಸೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾಡಳಿತ: ಮೈಸೂರು ಜಿಲ್ಲಾಡಳಿತದ ವತಿಯಿಂದ ಭಾರತ ರತ್ನ ಡಾ. ಬಿ.ಆರ್.ಅಂಬೇಡ್ಕರ್ 131ನೇ ಜನ್ಮ ದಿನಾಚರಣೆಯನ್ನು ಏ.14ರಂದು ಬೆಳಗ್ಗೆ 9.30 ಗಂಟೆಗೆ ನಗರದ ಟೌನ್‌ಹಾಲ್‌ನಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮುಖ್ಯ ರಸ್ತೆಗಳಲ್ಲಿ ವಿವಿಧ ಕಲಾ ತಂಡಗಳೊಂದಿಗೆ ಮೆರವಣಿಗೆ ಮೂಲಕ ತಲುಪಿ, ಕಲಾಮಂದಿರದಲ್ಲಿ ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ ಹಾಗೂ ಜಿಲ್ಲಾಧಿಕಾರಿ ಗೌತಮ್ ಬಗಾದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮವನ್ನು ಸಹಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಟಿ. ಸೋಮಶೇಖರ್ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಶಾಸಕ ಎಲ್.ನಾಗೇಂದ್ರ ವಹಿಸುವರು. ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸ ಪ್ರಸಾದ್, ಸುಮಲತಾ ಅಂಬರೀಶ್ ಹಾಗೂ ಶಾಸಕರು, ನಿಗಮ ಮಂಡಳಿ ಅಧ್ಯಕ್ಷರು ಹಾಗೂ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣ

ವಿಚಲಿತರಾಗಿ ಮೊಬೈಲ್ ಮಾತುಕತೆಯಲ್ಲಿ ಅಡ್ಡಾಡಿದ ಸಚಿವ ಕೆ.ಎಸ್.ಈಶ್ವರಪ್ಪ!

ಮೈಸೂರು,ಏ.13(ಆರ್‌ಕೆ)–ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣದಿಂದ ಫುಲ್ ಟೆನ್ಷನ್ ಆಗಿದ್ದ ಸಚಿವ ಕೆ.ಎಸ್. ಈಶ್ವರಪ್ಪ ವಿಚಲಿತರಾಗಿ ಮೈಸೂರಿನ ಲಲಿತ ಮಹಲ್ ಹೋಟೆಲ್ ಆವರಣದಲ್ಲಿ ಮೊಬೈಲ್‌ನಲ್ಲಿ ಮಾತನಾಡಿಕೊಂಡು ಒಬ್ಬರೇ ಅತ್ತಿಂದಿತ್ತ ಓಡಾಡುತ್ತಿದ್ದರು.



ಮಂಗಳವಾರ ಆರಂಭವಾದ ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಭಾಗವಹಿಸಿದ್ದ ಸಚಿವರು ಲಲಿತಮಹಲ್ ಹೋಟೆಲ್‌ನಲ್ಲೇ ಉಳಿದುಕೊಂಡಿದ್ದರು. ತಮ್ಮ ವಿರುದ್ಧ ಕಮಿಷನ್ ಆರೋಪ ಹೊರಿಸಿ, ಗುತ್ತಿಗೆದಾರ ಸಂತೋಷ್ ಪಾಟೀಲ್ ಉಡುಪಿಯಲ್ಲಿ ಆತ್ಮಹತ್ಯೆಗೆ ಶರಣಾಗಿದ್ದರಿಂದ ಪ್ರತಿಪಕ್ಷ ಕಾಂಗ್ರೆಸ್ ತೀವ್ರ ಪ್ರತಿಭಟನೆ ನಡೆಸಿ ಬಂಧನಕ್ಕೆ ಒತ್ತಾಯಿಸಿದ್ದ ಹಿನ್ನೆಲೆಯಲ್ಲಿ ವಿಚಲಿತರಾಗಿದ್ದ ಈಶ್ವರಪ್ಪ ಇಂದು ಬೆಳಗ್ಗೆ ಹೋಟೆಲ್ ಆವರಣದ ಕಾರ್ ಪಾರ್ಕಿಂಗ್ ಸ್ಥಳದಲ್ಲಿ ಒಬ್ಬರೇ ಮೊಬೈಲ್‌ನಲ್ಲಿ ಮಾತನಾಡುತ್ತಾ ಟೆನ್ಷನ್‌ನಲ್ಲಿ ಅತ್ತಿಂದಿತ್ತ ಓಡಾಡುತ್ತಿದ್ದುದು ಕಂಡು ಬಂದಿತು.

ಪಕ್ಷಕ್ಕೆ ಮುಜುಗರ ಉಂಟಾಗಿರುವ ಹಿನ್ನೆಲೆಯಲ್ಲಿ ನಾಯಕರೊಂದಿಗೆ ಮಾತನಾಡುತ್ತಿದ್ದ ಅವರಿಗೆ ರಾಜೀನಾಮೆ ನೀಡುವಂತೆ ಸೂಚನೆ ಬರಬಹುದೆಂದು ನಿರೀಕ್ಷಿಸಲಾಗಿತ್ತು. ಅದಕ್ಕೆ ಪುಷ್ಟಿ ನೀಡುವಂತೆ ಸಚಿವ ಕೆ.ಎಸ್.ಈಶ್ವರಪ್ಪ ನಂತರ ಸಭೆಗೂ ಹಾಜರಾಗದೇ ಕಾರು ಹತ್ತಿ ಬೆಳಗ್ಗೆಯೇ ಶಿವಮೊಗ್ಗಕ್ಕೆ ತೆರಳಿದರು. ಸುದ್ದಿಗೋಷ್ಠಿ ನಡೆಸಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬಹುದೆಂದು ಭಾವಿಸಲಾಗಿತ್ತಾದರೂ ಯಾವುದೇ ಸಾಕ್ಷಾಧಾರಗಳಿಲ್ಲದೇ ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ.



ಮೈಸೂರಿನ ಬ್ರಹ್ಮಿಭೂತ ವಾಸುದೇವ ಮಹಾರಾಜ ಫೌಂಡೇಶನ್ ವತಿಯಿಂದ ಶ್ರೀ ವಿವೇಕಾನಂದ ಯೋಗ ಸಂಶೋಧನಾ ಕೇಂದ್ರದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಯೋಗದಲ್ಲಿ ವಿಶಿಷ್ಟ ಸಾಧನೆಗೈದಿರುವ ಡಾ.ಪಿ.ಎನ್.ಗಣೇಶ್‌ಕುಮಾರ್ ಅವರಿಗೆ ಸದ್ಭಾವನಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಚಿತ್ರದಲ್ಲಿ ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸಾಹಿತಿ ಮುತ್ತುಸ್ವಾಮಿ, ಸಂಸ್ಥೆಯ ಅಧ್ಯಕ್ಷ ಎಂ.ವಿ.ನಾಗೇಂದ್ರ ಬಾಬು, ಸಂಚಾಲಕ ಎನ್.ಅನಂತ, ಆಯುರ್ವೇದ ತಜ್ಞ ವೈದ್ಯೆ ಡಾ.ಶಶಿರೇಖಾ ಇತರರಿದ್ದಾರೆ.

ಬಿಇಡಿ ಪದವಿ ಪಡೆದ ಅಭ್ಯರ್ಥಿಗಳಿಗೂ ಸಮಾಜ ವಿಜ್ಞಾನ ಶಿಕ್ಷಕರ ಹುದ್ದೆಗೆ ಅರ್ಜಿ ಸಲ್ಲಿಸಲು ಪರಿಗಣಿಸಿ

ಮೈಸೂರು ವಿವಿ ವ್ಯಾಪ್ತಿಯ ಬಿಇಡಿ ಕಾಲೇಜು ಅಧ್ಯಾಪಕರ ಸಂಘ ಆಗ್ರಹ

ಮೈಸೂರು, ಏ.13(ಆರ್‌ಕೆಬಿ)– ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳಲ್ಲಿ ಕಲಾ ವಿಭಾಗದ ವಿದ್ಯಾರ್ಥಿಗಳು ವ್ಯವಹಾರ ಅಧ್ಯಯನ ಹಾಗೂ ಹಣಕಾಸಿನ ಅಧ್ಯಯನ ಬೋಧಿಸಲು ಕಷ್ಟಕರವಾಗುತ್ತದೆ. ಇದೇ ವೇಳೆ ಸಿಬಿಎಸ್‌ಇ ಮತ್ತು ಐಸಿಎಸ್‌ಇ ಪಠ್ಯಕ್ರಮದಲ್ಲಿ ವಾಣಿಜ್ಯ ಶಾಸ್ತ್ರ ಓದಿದ ಅಭ್ಯರ್ಥಿಗಳನ್ನೇ ನೇಮಕ ಮಾಡಿಕೊಳ್ಳಲಾಗುತ್ತಿದೆ. ಹೀಗಾಗಿ ಇದರ ಜೊತೆಗೆ ಬಿಬಿಎಂ, ಬಿಕಾಂ ಮತ್ತು ಬಿಸಿಎ ಪದವಿ ಜೊತೆಗೆ ಬಿಇಡಿ ವ್ಯಾಸಂಗ ಮಾಡಿದ ಬಿಇಡಿ ವಿದ್ಯಾರ್ಥಿಗಳನ್ನೂ ಸರ್ಕಾರ ನೇಮಕ ಮಾಡಿಕೊಳ್ಳಬೇಕು ಎಂದು ಮೈಸೂರು ವಿವಿ ವ್ಯಾಪ್ತಿಯ ಬಿಇಡಿ ಕಾಲೇಜುಗಳ ಅಧ್ಯಾಪಕರ ಸಂಘ ಆಗ್ರಹಿಸಿದೆ.

ಮೈಸೂರು ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಕಾರ್ಯಾಧ್ಯಕ್ಷ ಡಾ.ರಾಜಗೋಪಾಲ್, ಈಗಿನ ಶಿಕ್ಷಣ ವ್ಯವಸ್ಥೆಯಲ್ಲಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳ ಪಠ್ಯಕ್ರಮದಲ್ಲಿ ಮಾನವಿಕ ವಿಷಯಗಳಾದ ಇತಿಹಾಸ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ, ಭೂಗೋಳಶಾಸ್ತ್ರ, ಅರ್ಥಶಾಸ್ತ್ರ ಹಾಗೂ ವ್ಯವಹಾರ ಅಧ್ಯಯನ ವಿಷಯಗಳನ್ನು ವಿಜ್ಞಾನ ಪಠ್ಯಕ್ರಮದ ಅಡಿಯಲ್ಲಿ ಬೋಧಿಸಲಾಗುತ್ತಿದೆ. ಆದರೆ ಕಲಾ ವಿಭಾಗದವರು ವ್ಯವಹಾರ ಅಧ್ಯಯನ ಹಾಗೂ ಹಣಕಾಸಿನ ಅಧ್ಯಯನ ಬೋಧಿಸಲು ಕಷ್ಟವಾಗುವ ಕಾರಣ ಅಂತಹ ವಿಷಯ ಓದಿದ ಬಿಇಡಿ ವಿದ್ಯಾರ್ಥಿಗಳನ್ನು ನೇಮಕ ಮಾಡಿಕೊಳ್ಳಬೇಕು. ಇದರಿಂದ ಬಿಇಡಿ ವಿದ್ಯಾರ್ಥಿಗಳಿಗೂ ಅನುಕೂಲ ಕಲ್ಪಿಸಿಕೊಟ್ಟಂತಾಗುತ್ತದೆ. ಇಲ್ಲದಿದ್ದಲ್ಲಿ ಇವರು ಅವಕಾಶ ವಂಚಿತರಾಗುವಂತಾಗುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಡಾ.ಅಂಥೋಣಿ ಪಾಲ್‌ರಾಜ್, ಡಾ. ಎಸ್.ಎಲ್.ಸುರೇಶ್, ಮಹೇಶ್ ಗಣಪತಿ, ಶಿವಕುಮಾರ್ ಉಪಸ್ಥಿತರಿದ್ದರು.

ನಿಧನ

ರವೀಂದ್ರನಾಥ



ಮೈಸೂರು,ಏ.13–ಮೈಸೂರಿನ ಕುವೆಂಪುನಗರದ ನಿವಾಸಿ ರವೀಂದ್ರನಾಥ (78) ಮಂಗಳವಾರ ಹೃದಯಾಘಾತದಿಂದ ನಿಧನರಾದರು. ಕುರುಹಿನ ಶೆಟ್ಟಿ ಜನಾಂಗದ ಮುಖಂಡರಾಗಿದ್ದ ಇವರು ಖ್ಯಾತ ಕುಕ್ಕುಟ ಉದ್ಯಮಿಯಾಗಿದ್ದರು. ಇವರು ಪತ್ನಿ, ಇಬ್ಬರು ಪುತ್ರರು, ಮತ್ತು ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಕಳಲವಾಡಿಯ ಅವರ ತೋಟದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜಿ.ಎಲ್.ತ್ರಿಪುರಾಂತಕರ ಮೊಬೈಲ್ ಛಾಯಾಚಿತ್ರ ಪ್ರದರ್ಶನ





ಮೈಸೂರು,ಏ.13–ಹವ್ಯಾಸಿ ಛಾಯಾಗ್ರಾಹಕರಾದ ಜಿ.ಎಲ್.ತ್ರಿಪುರಾಂತಕ ಅವರು ಮೊಬೈಲ್ ಕ್ಯಾಮರಾದಲ್ಲಿ ಸೆರೆಹಿಡಿದ ಆಯ್ದ ಚಿತ್ರಗಳ ಪ್ರದರ್ಶನವನ್ನು ಏ.15 ಹಾಗೂ 16ರಂದು ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯ ಆವರಣದಲ್ಲಿರುವ ಶ್ರೀ ರಾಜೇಂದ್ರ ಸಭಾಂಗಣದಲ್ಲಿ ಆಯೋಜಿಸಿದ್ದಾರೆ.

ಏ.15ರಂದು ಬೆಳಗ್ಗೆ 10.30ಕ್ಕೆ ಮೈಸೂರಿನ ಹೊಸಮಠದ ಮಠಾಧ್ಯಕ್ಷ ಶ್ರೀ ಚಿದಾನಂದಸ್ವಾಮೀಜಿ ಸಾನ್ನಿಧ್ಯದಲ್ಲಿ ಅಂತಾರಾಷ್ಟ್ರೀಯ ಖ್ಯಾತಿ ವನ್ಯಜೀವಿ ಛಾಯಾಗ್ರಾಹಕ ಎಸ್.ತಿಪ್ಪೇಸ್ವಾಮಿ ಚಿತ್ರ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಇದೇ ಸಂದರ್ಭದಲ್ಲಿ ನಗರದ ಖ್ಯಾತ ಛಾಯಾಚಿತ್ರ ಕಲಾವಿದರಾದ ಎಸ್.ಎಂ.ಜಂಬುಕೇಶ್ವರ ಅವರಿಗೆ ಸನ್ಮಾನವನ್ನು ಹಮ್ಮಿಕೊಳ್ಳಲಾಗಿದೆ.



ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳಲ್ಲಿ ಸಂಯೋಜನಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿರುವ ಜಿ.ಎಲ್.ತ್ರಿಪುರಾಂತಕ ಅವರು ತಮ್ಮ ವೃತ್ತಿಯ ಜೊತೆಗೆ ಅಂಕಣ ಬರಹ, ನಾಟಕಗಳ ರಚನೆ, ಅಭಿನಯ, ವ್ಯಕ್ತಿತ್ವ ವಿಕಸನ ತರಬೇತಿ, ಉಪನ್ಯಾಸ..... ಹೀಗೆ ಬಹು ಬಗೆಯ ಪ್ರವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಇವರಿಗೆ ಛಾಯಾಗ್ರಹಣವು ಸಹ ಒಂದು ಹವ್ಯಾಸವಾಗಿದೆ. ಡಿಎಸ್‌ಎಲ್‌ಆರ್ ಕ್ಯಾಮರಾದಲ್ಲಿ ಚಿತ್ರಗಳನ್ನು ಸೆರೆಹಿಡಿಯುವುದರ ಜೊತೆಗೆ ಮೊಬೈಲ್ ಕ್ಯಾಮರಾದಲ್ಲಿಯೂ ವಿಭಿನ್ನ ಚಿತ್ರಗಳನ್ನು ಸೆರೆಹಿಡಿಯುವುದು ಇವರ ವೈಶಿಷ್ಟ್ಯತೆ. ಗುಡಿ–ಗೋಪುರಗಳು, ಪಾರಂಪರಿಕ ಕಟ್ಟಡಗಳು, ಪ್ರಕೃತಿಯ ವಿಸ್ಮಯಗಳು, ಪ್ರಾಣಿಪಕ್ಷಿಗಳು, ಕೀಟಗಳು, ವ್ಯಕ್ತಿ ಚಿತ್ರಗಳು ಹೀಗೆ ವೈವಿಧ್ಯಮಯವಾದ ಚಿತ್ರಗಳನ್ನು ಭಿನ್ನ ಕೋನಗಳಲ್ಲಿ ಮೊಬೈಲ್ ಕ್ಯಾಮರಾದಲ್ಲಿಯೇ ಉತ್ತಮವಾಗಿ ಸೆರೆಹಿಡಿಯುವ ಕೈಚಳಕ ತೋರಿದ್ದಾರೆ. ಮೊಬೈಲ್ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಅಪಾರ ಜನಮೆಚ್ಚುಗೆ ಪಡೆದಿವೆ. ಮೈಸೂರು ನಗರದಲ್ಲಿ ಮೊಬೈಲ್ ಕ್ಯಾಮರಾದಲ್ಲಿ ಸೆರೆಹಿಡಿದ ಚಿತ್ರಗಳ ಪ್ರದರ್ಶನ ಇದೇ ಮೊದಲಾಗಿದೆ. ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಛಾಯಾಚಿತ್ರ ಪ್ರದರ್ಶನವನ್ನು ವೀಕ್ಷಿಸಬೇಕೆಂದು ಆಯೋಜಕರು ವಿನಂತಿಸಿದ್ದಾರೆ.

ವರ್ಚುವಲ್ ಬ್ಲಡ್ ಸ್ಟೆಮ್ ಸೆಲ್ ದಾನಿ ನೋಂದಣಿ ಅಭಿಯಾನ

ಮೈಸೂರು,ಏ.13–ಮೈಸೂರಿನ 3 ವರ್ಷದ ಬಾಲಕ ಯೋಹಾನ್ ತಲಸೇಮಿಯಾ ಮೇಜರ್‌ನಿಂದ ಬಳಲುತ್ತಿದ್ದು, ಜೀವಕ್ಕೆ ಅಪಾಯವಾಗುವ ರಕ್ತ ಸಂಬಂಧಿ ರೋಗಕ್ಕೆ ಚಿಕಿತ್ಸೆ ಪಡೆಯುವುದಕ್ಕಾಗಿ ಹೋಲಿಕೆಯಾಗುವ ದಾನಿಯಿಂದ ರಕ್ತದ ಸ್ಟೆಮ್ ಸೆಲ್ ಕಸಿ ಅಗತ್ಯವಿದೆ.

ರಕ್ತ ಕ್ಯಾನ್ಸರ್ ಮತ್ತು ರಕ್ತ ಸಂಬಂಧಿ ರೋಗಗಳ ವಿರುದ್ಧ ಹೋರಾಡುವುದಕ್ಕೆ ಬದ್ಧವಾಗಿರುವ ಲಾಭೋದ್ದೇಶ ರಹಿತ ಸಂಸ್ಥೆ ಡಿಕೆಎಂಎಸ್ ಬಿಎಂಎಸ್‌ಟಿ ಫೌಂಡೇಶನ್ ಇಂಡಿಯಾ ಯೋಹಾನ್‌ಗೆ ದಾನಿಯನ್ನು ಹುಡುಕುವ ಪ್ರಯತ್ನಕ್ಕೆ ನೆರವಾಗಿದ್ದು, ವರ್ಚುವಲ್ ಅಭಿಯಾನವನ್ನು ನಡೆಸುತ್ತಿದೆ. 18–50 ವರ್ಷದ ವಯಸ್ಸಿನವರು ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ದಾನ ಮಾಡಲು ಇಚ್ಛಿಸುವವರು ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳುವಂತೆ ಯೋಹಾನ್ ಕುಟುಂಬವೂ ವಿನಂತಿಸಿಕೊಂಡಿದೆ. ನೋಂದಣಿ ಮಾಡಲು ಲಿಂಕ್ ಇಲ್ಲಿದೆ: dkms-bmst.org/Yohan

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.04.2022 ಗುರುವಾರ, ಮಳೆ ನಕ್ಷತ್ರ: ಅಶ್ವಿನಿ 14.04.2022 ರಿಂದ 26.04.2022
ಶ್ರೀ ಶುಭಕೃತುನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ
ತಿಥಿ: ತ್ರಯೋದಶಿ, ನಕ್ಷತ್ರ: ಪೂಫ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಜೈ ಭೀಮ್ ಯೂತ್:** ಬಾಬಾ ಸಾಹೇಬ್ ಡಾ.ಅಂಬೇಡ್ಕರ್ 131ನೇ ಜಯಂತಿ ಅಂಗವಾಗಿ ಬೈಕ್ ರ್‍ಯಾಲಿ, ಮುಖ್ಯ ಅತಿಥಿಗಳು: ಡಾ.ಅನಿತಾ ಮೋಹನ್, ಡಾ.ಶಿವಕುಮಾರ್, ಸಹಾಯಕ ಆಯುಕ್ತ (ಸಂಚಾರ ವಿಭಾಗ) ಗಂಗಾಧರಸ್ವಾಮಿ, ಕಾಂಗ್ರೆಸ್ ಮುಖಂಡ ಉದಯ್‌ಕುಮಾರ್, ಬಿಜೆಪಿ ಮುಖಂಡ ಶರತ್, ಎಎಸ್‌ಐ ಆನಂದ್, ನಗರ ಯುವ ಮೋರ್ಚಾ ಅಧ್ಯಕ್ಷ ಕಾರ್ತಿಕ್, ಸ್ಥಳ: 5ನೇ ಕ್ರಾಸ್, 2ನೇ ಮೇನ್, ಗಾಂಧಿನಗರ, ಬೆಳಗ್ಗೆ 7.30ಕ್ಕೆ.

■ **ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ರಸಗೊಬ್ಬರ ಬಿತ್ತನೆ ಬೀಜ ಹಾಗೂ ಕ್ರಿಮಿನಾಶಕ ಮಾರಾಟಗಾರರ ಸಂಘ:** ಜಿಲ್ಲಾ ಮಟ್ಟದ ಸಮಾವೇಶ, ಉದ್ಘಾಟನೆ: ಸಂಸದ ಪ್ರತಾಪ್‌ಸಿಂಹ, ಮುಖ್ಯ ಅತಿಥಿಗಳು: ಶಾಸಕ ಜಿ.ಟಿ.ದೇವೇಗೌಡ, ಕೃಷಿ ಇಲಾಖೆ ಕೃಷಿ ನಿರ್ದೇಶಕಿ ಡಾ.ಸಿ.ಎನ್.ನಂದಿನಿಕುಮಾರಿ, ಅತಿಥಿಗಳು: ಜಂಟಿ ಕೃಷಿ ನಿರ್ದೇಶಕರಾದ ಡಾ.ಎಂ.ಮಹಂತೇಶಪ್ಪ, ಡಾ.ಹೆಚ್.ಟಿ.ಚಂದ್ರಕಲಾ, ಜಂಟಿ ತೋಟಗಾರಿಕಾ ಇಲಾಖೆ ನಿರ್ದೇಶಕ ಹೆಚ್.ಎಂ. ನಾಗರಾಜ್, ಅಧ್ಯಕ್ಷತೆ: ಸಂಘದ ಅಧ್ಯಕ್ಷ ಎಂ.ಎ.ನಂಜಪ್ಪ, ಉಪಸ್ಥಿತರು: ಗೌರವಾಧ್ಯಕ್ಷ ಯೋಗರಾಜ್, ಸ್ಥಳ : ನಿತ್ಯೋತ್ಸವ ಫಂಕ್ಷನ್ ಹಾಲ್, ಬಲ್ಲಾಳ್ ಸರ್ಕಲ್ ಹತ್ತಿರ, ಬೆಳಗ್ಗೆ 10ಕ್ಕೆ.

■ **ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ:** ಡಾ.ಬಿ.ಆರ್.ಅಂಡ್ಕರ್ 131ನೇ ಜಯಂತ್ಯೋತ್ಸವ, ಉಪಸ್ಥಿತರು: ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮೈಸೂರು ವಿವಿ ಕುಲಸಚಿವ ಪ್ರೊ. ಶಿವಪ್ಪ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸ್ಥಳ: ವಿವಿ ಸಂಜೆ ಕಾಲೇಜು ಮುಂಭಾಗ, ಬೆಳಗ್ಗೆ 10ಕ್ಕೆ.

■ **ಅಶೋಕಪುರಂ ಆದಿಕರ್ನಾಟಕ ಮಹಾಸಂಸ್ಥೆ ಹಾಗೂ ಯುವ ಸಂಘಟನೆಗಳ ಒಕ್ಕೂಟ, ಅಶೋಕಪುರಂ:** ಡಾ. ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚರಣೆ ಪ್ರಯುಕ್ತ ಮೆರವಣಿಗೆ, ಉದ್ಘಾಟನೆ : ಸಂಸದ ವಿ. ಶ್ರೀನಿವಾಸ ಪ್ರಸಾದ್, ಮುಖ್ಯ ಅತಿಥಿಗಳು : ಶಾಸಕ ಎಸ್.ಎ. ರಾಮದಾಸ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಚಲನಚಿತ್ರ ನಟ ಚೇತನ್, ಅಧ್ಯಕ್ಷತೆ: ಆದಿಕರ್ನಾಟಕ ಮಹಾಸಂಸ್ಥೆ ಅಧ್ಯಕ್ಷ ವಿಜಯಕುಮಾರ್, ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಉದ್ಯಾನವನ, ಅಶೋಕಪುರಂ, ಬೆಳಗ್ಗೆ 10ಕ್ಕೆ.

■ **ಡಾ. ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ :** ಡಾ. ಬಿ.ಆರ್. ಅಂಬೇಡ್ಕರ್ ಅವರ 131ನೇ ಜಯಂತಿ ಅಂಗವಾಗಿ ಪ್ರಸ್ತುತ ಸಂದರ್ಭ: ಡಾ. ಬಿ.ಆರ್. ಅಂಬೇಡ್ಕರ್ ಕುರಿತು ಉಪನ್ಯಾಸ, ಉದ್ಘಾಟನೆ : ಮೈಸೂರು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ಜಿ. ಹೇಮಂತಕುಮಾರ್, ಹಿರಿಯ ನ್ಯಾಯವಾದಿ ಡಾ. ಸಿ.ಎಸ್. ದ್ವಾರಕಾನಾಥ್ ಅವರಿಂದ ವಿಶೇಷ ಉಪನ್ಯಾಸ, ಅಧ್ಯಕ್ಷತೆ : ಮೈಸೂರು ವಿವಿ ಕುಲಸಚಿವ ಪ್ರೊ. ಆರ್. ಶಿವಪ್ಪ, ಮುಖ್ಯ ಅತಿಥಿಗಳು : ಮೈಸೂರು ವಿವಿ ಕುಲಸಚಿವ (ಪರೀಕ್ಷಾಂಗ) ಪ್ರೊ. ಎ.ಪಿ. ಜ್ಞಾನಪ್ರಕಾಶ್, ಸ್ಥಳ: ವಿಶ್ವಜ್ಞಾನಿ ಸಭಾಂಗಣ, ಡಾ.ಬಿ.ಆರ್. ಅಂಬೇಡ್ಕರ್ ಕೇಂದ್ರ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ಡಾ.ಬಿ.ಆರ್.ಅಂಬೇಡ್ಕರ್ ಗಾಂಧಿನಗರ ನಾಗರಿಕರ ಹಿತರಕ್ಷಣಾ ಸಮಿತಿ:** ಡಾ.ಬಿ.ಆರ್.ಅಂಬೇಡ್ಕರ್ ಅವರ 131ನೇ ಜಯಂತ್ಯೋತ್ಸವದ ಅಂಗವಾಗಿ ಮಹಾನಾಯಕ ರಥೋತ್ಸವ ಮೆರವಣಿಗೆ, ಉದ್ಘಾಟನೆ: ಎನ್.ಆರ್. ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಎಂ.ಶಿವಶಂಕರ್, ಅಧ್ಯಕ್ಷತೆ: ಪಾಲಿಕೆ ಸದಸ್ಯೆ ಡಾ.ಅಶ್ವಿನಿ ಶರತ್, ಮುಖ್ಯ ಅತಿಥಿಗಳು: ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ರವಿಕುಮಾರ್, ಮೈಸೂರು ವಿವಿ ಆಡಳಿತಾಧಿಕಾರಿ ಪ್ರೊ ಮಾದೇಶ್, ವಾಣಿ ವಿಲಾಸ ನೀರು ಸರಬರಾಜು ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಡಿ. ಅಶ್ವಿನ್, ವಕೀಲ ತಿಮ್ಮಯ್ಯ, ಸಹಾಯಕ ಆಯುಕ್ತ ನಂಜುಂಡಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಸ್ಥಳ: ಗಾಂಧಿನಗರ ಬಸ್ ನಿಲ್ದಾಣದ ಮೈದಾನದಿಂದ, ಬೆಳಗ್ಗೆ 11ಕ್ಕೆ.

■ **ಬೆಂಗಳೂರಿನ ಯೂನಿ ಚಾರ್ಮ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಬೆಂಗಳೂರು :** ಮೈಸೂರಿನ ಚಾಮುಂಡಿಬೆಟ್ಟದ ದಾಸೋಹ ಭವನದ ಮುಂದೆ ಸ್ಥಾಪಿಸಿರುವ ಬೇಬಿ ಫೀಡಿಂಗ್ ಕಿಯಾಸ್ಕ್ (ಶಿಶು ಆಹಾರ ಕೊಠಡಿ) ಉದ್ಘಾಟನಾ ಸಮಾರಂಭ, ಉದ್ಘಾಟನೆ: ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಮುಖ್ಯ ಅತಿಥಿಗಳು : ಎಡಿಸಿ ಡಾ.ಮಂಜುನಾಥಸ್ವಾಮಿ, ಮುಜರಾಯಿ ತಹಸೀಲ್ದಾರ್ ಕೃಷ್ಣ ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಎಂ.ಎಸ್.ಯತಿರಾಜ್ ಸಂಪತ್ಕುಮಾರನ್, ನಂಜನಗೂಡಿನ ಶ್ರೀ ನಂಜುಂಡೇಶ್ವರ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ್‌ಪ್ರಸಾದ್, ಯೂನಿಚಾರ್ಮ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಅನುರುದ್ಧ್ ಚೌಹಾಣ್, ಶ್ರುತಿ ಹಾಗೂ ನಾಗೇಂದ್ರ, ಸ್ಥಳ: ಚಾಮುಂಡಿಬೆಟ್ಟದ ದಾಸೋಹ ಭವನದ ಎದುರು, ಮಧ್ಯಾಹ್ನ 3ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.20 ಗೀತಾರಾಧನ, 6.35 ಹಾಗೂ ಸಂಜೆ 5.00ಕ್ಕೆ 'ಒಂದೇ ಕಥೆ' ವಿವಿಧ ಮುಖ–ಬಾನುಲಿ ಸರಣೀ, ಪ್ರಸ್ತುತಿ–ಪ್ರಭುಸ್ವಾಮಿ ಮಳೀಮಠ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ, ಗಾಯನ–ಅಂಬಯ್ಯನುಲಿ, ದೀಪಿಕಾ ಪಾಂಡುರಂಗಿ, ಎಂ.ಎ. ಶೋಭಾ, ವ್ಯಾಖ್ಯಾನ–ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್, 9.30 ಭಾರತದ ಸ್ವಾತಂತ್ರ್ಯ ಅಮೃತ ಮಹೋತ್ಸವದ ಸಂದರ್ಭದಲ್ಲಿ ದೈನಂದಿನ ವಿಶೇಷ ಕಾರ್ಯಕ್ರಮ ಸರಣಿ 'ಸ್ವಾತಂತ್ರ್ಯ ಚಳವಳಿಯ ಪಯಣ–ಆಕಾಶವಾಣಿಯೊಂದಿಗೆ', 10.00 ಶ್ರೀ ರಾಂಭಟ್– ಹಾಡು ಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.30 ದೇವರ ನಾಮ, 12.45 ಚಟ್‌ಪಟ್ ಚುರುಮುರಿ, ಪ್ರಸ್ತುತಿ–ಪ್ರಭುಸ್ವಾಮಿ ಮಳಿಮಠ್ ಮತ್ತು ಕೆ.ಬಿ.ಮೀನಾ, 1.20 ಭಾವಗೀತೆ–ರೋಹಿಣಿ ಸುಧಾಮ್, 3.00 ಭಜರೇ ಭಜ ಮಾನಸ–ವಿಶೇಷ ಕಾರ್ಯಕ್ರಮ, 4.00 ಹಳ್ಳಿ ಹಾಡು–ಟಿ.ನರಸೀಪುರ ತಾಲೂಕ್ ಬನ್ನೂರು ಹೋಬಳಿ ಮಾದಿಗಳ್ಳಿಯ ಗೌರಮ್ಮ ಮತ್ತು ತಂಡ, 4.30 ರಸಮಂಜರಿ– ಮೈಸೂರಿನ ಗೀತ ಭಾರತಿ ಪ್ರೌಢಶಾಲಾ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 6.50 ಕೃಷಿರಂಗ–ಕಿಸಾನ್‌ವಾಣಿ, ಮಿಶ್ರ ಕೃಷಿ ಹಾಗೂ ಕೃಷಿ ಮಾರುಕಟ್ಟೆ ಅನುಭವ ಕುರಿತು ಕೆ.ರಮೇಶ್ ಕುಮಾರ್ ಅವರೊಂದಿಗೆ ಸಂದರ್ಶನ, 9.30 ಯುವವಾಣಿ–AIRnext, ನಿಮ್ಮ ಕನಸಿಗೆ ನಿಮ್ಮದೇ ಮಾತು. ಭಾಗವಹಿಸುವವರು ಕುರುಬರಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು, 10.00 ನಾಟಕ 'ಬಾಳೆ ಹೊನ್ನೂರಿನ ಬ್ರಹ್ಮ ರಾಕ್ಷಸ. ರಚನೆ–ಅಪರಂಜಿ ಶಿವು, ನಿರ್ದೇಶನ–ಉಮೇಶ್ ಎಸ್.ಎಸ್.


■ **ದಲಿತ ಅಭಿವೃದ್ಧಿ ಸಂಘ:** ಡಾ.ಅಂಬೇಡ್ಕರ್ ಜಯಂತಿ, ಉದ್ಘಾಟನೆ: ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಅಧ್ಯಕ್ಷತೆ: ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ನಾರಾಯಣ, ಮುಖ್ಯ ಅತಿಥಿಗಳು: ಮಾಜಿ ಮೇಯರ್ ಪುರುಷೋತ್ತಮ್, ಪಾಲಿಕೆ ಸದಸ್ಯೆ ಶೋಭ ಸುನೀಲ್, ಎನ್.ಶ್ರೀನಿವಾಸಲು, ಸ್ಥಳ: ಟಿ.ಸುಬ್ಬಣ್ಣ ಸಾರ್ವಜನಿಕ ಹಾಸ್ಟೆಲ್ ಹಿಂಭಾಗ, 4ನೇ ಕ್ರಾಸ್, 4ನೇ ಮೇನ್, ವಿದ್ಯಾರಣ್ಯಪುರಂ, ಸಂಜೆ 5ಕ್ಕೆ

■ **ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್:** ಎಸ್.ಜಿ. ರಘುರಾಂ ಸಂಸ್ಮರಣೆ, ಭಾವಲಹರಿ, ಎಸ್.ಜಿ. ರಘುರಾಂ ಸಂಗೀತ ನಿರ್ದೇಶನದ ಭಾವಗೀತೆಗಳು, ಸ್ಥಳ: ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯ ಭವನ, ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಶಿವಕಾಂತಾನಂದ ಅವರಿಂದ ಶ್ರೀಮದ್ಭಾಗವತ ಕುರಿತು ಉಪನ್ಯಾಸ, ಸ್ಥಳ: ಶ್ರೀ ರಾಮಕೃಷ್ಣ ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ಮಹಾವೀರ ಸೇವಾ ಸಂಸ್ಥಾನ್:** 1008 ಭಗವಾನ್ ಶ್ರೀ ಮಹಾವೀರರ ಜಯಂತಿ ಪ್ರಯುಕ್ತ ಶ್ರೀ ಮಹಾವೀರ ಅಹಿಂಸಾ ಪ್ರಶಸ್ತಿ ಪ್ರದಾನ ಸಮಾರಂಭ, ಸಾನ್ನಿಧ್ಯ: ಶ್ರೀ ಭುವನ ಕೀರ್ತಿ ಭಟ್ಟಾರಕ ಸ್ವಾಮೀಜಿ, ಪ್ರಶಸ್ತಿ ಪುರಸ್ಕೃತರು: ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರೊ.ಮಲೆಯೂರು ಗುರುಸ್ವಾಮಿ, ಅಧ್ಯಕ್ಷತೆ: ಶ್ರೀ ದಿಗಂಬರ ಜೈನ ಸಮಾಜದ ಅಧ್ಯಕ್ಷ ಎಂ.ಆರ್. ಸುನೀಲ್‌ಕುಮಾರ್, ಸ್ಥಳ: ಎಂ.ಎಲ್.ವರ್ಧಮಾನಯ್ಯ ಸ್ಮಾರಕ ಭವನ, ಹರ್ಷ ರಸ್ತೆ, ಸಂಜೆ 7.30ಕ್ಕೆ.

ವಿವಿಧೆಡೆ ಶ್ರೀ ರಾಮನವಮಿ



■ **ಗಾನವಿಶಾರದ ಶ್ರೀಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರ :** 106ನೇ ವಾರ್ಷಿಕ ಪಾರಂಪರಿಕ ರಾಮನವಮಿ ಸಂಗೀತೋತ್ಸವ, ವಿದ್ವಾನ್ ವೆಂಕಟೇಶ್‌ಕುಮಾರ್ ಮತ್ತು ತಂಡದಿಂದ ಹಿಂದೂಸ್ತಾನಿ ಗಾಯನ, ಸ್ಥಳ: ಶ್ರೀ ಪ್ರಸನ್ನ ಸೀತಾರಾಮ ಮಂದಿರ, ಸಂಜೆ 5.30ಕ್ಕೆ.

■ **ಶ್ರೀ ಮಹಾಜನ ಸಭಾ, ಕೃಷ್ಣಮೂರ್ತಿಪುರಂ ಶ್ರೀ ರಾಮಮಂದಿರ :** 93ನೇ ವರ್ಷದ ಶ್ರೀರಾಮೋತ್ಸವದ ಸಾಂಸ್ಕೃತಿಕ ಕಾರ್ಯಕ್ರಮಗಳು, ಬೆಳಗ್ಗೆ 9ಕ್ಕೆ ಪೂರ್ಣಪ್ರಜ್ಞ ಹರಿವಾಯುಸ್ತುತಿ ಪಾರಾಯಣ ಸೇವಾ ಸಮಿತಿಯಿಂದ ಹರಿವಾಯುಸ್ತುತಿ ಪಾರಾಯಣ, ಸಂಜೆ 6ಕ್ಕೆ ವಿದ್ವಾನ್ ವಿ. ಪ್ರಹ್ಲಾದ ಭಟ್, ನರ್ತನ ಶಾಲಾ ವಿಜಯಾಮೂರ್ತಿ ತಂಡದವರಿಂದ ಭರತನಾಟ್ಯ, ಸಂಜೆ 9ಕ್ಕೆ ಶಯನೋತ್ಸವ, ಸ್ಥಳ: ಶ್ರೀರಾಮಮಂದಿರ, ಕೃಷ್ಣಮೂರ್ತಿಪುರಂ.

■ **ಶ್ರೀ ಜಾನಕೀ ರಾಮ ಮಂದಿರ :** ಶ್ರೀ ರಾಮನವಮಿ ಕಾರ್ಯಕ್ರಮ, ಸಂಜೆ ಶ್ರೀ ಸುಪ್ರಭಾತ ಭಜನಾ ಮಂಡಳಿಯವರಿಂದ ಭಜನೆ, ಸ್ಥಳ: ಮಂದಿರದ ಆವರಣ, ಗೊಲ್ಲಗೇರಿ, ಚಾಮರಾಜ ಮೊಹಲ್ಲಾ.

■ **ಶ್ರೀ ರಾಮ ಸೇವಾ ಮಂಡಲಿ:** ಶ್ರೀ ರಾಮೋತ್ಸವ ಕಾರ್ಯಕ್ರಮ, ಬೆಳಗ್ಗೆ 10.30ಕ್ಕೆ ಬಾಲಾ ತ್ರಿಪುರ ಸುಂದರಿ ಭಜನಾ ಮಂಡಳಿಯಿಂದ ಭಜನೆ, ಸಂಜೆ 6ಕ್ಕೆ ಶ್ರೀಕೃಷ್ಣ ಭಜನಾ ಮಂಡಳಿಯಿಂದ ಭಜನೆ, ಸಂಜೆ 7 ರಿಂದ ಮನುವಿದ್ಯಾ ಕಲ್ಚರಲ್ ಫೌಂಡೇಷನ್ ಸಂಸ್ಥೆಯಿಂದ ನೃತ್ಯ ರೂಪಕ, ನಿರ್ದೇಶನ : ವಿದುಷಿ ನೇತ್ರಾ ರಘುನಂದನ್, ಸ್ಥಳ: ಶ್ರೀ ಅವನಿ ಶಂಕರ ಮಠ, ವಿದ್ಯಾರಣ್ಯಪುರಂ, 4ನೇ ಮೇನ್ 9ನೇ ಕ್ರಾಸ್.

■ **ಶ್ರೀ ರಾಮ ಮಂದಿರ, ಜಯನಗರ :** ಶ್ರೀ ರಾಮೋತ್ಸವ, ಬೆಳಗ್ಗೆ 7 ಗಂಟೆಗೆ ನಾಂಧಿ, ಸಂಜೆ 6.30ಕ್ಕೆ ವರಪೂಜೆ, ಸ್ಥಳ: ಶ್ರೀರಾಮಮಂದಿರ, ಜಯನಗರ.

■ **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್:** ಶ್ರೀ ರಾಮೋತ್ಸವ, ವಿದ್ವಾನ್ ಎನ್.ಆರ್. ಪ್ರಶಾಂತ್ ಅವರಿಂದ ಶಾಸ್ತ್ರೀಯ ಸಂಗೀತ, ಕಾರ್ತಿಕ್–ಪಿಟೀಲು, ತುಮಕೂರು ರವಿಶಂಕರ್–ಮೃದಂಗ, ವಿಕ್ರಂ ಭಾರದ್ವಾಜ್–ಮೋರ್ಚಿಂಗ್ ಸ್ಥಳ: ಆಲಮ್ಮನವರ ಛತ್ರ, ಕುಂಚಿಟಿಗರ ಸಂಘ, ಸಂಜೆ 6.30ರಿಂದ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಏಪ್ರಿಲ್ 14 ಗುರುವಾರ 2022

ಸಂಪುಟ: 43 | ಸಂಚಿಕೆ: 354 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4



ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಹಿನ್ನೆಲೆ; ಕೇಸು ದಾಖಲು

ಸಚಿವ ಈಶ್ವರಪ್ಪ–A1

ಆಪ್ತರಾದ ಬಸವರಾಜು–A2, ರಮೇಶ್–A3

ಮೈಸೂರು, ಏ.13– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣದಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ, ಅವರ ಆಪ್ತರಾದ ಬಸವರಾಜು ಮತ್ತು ರಮೇಶ್ ವಿರುದ್ಧ ಉಡುಪಿ ಟೌನ್ ಪೊಲೀಸ್ ಠಾಣೆಯಲ್ಲಿ ಆತ್ಮಹತ್ಯೆಗೆ ಪ್ರಚೋದನೆ ಆರೋಪದ ಮೇರೆಗೆ ಇಂದು ಎಫ್ಐಆರ್ ದಾಖಲಾಗಿದೆ.

ಆತ್ಮಹತ್ಯೆಗೆ ಶರಣಾದ ಗುತ್ತಿಗೆದಾರ ಸಂತೋಷ್ ಪಾಟೀಲ್ ಸಹೋದರ ಪ್ರಶಾಂತ್ ಪಾಟೀಲ್ ಅವರು ನೀಡಿದ ದೂರಿನ ಮೇರೆಗೆ ಪೊಲೀಸರು ಇಂದು ಮುಂಜಾನೆ 3.25ರಲ್ಲಿ ಎಫ್ಐಆರ್ ದಾಖಲಿಸಿದ್ದಾರೆ. ಸಂತೋಷ್ ಪಾಟೀಲ್ 4 ಕೋಟಿ ರೂ.ಗಳಿಗೂ ಹೆಚ್ಚು ಕಾಮಗಾರಿ ನಡೆಸಿದ್ದು, ಶೇ.40 ರಷ್ಟು ಕಮಿಷನ್ ನೀಡಿದರೆ ಮಾತ್ರ ಬಿಲ್ ಪಾಸ್ ಮಾಡುವುದಾಗಿ ಸಚಿವ ಈಶ್ವರಪ್ಪ ಅವರ ಆಪ್ತರಾದ ಬಸವರಾಜ್ ಮತ್ತು ರಮೇಶ್ ಅವರು ಒತ್ತಡ ಹೇರಿ, ಕೊನೆಗೂ ಬಿಲ್ ಪಾಸ್ ಮಾಡದ ಕಾರಣ ಸಂತೋಷ್ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

2020–21ನೇ ಸಾಲಿನಲ್ಲಿ ಬೆಳಗಾವಿಯ ಹಿಂಡಲಗಾ ಗ್ರಾಪಂ ವ್ಯಾಪ್ತಿಯಲ್ಲಿರುವ ಶ್ರೀ ಲಕ್ಷ್ಮೀದೇವಿ ಜಾತ್ರೆ ವೇಳೆ ಗ್ರಾಮದ ಮುಖಂಡರು ಹಾಗೂ ಸ್ವಾಮೀಜಿಗಳು ಬೆಂಗಳೂರಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ ಅವರನ್ನು ಭೇಟಿ ಮಾಡಿ, ಜಾತ್ರೆ ಹಿನ್ನೆಲೆಯಲ್ಲಿ ರಸ್ತೆ, ಚರಂಡಿ ಕಾಮಗಾರಿ ಸೇರಿದಂತೆ ಕೆಲವು ಕಾಮಗಾರಿಗಳನ್ನು ಮಾಡಿಕೊಡಬೇಕೆಂದು ●9ನೇ ಪುಟಕ್ಕೆ

ವರಿಷ್ಠರಿಗೆ ಮಾಹಿತಿ



ಬೆಂಗಳೂರು, ಏ.13 (ಕೆಎಂಶಿ)– ಆತ್ಮಹತ್ಯೆ ಮಾಡಿಕೊಂಡ ಗುತ್ತಿಗೆದಾರ ಸಂತೋಷ್ ಪಾಟೀಲ್ ಅವರ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವರಿಷ್ಠರಿಗೆ ಸಂಪೂರ್ಣ ಮಾಹಿತಿ ರವಾನಿಸಿದ್ದಾರೆ.

ಮಂಗಳೂರು ಪ್ರವಾಸದಿಂದ ಹಿಂತಿರುಗುತ್ತಿದ್ದಂತೆ ಪಂಚಾಯತ್ ರಾಜ್ ಹಾಗೂ ಗೃಹ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದು, ಈ ವರದಿ ರವಾನೆ ಮಾಡಿದ್ದಾರೆ. ಇಲಾಖಾ ವತಿಯಿಂದ ಗುತ್ತಿಗೆ ಕಾಮಗಾರಿಗಳನ್ನು ನೀಡಲಾಗಿತ್ತೆ ಕಾಮಗಾರಿಗಳನ್ನು ನಡೆಸಲು ಅವರು ಅರ್ಜಿ ಹಾಕಿದ್ದರ ಎಂಬ ಬಗ್ಗೆ ಮಾಹಿತಿ ಪಡೆದರು. ಈ ಹಿಂದೆ ಮನೆ ಮನೆಗೆ ಕೊಳಾಯಿ ನೀರು ಕಲ್ಪಿಸುವ ಜಲ ಮಿಷನ್ ಯೋಜನೆಯಡಿ ಕಾಮಗಾರಿ ಕೈಗೊಳ್ಳಲು ಅವರು ಟೆಂಡರ್‌ಗೆ ಅರ್ಜಿ ಹಾಕಿದ್ದರು. ಆದರೆ ಅನುಭವ ಇಲ್ಲದ ಕಾರಣ ಅದನ್ನು ತಿರಸ್ಕರಿಸಲಾಗಿತ್ತು ಎಂಬ ಮಾಹಿತಿ ರವಾನಿಸಿದ್ದಾರೆ.

ಸಂತೋಷ್ ಪಾಟೀಲ್ ಡೆತ್ ನೋಟ್ ಬರೆದಿಟ್ಟಿಲ್ಲ, ಬರೀ ವಾಟ್ಸಾಪ್ ಸಂದೇಶ

ಸಚಿವ ಕೆ.ಎಸ್.ಈಶ್ವರಪ್ಪ ಶಿವಮೊಗ್ಗದಲ್ಲಿ ಹೇಳಿಕೆ



ಶಿವಮೊಗ್ಗ,ಏ.13–ಉಡುಪಿಯ ಶಾಂಭವಿ ಲಾಡ್ಜ್‌ನಲ್ಲಿ ಮೃತಪಟ್ಟಿರುವ ಸಂತೋಷ್ ಪಾಟೀಲ್ ಯಾವುದೇ ಡೆತ್ ನೋಟ್ ಬರೆದಿಟ್ಟಿಲ್ಲ, ವಾಟ್ಸಾಪ್‌ನಲ್ಲಿ ಸಂದೇಶ ಬರೆದಿದ್ದಾರಷ್ಟೆ, ಅವರು ಆರೋಪ ಮಾಡಿರುವಂತೆ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸಚಿವ ಕೆ.ಎಸ್.ಈಶ್ವರಪ್ಪ ಹೇಳಿದ್ದಾರೆ.


ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಾನು ಸಂತೋಷ್ ಪಾಟೀಲ್ ಮುಖ ಕೂಡ ನೋಡಿಲ್ಲ, ಅಂಥದ್ದರಲ್ಲಿ 80 ಬಾರಿ ನೋಡಿದ್ದೇನೆ, ಭೇಟಿಯಾಗಿದ್ದೇನೆ ಎಂದು ಹೇಗೆ ಹೇಳಿದ್ದಾರೋ ಗೊತ್ತಿಲ್ಲ, ಅವರು ದೆಹಲಿಯಲ್ಲಿ ಹೋಗಿ ಸುದ್ದಿಗೋಷ್ಠಿ ನಡೆಸಲು ವಿಮಾನ ಟಿಕೆಟ್ ಬುಕ್ ಮಾಡಿಕೊಟ್ಟವರಾರೂ ಎಂದು ಕೇಳಿದರು.

ಸಿದ್ದರಾಮಯ್ಯ ನೇತೃತ್ವ ಸರ್ಕಾರದಲ್ಲಿ ಡಿವೈಎಸ್ಪಿ ಗಣಪತಿ ವಿಡಿಯೊ ಮಾಡಿದ್ದರು, ಸಂತೋಷ್ ಪ್ರಕರಣದಲ್ಲಿ ವಿಡಿಯೊ ಮಾಡಿಲ್ಲ, ಡೆತ್ ನೋಟ್ ಬರೆದಿಲ್ಲ, ಕೇವಲ ಅವರು ಬರೆದಿದ್ದರು ಎನ್ನುವ ಸಂದೇಶ ಹರಿದಾಡುತ್ತಿದೆ, ಈ ಪ್ರಕರಣ ಬಗ್ಗೆ ಅಮೂಲಾಗ್ರ ತನಿಖೆಯಾಗಬೇಕು, ನಾನು ರಾಜೀನಾಮೆ ನೀಡುವ ಪ್ರಶ್ನೆಯೇ ಉದ್ಭವವಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಷಡ್ಯಂತ್ರ ಬಗ್ಗೆ ತನಿಖೆಯಾಗಬೇಕು: ಸಂತೋಷ್ ಪಾಟೀಲ್ ಸಾವಿನ ಪ್ರಕರಣದಲ್ಲಿ ನನ್ನನ್ನು ಸಿಲುಕಿಸಲು ಷಡ್ಯಂತ್ರ ನಡೆದಿದೆ ಎಂಬುದು ಮೇಲ್ನೋಟಕ್ಕೆ ಕಂಡುಬರುತ್ತಿದೆ, ಈ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ಒತ್ತಾಯಿಸುತ್ತೇನೆ ಎಂದು ಹೇಳಿದ್ದಾರೆ.

ಅಧಿಕಾರದಲ್ಲಿ ಮುಂದುವರಿಯುವುದು ನಿಶ್ಚಿತ: ಸಂತೋಷ್ ಪಾಟೀಲ್ ವಿರುದ್ಧ ನಾನು ಮಾನನಷ್ಟ ಮೊಕದ್ದಮೆ ಹೂಡಿದ ನಂತರ ಕೋರ್ಟ್ ನೊಟೀಸ್ ನೀಡಿದ ಮೇಲೆ ಈ ಸಾವು ಸಂಭವಿಸಿದೆ. ಇದಕ್ಕೂ ಮುನ್ನ ಸಂತೋಷ್ ಪಾಟೀಲ್ ನನ್ನ ವಿರುದ್ಧ ಕಮಿಷನ್ ಕೇಳಿದ ಆರೋಪ ಮಾಡಿ ಪ್ರಧಾನಿ ಮೋದಿ, ಅಮಿತ್ ಶಾ ಅವರಿಗೆ ದೂರು ನೀಡಿದ್ದರು. ಕಾಮಗಾರಿ ಟೆಂಡರ್ ನೀಡಬೇಕಾದರೆ ಕೆಲವು ನಿಯಮಗಳಿರುತ್ತವೆ. ಟೆಂಡರ್ ನೀಡದೆಯೇ ಕಾಮಗಾರಿ ನಡೆಸಲು ಸಾಧ್ಯವಾಗುತ್ತದೆಯೇ ಇದು ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯನವರಿಗೆ ಗೊತ್ತಿಲ್ಲವೇ, ನನ್ನ ವಿರುದ್ಧ ಷಡ್ಯಂತ್ರ ನಡೆದಿದೆ ಎಂದು ಕಾಂಗ್ರೆಸ್ ●9ನೇ ಪುಟಕ್ಕೆ

ಈಶ್ವರಪ್ಪ ವಜಾಕ್ಕೆ ಆಗ್ರಹಿಸಿ ಕಾಂಗ್ರೆಸ್ ನಾಯಕರಿಂದ ರಾಜ್ಯಪಾಲರಿಗೆ ಮನವಿ



ಬೆಂಗಳೂರು, ಏ.13 (ಕೆಎಂಶಿ)– ಗುತ್ತಿಗೆದಾರ ಸಂತೋಷ್ ಪಾಟೀಲ್ ಅವರ ಆತ್ಮಹತ್ಯೆಗೆ ಕಾರಣರಾಗಿರುವ ಸಚಿವ ಈಶ್ವರಪ್ಪ ಅವರನ್ನು ವಜಾಗೊಳಿಸಿ, ಅವರ ವಿರುದ್ಧ ಆತ್ಮಹತ್ಯೆಗೆ ಪ್ರಚೋದನೆ ಹಾಗೂ ಭ್ರಷ್ಟಾಚಾರ ಪ್ರಕರಣ ದಾಖಲಿಸಿ, ಬಂಧಿಸಿ ವಿಚಾರಣೆ ನಡೆಸಬೇಕೆಂದು ಪ್ರದೇಶ ಕಾಂಗ್ರೆಸ್ ಮನವಿ ಸಲ್ಲಿಸಿದೆ.

ವಿಧಾನಸಭೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಇತರ ಮುಖಂಡರ ನಿಯೋಗ ಬುಧವಾರ ರಾಜಭವನಕ್ಕೆ ತೆರಳಿ, ರಾಜ್ಯಪಾಲರಿಗೆ ಮನವಿ ಸಲ್ಲಿಸಿರುವುದಲ್ಲದೆ, ಗುತ್ತಿಗೆದಾರರಿಂದ ಶೇ.40ರಷ್ಟು ಕಮೀಷನ್ ಪಡೆದು, ಸಚಿವರುಗಳು ದೊಡ್ಡ ದಂಧೆ ನಡೆಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ ಮತ್ತು ಶಿವಕುಮಾರ್, ದೇಶದ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ರಾಜ್ಯಕ್ಕೆ ಈ ಪ್ರಕರಣ ಕಪ್ಪುಚುಕ್ಕೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಮೊದಲಿಂದಲೂ ಉತ್ತಮ ಆಡಳಿತ ನೀಡುತ್ತಾ ●9ನೇ ಪುಟಕ್ಕೆ

ಸಂತೋಷ್ ಪಾರ್ಥಿವ ಶರೀರ ಕುಟುಂಬದ ವಶಕ್ಕೆ



ಉಡುಪಿ,ಏ.13–ಆತ್ಮಹತ್ಯೆಗೆ ಶರಣಾಗಿರುವ ಗುತ್ತಿಗೆದಾರ ಸಂತೋಷ್ ಪಾಟೀಲ್ ಅವರ ಮರಣೋತ್ತರ ಪರೀಕ್ಷೆ ನಡೆಸಿ, ದೇಹವನ್ನು ಕುಟುಂಬದವರಿಗೆ ಬುಧವಾರ ರಾತ್ರಿ ಹಸ್ತಾಂತರಿಸಲಾಯಿತು. ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ಬೆಳಗಾವಿಯ ಅವರ ನಿವಾಸಕ್ಕೆ ದೇಹವನ್ನು ಕೊಂಡೊಯ್ಯಲಾಗುತ್ತಿದ್ದು, ನಾಳೆ ಮುಂಜಾನೆ ಬೆಳಗಾವಿ ತಲುಪುವ ನಿರೀಕ್ಷೆಯಿದೆ. ನಿನ್ನೆ ಬೆಳಗ್ಗೆಯಿಂದ ಬುಧವಾರ ಸಂಜೆಯವರೆಗೂ ಇಲ್ಲಿನ ಬಸ್ ನಿಲ್ದಾಣದ ಸಮೀಪವಿರುವ ಶಾಂಭವಿ ಲಾಡ್ಜ್‌ನ ಕೊಠಡಿಯಲ್ಲಿದ್ದ ಮೃತದೇಹವನ್ನು ಅವರ ಕುಟುಂಬ ಸದಸ್ಯರ ಹೇಳಿಕೆ ದಾಖಲಿಸಿದ ನಂತರ ಇಲ್ಲಿನ ಸರ್ಕಾರಿ ಆಸ್ಪತ್ರೆಗೆ ಪೊಲೀಸರು ಸ್ಥಳಾಂತರಿಸಿದರು. ಅಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ನಂತರ ಕುಟುಂಬ ●9ನೇ ಪುಟಕ್ಕೆ

ಬಿಜೆಪಿ ವರಿಷ್ಠರಲ್ಲೇ ಗೊಂದಲ

● ಕೇಂದ್ರ ಸಚಿವ ಪ್ರಹ್ಲಾದ್ ಜೋಷಿಯಿಂದ ಮಾಹಿತಿ ಪಡೆದ ಗೃಹ ಸಚಿವ ಅಮಿತ್ ಶಾ ● ಈಶ್ವರಪ್ಪ ಬೆನ್ನಿಗೆ ನಿಂತ ಸಂತೋಷ್, ಇಕ್ಕಟ್ಟಿನಲ್ಲಿ ಮುಖ್ಯಮಂತ್ರಿ ಬೊಮ್ಮಾಯಿ ● ರಾಜೀನಾಮೆ ಬಗ್ಗೆ ಶೀಘ್ರವೇ ತೀರ್ಮಾನ ಕೈಗೊಳ್ಳಲಾಗುವುದು ಎಂದ ಅರುಣ್ ಸಿಂಗ್

ಬೆಂಗಳೂರು, ಏ.13 (ಕೆಎಂಶಿ)– ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಈಶ್ವರಪ್ಪ ಅವರ ರಾಜೀನಾಮೆ ಪಡೆಯುವಲ್ಲಿ ವರಿಷ್ಠರಲ್ಲೇ ಗೊಂದಲ ನಿರ್ಮಾಣವಾಗಿದೆ. ಕೇಂದ್ರ ಗೃಹ ಸಚಿವ ಅಮಿತ್ ಷಾ ಪ್ರಕರಣದ ಬಗ್ಗೆ ತಮ್ಮ ಸಹೋದ್ಯೋಗಿ ಪ್ರಹ್ಲಾದ್ ಜೋಶಿ ಅವರಿಂದ ಮಾಹಿತಿ ಪಡೆದು, ಇನ್ನೆರಡು ದಿನದಲ್ಲಿ ತೀರ್ಮಾನ ತೆಗೆದುಕೊಳ್ಳುವಂತೆ ಈಶ್ವರಪ್ಪ ಅವರಿಗೆ ತಿಳಿಸಿ ಎಂದು ಸೂಚಿಸಿದ್ದಾರೆ.

ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ಮಾಡಿರುವ ಟ್ವೀಟ್‌ನ್ನು ಗಮನಿಸಿದ ಅಮಿತ್ ಷಾ ಅವರು, ತಕ್ಷಣವೇ ಪ್ರಹ್ಲಾದ್ ಜೋಶಿ ಅವರನ್ನು ಸಂಪರ್ಕಿಸಿ, ಮಾಹಿತಿ ಪಡೆದುಕೊಂಡಿದ್ದಲ್ಲದೆ, ಈ ಆದೇಶ ಮಾಡಿದ್ದಾರೆ. ಆದರೆ ಬಿಜೆಪಿಯ ಸಂಘಟನಾ ಕಾರ್ಯದರ್ಶಿ ಸಂತೋಷ್ ಮಾತ್ರ ಈಶ್ವರಪ್ಪ ಬೆಂಬಲಕ್ಕೆ ನಿಂತಿದ್ದು, ತಕ್ಷಣಕ್ಕೆ ಯಾವುದೇ ದುಡುಕು ನಿರ್ಧಾರ ಕೈಗೊಳ್ಳುವುದು ಬೇಡ ಎಂದು ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್‌ಗೆ ಸಂದೇಶ ನೀಡಿದ್ದಾರೆ. ಮೈಸೂರು ಪ್ರವಾಸದಿಂದ ಶಿವಮೊಗ್ಗಕ್ಕೆ ತೆರಳುವ ಮುನ್ನವೇ ಈಶ್ವರಪ್ಪ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವ ನಿರ್ಧಾರ ಕೈಗೊಂಡಿದ್ದರು. ಆದರೆ ಸಂತೋಷ್ ನೀಡಿದ ಸಲಹೆಯಂತೆ ಪತ್ರಿಕಾಗೋಷ್ಠಿಯಲ್ಲಿ ರಾಜೀನಾಮೆ ನೀಡುವುದಿಲ್ಲ ಎಂದು ತಿಳಿಸಿದ್ದಾರೆ. ವರಿಷ್ಠರ ಈ ಗೊಂದಲದಿಂದ ಮುಖ್ಯಮಂತ್ರಿ ●9ನೇ ಪುಟಕ್ಕೆ

ಭ್ರಷ್ಟಾಚಾರ ನಿಯಂತ್ರಿಸದಿದ್ದರೆ ಕಾಮಗಾರಿ ಸ್ಥಗಿತ

● ಗುತ್ತಿಗೆದಾರರ ಸಂಘದ ಎಚ್ಚರಿಕೆ ● ಐದಾರು ಸಚಿವರು, 20ಕ್ಕೂ ಹೆಚ್ಚು ಶಾಸಕರಿಂದ ಭ್ರಷ್ಟಾಚಾರ
● 15 ದಿನಗಳ ಬಳಿಕ ಭ್ರಷ್ಟಾಚಾರದ ದಾಖಲೆ ಬಿಡುಗಡೆ ● ಈಶ್ವರಪ್ಪ ರಾಜೀನಾಮೆ ಕೊಡಲೇಬೇಕು

ಬೆಂಗಳೂರು, ಏ. 13– ಭ್ರಷ್ಟಾಚಾರ ನಿಯಂತ್ರಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳದೇ ಇದ್ದರೆ ರಾಜ್ಯದಾದ್ಯಂತ ಒಂದು ತಿಂಗಳ ಕಾಲ ಕಾಮಗಾರಿಗಳನ್ನು ಸ್ಥಗಿತಗೊಳಿಸಲಾಗುವುದು ಎಂದು ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ಎಚ್ಚರಿಕೆ ನೀಡಿದೆ.

ಗುತ್ತಿಗೆದಾರ ಸಂತೋಷ್ ಪಾಟೀಲ ಆತ್ಮಹತ್ಯೆ ಪ್ರಕರಣದ ಕುರಿತು ಬುಧವಾರ ನಡೆದ ಸಂಘದ ಆಡಳಿತ ಮಂಡಳಿ ಸಭೆ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಡಿ.ಕೆಂಪಣ್ಣ ಈ ವಿಷಯ ತಿಳಿಸಿದರು.

ಪ್ರಧಾನಿ, ಮುಖ್ಯಮಂತ್ರಿ, ರಾಜ್ಯಪಾಲರಿಗೆ ದೂರು ನೀಡಿದರೂ ಭ್ರಷ್ಟಾಚಾರ ನಿಯಂತ್ರಣಕ್ಕೆ ಬಂದಿಲ್ಲ. ಸರ್ಕಾರದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದಿಂದಾಗಿಯೇ ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅವರ ಸಾವಿಗೆ ಸರ್ಕಾರವೇ ಹೊಣೆ ಎಂದರು.

ಮುಂದಿನ ವಾರ ಸಂಘದ ಕಾರ್ಯಕಾರಿ ಸಮಿತಿ ಸಭೆ ನಡೆಸಲಾಗುವುದು. ಸರ್ಕಾರದಲ್ಲಿನ ಭ್ರಷ್ಟಾಚಾರ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ಸರ್ಕಾರದ ಧೋರಣೆ ವಿರೋಧಿಸಿ ಒಂದು ತಿಂಗಳ ಕಾಲ ಎಲ್ಲ ಕಾಮಗಾರಿಗಳನ್ನು ಸ್ಥಗಿತಗೊಳಿಸಲಾಗುವುದು. ಭ್ರಷ್ಟಾಚಾರ ಮತ್ತು ಗುತ್ತಿಗೆದಾರರಿಗೆ ನೀಡುತ್ತಿರುವ ಕಿರುಕುಳ ವಿರೋಧಿಸಿ ಮೇ 25ರಂದು ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಲಾಗುವುದು. 50,000 ಗುತ್ತಿಗೆದಾರರು ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಕೆಂಪಣ್ಣ ತಿಳಿಸಿದರು.



ಡಿ.ಕೆಂಪಣ್ಣ

15 ದಿನ ಗಡುವು: ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಭ್ರಷ್ಟಾಚಾರ ನಿಯಂತ್ರಣಕ್ಕೆ ಮುಖ್ಯಮಂತ್ರಿಯವರಿಗೆ 15 ದಿನಗಳ ಕಾಲ ಅವಕಾಶ ನೀಡಲಾಗುವುದು. ಅಷ್ಟರೊಳಗೆ ಅವರು ಸಭೆ ನಡೆಸಿ, ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ತಪ್ಪಿದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದರು.

ರಾಜ್ಯ ಸರ್ಕಾರದ ಐದಾರು ಮಂದಿ ಸಚಿವರು ಮತ್ತು 20ಕ್ಕೂ ಹೆಚ್ಚು ಶಾಸಕರು ಭ್ರಷ್ಟಾಚಾರದಲ್ಲಿ ನಿರತರಾಗಿರುವ ಕುರಿತು ದಾಖಲೆಗಳಿವೆ. 15 ದಿನಗಳ ಬಳಿಕ ಅವುಗಳನ್ನು ಬಹಿರಂಗಪಡಿಸಲಾಗುವುದು ಎಂದು ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ ಡಿ.ಕೆಂಪಣ್ಣ ಹೇಳಿದರು.

ರಾಜೀನಾಮೆಗೆ ಆಗ್ರಹ: ಸಂತೋಷ್ ಆತ್ಮಹತ್ಯೆಗೆ ಸಚಿವ ಕೆ.ಎಸ್. ಈಶ್ವರಪ್ಪ ನೇರ ಹೊಣೆ. ಅವರಿಂದ ತಕ್ಷಣ ರಾಜೀನಾಮೆ ಪಡೆಯಬೇಕು ಎಂದು ಕೆಂಪಣ್ಣ ಒತ್ತಾಯಿಸಿದರು. ಪ್ರಕರಣದ ಕುರಿತು ಸುಪ್ರೀಂ ಕೋರ್ಟ್ ಅಥವಾ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ನ್ಯಾಯಾಂಗ ತನಿಖೆ ನಡೆಸಬೇಕು. ಇಲ್ಲವೇ ಸಿಬಿಐ ತನಿಖೆಗೆ ಆದೇಶಿಸಬೇಕು ಎಂದು ಆಗ್ರಹಿಸಿದರು.

ಸಂತೋಷ್ ಪಾಟೀಲ ಅವರು ಮಾಡಿರುವ ಕಾಮಗಾರಿಗಳ ಬಾಬ್ತು ರೂ. 4 ಕೋಟಿಯನ್ನು ತಕ್ಷಣ ಬಿಡುಗಡೆ ಮಾಡಬೇಕು. ಅವರ ಕುಟುಂಬಕ್ಕೆ ರೂ. 2 ಕೋಟಿ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಬೂಸ್ಟರ್ ಡೋಸ್ ದರ ಇಳಿದರೂ ಲಸಿಕೆ ಪಡೆಯದ ಜನ

ಬೆಂಗಳೂರು: ನಗರದ ಕೆಲವು ಖಾಸಗಿ ಆಸ್ಪತ್ರೆಗಳು ಕೋವಿಡ್ ಬೂಸ್ಟರ್ ಡೋಸ್ ಲಸಿಕೆಗಳ ದರ ಇಳಿಸಿದ್ದರೂ ಕೂಡ ಲಸಿಕೆ ಪಡೆದುಕೊಳ್ಳಲು ಜನರು ಮುಂದೆ ಬಾರದೆ ಇರುವ ಬೆಳವಣಿಗೆಗಳು ಕಂಡು ಬರುತ್ತಿದೆ.

ನಗರದ ಕೆಲವು ಆಸ್ಪತ್ರೆಗಳು ಬೂಸ್ಟರ್ ಡೋಸ್ ಲಸಿಕೆ ದರವನ್ನು ರೂ. 386ಕ್ಕೆ ಇಳಿಕೆ ಮಾಡಿದ್ದು, ಇನ್ನೂ ಕೆಲವು ಆಸ್ಪತ್ರೆಗಳು ಹೆಚ್ಚಿನ ದರದಲ್ಲಿಯೇ ಲಸಿಕೆಗಳನ್ನು ನೀಡುತ್ತಿವೆ. ಖಾಸಗಿ ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಮ್ಸ್ ಅಸೋಸಿಯೇಷನ್ ಕಾರ್ಯದರ್ಶಿ ಡಾ.ರಾಜಶೇಖರ್ ವೈ.ಎಲ್. ಮಾತನಾಡಿ, ಖಾಸಗಿ ಆಸ್ಪತ್ರೆಗಳು ಹಳೆಯ ಲಸಿಕೆ ದಾಸ್ತಾನುಗಳನ್ನು ಖರೀದಿಸಿದಾಗ ಖಾಸಗಿ ●9ನೇ ಪುಟಕ್ಕೆ





ಬಿಜೆಪಿ ಸರ್ಕಾರದಲ್ಲಿ ಮೈಸೂರಿಗೆ ಅತೀ ಹೆಚ್ಚು ಅನುದಾನ ಭಾಗ್ಯ

ಮೈಸೂರಲ್ಲಿ 10 ಸ್ಥಾನ ಗಳಿಸುವ ಗುರಿ: ಕಟೀಲ್

ಕಾಂಗ್ರೆಸ್ ಇನ್ನು ಮುಂದೆ ನಿರುದ್ಯೋಗಿಗಳ ತಾಣ

ಮೈಸೂರು, ಏ.13(ಎಸ್‌ಬಿಡಿ)– ಮೈಸೂರಿಗೆ ಯಾವ ಪಕ್ಷದ ಸರ್ಕಾರ ಹೆಚ್ಚು ಅನುದಾನ ನೀಡಿದೆ ಎಂಬುದನ್ನು ಜನತೆಗೆ ತಿಳಿಸಲು ಶ್ವೇತಪತ್ರ ಹೊರಡಿಸೋಣ. ಆ ಮೂಲಕ ಮುಂದಿನ ಚುನಾವಣೆಯಲ್ಲಿ ಮೈಸೂರು ಜಿಲ್ಲೆಯಲ್ಲಿ 10 ಸ್ಥಾನ ಗೆಲ್ಲಲು ಪ್ರಯತ್ನಿಸೋಣ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಹೇಳಿದರು.

ಮೈಸೂರಿನ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಬುಧವಾರ ನಡೆದ ಬಿಜೆಪಿ ನಗರ ಹಾಗೂ ಜಿಲ್ಲಾ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿ, ಮೈಸೂರಿಗೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಹೆಚ್ಚು ಅನುದಾನ ನೀಡಿದೆಯೋ? ಅಥವಾ ಬಿಜೆಪಿ ಸರ್ಕಾರ ಹೆಚ್ಚು ಅನುದಾನ ಕಲ್ಪಿಸಿದೆಯೋ? ಎಂಬುದನ್ನು ಜನತೆಗೆ ತಿಳಿಸೋಣ ಎಂದು ವಿರೋಧ ಪಕ್ಷಕ್ಕೆ ಸವಾಲು ಹಾಕಿದರು.

ಕೊರೊನಾ ಲಸಿಕೆ ಬಗ್ಗೆ ಅಪಪ್ರಚಾರ ಮಾಡಿದ ಸಿದ್ದರಾಮಯ್ಯ, ಕದ್ದುಮುಚ್ಚಿ ಅವರೇ ಲಸಿಕೆ ಪಡೆದರು. ಹಗಲಿನಲ್ಲಿ ರೋಷಾವೇಷದಲ್ಲಿ ಟೀಕೆ ಮಾಡುವುದು, ರಾತ್ರಿ ವೇಳೆ ಕಾಲು ಹಿಡಿಯುವುದು ಸಿದ್ದರಾಮಯ್ಯನವರ ವರಸೆಯಾಗಿದೆ. ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ 24 ಹಿಂದೂಗಳ ಹತ್ಯೆಯಾಗಿತ್ತು. ಡಿವೈಎಸ್ಪಿ ಗಣಪತಿ ಆತ್ಮಹತ್ಯೆ ಮಾಡಿಕೊಂಡರು. ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿದ್ದವು. ದರೋಡೆಗಳು ಸಾಕಷ್ಟು ನಡೆದಿದ್ದವು. ಆದ್ದರಿಂದಲೇ ನರಹಂತಕ ಹುಲಿ, ನರಹಂತಕ ವೀರಪ್ಪನ್‌ನಂತೆ ಸಿದ್ದರಾಮಯ್ಯ ನರಹಂತಕ ಸಿಎಂ ಎಂದು ಹೇಳಿದ್ದೆ. ನನ್ನ ಹೇಳಿಕೆಗೆ ಚರ್ಚೆಗೆ ಗ್ರಾಸವಾಗಿತ್ತು. ಆದರೂ ಸಿದ್ದರಾಮಯ್ಯ ಓರ್ವ ಮುಖ್ಯಮಂತ್ರಿಯಾಗಿ ಆತ್ಮಹತ್ಯೆ ಮಾಡಿಕೊಂಡ ಗಣಪತಿ ಹಾಗೂ ಹತ್ಯೆಯಾದ ಒಬ್ಬ ಹಿಂದೂ ಕಾರ್ಯಕರ್ತನ ಮನೆಗೆ ಹೋಗಿ ಸಾಂತ್ವನ ಹೇಳಲಿಲ್ಲ ಎಂದು ಕಿಡಿಕಾರಿದರು.

ಇತಿಹಾಸ ಪ್ರಸಿದ್ಧ ಮೈಸೂರು, ಒಡೆಯರ್ ಕೊಡುಗೆ. ಅವರು ಕೇವಲ ಒಡೆತನಕ್ಕೆ ಸೀಮಿತವಾಗಿರಲಿಲ್ಲ. ಜನಪರ ಆಡಳಿತದೊಂದಿಗೆ ಅಭಿವೃದ್ಧಿಯ ಪರ್ವ ನಡೆಸಿದವರು. ಇಂತಹ ಒಡೆಯರ್ ಅವರ ಬಗ್ಗೆ ಏಕವಚನದಲ್ಲಿ ಮಾತನಾಡಿದ ಮಹಿಷಾಸುರನನ್ನು ಮೈಸೂರಿನ ಚಾಮುಂಡೇಶ್ವರಿಯಿಂದ ಓಡಿಸಿದರು ಎಂದು ಪರೋಕ್ಷವಾಗಿ ಸಿದ್ದರಾಮಯ್ಯನವರನ್ನು ಟೀಕಿಸಿದ ನಳಿನ್ ಕುಮಾರ್ ಕಟೀಲ್, ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಆ ಮಹಿಷಾಸುರನನ್ನು ರಾಜ್ಯದಿಂದಲೇ ಓಡಿಸಬೇಕೆಂದು ಕಾರ್ಯಕರ್ತರಿಗೆ ಕರೆ ನೀಡಿದರು.

ಖಾಲಿ ಮನೆ ಕಾಂಗ್ರೆಸ್: ಕಾಂಗ್ರೆಸ್ ಮನೆ ಖಾಲಿಯಾಗುತ್ತಿದ್ದು, ಬಿಜೆಪಿ ಮನೆ ತುಂಬುತ್ತಿರುವುದನ್ನು ಜನ ಗಮನಿಸಿದ್ದಾರೆ. ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನಿರುದ್ಯೋಗಿಗಳಾಗುವ ಭೀತಿಯಲ್ಲಿದ್ದಾರೆ. ಪರಿಣಾಮ ಮುಂದಿನ ಮುಖ್ಯಮಂತ್ರಿ ಯಾರು? ಎಂಬ ನಾಟಕ ಆರಂಭವಾಗಿದೆ. ●6ನೇ ಪುಟಕ್ಕೆ



ಮೈಸೂರಿನ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಬುಧವಾರ ಏರ್ಪಡಿಸಿದ್ದ ಬಿಜೆಪಿ ನಗರ ಹಾಗೂ ಜಿಲ್ಲಾ ಕಾರ್ಯಕರ್ತರ ಸಮಾವೇಶವನ್ನು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಉದ್ಘಾಟಿಸಿದರು.

▶ ಕಾಂಗ್ರೆಸ್‌ನವರಿಗೆ ಉದ್ಯೋಗವಿಲ್ಲ. ಆ ಪಕ್ಷ ಈಗಾಗಲೇ ತೀವ್ರ ನಿಗಾ ಘಟಕದಲ್ಲಿದೆ. ಇನ್ನು ಮೂರ್‍ನಾಲ್ಕು ತಿಂಗಳಲ್ಲಿ ಆಂತರಿಕ ಕಚ್ಚಾಟ ಮತ್ತಷ್ಟು ಜೋರಾಗುತ್ತದೆ. ಪಂಜಾಬಿನಲ್ಲಿ ಒಬ್ಬರು ಸಿಧು, ಮೈಸೂರಿನಲ್ಲಿ ಮತ್ತೊಬ್ಬರು ಸಿದ್ದು ಇದ್ದಾರೆ. ಸಿಧು ಪಂಜಾಬ್‌ನಲ್ಲಿ ಕಾಂಗ್ರೆಸ್ ಮುಗಿಸಿಯಾಗಿದೆ. ಇನ್ನು ಕರ್ನಾಟಕದಲ್ಲಿ ಸಿದ್ದು ಅವರಿಂದ ಕಾಂಗ್ರೆಸ್ ಅವನತಿ ಆಗುತ್ತಿದೆ. ಜೆಡಿಎಸ್ ಅಂತೂ ಮನೆಗೆ ಹೊರಟಿದೆ. ಬಲಾಢ್ಯ ನಾಯಕ ನರೇಂದ್ರ ಮೋದಿ ಅವರನ್ನು ಜಗತ್ತು ಗೌರವಿಸುತ್ತಿದೆ. ಜಗತ್ತಿನಲ್ಲೇ ಅತೀ ಹೆಚ್ಚು ಸದಸ್ಯತ್ವ, ಸಂಸದರು ಹಾಗೂ ಶಾಸಕರನ್ನು ಬಿಜೆಪಿ ಹೊಂದಿದೆ. 1967ರಲ್ಲಿದ್ದ ಜನಸಂಘದ ನಾಲ್ಕು ಶಾಸಕರಲ್ಲಿ ಮೈಸೂರಿನವರೂ ಒಬ್ಬರಿದ್ದರು. ಮೈಸೂರು ಭಾಗದಲ್ಲಿ 1994ರಲ್ಲೇ ಮೂವರು ಹಾಗೂ 1999ರಲ್ಲಿ ನಾಲ್ವರು ಶಾಸಕರಾಗಿ ಆಯ್ಕೆಯಾಗಿದ್ದರು. ಹೀಗೆ ಹಳೆಯದನ್ನೆಲ್ಲಾ ಸ್ಮರಿಸಿಕೊಂಡು ಹಳೇ ಮೈಸೂರು ಭಾಗದಲ್ಲಿ ಬಿಜೆಪಿಗೆ ಶಕ್ತಿ ಇದೆ ಎನ್ನುವುದನ್ನು ಅರಿತುಕೊಳ್ಳಬೇಕು. ಕಾಂಗ್ರೆಸ್ ಹಾಗೂ ಜೆಡಿಎಸ್‌ಗೆ ಹೆದರದೆ ಈ ಸುವರ್ಣಾವಕಾಶವನ್ನು ಬಳಸಿಕೊಳ್ಳಬೇಕು. –ಜಗದೀಶ್ ಶೆಟ್ಟರ್, ಮಾಜಿ ಮುಖ್ಯಮಂತ್ರಿ

ಇನ್ನೆರಡು ವಾರದಲ್ಲಿ 'ಯಶಸ್ವಿನಿ'ಗೆ ಚಾಲನೆ

ಮೈಸೂರು: ಮಹತ್ವದ 'ಯಶಸ್ವಿನಿ' ಆರೋಗ್ಯ ಯೋಜನೆ ಇನ್ನೆರಡು ವಾರಗಳಲ್ಲಿ ಪುನರ್ ಚಾಲನೆ ಪಡೆಯಲಿದೆ ಎಂದು ಸಹಕಾರ ಸಚಿವರೂ ಆದ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ತಿಳಿಸಿದರು.

ಮೈಸೂರಿನಲ್ಲಿ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿ, ಹಿಂದಿನ 'ಯಶಸ್ವಿನಿ' ಯೋಜನೆಯನ್ನು ಮತ್ತೆ ಜಾರಿಗೊಳಿಸಲಾಗುತ್ತಿದೆ. ಯೋಜನೆಗೆ ಸರ್ಕಾರ 300 ಕೋಟಿ ರೂ. ಹಾಗೂ ಸಹಕಾರ ಇಲಾಖೆಯಿಂದ 100 ಕೋಟಿ ರೂ. ಮೀಸಲಿಟ್ಟು, ಇನ್ನು 10–15 ದಿನಗಳಲ್ಲಿ ಅನುಷ್ಠಾನಕ್ಕೆ ತರಲು ಮುಖ್ಯಮಂತ್ರಿಗಳು ಐತಿಹಾಸಿಕ ನಿರ್ಣಯ ಮಾಡಿದ್ದಾರೆ ಎಂದರು. ಹೈನುಗಾರಿಕೆ ಅಭಿವೃದ್ಧಿಗೆ ಒತ್ತು ನೀಡಲಾಗಿದೆ. ಒಟ್ಟು 360 ಕೋಟಿ ರೂ. ಹಣವನ್ನಿಟ್ಟು 'ಕ್ಷೀರ ಸಮೃದ್ಧಿ ಬ್ಯಾಂಕ್' ಆರಂಭಿಸಲಾಗುತ್ತಿದೆ. 25 ಲಕ್ಷ ರೈತರಿಗೆ ಕ್ರೆಡಿಟ್ ಕಾರ್ಡ್ ನೀಡುವ ಚಿಂತನೆಯೂ ಇದೆ. 2021–22ನೇ ಸಾಲಿನಲ್ಲಿ ಸಹಕಾರ ಕ್ಷೇತ್ರದಲ್ಲಿ ಶೇ.116ರಷ್ಟು ಸಾಲ ಸೌಲಭ್ಯ ನೀಡಲಾಗಿದೆ. ಪ್ರಸ್ತುತ ಸಾಲಿನಲ್ಲಿ 24 ಸಾವಿರ ಕೋಟಿ ರೂ. ಸಾಲ ನೀಡುವ ಗುರಿಯಿದ್ದು, ಬಜೆಟ್‌ನಲ್ಲಿ ಸರ್ಕಾರ ಹಣ ಮೀಸಲಿಟ್ಟಿದೆ. ಮುಡಾ ಬಡಾವಣೆಗಳನ್ನು ●6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಹೆಂಡತಿ : "ರೀ ಮದುವೆಗೆ ಮುಂಚೆ ನೀವು ಎಲ್ಲಾ ಹಬ್ಬಕ್ಕೂ ಸೀರೆ, ಬಳೆ ಎಲ್ಲಾ ಕೊಡಿಸ್ತಾ ಇದ್ರಿ. ಈಗ ಯಾಕೆ ಹೀಗೆ?'

ಗಂಡ : "ನೋಡೆ ಮೀನು ಹಿಡಿದ ಮೇಲೆ ಯಾರಾದರೂ ಅದಕ್ಕೆ ಎರೆಹುಳು ತಿನ್ನಿಸ್ತಾರಾ?"

ಮೈಸೂರು ಮಿತ್ರ

ಗುರುವಾರ, 14 ಏಪ್ರಿಲ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ *M.A.*

ಅಮೃತವಾಹಿನಿ


ನಾಳೆಗಾಗಿ ನಾನು ಹೆದರಲಾರೆ, ಏಕೆಂದರೆ ನಿನ್ನೆಯನ್ನು ನಾನು ಕಂಡಿದ್ದೇನೆ. ಅಲ್ಲದೆ ಇಂದಿನ ದಿನವನ್ನು ಪ್ರೀತಿಸುತ್ತಿದ್ದೇನೆ. –ವಿಲಿಯಂ ಅವೆನಾ ವ್ಯಾಟ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ಸಮಯಕ್ಕಾದವನೇ ನೆಂಟ, ಕೆಲಸಕ್ಕಾದವನೇ ಭಂಟ

ನಿಮ್ಮ ಪತ್ರಗಳು

ಚಾಮುಂಡಿಬೆಟ್ಟ ರಕ್ಷಿಸಬೇಕಿದ್ದರೆ ಮೊದಲು ಅದರ ಸುತ್ತ ಬೇಲಿ ಹಾಕಿ



ಮಾನ್ಯರೆ,

ಇತ್ತೀಚೆಗೆ 'ಮೈಸೂರು ಮಿತ್ರ' ಸಂಸ್ಥಾಪಕ ಸಂಪಾದಕರಾದ ಕೆ.ಬಿ.ಗಣಪತಿ ಅವರು ಚಾಮುಂಡಿಬೆಟ್ಟದ ಸಂರಕ್ಷಣೆ ಕುರಿತಾಗಿ ಒಂದು ಲೇಖನವನ್ನು ಬರೆದಿದ್ದರು. ಅದರಲ್ಲಿ ಅವರು ಅನಗತ್ಯವಾಗಿ ನೂರಾರು ಕೋಟಿ ರೂ.ಗಳು ಬೆಟ್ಟದ ಅಭಿವೃದ್ಧಿ ಹೆಸರಲ್ಲಿ ಬಿಡುಗಡೆ ಆಗಿದೆ ಎಂದು ದಿನ ಬೆಳಗಾದರೆ ಹೇಳಿಕೊಂಡು ಓಡಾಡುವ ಜನಪ್ರತಿನಿಧಿಗಳಿಗೆ ನೀತಿ ಪಾಠ ಹೇಳಿದ್ದರು. ಅವರು ಹೇಳಿದಂತೆ ಮಾಡಿದರೆ ಚಾಮುಂಡಿಬೆಟ್ಟ ನೆಮ್ಮದಿ ತಾಣವಾಗಲಿದೆ.

ಚಾಮುಂಡಿಬೆಟ್ಟದ ಅಭಿವೃದ್ಧಿ, ಅದನ್ನು ಪ್ರವಾಸಿ ತಾಣವಾಗಿ ಮಾಡುವುದು, ಅದಕ್ಕೆ ರೋಪ್ ವೇ ನಿರ್ಮಾಣ ಮಾಡುವುದು, ಪ್ರವಾಸಿಗರಿಗೆ ಆಧುನಿಕ ಸೌಕರ್ಯ ಕಲ್ಪಿಸುವುದು ಹೀಗೆ ಬೇಕು–ಬೇಕಾದಂತೆ ಬೊಗಳೆ ಬಿಡುವುದನ್ನು ನಿಲ್ಲಿಸಿ. ನಿಜವಾಗಿಯೂ ಚಾಮುಂಡೇಶ್ವರಿ ನೆಲೆವೀಡು ಚಾಮುಂಡಿಬೆಟ್ಟ ರಕ್ಷಿಸಬೇಕಿದ್ದರೆ ಬೆಟ್ಟವನ್ನು ಅತಿಕ್ರಮಿಸಿ, ನಿರ್ಮಾಣ ಮಾಡುತ್ತಿರುವುದನ್ನು ಮೊದಲು ತಡೆಯಿರಿ. ನಂಜನಗೂಡು ರಸ್ತೆ ಕಡೆ ಈಗಾಗಲೇ ಬೆಟ್ಟ ಭಾರೀ ಪ್ರಮಾಣದಲ್ಲಿ ಅತಿಕ್ರಮಿತವಾಗಿದೆ. ಇನ್ನೂ ಅತಿಕ್ರಮಣ ಮುಂದುವರೆದಿದೆ. ಅದಕ್ಕೆ ಬ್ರೇಕ್ ಹಾಕುವುದರ ಬಗ್ಗೆ ಯಾವ ಜನಪ್ರತಿನಿಧಿಯೂ ಸೊಲ್ಲೆತ್ತುತ್ತಿಲ್ಲ. ಕಾರಣ ಎಲ್ಲಿ ಓಟ್ ಬ್ಯಾಂಕ್ ಕೈಬಿಟ್ಟು ಹೋಗುತ್ತದೆಂಯೋ ಎಂಬ ಭಯ. ನಿಜವಾಗಲೂ ಚಾಮುಂಡಿಬೆಟ್ಟ ರಕ್ಷಿಸುವ ಕಾಳಜಿ ಇದ್ದರೆ ಬೆಟ್ಟವನ್ನು ಸರ್ವೆ ಮಾಡಿಸಿ, ಬೇಲಿ ನಿರ್ಮಾಣ ಮಾಡಿ, ಬಂದೋಬಸ್ತ್ ಮಾಡಬೇಕಿದೆ. ಇದರ ಬಗ್ಗೆ ಸಂಸದರಾದ ಶ್ರೀನಿವಾಸಪ್ರಸಾದರು ಹಾಗೂ ತಾಯಿ ಚಾಮುಂಡೇಶ್ವರಿ ಆರಾಧಿಸುವವರು ಒಗ್ಗಟ್ಟಾಗಿ ಗಮನ ಹರಿಸಬೇಕಿದೆ.

–ಗಣೇಶ್, ಸಿದ್ದಾರ್ಥನಗರ, ಮೈಸೂರು.

ಸ್ವಚ್ಛತೆ ಕಾಪಾಡುವುದರಲ್ಲಿ ನಾಗರಿಕರ ಸಹಕಾರವೂ ಅಗತ್ಯ



ಮಾನ್ಯರೆ,

ಮೈಸೂರು ನಗರದ ವಾರ್ಡ್ ನಂ 61 ವಿದ್ಯಾರಣ್ಯಪುರಂ, 4ನೇ ಮುಖ್ಯರಸ್ತೆ, 12ನೇ ಕ್ರಾಸ್‌ನ ಡಿಜಿಟಿಎಂ ಶಾಲೆಯ ಪಕ್ಕದ ಖಾಲಿ ಜಾಗದಲ್ಲಿ ಕಸದ ರಾಶಿಯು ರಾರಾಜಿಸುತ್ತಿದೆ. ಈ ಕಸವನ್ನು ಪಶುಗಳು ಎಳೆದು ರಸ್ತೆಗೆ ಚೆಲ್ಲುತ್ತಿವೆ. ಜೊತೆಗೆ ಕಸ ಗಾಳಿಗೆ ಚೆಲ್ಲಾ ಪಿಲ್ಲಿಯಾಗಿ ರಸ್ತೆಯಲ್ಲಿ ಬಿದ್ದಿದ್ದು, ಇದರಿಂದ ಸಾಂಕ್ರಾಮಿಕ ರೋಗ ಹರಡಲು ಕಾರಣವಾಗುತ್ತಿದೆ. ಈ ಮಾರ್ಗದಲ್ಲಿ ಶಾಲೆಯ ಮಕ್ಕಳು ಹಾಗೂ ಸಾರ್ವಜನಿಕರು ಸಂಚರಿಸುವುದರಿಂದ ದುರ್ನಾತವನ್ನು ಸಹಿಸಿಕೊಂಡು ಸಂಚರಿಸುವ ಕೆಟ್ಟ ಪರಿಸ್ಥಿತಿ ನಿರ್ಮಾಣವಾಗಿದೆ. ದಿನಂಪ್ರತಿ ಈ ಸ್ಥಳಕ್ಕೆ ಬೇರೆ ಬೇರೆ ಕಡೆಯಿಂದ ಹಾಗೂ ಅಕ್ಕಪಕ್ಕದ ಕೆಲವು ಜನರು ಕಸವನ್ನು ತಂದು ಎಸೆದು ಹೋಗುತ್ತಾರೆ. ಪೌರ ಕಾರ್ಮಿಕರು ಪ್ರತಿದಿನ ಸ್ವಚ್ಛಗೊಳಿಸುತ್ತಾರೆ. ಆದರೆ ಈ ವಿಚಾರವಾಗಿ ವಾರ್ಡ್‌ನ ನಗರಪಾಲಿಕೆ ಸದಸ್ಯರಾದ ಶೋಭಾ ಸುನೀಲ್ ಅವರು ಅನೇಕ ಬಾರಿ ವಿನೂತನ ರೀತಿಯಲ್ಲಿ ಪರಿಸರ ಹಾಗೂ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುತ್ತಾ ಬರುತ್ತಿರುವುದು ಅವರ ಕಾಳಜಿಗೆ ಹಿಡಿದ ಕನ್ನಡಿಯಾಗಿದೆ. ಆದರೆ ಕೆಲವು ಸಾರ್ವಜನಿಕರು ಮಾತ್ರ ಕಸವನ್ನು ತಂದು ಹಾಕುವುದನ್ನು ನಿಲ್ಲಿಸಿಲ್ಲ. ದಯವಿಟ್ಟು ಇನ್ನಾದರೂ ನಾಗರಿಕರು ಎಚ್ಚೆತ್ತುಕೊಂಡು ಆರೋಗ್ಯದ ದೃಷ್ಟಿಯಿಂದ ಕಸ ಹಾಕುವುದನ್ನು ನಿಲ್ಲಿಸಲಿ. ಇಲ್ಲದಿದ್ದರೆ ಪಾಲಿಕೆಯು ಕಸದ ತೊಟ್ಟಿಯನ್ನು ನಿರ್ಮಿಸಲಿ ಎಂದು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಲ್ಲಿ ಮನವಿ.

–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಕನ್ನಡ ನಾಡಿನಲ್ಲಿ ಕನ್ನಡವೇ ಸಾರ್ವಭೌಮ

ಮಾನ್ಯರೆ.

ಹಿಂದಿ ಭಾಷೆಯನ್ನು ದೇಶದ ಎಲ್ಲಾ ರಾಜ್ಯಗಳಿಗೆ ಜನರ ಸಂಪರ್ಕ ಭಾಷೆಯಾಗಿ ಬಳಸಬೇಕು ಎಂಬುದು ಕೇಂದ್ರ ಗೃಹ ಸಚಿವರ ಹೇಳಿಕೆ. ಈ ಹೇಳಿಕೆ ಬಹುತ್ವದ ಒಕ್ಕೂಟದ ವ್ಯವಸ್ಥೆಯ ವಿರುದ್ಧ ಅಲ್ಲವೇ? ಇದು ನಮ್ಮ ಕನ್ನಡಿಗರಿಗ ಸಾಂಸ್ಕೃತಿಕ ಭಾವನೆಗಳಿಗೆ ದಕ್ಕೆ ತರುವ ಹೇಳಿಕೆ.! ಹಿಂದಿಯೇತರ ರಾಜ್ಯಗಳು ಈ ಹಿಂದಿ ಹೇರಿಕೆಯ ಹೇಳಿಕೆಯನ್ನು ಸಹಿಸಲು ಸಾಧ್ಯವೇ? ಆಯಾ ರಾಜ್ಯಗಳಲ್ಲಿ ಆ ರಾಜ್ಯದ ಮಾತೃಭಾಷೆಯೇ ಸಾರ್ವಭೌಮ. ಅಂತಹುದರಲ್ಲಿ ಹಿಂದಿ ಹೇರಿಕೆ ಸರಿಯಾದ ಕ್ರಮವಲ್ಲ!! ಆ ರಾಜ್ಯಗಳಲ್ಲಿ ವ್ಯವಹಾರ ಮಾಡಲು ಬರುವವರು ಆ ರಾಜ್ಯದ ಮಾತೃಭಾಷೆಗೆ ಒತ್ತು ಕೊಟ್ಟು ವ್ಯವಹಾರ ನಡೆಸಬೇಕಾಗುತ್ತದೆ: ಕನ್ನಡ ಭಾಷೆ, ಕನ್ನಡಿಗರು ಎಂದರೆ, ಮೊದಲೇ ತಾತ್ಸಾರ ಮನೋಭಾವ ಮನಸ್ಥಿತಿ ಇರುವರ ನಡುವೆ ಈ ಹಿಂದಿ ಹೇರಿಕೆ ಎಷ್ಟು ಸರಿ:? ಯಾವುದೇ ಸಂಪರ್ಕ ಭಾಷೆಯಾದರು ಅವರವರ ರಾಜ್ಯದಲ್ಲಿ ಅವರ ಮಾತೃಭಾಷೆಯೇ ಅಗ್ರಗಣ್ಯ. ಒಕ್ಕೂಟ ವ್ಯವಸ್ಥೆಯಲ್ಲಿ ಒಂದು ಭಾಷೆಗೆ ಹೆಚ್ಚು ಮಾನ್ಯತೆ ಕೊಟ್ಟು, ಸ್ಥಳೀಯ ಭಾಷೆಯನ್ನು ಕಡೆಗಣಿಸುವುದು ಎಷ್ಟು ಸೂಕ್ತ:! ವರ್ತಮಾನದ ಪರಿಸ್ಥಿತಿಯಲ್ಲಿ ಕನ್ನಡ ಭಾಷೆಗಾಗಿ ಹೋರಾಟ ಮಾಡಬೇಕಾಗಿರುವ ಕಾಲಘಟ್ಟದಲ್ಲಿ ಈ ಹೇಳಿಕೆಯನ್ನು ಸ್ವೀಕರಿಸಲಾಗದು.

–ಕಂಗಾಣಿಸೋಮು ಪಿ ಸಿ, ಕ್ಯಾತಮಾರನಹಳ್ಳಿ ಮೈಸೂರು



ಪ್ರೊ. ಆರ್. ಇಂದಿರಾ
ಸಮಾಜ ಶಾಸ್ತ್ರಜ್ಞೆ
ramaraoindira@gmail.com

ಸಮಾಜಮುಖಿ

ಲಿಂಗ ಸಮಾನತೆಯ ಹೋರಾಟದ ಅಗ್ರ ನಾಯಕರಾಗಿ ಡಾ.ಬಿ.ಆರ್.ಅಂಬೇಡ್ಕರ್



"ಲಿಂಗ ಅಸಮಾನತೆ ಅಥವಾ ಸಮಾಜದಲ್ಲಿ ತಳ ಸ್ತರಗಳಲ್ಲಿರುವ ವರ್ಗಗಳ ಸೀಮಾಂತೀಕರಣದ ಬಗ್ಗೆ ವ್ಯಾಖ್ಯಾನದಲ್ಲಿ ತೊಡಗುವಾಗ ಅಂತರ್-ಶಿಸ್ತೀಯ ದೃಷ್ಟಿಕೋನವನ್ನು ಅಳವಡಿಸುವ ಅವಶ್ಯಕತೆಯನ್ನು ಕುರಿತು ಅತೀ ಗಂಭೀರವಾದ ಚರ್ಚೆಯಲ್ಲಿ ತೊಡಗುತ್ತೇವೆ. ಆದರೆ ಅಂಬೇಡ್ಕರ್ ಅವರು 1916ರಲ್ಲಿಯೇ ಈ ದೃಷ್ಟಿಕೋನವನ್ನು ಅಳವಡಿಸಿಕೊಂಡು ಲಿಂಗ ಮತ್ತು ಜಾತಿ ವ್ಯವಸ್ಥೆಗಳು ಹೇಗೆ ಒಂದಕ್ಕೊಂದು ಪೂರಕವಾಗಿ ಕೆಲಸ ಮಾಡುತ್ತವೆ ಎಂಬುದನ್ನು ತಮ್ಮ ಸಂಶೋಧನಾ ಅಧ್ಯಯನಗಳ ಮೂಲಕ ಚರ್ಚೆಗೆ ಒಳಪಡಿಸಿದ್ದರು.

ಭಾರತೀಯ ಸಂವಿಧಾನ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಸಮಾಜದ ಅಂಚಿನಲ್ಲಿ ಇರಿಸಲ್ಪಟ ಎಲ್ಲ ವರ್ಗಗಳ ಹಕ್ಕುಗಳ ಸ್ಥಾಪನೆಗಾಗಿ ಧ್ವನಿಯಾಗಿ ನಿಂತು 75 ಸಂವತ್ಸರ ಗಳು ಸಂದಿವೆ. ಅಸಮಾನ ಸಮಾಜದಲ್ಲಿ ಬದುಕು ತ್ತಿರುವ ಎಲ್ಲ ದಮನಿತ ವರ್ಗಗಳ ಹಕ್ಕೊತ್ತಾಯ ಗಳ ಪರವಾಗಿ ಸಂಘರ್ಷದ ಕಹಳೆಯನ್ನು ಮೊಳಗಿಸಿ, ಪಜಾಪ್ರಭುತ್ವ ವ್ಯವಸ್ಥೆಯ ದ್ಯೋತಕ ವಾದ ನಮ್ಮ ಈ ಸಂವಿಧಾನದ ಮೂಲಕ ಸಮಾ ನತೆಯ ಆಶೋತ್ತರಗಳನ್ನು 'ಸಮತೆ'ಯಾಗಿ ಪರಿವರ್ತಿಸಲು ಹೆಜ್ಜೆ ಗುರುತುಗಳನ್ನು ಹಾಕಿದವರು ಡಾ.ಬಿ.ಆರ್. ಅಂಬೇಡ್ಕರ್ ಅವರು. ತಮ್ಮ ಪ್ರಖರ ಪಾಂಡಿತ್ಯ, ಕ್ರಾಂತಿಕಾರಿ ನಿಲುವು ಹಾಗೂ ಸಮಾಜದ ಅನುಕೂಲಗಳಿಂದ ವಂಚಿತರಾದವರ ನೋವುಗಳಿಗೆ ಮಿಡಿಯುವ ಸೂಕ್ಷ್ಮ ಮನಸ್ಸು– ಈ ಎಲ್ಲ ಗುಣಗಳಿಂದ, ಭಾರತವೇಕೆ, ಕಾಲ, ದೇಶ ಹಾಗೂ ಸಂದರ್ಭಗಳನ್ನು ಮೀರಿ ಸಮಾನತಾ ಸಂಘರ್ಷಗಳ ಧ್ವನಿಯಾಗಿ ನಿಂತ ಅಂಬೇಡ್ಕರ್ ಅವರ 131 ನೇ ಜಯಂತಿ ಯಂದು, ಅವರು ಮಹಿಳಾ ಸ್ವಾತಂತ್ರ್ಯ ಮತ್ತು ಸ್ವಾಭಿಮಾನಗಳ ರಕ್ಷಣೆಗಾಗಿ ನೀಡಿದ ಮೌಲ್ಯಾ ತೀತ ಕೊಡುಗೆಗೆ ನಮನ ಈ ಬರಹ.

ಮಹಿಳಾ ಅಧ್ಯಯನ ಮತ್ತು ಮಹಿಳಾ ಚಳವಳಿ ಕಳೆದ ನಾಲ್ಕು ದಶಕಗಳಿಂದೀಚೆಗೆ ಎತ್ತಿದ ಅನೇಕ ಪ್ರಶ್ನೆಗಳು, ಅಂತಾರಾಷ್ಟ್ರೀಯ ಸಂಸ್ಥೆಗಳು ರೂಪಿಸಿ ರುವ ಮಹಿಳಾಪರ ನೀತಿಗಳು, ಲಿಂಗ ಸಮಾನತೆಯ ಸ್ಥಾಪನೆಗಾಗಿ ನಡೆದಿರುವ/ನಡೆಯುತ್ತಿ ರುವ ಹೋರಾಟಗಳ ಆಶೋತ್ತರಗಳು ಮತ್ತು ಭವಿಷ್ಯದಲ್ಲಿ ಮಹಿಳಾ ಹೋರಾಟಗಳು ಗುರುತಿಸಬೇಕಾದ ಸವಾಲುಗಳು–ಇವುಗಳ ಬಗ್ಗೆ ಮಾತನಾಡುವಾಗ, ಅಂಬೇಡ್ಕರ್ ಅವರು ಏಳು ದಶಕಗಳ ಹಿಂದೆಯೇ ತಮ್ಮ ಬರಹ ಮತ್ತು ಭಾಷಣಗಳಲ್ಲಿ ಮಹಿಳಾ ಸಮಾನತೆ ಮತ್ತು ಮಹಿಳೆಯರ ಮಾನವ ಹಕ್ಕುಗಳ ಬಗ್ಗೆ ಪ್ರಸ್ತಾಪ ಮಾಡಿದ್ದು, ಸ್ತ್ರೀವಾದಿ ಸೈದ್ಧಾಂತಿಕ ಚಿಂತನೆಗೆ ಅವರು ನೀಡಿರುವ ಕೊಡುಗೆ ಹಾಗೂ ಅವರ ಆಲೋಚನಾ ಧಾಟಿಗಳನ್ನು ಕಾರ್ಯ ರೂಪಕ್ಕೆ ತರಲು ಬದ್ಧರಾಗಿದ್ದನ್ನು ಸ್ಮರಿಸುವುದು ಬಹು ಮುಖ್ಯವಾಗುತ್ತದೆ.

ಈ ಹೊತ್ತು ನಾವು ಲಿಂಗ ಅಸಮಾನತೆ ಅಥವಾ ಸಮಾಜದಲ್ಲಿ ತಳ ಸ್ತರಗಳಲ್ಲಿರುವ ವರ್ಗಗಳ ಸೀಮಾಂತೀಕರಣದ ಬಗ್ಗೆ ವ್ಯಾಖ್ಯಾನದಲ್ಲಿ ತೊಡಗುವಾಗ ಅಂತರ್– ಶಿಸ್ತೀಯ ದೃಷ್ಟಿಕೋನ ವನ್ನು ಅಳವಡಿಸುವ ಅವಶ್ಯಕತೆಯನ್ನು ಕುರಿತು ಅತೀ ಗಂಭೀರವಾದ ಚರ್ಚೆಯಲ್ಲಿ ತೊಡಗುತ್ತೇವೆ. ಆದರೆ ಅಂಬೇಡ್ಕರ್ ಅವರು 1916ರಲ್ಲಿಯೇ ಈ ದೃಷ್ಟಿಕೋನವನ್ನು ಅಳವಡಿಸಿಕೊಂಡು ಲಿಂಗ ಮತ್ತು ಜಾತಿ ವ್ಯವಸ್ಥೆಗಳು ಹೇಗೆ ಒಂದಕ್ಕೊಂದು ಪೂರಕವಾಗಿ ಕೆಲಸ ಮಾಡುತ್ತವೆ ಎಂಬುದನ್ನು ತಮ್ಮ ಸಂಶೋಧನಾ ಅಧ್ಯಯನಗಳ ಮೂಲಕ ಚರ್ಚೆಗೆ ಒಳಪಡಿಸಿದ್ದರು.

ಜಾತಿಗಳು ಮೂಲಭೂತವಾಗಿ ವರ್ಗ ವ್ಯವಸ್ಥೆ ಯಿಂದ ಆವೃತ್ತವಾಗಿದ್ದು, ಮಹಿಳೆಯರನ್ನು ನಿಯಂತ್ರಣಕ್ಕೆ ಒಳಪಡಿಸುವ ಒಂದು ಸಾಧನವಾಗಿ ಕೆಲಸ ಮಾಡುತ್ತವೆ. ಒಳಬಾಂಧವ್ಯ ವಿವಾಹ, ಅಂತರ್ಜಾತಿ ವಿವಾಹಗಳ ಮೇಲಿನ ನಿರ್ಬಂಧಗಳು ಹಾಗೂ ಜಾತಿ ವ್ಯವಸ್ಥೆ ಹೇಗೆ ಮಹಿಳೆಯರ ಸ್ವಾತಂತ್ರ್ಯ ಹರಣ ಮಾಡಿ ಪುರುಷ ಪ್ರಾಧಾನ್ಯತೆಯನ್ನು ಎತ್ತಿ ಹಿಡಿಯುತ್ತದೆ, ಜಾತಿ ಎಂಬ ಶ್ರೇಣೀಕೃತ ವ್ಯವಸ್ಥೆ ಲಿಂಗ ಆಧಾರಿತ ತಾರತಮ್ಯಗಳನ್ನು ಹೇಗೆ ಆಚರಿಸುತ್ತದೆ ಎಂಬುದನ್ನು ಸೈದ್ಧಾಂತಿಕ ಮತ್ತು ಸಾಮಾಜಿಕ ಆಚರಣೆಗಳೆರಡರ ನಿಟ್ಟಿನಲ್ಲೂ ಅಂಬೇಡ್ಕರ್ ಅವರು ವಿವರಿಸಿದ್ದರು.


ಜಾತಿ ಮತ್ತು ಲಿಂಗ ವ್ಯವಸ್ಥೆಯ ನಡುವಣ ಸಂಬಂಧವನ್ನು ವಿವರಿಸಲು ಅಂಬೇಡ್ಕರ್ ಅವರು ಹೇಗೆ ಮೇಲ್ಜಾತಿಗಳಲ್ಲಿ ಪುರುಷ ಪ್ರಾಧಾನ್ಯತೆ ಸತಿಯಂಥ ಅಮಾನುಷ ಪದ್ಧತಿಯ ಆಚರಣೆ ಅಥವಾ ವಿಧವೆಯ ಹಕ್ಕುಗಳ ಹರಣ ಮಾಡುವ ಮೂಲಕ ಮಹಿಳೆಯ ಜೈವಿಕತೆಯ ಮೇಲೆ ಪ್ರಾಬಲ್ಯವನ್ನು ಸಾಧಿಸುತ್ತದೆ ಎಂಬುದನ್ನು ಚರ್ಚಿಸಿದ್ದಾರೆ. ಈ ಸಮಾಜದಲ್ಲಿ ಕಂಡು ಬರುವ ದ್ವಂದ್ವ ನೈತಿಕ ನೀತಿಗಳು, ಹೆಣ್ಣಿನ ಬದುಕಿಗೆ ಸಾರ್ಥಕತೆಯನ್ನು ನೀಡಲು ಬಳಸುವುದು ಪುರುಷ ಸೂಚಕಗಳನ್ನು. ಜಾತಿ ಶುದ್ಧತೆಯನ್ನು ಕಾಪಾಡುವುದು ಮಹಿಳೆಯರ ಜವಾಬ್ದಾರಿಯಾದ್ದರಿಂದ ಅವರನ್ನು, ಜಾತಿ ಮತ್ತು ಪುರುಷ ಪ್ರಾಧ್ಯಾನ್ಯತೆಯ ವಿಷವರ್ತುಲದಲ್ಲಿ ಸಿಲುಕಿಸ ಲಾಗುತ್ತದೆ. ಲಿಂಗ ಪೂರ್ವಾಗ್ರಹಗಳಿಂದ ಕೂಡಿದ ಸಾಮಾಜೀಕರಣ ಈ ಸಮಾಜದ ಎಲ್ಲ ಸಂಸ್ಥೆಗಳ ಮನಸ್ಥಿತಿಯಲ್ಲಿ ಹಾಸುಹೊಕ್ಕಾಗಿದ್ದು ಹೇಗೆ ಮಹಿಳೆ ಯರನ್ನು ಸಮಾಜದ ಎಲ್ಲೆಗಳತ್ತ ತಳ್ಳಲಾಗುತ್ತದೆ ಎಂಬುದನ್ನು ಅಧ್ಯಯನಕ್ಕೆ ಒಳಪಡಿಸಲು ಅಂಬೇಡ್ಕರ್ ಅವರ ಜಾತಿ ಮತ್ತು ಜೆಂಡರ್‌ನ ವಿಶ್ಲೇಷಣೆ ಕಾಲಾತೀತವಾದ ಪ್ರಸ್ತುತಿಯನ್ನು ಹೊಂದಿದೆ.

ಅಂಬೇಡ್ಕರ್ ಅವರು, ಮಹಿಳಾ ಸಮಾನತೆಯನ್ನು ಕುರಿತಂತೆ ಪ್ರಗತಿಪರ ಮತ್ತು ವೈಚಾರಿಕ ಚಿಂತನೆಗಳ ಬೆಳವಣಿಗೆಗೆ ಎಷ್ಟು ಪ್ರಾಶಸ್ತ್ಯವನ್ನು ನೀಡಿದರೋ, ಅಷ್ಟೇ ಪ್ರಾಮುಖ್ಯತೆಯನ್ನು ಸಮಾಜ ದಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ತರುವತ್ತಲೂ ನೀಡಿದ್ದರು. ಸ್ವತಂತ್ರ ಭಾರತದ ಪ್ರಥಮ ಕಾನೂನು ಮಂತ್ರಿಗಳಾಗಿ ಅಂಬೇಡ್ಕರ್ ಅವರು ಸಂಸತ್ತಿನಲ್ಲಿ ಮಂಡಿಸಿದ ಹಿಂದೂ ಕೋಡ್ ಬಿಲ್ ಮಹಿಳಾ ಸಮಾನತೆಯ ಹೋರಾಟದಲ್ಲಿ ಅತ್ಯಂತ ಕ್ರಾಂತಿಕಾರಿ ಮೈಲಿಗಲ್ಲು. ಮಹಿಳೆಯರಿಗೆ ಆಸ್ತಿಯಲ್ಲಿ ಸಂಪೂರ್ಣ ಹಕ್ಕು, ನಾಗರಿಕ ವಿವಾಹಗಳಿಗೆ ಮಾನ್ಯತೆ, ಎಂದರೆ ಸಂಗಾತಿಯ ಆಯ್ಕೆಯ ಹಕ್ಕು, ಬಹು ಪತ್ನಿತ್ವವನ್ನು ಅಮಾನ್ಯ ಮಾಡಿ, ಏಕ ಸಂಗಾತಿ ವಿವಾಹಕ್ಕೆ ಮಾನ್ಯತೆ, ದತ್ತು ಸ್ವೀಕಾರದ ಸ್ವಾತಂತ್ರ್ಯ–ಈ ಹಕ್ಕುಗಳಿಗೆ ನ್ಯಾಯ ಸಮ್ಮತೆಯನ್ನು ನೀಡಿ ಹಿಂದೂ ಮಹಿಳೆಯರು ಎದುರಿಸುತ್ತಿದ್ದ ತಾರತಮ್ಯವನ್ನು ತೊಡೆದು ಹಾಕಲು ಅಂಬೇಡ್ಕರ್ ಅವರು ರೂಪಿಸಿದ್ದ ಈ ವಿಧೇಯಕಕ್ಕೆ ಸಾಂಪ್ರದಾಯಿಕ ನಿಲುವುಗಳನ್ನು ಹೊಂದಿದ್ದ ವ್ಯಕ್ತಿಗಳು ಮತ್ತು ಸಂಘಟನೆಗಳಿಂದ ವ್ಯಾಪಕ ವಿರೋಧ ವ್ಯಕ್ತವಾಯಿತು. ಪುರುಷ ಪರಮಾ ಧಿಕಾರಕ್ಕೆ ಪ್ರಬಲ ಸವಾಲನ್ನು ಎಸೆದ ಈ ಪ್ರಗತಿಪರ ಕಾಯಿದೆ ಅಸ್ತಿತ್ವಕ್ಕೆ ಬಂದಿದ್ದರೆ ಇಡೀ ಜಗತ್ತಿನಲ್ಲಿಯೇ ಮಹಿಳಾ ಸಮಾನತೆಯ ಆಶೋತ್ತರಗಳನ್ನು ಕಾರ್ಯ ರೂಪಕ್ಕೆ ತಂದ ಅತ್ಯಂತ ಪರಿಣಾಮಕಾರಿ 'ಆದರ್ಶ ಕಾಯಿದೆ' ಗಳಲ್ಲಿಯೇ ಇದು ಒಂದಾಗುತ್ತಿತ್ತು.

ಜಾತಿಯ ಸುಳಿಯಲ್ಲಿ ಸಿಲುಕಿ ತಮ್ಮ ಅವೈಚಾರಿಕ ವಾದಗಳಿಂದ ಅಂಬೇಡ್ಕರ್ ಅವರ ಸ್ವಾಭಿಮಾನಕ್ಕೆ ಧಕ್ಕೆ ಬರುವಂತೆ ನಡೆದುಕೊಂಡ ಪ್ರಗತಿ–ವಿರೋಧಿ ವಲಯದಿಂದ, ಭಾರತದ ಮಹಿಳೆಯರ ಬದುಕಿನ ದಿಕ್ಕನ್ನೇ ಬದಲಿಸುವ ಶಕ್ತಿ ಹೊಂದಿದ್ದ ಕಾಯಿದೆ ಯೊಂದು ಜಾರಿಗೆ ಬರಲೇ ಇಲ್ಲ. ಸಂಸತ್ತಿನಲ್ಲಿ ಹಿಂದೂ ಕೋಡ್ ಬಿಲ್‌ಗೆ ಒಪ್ಪಿಗೆ ದೊರೆಯದಿದ್ದಾಗ ಅಂಬೇಡ್ಕರ್ ಅವರು ತಮ್ಮ ಮಂತ್ರಿ ಹುದ್ದೆಗೆ ರಾಜೀನಾಮೆಯನ್ನು ಇತ್ತರು. ಈ ಘಟನೆಯಿಂದ ಭಾರತೀಯ ಸಮಾಜಕ್ಕೆ ಎರಡು ದೊಡ್ಡ ಆಘಾತಗಳಾದುವು. ಮೊದಲನೆಯದು, ಪ್ರಗತಿಯ ಹಾದಿಯಲ್ಲಿ ಹೆಜ್ಜೆ ಇಟ್ಟಿದ್ದ ಮಹಿಳಾ ಸಮಾನತೆಯ ಹೋರಾಟಕ್ಕೆ ಹಿನ್ನಡೆಯಾದದ್ದು. ಎರಡನೆಯದಾಗಿ, ತನ್ನ ತಾತ್ವಿಕ ನಿಲುವುಗಳೊಡನೆ ಹೊಂದಾಣಿಕೆ ಮಾಡಿಕೊಳ್ಳಲು ಸಿದ್ಧರಿಲ್ಲದ ಓರ್ವ ಆದರ್ಶವಾದಿ ರಾಷ್ಟ್ರನಾಯಕರನ್ನು ಈ ದೇಶ ಕಳೆದುಕೊಂಡದ್ದು. ಅಂಬೇಡ್ಕರ್ ಅವರ ಅನುಪಸ್ಥಿತಿಯಲ್ಲಿ ಇದೇ ಕಾಯಿದೆ ನಾಲ್ಕು ಪ್ರತ್ಯೇಕ ಕಾಯಿದೆಗಳಾಗಿ, ಸಂಸತ್ತಿನ ಸ್ವೀಕಾರವನ್ನು ಪಡೆಯಿತು. ಅವುಗಳೆಂದರೆ ಹಿಂದೂ ವಿವಾಹ ಕಾಯಿದೆ(1955), ಹಿಂದೂ ಉತ್ತರಾಧಿ ಕಾರ ಕಾಯಿದೆ(1956), ಹಿಂದೂ ದತ್ತು ಮತ್ತು ನಿರ್ವಹಣಾ ಕಾಯಿದೆ(1956) ಹಿಂದೂ ಅಪ್ರಾಪ್ತ ವಯಸ್ಕ ಮತ್ತು ಪೋಷಕತ್ವ ಕಾಯಿದೆ (1956). ಮಹಿಳೆಯರ ಹಕ್ಕುಗಳನ್ನು ಸಂರಕ್ಷಿಸುವ ವಿಚಾರ ಬಂದಾಗ ಇಂದಿಗೂ ಸಂಸತ್ತು ಅಥವಾ ವಿಧಾನ ಸಭೆಗಳಲ್ಲಿ ವಿರೋಧ ವ್ಯಕ್ತವಾಗುವುದು ಇಲ್ಲ, ಪುರುಷ ಪ್ರಧಾನ ಶಕ್ತಿಗಳನ್ನು ಮೆಚ್ಚಿಸಲು ತೋರಿಕೆಯ ತಿದ್ದುಪಡಿಗಳನ್ನು ತರುವುದು – ಇವು ನಡೆದೇ ಇದೆ.

ಒಂದು ಸಮಾಜದ ಪ್ರಗತಿಯನ್ನು ಅಲ್ಲಿನ ಮಹಿಳೆ ಯರು ಸಾಧಿಸಿರುವ ಪ್ರಗತಿಯ ಮಟ್ಟದಿಂದ ಅಳೆಯು ತ್ತೇನೆ ಎಂದು ಹೇಳಿದ ಅಂಬೇಡ್ಕರ್ ಅವರು ಮಹಿಳೆಯರ ಪ್ರಗತಿಗಾಗಿ ನೀಡಿರುವ ಕೊಡುಗೆ ಗಳನ್ನು ದಾಖಲಿಸುವುದು ಸುಲಭವಲ್ಲ.ಯಾವುದೇ ಕಾರಣಕ್ಕಾಗಿ ತಮ್ಮ ಆತ್ಮಾಭಿಮಾನಕ್ಕೆ ಧಕ್ಕೆಯಾಗು ವಂತಹ ಪರಿಸ್ಥಿತಿಗಳನ್ನು ಮಹಿಳೆಯರು ಸಹಿಸಿಕೊಳ್ಳ ಬಾರದು ಎಂದು ಕರೆಯಿತ್ತಿದ್ದ ಅಂಬೇಡ್ಕರ್ ಅವರು ಸಮಾಜದ ತಳಸ್ತರದ ಉದ್ಯೋಗಗಳಲ್ಲಿದ್ದ ಮಹಿಳಾ ಕಾರ್ಮಿಕರ ಬಗ್ಗೆಯೂ ವಿಶೇಷ ಕಾಳಜಿಯನ್ನು ಹೊಂದಿದ್ದರು. ಅವರು ವಹಿಸಿದ ಕಾಳಜಿಗಳಿಂದಲೇ ಸಂವಿಧಾನದಲ್ಲಿ ಮಹಿಳೆಯರ ಬದುಕನ್ನು ಪ್ರಗತಿಯತ್ತ ಕೊಂಡೊಯ್ಯಬಲ್ಲ ಅನೇಕ ವಿಧಿಗಳು ಅಳವಡಿಕೆಯಾಗಿದ್ದು ಈ ಕ್ರಮಗಳು ಮಹಿಳಾ ಚಳವಳಿಗೆ ಒಂದು ದಿಕ್ಕನ್ನು ನೀಡಿರುವುದು ಲಿಂಗ ನ್ಯಾಯ ಸ್ಥಾಪನೆಯ ಹೋರಾಟಕ್ಕೆ ಅದ್ವಿತೀಯ ಕೊಡುಗೆಯಾಗಿದೆ. ಅವರ ಬರಹಗಳು–ಭಾಷಣಗಳು ಸ್ತ್ರೀವಾದಿ ಸಾಹಿತ್ಯಕ್ಕೆ ಅಪರೂಪದ ಕೊಡುಗೆಗಳಾಗಿದ್ದು ಇನ್ನು ಮುಂದಾದರೂ ಸ್ತ್ರೀವಾದದ ಚರ್ಚೆಯನ್ನು ಪಾಶ್ಚಿಮಾತ್ಯ ಚಿಂತನೆ ಗಳಿಂದ ಮಾತ್ರ ವಿಶ್ಲೇಷಣೆಗೆ ಒಳಪಡಿಸುವುದನ್ನು ಬಿಟ್ಟು, ಅಂಬೇಡ್ಕರ್ ಅವರ ಚಿಂತನೆಗಳು ಮತ್ತು ಅವರು ಕಾರ್ಯ ರೂಪಕ್ಕೆ ತಂದ ಸ್ತ್ರೀವಾದಿ ಆಶಯಗಳು ಮಹಿಳಾ ವಿಚಾರಗಳಿಗೆ ಸಂಬಂಧಪಟ್ಟ ಎಲ್ಲ ಪಠ್ಯಕ್ರಮಗಳಲ್ಲಿ ಸೇರ್ಪಡೆಯಾಗಲೇಬೇಕು.

ನಾನೊಂದು ಬಂಡೆಯಂತೆ, ಕರಗುವುದಿಲ್ಲ; ಆದರೆ ನದಿಯ ದಿಕ್ಕನ್ನೇ ಬದಲಿಸುವೆ...



ಅದೊಂದು ದಿನ ಹುಡುಗ ಹೇರ್ ಕಟ್ಟಿಂಗ್ ಮಾಡಿಸಿಕೊಳ್ಳಲು ಹೋಗುತ್ತಾನೆ. ಕೂದಲನ್ನು ಕತ್ತರಿಸುವವ ಕೂಡ ದಲಿತನೆಂಬ ಕಾರಣಕ್ಕೆ ಆ ಹುಡುಗನ ಕೂದಲನ್ನು ಮುಟ್ಟಲೊಲ್ಲ. ಪ್ರಾಪಂಚಿಕ ಜ್ಞಾನವೇ ಇರದ ಎಳೆಯನ ನೆತ್ತಿಯ ಮೇಲೆ ಒನಕೆಯಿಂದ ಕುಟ್ಟಿದಂತಹ ಸಂಕಟ. ಹೀಗೆ ಹುಟ್ಟಿದ ಜಾತಿಯ ಕಾರಣಕ್ಕೆ ಇಂಥಹುದೆಷ್ಟೋ ಅವಮಾನಗಳನ್ನು ಅನುಭವಿಸುತ್ತ ಇಂಥ ನೂರಾರು ನೋವುಗಳನ್ನು ಬಾಲ್ಯದಿಂದಲೂ ನುಂಗುತ್ತಾ ಅಸ್ಪೃಶ್ಯತೆಯ ಬೆಂಕಿಯಲ್ಲಿ ಬೇಯುತ್ತಲೇ ಬೆಳೆದ ಆ ಹುಡುಗ ಕೊನೆಗೊಮ್ಮೆ ಅಸ್ಪೃಶ್ಯತೆಯ ಹುಟ್ಟಡಗಿಸುವ ಸಂಕಲ್ಪ ಮಾಡಿದ.

ತನ್ನಂತೆಯೇ ಅಸ್ಪೃಶ್ಯತೆಯ ಕರಿನೆರಳಲ್ಲಿ ನಲುಗುತ್ತಿರುವ ದೀನದಲಿತರ ಉದ್ಧಾರಕ್ಕಾಗಿ ತನ್ನ ಇಡೀ ಬದುಕನ್ನು ಮೀಸಲಿಡುವ ಪ್ರತಿಜ್ಞೆಗೈದ. ಹೀಗೆ ಅಸ್ಪೃಶ್ಯತೆಯ ವಿರುದ್ಧ ಸಮರ ಸಾರಿ ಪ್ರತಿಜ್ಞೆಗೈದ ಆ ಹುಡುಗ ಬೇರ್‍ಯಾರು ಅಲ್ಲ. ಇಂದು ಭಾರತೀಯರ ಕಣ್ಣಲ್ಲಿ ಮಹಾಮಾನವತಾವಾದಿಯಾಗಿ ಕಂಗೊಳಿಸುತ್ತಿರುವ **ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್.**

ಭೀಮರಾವ್ ರಾಂಜೀ ಅಂಬೇಡ್ಕರ್ ಸ್ವತಂತ್ರ ಭಾರತದ ರೂಪೀಕರಣದಲ್ಲಿ ಎದ್ದುಕಂಡ ಹೆಸರು. ಈ ದೇಶದ ಸಾಂಪ್ರದಾಯಿಕ ಮಾದರಿಗಳನ್ನು ಒಡೆದು ಮಾನವೀಯತೆಗಾಗಿ ಭುಗಿಲೆದ್ದ ಮನಸ್ಸು. ಅವರು ಒಂದು ಮಾತು ಹೇಳಿದ್ದರು. 'ನಾನೊಂದು ಕಲ್ಲು ಬಂಡೆಯಂತೆ, ಕರಗುವುದಿಲ್ಲ; ಆದರೆ ನದಿಯ ದಿಕ್ಕನ್ನೇ ಬದಲಿಸುವವನು' (I am like a rock which does not melt but turns the course of the river) ಮೊತ್ತಮೊದಲ ಕಾಂಗ್ರೆಸ್ ಸರ್ಕಾರದಲ್ಲಿ ಮಂತ್ರಿಯಾಗಿದ್ದೂ ಆ ಪಕ್ಷದ ಸದಸ್ಯರಾಗದೇ ಹಾಗೆ ಉಳಿದುಕೊಂಡಿದ್ದಕ್ಕೆ ಉತ್ತರರೂಪ ವಾಗಿ ಆ ಮಾತು ಹೇಳಿದ್ದರು. ಅವರು ಹರಿಯುವ ನದಿಯ ಪ್ರವಾಹದಲ್ಲಿ ಕೊಚ್ಚಿ ಹೋದವರಲ್ಲ; ಆ ನದಿಯ ದಿಕ್ಕನ್ನೇ ಬದಲಿಸಿದವರು. ಅವರಾಡಿದ ಮಾತು ತನ್ನ ಜನರನ್ನು ದೇಶದ ಇತಿಹಾಸದ ಮುಂಚೂಣಿಗೆ ತಂದ ರೀತಿಯನ್ನು ಬಿಂಬಿಸಿದಂತಿತ್ತು. ಅಂತಹುದೊಂದು ಮಹಾಪ್ರವಾಹ ಭಾರತದ ಇತಿಹಾಸದಲ್ಲಿ 1891–1956 ರ ನಡುವೆ ನಡೆದು ಹೋಗಿದೆ.

ಹುಟ್ಟಿನಿಂದ ಹಿಡಿದು ಮರಣದವರೆಗೆ ಅಂಬೇಡ್ಕರ್ ಬದುಕಿದ ಬಗೆ ರೋಚಕ, ವಿಸ್ಮಯಕಾರಿ. ಅವರು ಬದುಕಿದ 65 ವರ್ಷಗಳ ಕಾಲ ಈ ನಾಡಿನಲ್ಲಿ ಎಷ್ಟೋ ಪ್ರವಾಹಗಳಿದ್ದವು. ಆದರೂ ಅಂಬೇಡ್ಕರ್ ಹಿಂದೂವಾದ, ಕಮ್ಯುನಿಸ್ಟ್ ವಾದ, ಸಮಾಜವಾದ, ಗಾಂಧಿವಾದ ಇತ್ಯಾದಿ ನದಿಗಳಲ್ಲಿ ಕರಗಲಿಲ್ಲ. ತಾವೇ ಸ್ವತಃ ಒಂದು ವಾದ ಹುಟ್ಟು ಹಾಕಿದರು.

ಭರತ ಭೂಮಿಯ ಉದ್ದಗಲಕ್ಕೂ ಕಣ್ಣು ಕಾಣದಂತೆ ಆವರಿಸಿದ್ದ ಅಸಮಾನತೆಯ ಕಾರ್ಗತ್ತಲಲ್ಲಿ ಕ್ರಾಂತಿದೀಪದಂತೆ 1891ರ ಏಪ್ರಿಲ್ 14ರಂದು ಮಹರ್ ಎಂಬ ದಲಿತ ಜನಾಂಗದಲ್ಲಿ ಅಂಬೇಡ್ಕರ್ ಜನಿಸಿದರು. ಇವರಿಗೆ ಜನ್ಮ ನೀಡಿದ ಪುಣ್ಯಭೂಮಿ ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಅಂಬವಾಡೆ ಗ್ರಾಮ. ಇವರನ್ನು ಹೆತ್ತ ಭಾಗ್ಯಶಾಲಿಗಳು ತಂದೆ ಸುಭೇದಾರ್ ರಾಮ್‌ಜೀ ಸಕ್ಪಾಲ್, ತಾಯಿ ಶ್ರೀಮತಿ ಭೀಮಾಬಾಯಿ. ಇವರು ಕಬೀರ್ ಪಂಥಕ್ಕೆ ಸೇರಿದವರು. ಜಾತಿ ಧರ್ಮಗಳ ಭೇದಗಳಲ್ಲಿ ಇವರಿಗೆ ನಂಬಿಕೆ ಇರಲಿಲ್ಲ. ಹರಿಭಜನೆ ಮಾಡುವವರೆಲ್ಲ ದೇವರಿಗೆ ಸೇರಿದವರೆಂಬ ಭಾವನೆ ಇವರದು.

ಅಂಬೇಡ್ಕರರು ಸತಾರಾ ಪ್ರಾಥಮಿಕ ಶಾಲೆಯಲ್ಲಿದ್ದಾಗಲೇ ಅಸ್ಪೃಶ್ಯತೆಯ ಬಿಸಿ ಕ್ಷಣ ಕ್ಷಣವೂ ಇವರನ್ನು ಸುಡುತ್ತಲೇ ಇತ್ತು. ಇದೆಲ್ಲ ಏಕೆಂದು ಬಾಲಕ ಅಂಬೇಡ್ಕರರಿಗೆ ಅರ್ಥವಾಗುತ್ತಿರಲಿಲ್ಲವಾದರೂ ಕ್ರಮೇಣ ಇವರ ಬುದ್ದಿ ಬೆಳೆದಂತೆ ತನಗಾಗುತ್ತಿರುವ ಅಪಮಾನ, ಮೇಲ್ಜಾತಿ ಎನಿಸಿಕೊಂಡಿರುವ ಅವಿವೇಕಿಗಳಿಂದ ನಡೆಯುತ್ತಿರುವ ಶೋಷಣೆ, ದಬ್ಬಾಳಿಕೆ ಇವರ ಮನಸ್ಸಿನ ಮೇಲೆ ಆಳವಾಗಿ ಪರಿಣಾಮ ಬೀರಿದ್ದವು. ಇದರ ಪರಿಣಾಮ ಹಿಂದೂ ಧರ್ಮಕ್ಕೆ ಅಂಟಿದ ಜಾತೀಯತೆಯ ವಿರುದ್ಧ ವಿದ್ಯಾರ್ಥಿ ದಿಸೆಯಲ್ಲೇ ರೋಸಿ ಹೋಗಿದ್ದರು.

ಅಂಬೇಡ್ಕರರಿಗೆ ಸಂಸ್ಕೃತ ಕಲಿಯಬೇಕೆಂಬ ಮಹದಾಸೆಯಿತ್ತು. ಆದರೆ ಇದಕ್ಕೆ ಕೀಳ್ಜಾತಿಯವರು ಇದನ್ನು ಓದಬಾರದೆಂದು ಮೇಲ್ಜಾತಿಯವರು ಅಡ್ಡಿಪಡಿಸಿದರು. ಆದರೆ ಇವರು ಬಗ್ಗಲಿಲ್ಲ ಬದಲಿಗೆ ಹಠ ತೊಟ್ಟವರಂತೆ ಸಂಸ್ಕೃತ ಕಲಿತು ಅದರಲ್ಲಿ ಸಂಪೂರ್ಣ ಪಾಂಡಿತ್ಯ ಗಳಿಸಿ ತಾವೇ ಹಲವಾರು ವಿಚಾರ ಕ್ರಾಂತಿ ಕೃತಿಗಳನ್ನು ರಚಿಸುವುದರ ಮೂಲಕ 'ಆಧುನಿಕ ಮನು' ಎಂಬ ಕೀರ್ತಿಗೆ ಪಾತ್ರರಾದರು. ಇದನ್ನು ಮಾತ್ರ ಯಾರಿಂದಲೂ ತಡೆಯಲು ಸಾಧ್ಯವಾಗಲೇ ಇಲ್ಲ. ಏಕೆಂದರೆ ಹಠವಾದಿ ಅಂಬೇಡ್ಕರರ ಶಕ್ತಿ ಅಂಥಾದ್ದು!.


1907ರಲ್ಲಿ ಮೆಟ್ರಿಕ್ಯೂಲೇಷನ್ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಂಬೇಡ್ಕರರಿಗೆ ಆ ವರ್ಷವೇ ರಮಾಬಾಯಿಯೊಂದಿಗೆ ವಿವಾಹವಾಯಿತು. ಆನಂತರ ಅವರು ಮುಂಬೈನ ಎಲ್ಫಿನ್‌ಸ್ಟನ್ ಕಾಲೇಜಿನಲ್ಲಿ ಇಂಟರ್ ಮೀಡಿಯಟ್ ಮುಗಿಸಿ 1921 ರಲ್ಲಿ ಬಿ.ಎ. ಪದವೀಧರರಾದರು. ನಂತರ ಬರೋಡಾ ಮಹಾರಾಜರ ಸೈನ್ಯದಲ್ಲಿ ಲೆಫ್ಟಿನೆಂಟ್ ಆಗಿ ನೇಮಕ ಗೊಂಡರು. ಆದರೆ ಜ್ಞಾನದ ಹಸಿವಿನಿಂದ ಇವರು ಓದುವ ಹಠಕ್ಕೆ ಬಿದ್ದರು. ಆಗ ಬರೋಡಾ ಮಹಾರಾಜರೇ ಇವರ ಬುದ್ಧಿಶಕ್ತಿಗೆ ಮಾರುಹೋಗಿ ವಿದೇಶದಲ್ಲಿ ವ್ಯಾಸಂಗ ಮಾಡಿ ಬಂದ ನಂತರ ತಮ್ಮಲ್ಲೇ ಹತ್ತು ವರ್ಷಗಳ ಕಾಲ ಕೆಲಸ ಮಾಡಬೇಕೆಂಬ ಕರಾರಿನೊಂದಿಗೆ ಉನ್ನತ ವ್ಯಾಸಂಗಕ್ಕೆ ಇವರನ್ನು ಅಮೇರಿಕಾಕ್ಕೆ ಕಳುಹಿಸಿದರು. ಅಲ್ಲಿ ಎಂ.ಎ. ಪದವಿಯೊಡನೆ ಪಿಹೆಚ್‌ಡಿಯನ್ನು ಗಳಿಸಿ 1917ರ ಆಗಸ್ಟ್ 21ರಂದು ಮತ್ತೆ ಭಾರತಕ್ಕೆ ಮರಳಿದರು. ಇಷ್ಟಾದರೂ ಅವರ ಜ್ಞಾನದಾಹ ಇಂಗಿರಲಿಲ್ಲ. ಹಾಗಾಗಿ ಪುನಃ 1920ರಲ್ಲಿ ಮತ್ತಷ್ಟು ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಲಂಡನಿಗೆ ಹೋದ ಇವರು 1922ರಲ್ಲಿ "ಬ್ಯಾರಿಸ್ಟರ್" ಎಂಬ ಪದವಿಯೊಡನೆ ಭಾರತಕ್ಕೆ ವಾಪಾಸ್ಸಾದರು.

ವಿದೇಶದಲ್ಲಿ ಕಲಿತು, ಹಲವಾರು ಡಾಕ್ಟರೇಟ್ ಪದವಿಗಳನ್ನು ಗಳಿಸಿ ಅಂಬೇಡ್ಕರ್ ಅವರು ಸ್ವದೇಶಕ್ಕೆ ಬಂದಿದ್ದರೂ ಇಲ್ಲಿ ಮಾತ್ರ ಅದೇ ಅಸ್ಪೃಶ್ಯತೆ ಅವರನ್ನು ಅಪಮಾನಿಸುತ್ತಿತ್ತು ಆಗ ಅಂಬೇಡ್ಕರು "ಮೂಕನಾಯಕ" ಎಂಬ ಪತ್ರಿಕೆಯನ್ನು ಆರಂಭಿಸಿ ಅದರ ಮುಖೇನ ಅಸ್ಪೃಶ್ಯತೆಯ ವಿರುದ್ಧ ಜನಜಾಗೃತಿಗೆ ನಿಂತರು. "ಬಹಿಷ್ಕೃತ ಹಿತಕಾರಿಣಿ" ಎಂಬ ಸಭಾದಂತಹ ಸಂಘಟನೆಗಳನ್ನು ಕಟ್ಟಿ ಅಸ್ಪೃಶ್ಯತೆಯ ವಿರುದ್ಧ ಸಮಾನತೆಗಾಗಿ ಬೀದಿಗಿಳಿದು ಹಲವು ತರನಾದ ಹೋರಾಟ ಮಾಡುತ್ತಾ ದಲಿತರ ಪಾಲಿಗೆ ಅಕ್ಷರಶಃ ತೋರು ಬೆರಳಾಗಿದ್ದರು. ಇವರ "ಚೌದರ್ ಕೆರೆ ಚಳವಳಿ"ಯಂತೂ ಭಾರತದ ಇತಿಹಾಸದಲ್ಲಿ ದಾಖಲಿಸುವಂತಾದ್ದು.

ಹೀಗೆ ದಲಿತರ ಪರ ಇವರ ಕ್ರಾಂತಿ ಕಹಳೆ ನಿಧಾನವಾಗಿ ದೇಶ ದೆಲ್ಲೆಡೆ ಮೊಳಗತೊಡಗಿತ್ತು ಅದೇ ಕಾಲಕ್ಕೆ ಎರಡನೇ ಮಹಾಯುದ್ದದ ಕಾಲದಲ್ಲಿ ಬ್ರಿಟಿಷರು ಕೆಲವು ಭಾರತೀಯರನ್ನು ಮಂತ್ರಿಮಂಡಲಕ್ಕೆ ಸೇರಿಸಿಕೊಂಡಾಗ ಅದರಲ್ಲಿ ಪ್ರಥಮ ಪ್ರಾಶಸ್ತ್ಯವೇ ಅಂಬೇಡ್ಕರವರಿಗೆ ದೊರಕಿತ್ತು. ಹಾಗೆಯೇ ಭಾರತ ಸ್ವಾತಂತ್ರ್ಯಗಳಿಸಿದ ನಂತರ ನೆಹರು ಸರ್ಕಾರದಲ್ಲಿ ಪ್ರಥಮ ಕಾನೂನು ಸಚಿವರಾಗಿದ್ದ ಹೆಗ್ಗಳಿಕೆ ಹೊಂದಿದ್ದ ಅಂಬೇಡ್ಕರರು ಭಾರತ ದೇಶಕ್ಕೆ ಸಶಕ್ತ 'ಸಂವಿಧಾನ' ನೀಡಿದ ಶಿಲ್ಪಿಯಾಗಿದ್ದು ಇದು ಇಡೀ ವಿಶ್ವಕ್ಕೆ ಮಾದರಿ ಸಂವಿಧಾನವಾಗಿದ್ದು ಇದು ಇವರಿಗೆ ಸಂದ ಮಹಾಗೌರವವೇ ಸರಿ. ಅಧಿಕಾರ ಇರಲಿ ಇಲ್ಲದಿರಲಿ ಅಂಬೇಡ್ಕರ್ ರವರು ಹೆಜ್ಜೆ ಇಟ್ಟಲೆಲ್ಲಾ ಅಸ್ಪೃಶ್ಯತಾ ನಿವಾರಣೆಗಾಗಿಯೇ ಅವರ ಹೆಜ್ಜೆಗಳು ತುಡಿಯುತ್ತಿದ್ದವು. ಅಂತೆಯೇ ದಲಿತರ ಪುರೋಭಿ ವೃದ್ಧಿಗಾಗಿಯೇ ಅವರ ಜೀವ ಸದಾ ಮಿಡಿಯುತ್ತಿತ್ತು.

ಭಾರತದೇಶದಲ್ಲಿ ಅಂಬೇಡ್ಕರ್ ಎಂಬ ಕ್ರಾಂತಿ ಪುರುಷ ಜನಿಸಿದ್ದ ರಿಂದಲೇ ದೇಶದ ಅರ್ಧ ಭಾಗದಂತಿರುವ ಉತ್ತರ ಪ್ರದೇಶ ಕಾನ್ಷಿರಾಂ ರಂಥ ದಲಿತ ನಾಯಕನ ಹಿಡಿತಕ್ಕೆ ಸಿಕ್ಕಿದ್ದು. ಮಾಯಾವತಿಯಂತಹ ದಲಿತ ಮಹಿಳೆ ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಲು ಸಾಧ್ಯವಾದದ್ದು. ಅಂಬೇಡ್ಕರರ ಇಡೀ ಜೀವನ ಅಸ್ಪೃಶ್ಯತೆರೆನಿಸಿಕೊಂಡವರಿಗೆ ನ್ಯಾಯವನ್ನೂ ಸಮಾನತೆಯನ್ನೂ ದೊರಕಿಸಿಕೊಡುವುದಕ್ಕೆ ಮುಡಿಪಾಗಿತ್ತು. ಇದರಲ್ಲಿ ಅವರು ಸಾಕಷ್ಟು ಯಶಸ್ಸನ್ನೂ ಸಾಧಿಸಿದ್ದರು. ಆದರೂ ಹಿಂದೂ ಧರ್ಮದ ಅಸಮಾನತೆಯಿಂದ ರೋಸಿಹೋಗಿದ್ದ ಅವರು ಬುದ್ಧನ ಕಾರುಣ್ಯದಲ್ಲಿ ಆಕರ್ಷಿತರಾಗಿ 1956ರ ಅಕ್ಟೋಬರ್ 14ರಂದು ನಾಗಪುರದಲ್ಲಿ ನಡೆದ ಬೃಹತ್ ಸಮಾರಂಭವೊಂದರಲ್ಲಿ ತಮ್ಮ ಪತ್ನಿ ಡಾ. ಶಾರದಾ ಸೇರಿ ದಂತೆ ತಮ್ಮ ಅಪಾರ ಅಭಿಮಾನಿಗಳೊಡನೆ ಬೌದ್ಧಧರ್ಮಕ್ಕೆ ಸೇರಿದರು.

1956ರ ಡಿಸೆಂಬರ್ 6ರಂದು ಇಡೀ ದೇಶವನ್ನು ಅನಾಥವಾಗಿಸಿ ಕಾಣದ ಊರಿನತ್ತ ಪಯಣಿಸಿದ ಅಂಬೇಡ್ಕರರಿಗೆ ಮರಣೋತ್ತರವಾಗಿ ಭಾರತ ಸರ್ಕಾರವು 1991ರಲ್ಲಿ "ಭಾರತ ರತ್ನ" ಪ್ರಶಸ್ತಿ ನೀಡಿ ಗೌರವಿಸಿದೆ. ನಿಜಕ್ಕೂ ಅಂಬೇಡ್ಕರ್ ಅವರು ಇಂದಿಗೂ ಸಹ ತಮ್ಮ ಸಾಧನೆಗಳ ಮೂಲಕ "ಭಾರತ ರತ್ನ"ವೇ ಆಗಿ ಫಳಫಳನೆ ಹೊಳೆಯುತ್ತಲೇ ಇದ್ದಾರೆ.



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ : 94815 33167

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಹಸಿವು ಮುಕ್ತ ಭಾರತ ಪ್ರಧಾನಿ ಮೋದಿ ಗುರಿ

ಕೇಂದ್ರ ಸಚಿವ ಪ್ರಹ್ಲಾದ್ ಸಿಂಗ್ ಪಟೇಲ್



ಮೈಸೂರು, ಏ.13(ಎಂಕೆ)– ಭಾರತವನ್ನು ಬಡತನ ಹಾಗೂ ಹಸಿವು ಮುಕ್ತ ದೇಶವನ್ನಾಗಿಸುವ ಜೊತೆಗೆ ಸಮೃದ್ಧಿಯೆಡೆಗೆ ಕೊಂಡೊಯ್ಯುವುದು ಪ್ರಧಾನಿ ನರೇಂದ್ರ ಮೋದಿಯವರ ಗುರಿಯಾಗಿದೆ ಎಂದು ಕೇಂದ್ರ ಆಹಾರ ಸಂಸ್ಕರಣಾ ಉದ್ಯಮಗಳು ಹಾಗೂ ಜಲಶಕ್ತಿ ಸಚಿವ ಪ್ರಹ್ಲಾದ್ ಸಿಂಗ್ ಪಟೇಲ್ ಹೇಳಿದರು.

ನಗರದ ತುಳಸಿದಾಸ್ ಆಸ್ಪತ್ರೆ ವೃತ್ತದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಸಾಮಾಜಿಕ ನ್ಯಾಯ ಪಾಕ್ಷಿಕ ಕಾರ್ಯಕ್ರಮದ ಪ್ರಯುಕ್ತ ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆ (ಪಿಎಂಜಿಕೆವೈ) ಕುರಿತು ನ್ಯಾಯ ಬೆಲೆ ಅಂಗಡಿಗಳಲ್ಲಿ ಜಾಗೃತಿ ಮೂಡಿಸುವ ನಾಮಫಲಕವನ್ನು ಅನಾವರಣಗೊಳಿಸಿ ಅವರು ಮಾತನಾಡಿದರು.

ಏ.13 ರಿಂದ 20 ರವರೆಗೆ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿದೆ. ಭಾರತಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳು ಕಳೆದಿದ್ದರೂ ದೇಶದಲ್ಲಿ ಬಡತನ, ಹಸಿವು ಇನ್ನೂ ಇದೆ. ದೇಶದಾದ್ಯಂತ ಶೌಚಾಲಯಗಳನ್ನು ಪ್ರತಿ ಮನೆಗೂ ನಿರ್ಮಿಸಲಾಗಿದೆ. ಜಲಜೀವನ್ ಮಿಷನ್ ಯೋಜನೆಯ ಮೂಲಕ ದೇಶದ ಪ್ರತಿ ಮನೆಗೂ ಶುದ್ಧ ನೀರನ್ನು ಒದಗಿಸಲು ಜಲಶಕ್ತಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಈ ಯೋಜನೆಯಲ್ಲಿ ಕರ್ನಾಟಕ ಉತ್ತಮ ಪ್ರಗತಿಯನ್ನು ಸಾಧಿಸಿದೆ. ಜಲ ಜೀವನ್ ಮಿಷನ್ ಯೋಜನೆಯು ಸ್ಥಳೀಯ ಅನುದಾನಗಳನ್ನು ಬಳಸಿಕೊಂಡು ನೀರನ್ನು ಒದಗಿಸುವ ಯೋಜನೆಯಾಗಿದೆ ಎಂದು ಮಾಹಿತಿ ನೀಡಿದರು.

ಶಾಸಕ ಎಸ್.ಎ.ರಾಮದಾಸ್ ಮಾತನಾಡಿ, ಕೋವಿಡ್ ಸಂದರ್ಭದಲ್ಲಿ ಜನತೆಯ ಹಸಿವನ್ನು ನೀಗಿಸಲು ಪ್ರಾರಂಭಿಸಿದ ಯೋಜನೆಯನ್ನು ಇಂದಿಗೂ ಮುಂದುವರಿಸಲಾಗುತ್ತಿದೆ. ಅಂತ್ಯೋದಯ ಯೋಜನೆಯಡಿ ಅರ್ಹ ಕುಟುಂಬಕ್ಕೆ ಪ್ರತಿ ತಿಂಗಳು 35 ಕೆ.ಜಿ. ಅಕ್ಕಿಯನ್ನು ನೀಡಲಾಗುತ್ತಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದ ಅರ್ಹ ಕುಟುಂಬಕ್ಕೆ ಬಿಪಿಎಲ್ ಪಡಿತರ ಚೀಟಿಯನ್ನು ಇಂದಿನಿಂದ ವಿತರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಇದಕ್ಕೂ ಮುನ್ನ ಅಂಗವಿಕಲ ಬಿಪಿಎಲ್ ಫಲಾನುಭವಿಗಳಿಗೆ ಉಚಿತ ಪಡಿತರ ವಿತರಣೆ ಮಾಡಿದರಲ್ಲದೆ, ಕೆ.ಆರ್.ಕ್ಷೇತ್ರ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಗಳಲ್ಲಿ ನಾಮಫಲಕಗಳ ಅಳವಡಿಕೆಗೆ ಚಾಲನೆ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್, ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಶಾಸಕ ಎಲ್.ನಾಗೇಂದ್ರ, ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ಪಾಲಿಕೆ ಸದಸ್ಯರಾದ ಮಾ.ವಿ.ರಾಮಪ್ರಸಾದ್, ಬಿ.ವಿ.ಮಂಜುನಾಥ್, ಪಲ್ಲವಿ ಬೇಗಂ, ಸೌಮ್ಯಾ ಉಮೇಶ್, ಪಾಲಿಕೆ ಆಯುಕ್ತ ಲಕ್ಷ್ಮೀಕಾಂತರೆಡ್ಡಿ, ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಎಸ್.ಮಂಜುನಾಥಸ್ವಾಮಿ, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯಾಜ್ಯಗಳ ಇಲಾಖೆಯ ಜಂಟಿ ನಿರ್ದೇಶಕಿ ಕುಮುದಾ ಮತ್ತಿತರರು ಉಪಸ್ಥಿತರಿದ್ದರು.

ಇಂದು ರಕ್ತದಾನ, ಉಚಿತ ಆರೋಗ್ಯ ತಪಾಸಣಾ ಶಿಬಿರ



ಮೈಸೂರು, ಏ.13–ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮ ದಿನದ ಅಂಗವಾಗಿ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ ಮೈಸೂರು ಕೇಂದ್ರ ಸ್ಥಾನದ ವೃತ್ತ ಸಮಿತಿ ವತಿಯಿಂದ ನಾಳೆ(ಏ.14) ರಕ್ತದಾನ ಶಿಬಿರ ಮತ್ತು ಉಚಿತ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ.

ಮೈಸೂರಿನ ಸೆಸ್ಕ್, ಎಂಪಿಎಲ್ ಕಚೇರಿಯ ಆವರಣದ ಕಲ್ಯಾಣ ಸಂಸ್ಥೆಯ ಒಳಾಂಗಣದಲ್ಲಿ ಬೆಳಗ್ಗೆ 9.30 ರಿಂದ ಮಧ್ಯಾಹ್ನ 2.30ರವರೆಗೆ ಹಮ್ಮಿಕೊಂಡಿರುವ ಶಿಬಿರದ ಸದುಪಯೋಗವನ್ನು ಚಾವಿಸನಿನಿ ಮತ್ತು ಕವಿಪ್ರನಿನಿ ಅಧಿಕಾರಿ/ನೌಕರರು ಮತ್ತು ಕುಟುಂಬದವರು ಪಡೆದುಕೊಳ್ಳಬೇಕೆಂದು ಪ್ರಕಟಣೆ ಕೋರಿದೆ.

ಆಟೋ ಚಾಲಕ ನಾಪತ್ತೆ

ಮೈಸೂರು, ಏ.13– ಮೈಸೂರು ನಗರದ ರವಿಕುಮಾರ್ ಎಂ.(45) ಎಂಬುವವರು ಬಾಡಿಗೆಗೆ ಆಟೋ ಓಡಿಸುವ ಕೆಲಸವನ್ನು ಮಾಡಿಕೊಂಡಿದ್ದು, ಏ.10ರಂದು ರಾತ್ರಿ 8 ಗಂಟೆಗೆ ಮನೆಯಿಂದ ಹೊರಗೆ ಹೋದವರು ಇದುವರೆಗೂ ವಾಪಸಾಗಿಲ್ಲ ಎಂದು ಹೆಬ್ಬಾಳ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಇವರ ಬಗ್ಗೆ ಮಾಹಿತಿ ದೊರೆತಲ್ಲಿ ಹೆಬ್ಬಾಳ ಪೊಲೀಸ್ ಠಾಣೆ ದೂ.ಸಂ:2418318, ಮೈಸೂರು ನಗರ ನಿಸ್ತಂತು ಕೊಠಡಿ ದೂ.ಸಂ: 0821–2418339, ಹಾಗೂ ಹೆಬ್ಬಾಳ ಪೊಲೀಸ್ ಠಾಣೆಯ ಇ ಮೇಲ್ ಐಡಿ hebbalmyc@ksp.gov.in ಮಾಹಿತಿ ನೀಡಬೇಕು ಎಂದು ಹೆಬ್ಬಾಳ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜವಾಹರ ನವೋದಯ ವಿದ್ಯಾಲಯ 6ನೇ ತರಗತಿ ಪ್ರವೇಶ ಪರೀಕ್ಷೆ

ಮೈಸೂರು, ಏ.13– ಜವಾಹರ ನವೋದಯ ವಿದ್ಯಾಲಯದ ವತಿಯಿಂದ 2022–2023ನೇ ಸಾಲಿನ 6ನೇ ತರಗತಿಯ ಪ್ರವೇಶಕ್ಕೆ ಅರ್ಜಿಯನ್ನು ಆಹ್ವಾನಿಸಿದ್ದು, 2022ರ ಏಪ್ರಿಲ್ 30ರಂದು ಶನಿವಾರ ಪರೀಕ್ಷೆ ನಡೆಯಲಿದೆ. ಈಗಾಗಲೇ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿರುವ ವಿದ್ಯಾರ್ಥಿಗಳು ಪ್ರವೇಶ ಪತ್ರವನ್ನು www.navodaya.gov.in ಅಥವಾ https://navodaya.gov.in/nvs/nvs-school/MYSURU/en/contact-us/JNV ವೆಬ್‌ಸೈಟ್‌ನಲ್ಲಿ ಪಡೆದುಕೊಳ್ಳಬಹುದು.

ಪ್ರವೇಶ ಪತ್ರದಲ್ಲಿ ವಿದ್ಯಾರ್ಥಿಯು 5ನೇ ತರಗತಿಯಲ್ಲಿ ಓದಿದ ಮುಖ್ಯೋಪಾಧ್ಯಾಯರ ಸಹಿ ಮತ್ತು ಸಿವಿಲ್ ಇರತಕ್ಕದ್ದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾನು ಜಿಲ್ಲಾಧ್ಯಕ್ಷನಲ್ಲ ಎಂಬುದು ಸತ್ಯಕ್ಕೆ ದೂರ



ಮೈಸೂರು, ಏ. 13– ಕೆಲವರು ತಮ್ಮನ್ನು ಜಿಲ್ಲಾಧ್ಯಕ್ಷರಲ್ಲ ಎಂದು ಹೇಳಿರುವುದು ಸತ್ಯಕ್ಕೆ ದೂರವಾದ ವಿಚಾರ ಎಂದು ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಎನ್.ಆರ್. ನಾಗೇಶ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮಂಗಳವಾರ ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆಲವರು ತಮ್ಮನ್ನು ಜಿಲ್ಲಾಧ್ಯಕ್ಷರಲ್ಲ ಎಂದು ಹೇಳಿದ್ದಲ್ಲದೆ, ಕಾರಿನಲ್ಲಿ ಸಮುದಾಯದ ಜಿಲ್ಲಾಧ್ಯಕ್ಷರು ಎಂದು ಬೋರ್ಡ್ ಹಾಕಿಕೊಂಡು ಓಡಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಇದು ಸತ್ಯಕ್ಕೆ ದೂರವಾಗಿದ್ದು, ಮೈಸೂರು ಜಿಲ್ಲೆಯ ಎಲ್ಲಾ ತಾಲೂಕುಗಳ ಸವಿತಾ ಸಮಾಜದ ಅಧ್ಯಕ್ಷರು ಹಾಗೂ ಪ್ರತಿನಿಧಿಗಳು 2017ರಲ್ಲಿ ತನ್ನನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ ಎಂದು ನಾಗೇಶ್ ತಿಳಿಸಿದ್ದಾರೆ.



ಹಣ ಪಡೆದು ವಿವಿಗಳಿಗೆ ಕುಲಪತಿಗಳ ನೇಮಕ ಮಾಡುವ ಏಜೆಂಟ್‌ಗಳಿದ್ದಾರೆ

ವಿಶ್ರಾಂತ ಕುಲಪತಿ ಪ್ರೊ.ಜೆ. ಶಶಿಧರ್ ಪ್ರಸಾದ್ ಗಂಭೀರ ಆರೋಪ



ಮೈಸೂರು, ಏ.13(ಜಿಎ)– ಹಣ ಪಡೆದು ವಿವಿಗಳ ಕುಲಪತಿಗಳನ್ನು ನೇಮಕ ಮಾಡಲು ಏಜೆಂಟ್‌ಗಳು ಇದ್ದಾರೆ. ಈ ರೀತಿ ಕುಲಪತಿ, ಕುಲಸಚಿವರು ಆಯ್ಕೆಯಾದರೆ, ಮುಂದಿನ ದಿನಗಳಲ್ಲಿ ಸರ್ಕಾರಿ ವಿವಿಗಳೇ ಇರುವುದಿಲ್ಲ ಎಂದು ವಿಶ್ರಾಂತ ಕುಲಪತಿ ಪ್ರೊ.ಜೆ.ಶಶಿಧರ್ ಪ್ರಸಾದ್ ಅವರು ಬೇಸರ ವ್ಯಕ್ತಪಡಿಸಿದರು.

ಮಾನಸಗಂಗೋತ್ರಿಯ ವಿಜ್ಞಾನ ಭವನದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಪ್ರೊ.ಡಿ.ಕೆ.ರಾಜೇಂದ್ರ ಅಭಿನಂದನಾ ಸಮಿತಿ, ಮಣಿ ಪ್ರಕಾಶನ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಡೆದ 'ಪ್ರೊ.ಡಿ.ಕೆ.ರಾಜೇಂದ್ರ 80 ಯಥಾರ್ಥ' ಅಭಿನಂದನಾ ಗ್ರಂಥವನ್ನು ಹಿರಿಯ ಸಾಹಿತಿ ಪ್ರೊ ಅರವಿಂದ ಮಾಲಗತ್ತಿ ಅವರು ಬಿಡುಗಡೆಗೊಳಿಸಿದರು. ಇದೇ ವೇಳೆ ಪ್ರೊ.ಡಿ.ಕೆ.ರಾಜೇಂದ್ರ ಹಾಗೂ ಪತ್ನಿ ಡಾ. ಸರಸ್ವತಿ ಅವರನ್ನು ಅಭಿನಂದಿಸಲಾಯಿತು ಮತ್ತು ಪ್ರೊ.ಡಿ.ಕೆ.ರಾಜೇಂದ್ರ ಕುರಿತ ಗೀತೆಯನ್ನು ಸಿ.ಪಿ. ಕೃಷ್ಣಕುಮಾರ್ ಅವರು ಬಿಡುಗಡೆಗೊಳಿಸಿದರು ಹಾಗೂ ಕಿರುಚಿತ್ರವನ್ನು ಪ್ರೊ.ಜೆ.ಶಶಿಧರ್ ಪ್ರಸಾದ್ ಬಿಡುಗಡೆ ಮಾಡಿ ಮಾತನಾಡುತ್ತಿದ್ದರು.

ಈ ಏಜೆಂಟ್‌ಗಳು ರಾಜಭವನದಲ್ಲಿ ಜನರನ್ನಿಟ್ಟುಕೊಂಡು ಕಾರ್ಯನಿರ್ವಹಿಸುತ್ತಾರೆ ಎಂದ ಅವರು, ಹಣ ಕೊಟ್ಟು ವಿಶ್ವವಿದ್ಯಾನಿಲಯಗಳ ಕುಲಪತಿಗಳಾದವರು ವಿಶ್ವವಿದ್ಯಾನಿಲಯಗಳನ್ನು ಯಾವ ರೀತಿ ಅಭಿವೃದ್ಧಿ ಮಾಡುತ್ತಾರೆ. ಹಣ ಕೊಟ್ಟು ಹುದ್ದೆ ಪಡೆದವನು ಬಡ್ಡಿ ಸಮೇತವಾಗಿ ವಸೂಲು ಮಾಡುತ್ತಾನೆ. ಈ ಪರಿಸ್ಥಿತಿಯಿಂದ ಸರ್ಕಾರಿ ವಿಶ್ವವಿದ್ಯಾನಿಲಯಗಳಿಗೆ ಗ್ರೇಡ್ ದೊರೆಯುತ್ತಿಲ್ಲ ಇತ್ತೀಚೆಗೆ ಬಂದ ಖಾಸಗಿ ವಿವಿಗಳಾದ ಜೈನ್ ವಿವಿ ಮತ್ತು ರೇವ ವಿವಿಗೆ ಉನ್ನತ ಗ್ರೇಡ್ ದೊರೆಯುತ್ತಿದೆ. ಆದರೆ ಮೈಸೂರು ವಿವಿಗೆ ಯಾಕೆ ಸಿಗುತ್ತಿಲ್ಲ ಇದು ದುರಂತದ ಸಂಗತಿ ಎಂದು ಹೇಳಿದರು.

ಕೆಲವು ದಿನಗಳ ಹಿಂದೆ ಪೊಲೀಸ್ ಇಲಾಖೆ ಪರೀಕ್ಷೆಯಲ್ಲಿ ಓಎಂಆರ್ ಶೀಟ್ ತಿದ್ದುಪಡಿ ಮಾಡಿದ್ದಾರೆ ಎಂದು ಆ ವಿಚಾರವನ್ನು ಸಿಐಡಿ ತನಿಖೆ ಮಾಡುತ್ತಿದೆ. ಆದರೆ ಈ ರೀತಿ ಕೆಲಸ ಐದು ವರ್ಷಗಳ ಹಿಂದೆಯೇ ವಿಶ್ವವಿದ್ಯಾನಿಲಯದಲ್ಲಿ ನಡೆದಿದೆ ಓಎಂಆರ್ ಶೀಟ್ ಖಾಲಿ ಬಿಡಿಸಿ ನಂತರ 5 ರಿಂದ 6 ಲಕ್ಷ ರೂ.ಗಳನ್ನು ಪಡೆದುಕೊಂಡು ಬೇರೆ ಸ್ಥಳದಲ್ಲಿ ಆ ಶೀಟ್ ಪೂರ್ಣಗೊಳಿಸುತ್ತಿದ್ದರು. ಈಗಲೂ ಇದೇ ರೀತಿ ನಡೆಯುತ್ತಿದೆ. ಹೀಗೆ ಆದರೆ ಉನ್ನತ ಶಿಕ್ಷಣದ ಕಥೆ ಏನು ಎಂದರು.

ನಂತರ ಮಾತನಾಡಿದ ಸಾಹಿತಿ ಪ್ರೊ ಅರವಿಂದ ಮಾಲಗತ್ತಿ ಡಿ.ಕೆ ರಾಜೇಂದ್ರ ಅವರ ಯಥಾರ್ಥ 80ರಿಂದ 120ರವರೆಗೆ ವಿಶೇಷ ಸಂಪುಟಗಳು ಮೂಡಿಬರಲಿ. ಜಾನಪದ ವಿಷಯದಲ್ಲಿ ಅಪಾರ ವಾದ ಜ್ಞಾನ ಸಂಪಾದಿಸಿ ಕನ್ನಡ ಜಾನಪದ ದಿಗ್ಗಜರಲ್ಲಿ ಪ್ರಮುಖರಾಗಿದ್ದಾರೆ. ರಾಜೇಂದ್ರ ಅವರು ಸಂಶೋಧನೆ, ಅಧ್ಯಯನ, ಸಂಗ್ರಹ, ರೀತಿ ಸ್ತರವನ್ನು ಹೊಂದಿದವರು. ಇವರನ್ನು ಜಾನಪದ ವಿವಿಗೆ ಕುಲಪತಿ ಮಾಡಬೇಕಿತ್ತು ಆದರೆ ಮಾಡಲಿಲ್ಲ. ಇದು ಸರ್ಕಾರದ ಕೊರತೆ ಎಂದು ಹೇಳಬಹುದು, ರಾಜೇಂದ್ರ ಅವರ ಕೃತಿಯಲ್ಲಿ ಚುಚ್ಚುಮದ್ದಿನ ಔಷಧೀಯ ಗುಣಗಳನ್ನು ಕಾಣಬಹುದು, ದೇಹಕ್ಕೆ ವಯಸ್ಸಾಗಿದೆ ಮನಸ್ಸಿಗಲ್ಲ ಎಂದ ತಿಳಿಸಿದರು.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ, ನಾಡೋಜ ಪ್ರೊ.ಟಿ.ವಿ.ವೆಂಕಟಾಚಲ ಶಾಸ್ತ್ರಿ, ವಿಶ್ರಾಂತ ಪ್ರಾಧ್ಯಾಪಕ ನೀಲಗಿರಿ ತಳವಾರ, ಸಾಹಿತಿ ಸಿ.ಪಿ.ಕೃಷ್ಣಕುಮಾರ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಂ.ಜಿ. ಮಂಜುನಾಥ, ಪ್ರೊ. ಡಿ.ಕೆ ರಾಜೇಂದ್ರ ಡಾ. ಸರಸ್ವತಿ ರಾಜೇಂದ್ರ ಪ್ರೊ.ನಾಗಣ್ಣ ಪ್ರೊ.ಕೆಂಪೇಗೌಡ, ಪ್ರೊ.ತಿಮ್ಮಯ್ಯ, ಪ್ರೊ.ಸುರೇಶ್, ಪ್ರೊ.ರಂಗಸ್ವಾಮಿ, ಪ್ರೊ.ಎನ್.ಕೆ.ಲೋಲಾಕ್ಷಿ, ಐಪಿಎಸ್ ಜೆ.ಕೆ.ರಶ್ಮಿ, ವೈ.ಡಿ.ರಾಜಣ್ಣ ಮತ್ತಿತರರು ಭಾಗವಹಿಸಿದ್ದರು.

ಏ.24, ಜಾಗತಿಕ ತಾಪಮಾನ ಮತ್ತು ಕೃಷಿ ಜಾಗೃತಿ ಸಮಾವೇಶ

ಮೈಸೂರು, ಏ.13–ಮೈಸೂರಿನ ಉಳುಮೆ ಪ್ರತಿಷ್ಠಾನದ ವತಿಯಿಂದ ಏ.24ರಂದು ಮೈಸೂರಿನ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಜಾಗತಿಕ ತಾಪಮಾನ ಮತ್ತು ಕೃಷಿಯ ಬಗ್ಗೆ ಜಾಗೃತಿ ಸಮಾವೇಶ ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1.30ರವರೆಗೆ ನಡೆಯಲಿರುವ ಸಮಾವೇಶದಲ್ಲಿ ನಾಗೇಶ್ ಹೆಗ್ಡೆ ಕೆ.ಸಿ.ರಘು, ಅವಿನಾಶ್ ಟಿಜಿಎಸ್, ಬೆಟ್ಟಯ್ಯಕೋಟೆ, ಹೊಸೂರು ಕುಮಾರ್ ಅವರುಗಳು ಭಾಗವಹಿಸಿ ಜಾಗತಿಕ ತಾಪಮಾನ ಮತ್ತು ಅದರಿಂದ ಕೃಷಿಯ ಮೇಲಾಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಮಹತ್ವದ ಮಾಹಿತಿಗಳನ್ನು ಹಂಚಿಕೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದ್ದು, ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 8197856132 ಅನ್ನು ಸಂಪರ್ಕಿಸಬಹುದು.





ಸಂತೋಷ್ ಮನೆಗೆ ಭೇಟಿ ನೀಡಿ ಕಾಂಗ್ರೆಸ್ ನಾಯಕರ ಸಾಂತ್ವನ



ಬೆಳಗಾವಿ, ಏ. 13– ನಗರದ ಸಮರ್ಥ ಕಾಲೋನಿಯಲ್ಲಿರುವ ಮೃತ ಸಂತೋಷ್ ಪಾಟೀಲ್ ಮನೆಗೆ ಕಾಂಗ್ರೆಸ್ ನಾಯಕರು ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ವಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ವಿಧಾನಪರಿಷತ್ ವಿಪಕ್ಷ ನಾಯಕ ಹರಿಪ್ರಸಾದ್, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸತೀಶ ಜಾರಕಿಹೊಳಿ, ಸಲೀಂ ಅಹ್ಮದ್, ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಭೇಟಿ ನೀಡಿ ಸಂತೋಷ ಪಾಟೀಲ್ ಪತ್ನಿ ಜಯಶ್ರೀ ಹಾಗೂ ಕುಟುಂಬದ ಸದಸ್ಯರಿಗೆ ಧೈರ್ಯ ತುಂಬಿದರು.

ಈ ವೇಳೆ ಕಾಂಗ್ರೆಸ್ ನಾಯಕರ ಮುಂದೆ ಸಂತೋಷ್ ಕುಟುಂಬಸ್ಥರು ಕಣ್ಣೀರು ಹಾಕಿದ್ದಲ್ಲದೇ, 40 ಪರ್ಸೆಂಟ್ ಕಮಿಷನ್ ವಿಚಾರವಾಗಿ ನೋವು ತೋಡಿಕೊಂಡರು. 40ಪರ್ಸೆಂಟ್ ಕಮಿಷನ್ ಕೊಡದೇ ಇದ್ದರೆ ಯಾರ ಕಡೆಯಿಂದ ಬಿಲ್ ಮಾಡಿಸಿಕೊಳ್ಳುತ್ತೀಯಾ ಮಾಡಿಸಿಕೋ ಅಂತಾ ಸಂತೋಷನಿಗೆ ಹೇಳುತ್ತಿದ್ದರು ಎಂದು ಸಂತೋಷ್ ಪತ್ನಿ, ಈಶ್ವರಪ್ಪ ವಿರುದ್ಧ ದೂರಿದರು. ಈ ವೇಳೆ ಈಶ್ವರಪ್ಪ ಹತ್ತಿರ ಕರೆದುಕೊಂಡು ಹೋಗಿದ್ದು ಯಾರು ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು. ಹಿಂಡಲಗಾ ಗ್ರಾಮ ಪಂಚಾಯತಿ ಅಧ್ಯಕ್ಷ ಕರೆದುಕೊಂಡ ಹೋಗಿದ್ದರು ಎಂದು ಕುಟುಂಬಸ್ಥರು ಮಾಹಿತಿ ನೀಡಿದರು. ಈ ವೇಳೆ ಮಾತನಾಡಿದ ಡಿಕೆಶಿ, ನೋಡಮ್ಮ ನಿನಗೆ ನ್ಯಾಯ ಕೊಡಿಸೋಕೆ ಬಂದಿದ್ದೇವೆ. ನೀನು ಧೈರ್ಯದಿಂದ ಇರು ಎಂದು ಸಮಾಧಾನಪಡಿಸಿದರು.

ಭೀಕರ ಚಂಡಮಾರುತಕ್ಕೆ 58 ಮಂದಿ ಸಾವು

ಫಿಲಿಪೈನ್ಸ್‌ನಲ್ಲಿ ಬಿಡುವಿಲ್ಲದೇ ನಡೀತಿದೆ ಕಾರ್ಯಾಚರಣೆ

ಮನಿಲಾ, ಏ. 13– ಫಿಲಿಪೈನ್ಸ್‌ನಲ್ಲಿ ಚಂಡಮಾರುತದಿಂದಾಗಿ ಪ್ರವಾಹ, ಭೂ ಕುಸಿತ ಉಂಟಾಗಿದ್ದು, ಕಳೆದ ಎರಡು ದಿನಗಳಲ್ಲಿ ಮೃತಪಟ್ಟವರ ಸಂಖ್ಯೆ 58ಕ್ಕೆ ಏರಿಕೆಯಾಗಿದೆ. ಇದರೊಂದಿಗೆ ಸುಮಾರು 27 ಜನರು ನಾಪತ್ತೆಯಾಗಿದ್ದು, 100ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ಹಳ್ಳಿ–ಹಳ್ಳಿಗಳಲ್ಲಿ ಭೂ ಕುಸಿತ ಉಂಟಾಗುತ್ತಿದ್ದು, ಮಣ್ಣಿನಡಿಯಲ್ಲೇ ಸಿಲುಕಿ ಜನರು ಪ್ರಾಣ ಬಿಡುತ್ತಿದ್ದಾರೆ. ಸತತವಾಗಿ ಕಾರ್ಯಾಚರಣೆ ನಡೆಸುತ್ತಿರುವ ಸಿಬ್ಬಂದಿ ಬರಿಗೈನಿಂದಲೇ ಮಣ್ಣನ್ನು ಅಗೆದು ಮೃತದೇಹಗಳನ್ನು ಹೊರತೆಗೆಯುತ್ತಿದ್ದಾರೆ. ಭೂ ಕುಸಿತದೊಂದಿಗೆ ಸಣ್ಣ ಕಲ್ಲು ಮಿಶ್ರಿತ ಮಳೆಯೂ ಆಗುತ್ತಿರುವುದು ಜನರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡಿದೆ.

ಪ್ರಾರಂಭದಲ್ಲಿ ಗಂಟೆಗೆ 65 ಕಿಮೀ ವೇಗದಲ್ಲಿ ಇದ್ದ ಈ ಚಂಡಮಾರುತ ಇದೀಗ ಗಂಟೆಗೆ 85 ಕಿಮೀ ವೇಗದಲ್ಲಿ ಅಪ್ಪಳಿಸುತ್ತಿದೆ. ಈ ವರ್ಷ ಅಪ್ಪಳಿಸಿದ ಮೊದಲ ಉಷ್ಣವಲಯದ ಚಂಡಮಾರುತ ಇದಾಗಿದೆ. ಉಷ್ಣವಲಯದ ಚಂಡಮಾರುತ ಮೇಗಿಯಿಂದ ಭೂಕುಸಿತವುಂಟಾಗುತ್ತಿದ್ದು, ಈಗಾಗಲೇ ಫಿಲಿಪೈನ್ಸ್‌ನಲ್ಲಿ ಸಾಕಷ್ಟು ಹಾನಿಯಾಗಿದೆ ಎಂದು ವರದಿಗಳು ಹೇಳುತ್ತಿವೆ.

ಫಿಲಿಫೈನ್ಸ್ ದ್ವೀಪ ಸಮೂಹದಲ್ಲಿ 20 ವರ್ಷದಲ್ಲಿ ಸುಮಾರು 20 ಬಾರಿ ಚಂಡಮಾರುತಗಳು ಉಂಟಾಗುತ್ತವೆ. ಇದರೊಂದಿಗೆ ಮಣ್ಣಿನ ಕುಸಿತವುಂಟಾಗಿ ಅದು ಪ್ರವಾಹದ ರೂಪದಲ್ಲಿ ಹರಿದು ವಸತಿ ಪ್ರದೇಶ, ಕೃಷಿ ಭೂಮಿಗಳಿಗೆ ನುಗ್ಗುತ್ತಿದೆ. ಮಳೆಯೊಂದಿಗೆ ಮಣ್ಣಿನ ಕಣಗಳೇ ಸೋಕುತ್ತಿವೆ ಎಂದು ಜನರು ಕಂಗಾಲಾಗಿದ್ದಾರೆ ಎಂದು ಪ್ರಾಕೃತಿಕ ವಿಕೋಪ ನಿರ್ವಹಣಾ ಕೇಂದ್ರ ತಿಳಿಸಿದೆ ಎನ್ನಲಾಗಿದೆ. ಮಂಗಳವಾರವೇ ಭೀಕರ ಭೂಕುಸಿತದಿಂದ ಹಲವು ಮನೆಗಳು ಸಮುದ್ರದ ಪಾಲಾಗಿವೆ. ಇಲ್ಲಿ ಸಿಲುಕಿದ್ದ 400 ಜನರನ್ನು ಬೋಟ್ ಮೂಲಕ ರಕ್ಷಣೆ ಮಾಡಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ವಿಷ ಸೇವನೆಯಿಂದ ಸಂತೋಷ್ ಪಾಟೀಲ್ ಸಾವು: ಐಜಿಪಿ



ಬೆಂಗಳೂರು: ರಾಜ್ಯದಲ್ಲಿ ಭಾರಿ ಸುದ್ದಿಗೆ ಗ್ರಾಸವಾಗಿರುವ ಬಿಜೆಪಿ ಕಾರ್ಯಕರ್ತ ಹಾಗೂ ಗುತ್ತಿಗೆದಾರ ಸಂತೋಷ್ ಪಾಟೀಲ್ ಸಾವು ವಿಷ ಸೇವನೆಯಿಂದಾಗಿದೆ ಎಂದು ಕರ್ನಾಟಕ ಐಜಿಪಿ (ಪೊಲೀಸ್ ಮಹಾನಿರೀಕ್ಷಕ) (ಪಶ್ಚಿಮ ಶ್ರೇಣಿ) ದೇವಜ್ಯೋತಿ ರೇ ಬುಧವಾರ ಹೇಳಿದ್ದಾರೆ.

ರಾಜ್ಯದಲ್ಲಿ ತೀವ್ರ ವಿವಾದಕ್ಕೆ ಕಾರಣವಾಗಿರುವ ಸಂತೋಷ್ ಪಾಟೀಲ್ ಸಾವು ಪ್ರಕರಣ ಸಂಬಂಧ ಇಂದು ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, 'ಸಂತೋಷ್ ಪಾಟೀಲ್ ಮೃತಪಟ್ಟ ಸ್ಥಳದ ವಿಚಾರಣೆಯನ್ನು ವಿವರವಾದ ಕಾರ್ಯ ವಿಧಾನಗಳೊಂದಿಗೆ ಮಾಡಲಾಗಿದೆ. ವಿಚಾರಣೆ ವೇಳೆ ವಿಧಿವಿಜ್ಞಾನ ತಜ್ಞರು, ವೈದ್ಯರು ಹಾಗೂ ಕುಟುಂಬಸ್ಥರು ಹಾಜರಿದ್ದರು. ಸಂತೋಷ ಪಾಟೀಲ ವಿಷ ಸೇವಿಸಿ ಸಾವಿಗೀಡಾಗಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

ಮೂವರ ವಿರುದ್ಧ ಎಫ್‌ಐಆರ್: ಇನ್ನು ಮೃತರ ಸೋದರ ಸಂಬಂಧಿ ಪ್ರಶಾಂತ್ ಪಾಟೀಲ್ ನೀಡಿದ ದೂರಿನಂತೆ ಸಚಿವ ಈಶ್ವರಪ್ಪ, ಬಸವರಾಜ್ ಮತ್ತು ರಮೇಶ್ ವಿರುದ್ಧ ಐಪಿಸಿ ಸೆಕ್ಷನ್ 306ರ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ ಎಂದು ಐಜಿಪಿ ತಿಳಿಸಿದರು. ಮೃತರ ಸಹೋದರ ಸಂತೋಷ್, ವೃತ್ತಿಯಲ್ಲಿ ವೃತ್ತ ನಿರೀಕ್ಷಕ ಗಿರೀಶ್ ಮತ್ತು ಸೋದರ ಸಂಬಂಧಿ ಸುರೇಶ್ ಪಾಟೀಲ್ ಶವವನ್ನು ಹೋಟೆಲ್‌ನಿಂದ ಸ್ಥಳಾಂತರಿಸಲು ಅವಕಾಶ ನೀಡುವುದಿಲ್ಲ ಎಂದು ಆರಂಭದಲ್ಲಿ ಒತ್ತಾಯಿಸಿದ್ದರಿಂದ ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಹೋಟೆಲ್ ಕೊಠಡಿಯಿಂದ ಸ್ಥಳಾಂತರಿಸುವುದು ವಿಳಂಬವಾಯಿತು. ಆರೋಪಿ ಸಂಖ್ಯೆ 1– ಈಶ್ವರಪ್ಪ ಮತ್ತು ಇತರರನ್ನು ಬಂಧಿಸುವವರೆಗೆ ಶವ ಹಸ್ತಾಂತರಕ್ಕೆ ಅನುವು ಮಾಡಿಕೊಡುವುದಿಲ್ಲ ಎಂದು ಅವರು ಪಟ್ಟು ಹಿಡಿದಿದ್ದರು.

ಸಂಬಂಧಿಕರ ಮನವೊಲಿಕೆ: ಆದಾಗ್ಯೂ, ಎಸ್ಪಿ ವಿಷ್ಣುವರ್ಧನ್ ಸೇರಿದಂತೆ ಪೊಲೀಸ್ ಅಧಿಕಾರಿಗಳ ತಂಡವು ಮರಣೋತ್ತರ ಪರೀಕ್ಷೆಯ ಕಾರ್ಯವಿಧಾನವನ್ನು ಮತ್ತಷ್ಟು ವಿಳಂಬಗೊಳಿಸುವುದಿಲ್ಲ ಎಂದು ಮನವರಿಕೆ ಮಾಡಿದೆ. ಒಂದು ವೇಳೆ ಮರಣೋತ್ತರ ಪರೀಕ್ಷೆ ವಿಳಂಬವಾದರೆ ಪ್ರಮುಖ ಸಾಕ್ಷ್ಯಗಳನ್ನು ದುರ್ಬಲಗೊಳಿಸುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ಮನವರಿಕೆ ಮಾಡಿಕೊಟ್ಟಿದ್ದಾರೆ. ಸಂಜೆ 5.10ರ ವೇಳೆಗೆ ಮೃತದೇಹವನ್ನು ಮಣಿಪಾಲದಲ್ಲಿ ಮರಣೋತ್ತರ ಪರೀಕ್ಷೆಗೆ ಸ್ಥಳಾಂತರಿಸುತ್ತಿದ್ದಂತೆ ಪೊಲೀಸರ ಸುದೀರ್ಘ ಮನವೊಲಿಸುವ ಕಾರ್ಯ ಫಲ ನೀಡಿದೆ.

ಪೊಲೀಸ್ ಮೂಲಗಳು TNIEಗೆ ತಿಳಿಸಿರುವಂತೆ, ಸ್ಥಳ ಮಹಜರು ವೇಳೆ ಯಾವುದೇ ಡೆತ್ ನೋಟ್ ಕಂಡುಬಂದಿಲ್ಲ, ಆದರೆ ಕೋಣೆಯಲ್ಲಿ ಕೀಟನಾಶಕ (ವಿಷಕಾರಿ ವಸ್ತು) ಬಾಟಲಿ ಕಂಡುಬಂದಿದೆ. ಮಂಗಳೂರಿನ ಪ್ರಾದೇಶಿಕ ಎಫ್‌ಎಸ್‌ಎಲ್‌ನ ತಜ್ಞರು ಹೆಚ್ಚಿನ ವಿಶ್ಲೇಷಣೆಗಾಗಿ ಮಾದರಿಗಳನ್ನು ತೆಗೆದುಕೊಂಡಿದ್ದಾರೆ.

ಏತನ್ಮಧ್ಯೆ, ಎಫ್‌ಐಆರ್‌ನಲ್ಲಿ ಸಚಿವ ಈಶ್ವರಪ್ಪ ಮತ್ತು ಇತರ ಆರೋಪಿಗಳ ಹೆಸರಿರುವ ಕಾರಣ, ತನಿಖೆಗೆ ಹಾಜರಾಗುವಂತೆ ಅವರಿಗೆ ನೋಟಿಸ್ ಕಳುಹಿಸಲಾಗುವುದು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಭಾರೀ ಮಳೆಗೆ ಕೊಚ್ಚಿ ಹೋಯ್ತು ಆಫ್ರಿಕಾದಲ್ಲಿದ್ದ 70 ವರ್ಷಗಳಷ್ಟು ಹಳೆಯದಾದ ಹಿಂದೂ ದೇವಾಲಯ

ಜೋಹಾನ್ಸ್‌ಬರ್ಗ್, ಏ. 13– ಸತತ ಮಳೆಯಿಂದಾಗಿ ದಕ್ಷಿಣ ಆಫ್ರಿಕಾದ ಡರ್ಬನ್‌ನಲ್ಲಿ 70 ವರ್ಷದಷ್ಟು ಹಳೆಯದಾದ ಅಮ್ಮನವರ ದೇವಾಲಯವು ಪ್ರವಾಹಕ್ಕೆ ಸಿಲುಕಿ ಕೊಚ್ಚಿ ಹೋಗಿದೆ. ಸತತವಾಗಿ ನಾಲ್ಕು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ದಕ್ಷಿಣ ಆಫ್ರಿಕಾದ ದರ್ಬನ್‌ನಲ್ಲಿ ಭಾರೀ ಅನಾಹುತ ಉಂಟಾಗಿದ್ದು, ಕನಿಷ್ಠ 45 ಜನರು ಸಾವನ್ನಪ್ಪಿದ್ದಾರೆ. ನೂರಾರು ಜನರಿಗೆ ಗಾಯಗಳಾಗಿದ್ದು, ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅಲ್ಲಿನ ಹೆದ್ದಾರಿಗಳು ಮತ್ತು ನಗರ ಬೀದಿಗಳು ಸಂಪೂರ್ಣ ಅಸ್ತವ್ಯಸ್ತವಾಗಿದ್ದು, 4 ದಿನಗಳ ನಿರಂತರ ಮಳೆಯಿಂದಾಗಿ ಕಾರುಗಳು ತೇಲುತ್ತಿರುವ ದೃಶ್ಯಗಳು ಕಂಡು ಬಂದವು. ಚಂಡಮಾರುತದ ಅಬ್ಬರ ಇನ್ನೂ ತಗ್ಗಿಲ್ಲ. ಸಮುದ್ರ ತೀರಕ್ಕೆ ಹೊಂದಿಕೊಂಡಿರುವ ಡರ್ಬನ್ ಪರಿಸ್ಥಿತಿ ಇನ್ನೂ ಕೆಟ್ಟದಾಗಿದೆ ಎಂದು ಹವಾಮಾನ ಶಾಸ್ತ್ರಜ್ಞರು ತಿಳಿಸಿದ್ದಾರೆ. ಅಮ್ಲಾಟುಜಾನಾ ನದಿಯ ದಡದಲ್ಲಿದ್ದ ದೇವಾಲಯವು ಭಾರೀ ಮಳೆಗೆ ಸಂಪೂರ್ಣ ಕುಸಿದಿದ್ದು, ಪ್ರವಾಹಕ್ಕೆ ಸಿಲುಕಿ ಕೊಚ್ಚಿ ಹೋಗಿದೆ. ನಾಲ್ಕು ವರ್ಷಗಳ ಹಿಂದೆ ಭಾರೀ ಮಳೆ ಮತ್ತು ಪ್ರವಾಹದಿಂದಾಗಿ ದೇವಾಲಯವು ಸ್ವಲ್ಪ ಹಾನಿ ಆಗಿತ್ತು. ಆದರೆ ಅದನ್ನು ರಿಪೇರಿ ಮಾಡಲಾಗಿತ್ತು. ಈ ಬಗ್ಗೆ ದೇವಸ್ಥಾನ ಸಮಿತಿಯ ಸಹಾಯಕ ಕಾರ್ಯದರ್ಶಿ ಕುರೇಶಾ ಮೂಡ್ಲೆ ಮಾತನಾಡಿ, ವಿಷ್ಣು ದೇವಸ್ಥಾನದಲ್ಲಿ ವಿಗ್ರಹಗಳು ಈಗಲೂ ಇವೆ. ಅವುಗಳನ್ನು ಗ್ರಾನೈಟ್‌ನಿಂದ ಮಾಡಲಾಗಿದೆ. ಇದರಿಂದಾಗಿ ದೇಗುಲದ ಅಡಿಪಾಯದೊಂದಿಗೆ ವಿಗ್ರಹಗಳನ್ನು ಸ್ಥಾಪಿಸಿರುವುದರಿಂದ ಉಳಿದುಕೊಂಡಿವೆ. ಇಲ್ಲಿಗೆ ನಿತ್ಯವು ಭಕ್ತರು ಭೇಟಿ ನೀಡುತ್ತಾರೆ. ಆದರೆ ದೇವಿಯ ದೇವಸ್ಥಾನವೂ ಸಂಪೂರ್ಣ ನಾಶವಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ 55 ಮಂದಿಗೆ ಕೊರೊನಾ ಪಾಸಿಟಿವ್

ಬೆಂಗಳೂರು, ಏ. 13– ರಾಜ್ಯದಲ್ಲಿ ಕೊರೊನಾ ಮೂರನೇ ಅಲೆಯ ಅಬ್ಬರ ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗುತ್ತಿದ್ದು, ಕಳೆದ 24 ಗಂಟೆಯಲ್ಲಿ ಕೇವಲ 55 ಹೊಸ ಪಾಸಿಟಿವ್ ಪ್ರಕರಣಗಳು ವರದಿಯಾಗಿವೆ. ಇದರೊಂದಿಗೆ ಸೋಂಕಿತರ ಸಂಖ್ಯೆ 39,46,176ಕ್ಕೆ ಏರಿಕೆಯಾಗಿದೆ.

ಇನ್ನು ರಾಜ್ಯದಲ್ಲಿ ಮಹಾಮಾರಿ ಕೊರೊನಾದಿಂದ ಇಂದು ಯಾವುದೇ ಸಾವು ವರದಿಯಾಗಿಲ್ಲ. ಹೀಗಾಗಿ ಸಾವಿನ ಸಂಖ್ಯೆ 40057 ಇದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರಿನಲ್ಲಿ ಇಂದು 46 ಮಂದಿಗೆ ಸೋಂಕು ದೃಢಪಟ್ಟಿದೆ. ಇದರೊಂದಿಗೆ ನಗರದಲ್ಲಿ ಸೋಂಕಿತರ ಸಂಖ್ಯೆ 17,82,229ಕ್ಕೆ ಏರಿಕೆಯಾಗಿದೆ. ಇಂದು ರಾಜಧಾನಿಯಲ್ಲೂ ಯಾವುದೇ ಕೊರೊನಾ ಸಾವು ವರದಿಯಾಗಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹೇಳಿದೆ. ರಾಜ್ಯದಲ್ಲಿ ಇಂದು 62 ಸೋಂಕಿತರು ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಇದರೊಂದಿಗೆ ಸೋಂಕಿನಿಂದ ಚೇತರಿಸಿಕೊಂಡವರ ಸಂಖ್ಯೆ 39,04639ಕ್ಕೆ ಏರಿಕೆಯಾಗಿದೆ. ಇನ್ನು 1438 ಸಕ್ರಿಯ ಪ್ರಕರಣಗಳಿವೆ.

ಮೂರನೇ ಪುಟದಿಂದ

10 ಸ್ಥಾನ ಗಳಿಸುವ ಗುರಿ

ನಾನೇ ಸಿಎಂ ಎಂದು ಇಬ್ಬರೂ ಹೇಳುತ್ತಿದ್ದಾರೆ. ಜೊತೆಗೆ ಅವರನ್ನು ಮುಖ್ಯಮಂತ್ರಿಯಾಗಲು ಬಿಡಬಾರದು ಎಂದು ಪರಸ್ಪರ ತಂತ್ರಗಾರಿಕೆಯೂ ನಡೆದಿದೆ. ಅದೇನೇ ಆದರೂ ರಾಜ್ಯದಲ್ಲಿ ಮುಂದಿನ ಸಿಎಂ ಆಗುವವರು ಬಿಜೆಪಿಯವರೇ ಎನ್ನುವುದು ಖಚಿತ ಎಂದರು.

ಕಾಂಗ್ರೆಸ್ ಭ್ರಷ್ಟಾಚಾರದ ಕೂಪ: ಭ್ರಷ್ಟಾಚಾರದ ಮೂಲವೇ ಕಾಂಗ್ರೆಸ್. ಇದು ಭ್ರಷ್ಟಾಚಾರದ ಕೂಪದಲ್ಲೇ ಇದೆ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ ನಾಯಕರು ಜಾಮೀನಿನ ಮೇಲೆ ಹೊರಗಿದ್ದಾರೆ. ಇವರೆಲ್ಲಾ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ, ಜೈಲಿಗೆ ಹೋಗಿ ಜಾಮೀನು ಪಡೆದಿದ್ದಾರಾ? ಎಂದು ವ್ಯಂಗ್ಯವಾಡಿದ ಅವರು, ಅಭಿವೃದ್ಧಿಯೊಂದೇ ಬಿಜೆಪಿಯ ಮಂತ್ರ. ನಮ್ಮ ಪಕ್ಷದ ವಿರುದ್ಧ ಯಾವ ಕಳಂಕವೂ ಇಲ್ಲ. ಹಾಗಾಗಿಯೇ ಕೇಂದ್ರ ಮತ್ತು ರಾಜ್ಯದಲ್ಲಿ ಭ್ರಷ್ಟಾಚಾರ ರಹಿತವಾಗಿ ಆಡಳಿತ ನಡೆಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ 10 ಸ್ಥಾನ: ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲೂ ಬಿಜೆಪಿ ಗೆದ್ದು ಸರ್ಕಾರ ರಚನೆ ಮಾಡಲಿದೆ. ಈ ನಿಟ್ಟಿನಲ್ಲಿ ಕೇವಲ ಮೂರು ಶಾಸಕರನ್ನು ಹೊಂದಿರುವ ಮೈಸೂರು ಜಿಲ್ಲೆಯಲ್ಲಿ ಮುಂದಿನ ಚುನಾವಣೆಯಲ್ಲಿ 10 ಸ್ಥಾನಗಳನ್ನು ಗೆಲ್ಲಿಸಲು ಕಾರ್ಯಕರ್ತರು ಶ್ರಮಿಸಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳು ಹಾಗೂ ಕಾರ್ಯಕ್ರಮಗಳನ್ನು ಜನರಿಗೆ ಮನದಟ್ಟು ಮಾಡಿಸಬೇಕು ಎಂದು ಸಲಹೆ ನೀಡಿದರು.

ಪ್ರತಾಪ್ ಸಿಂಹಗೆ ಶ್ಲಾಘನೆ: ನಾವು ಹಲವು ಬಾರಿ ಸಂಸದರಾಗಿದ್ದೇವೆ. ಆದರೆ ಮೈಸೂರು ಸಂಸದ ಪ್ರತಾಪ್ ಸಿಂಹ ಅವರಷ್ಟು ಅನುದಾನ ತರಲು ನಮ್ಮಿಂದ ಸಾಧ್ಯವಾಗಿಲ್ಲ. ಗುಣಕ್ಕೆ ಮತ್ಸರವಿರಬಾರದು. ಪ್ರತಾಪ್ ಸಿಂಹ ಅವರ ಬದ್ಧತೆ ಬಗ್ಗೆ ಖುಷಿಯಾಗುತ್ತದೆ ಎಂದು ನಳಿನ್‌ಕುಮಾರ್ ಶ್ಲಾಘನೆ ವ್ಯಕ್ತಪಡಿಸಿದರು.

ಮೈಸೂರಿಗೆ ಸಾಕಷ್ಟು ಅನುದಾನ: ಸಂಸದ ಪ್ರತಾಪ್ ಸಿಂಹ ಮಾತನಾಡಿ, ಮೈಸೂರಿನ ಅಭಿವೃದ್ಧಿಗಾಗಿ 7 ದಶಕ ದೇಶದ ಅಧಿಕಾರ ನಡೆಸಿದವರು ನೀಡದಷ್ಟು ಅನುದಾನವನ್ನು ನರೇಂದ್ರ ಮೋದಿ ಅವರು 7 ವರ್ಷಗಳಲ್ಲೇ ನೀಡಿದ್ದಾರೆ. ಮೈಸೂರು–ಬೆಂಗಳೂರು ದಶಪಥ ರಸ್ತೆಗೆ 9,500 ಕೋಟಿ ರೂ., ಮೈಸೂರು ರಿಂಗ್‌ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಅಭಿವೃದ್ಧಿಪಡಿಸಲು 400 ಕೋಟಿ ರೂ. ಪ್ರಸಾದ ಯೋಜನೆಯಡಿ ಚಾಮುಂಡಿಬೆಟ್ಟದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ 50 ಕೋಟಿ ರೂ., ಉಡಾನ್ ಯೋಜನೆಯಡಿ ಸಾಮಾನ್ಯರಿಗೂ ವಿಮಾನ ಪ್ರಯಾಣ ಅವಕಾಶ, ಮಡಿಕೇರಿ ಚತುಷ್ಪಥ ರಸ್ತೆ ಹೀಗೆ ಕೇಂದ್ರ ಸರ್ಕಾರ ಸಾಕಷ್ಟು ನೀಡಿದೆ. ಇನ್ನು ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ರಾಜ್ಯ ಸರ್ಕಾರ ಮಂಡಕಳ್ಳಿ ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆಗೆ 333 ಕೋಟಿ ರೂ., ಕೆ.ಆರ್.ಆಸ್ಪತ್ರೆ ಕಾಯಕಲ್ಪಕ್ಕೆ 89 ಕೋಟಿ ರೂ. ಅನುದಾನ ನೀಡಿದೆ. ಬೃಹತ್ ಮೈಸೂರು ರಚನೆಗೆ ಪ್ರಕ್ರಿಯೆ ಆರಂಭವಾಗಿದೆ, ಗ್ಯಾಸ್ ಪೈಪ್‌ಲೈನ್ ಪ್ರಗತಿಯಲ್ಲಿದೆ. ಹೀಗೆ ಜನರ ಬಳಿ ಹೇಳಲು ಸಾಕಷ್ಟು ವಿಚಾರಗಳಿವೆ. 2023ಕ್ಕೂ ನಮ್ಮದೇ ಸರ್ಕಾರ ಬರುವುದರಲ್ಲಿ ಸಂಶಯ ಬೇಡ. ಮೈಸೂರು ಭಾಗದಲ್ಲಿ ಹೆಚ್ಚು ಸ್ಥಾನದಲ್ಲಿ ಗೆಲ್ಲಿಸಲು ಎಲ್ಲರೂ ಪ್ರಯತ್ನಿಸಬೇಕಿದೆ ಎಂದು ಮನವಿ ಮಾಡಿಕೊಂಡರು.

ಸಚಿವ ವಿ.ಸೋಮಣ್ಣ ಮಾತನಾಡಿ, ಹಳೆ ಮೈಸೂರು ಭಾಗದಲ್ಲಿ ಅತೀ ಹೆಚ್ಚು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿಯವರು ಆಯ್ಕೆಯಾಗುವ ನಿಟ್ಟಿನಲ್ಲಿ ಎಲ್ಲರೂ ಶ್ರಮಿಸೋಣ ಎಂದರು. ನಂಜನಗೂಡು ಶಾಸಕ ಹರ್ಷವರ್ದನ್, ಬಿಜೆಪಿ ಕಾರ್ಯಕರ್ತರ ಪಕ್ಷ. ಕಾರ್ಯಕರ್ತರ ಪರಿಶ್ರಮದಿಂದಲೇ ನಾವೆಲ್ಲಾ ಚುನಾವಣೆಯಲ್ಲಿ ಆಯ್ಕೆಯಾಗಲು ಸಾಧ್ಯ ಎಂದು ನೆರದಿದ್ದವರಿಗೆ ಕೃತಜ್ಞತೆ ಸಲ್ಲಿಸಿದರು. ಬಿಜೆಪಿ ಉಪಾಧ್ಯಕ್ಷರಾದ ತೇಜಸ್ವಿನಿ ಅನಂತ್‌ಕುಮಾರ್, ಎಂ.ರಾಜೇಂದ್ರ, ಪ್ರಧಾನ ಕಾರ್ಯದರ್ಶಿಗಳಾದ ರವಿಕುಮಾರ್, ಸಿದ್ದರಾಜು, ಶಾಸಕ ಎಲ್.ನಾಗೇಂದ್ರ, ಪರಿಷತ್ ಸದಸ್ಯ ಮುನಿಗೋಪಾಲರಾಜು, ಮೈಸೂರು ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ನಗರಾಧ್ಯಕ್ಷ ಶ್ರೀವತ್ಸ, ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ಮಾಜಿ ಸಂಸದ ಸಿ.ಹೆಚ್.ವಿಜಯಶಂಕರ್, ಮಾಜಿ ಮೇಯರ್ ಸಂದೇಶ್‌ಸ್ವಾಮಿ, ಮೈ.ವಿ.ಶಂಕರ್, ಮೈಲ್ಯಾಕ್ ಅಧ್ಯಕ್ಷ ಎನ್.ವಿ.ಫಣೀಶ್, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಕಾ.ಪು.ಸಿದ್ದಲಿಂಗಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

ಇನ್ನೆರಡು ವಾರದಲ್ಲಿ 'ಯಶಸ್ವಿನಿ'ಗೆ ಚಾಲನೆ

ಒಂದೇ ಸಮಯದಲ್ಲಿ ಅಭಿವೃದ್ಧಿಪಡಿಸುವುದು, ಗುಂಪುಮನೆ ಯೋಜನೆಗೆ ನೂರಾರು ಕೋಟಿ ಹಣವನ್ನು ಸರ್ಕಾರ ನೀಡಿದೆ. ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ, ಚಿತ್ರನಗರಿ ಹೀಗೆ ಮೈಸೂರಿನ ಅಭಿವೃದ್ಧಿಗೆ ಸರ್ಕಾರ ಒತ್ತು ನೀಡಿದೆ ಎಂದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅನೇಕ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ರೂಪಿಸಿದರೂ ಮೈಸೂರಿನಲ್ಲಿ ಕೇವಲ 3 ಶಾಸಕರಿದ್ದಾರೆ. ಇದನ್ನು ಮುಖಂಡರು, ಕಾರ್ಯಕರ್ತರು ಗಂಭೀರವಾಗಿ ಪರಿಗಣಿಸಬೇಕು. ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಕನಿಷ್ಠ 9 ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲಿಸಬೇಕು. ಹಾಗೆಯೇ ಇನ್ನೆರಡು ತಿಂಗಳಲ್ಲಿ ಎದುರಾಗುವ ಪದವೀಧರ ಕ್ಷೇತ್ರದಿಂದ ವಿಧಾನಪರಿಷತ್ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಮೈ.ವಿ. ರವಿಶಂಕರ್ ಅವರನ್ನು ಶತಾಯಗತಾಯ ಗೆಲ್ಲಿಸಬೇಕಿದೆ ಎಂದು ಹೇಳಿದರು.

ರೈತ ಕಲ್ಯಾಣ ಟ್ರಸ್ಟ್‌ನ ಅನುದಾನ ರೈತರ ಸಂಕಷ್ಟ, ನಿವೃತ್ತಿ ನೌಕರರಿಗೆ ಬಳಕೆ

ನಿವೃತ್ತ ಮುಖ್ಯ ಕಾರ್ಯನಿರ್ವಾಹಕರು, ನೌಕರರಿಗೆ ಮೈಮುಲ್‌ನಿಂದ ಸನ್ಮಾನ



ತಿ.ನರಸೀಪುರ ಪಟ್ಟಣದ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಉಪ ಕಚೇರಿಯಲ್ಲಿ ನಿವೃತ್ತಿ ಹೊಂದಿದ ವಿವಿಧ ಸಂಘಗಳ ಮುಖ್ಯ ಕಾರ್ಯ ನಿರ್ವಾಹಕರು ಹಾಗೂ ನೌಕರರನ್ನು ಸನ್ಮಾನಿಸಿ, ರೈತ ಕಲ್ಯಾಣ ಟ್ರಸ್ಟ್‌ನಿಂದ ಸಹಾಯಧನದ ಚೆಕ್‌ಗಳನ್ನು ವಿತರಿಸಲಾಯಿತು. ಮಾಜಿ ಅಧ್ಯಕ್ಷ ಸಿ.ಓಂಪ್ರಕಾಶ್, ನಿರ್ದೇಶಕ ಆರ್.ಚಲುವರಾಜು, ಉಪ ವ್ಯವಸ್ಥಾಪಕ ಡಾ.ಸಿ.ದಿವಾಕರ ಇನ್ನಿತರರು ಇದ್ದಾರೆ.

ತಿ.ನರಸೀಪುರ, ಏ.13(ಎಸ್.ಕೆ)– ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ (ಮೈಮುಲ್) ದ ರೈತ ಕಲ್ಯಾಣ ಟ್ರಸ್ಟ್‌ನ ಅನುದಾನ ಸಂಕಷ್ಟದ ಕಾಲದಲ್ಲಿ ರೈತರಿಗೆ ಹಾಗೂ ನಿವೃತ್ತಿಯ ನಂತರ ಸಂಘದ ನೌಕರರ ಬದುಕನ್ನು ಕಟ್ಟಿಕೊಳ್ಳಲು ಸದ್ಬಳಕೆಯಾಗುತ್ತಿದ್ದು, ಸಹಕಾರ ಕ್ಷೇತ್ರದಲ್ಲಿ ಸಹಕಾರಿಯಾಗಿದೆ ಎಂದು ಮಾಜಿ ಅಧ್ಯಕ್ಷ, ಹಾಲಿ ನಿರ್ದೇಶಕ ಸಿ.ಓಂಪ್ರಕಾಶ್ ಹೇಳಿದರು.

ಪಟ್ಟಣದ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ (ಮೈಮುಲ್)ದ ಉಪ ಕಚೇರಿಯಲ್ಲಿ ಬುಧವಾರ ತಾಲೂಕಿನ ವಿವಿಧ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಸೇವೆ ಸಲ್ಲಿಸಿ, ನಿವೃತ್ತಿ ಹೊಂದಿದ್ದ ಮುಖ್ಯ ಕಾರ್ಯನಿರ್ವಾಹಕರು ಹಾಗೂ ನೌಕರರನ್ನು ಸನ್ಮಾನಿಸಿ, ಟ್ರಸ್ಟ್‌ನ ಪರಿಹಾರ ಧನ ಚೆಕ್‌ಗಳನ್ನು ವಿತರಿಸಿ ಮಾತನಾಡಿದ ಅವರು ಸಹಕಾರಿ ಸೇವೆ ಸಲ್ಲಿಸಿದವರು ನಿವೃತ್ತಿ ಜೀವನ ನಿರ್ವಹಣೆಗೆ, ಆರೋಗ್ಯವನ್ನು ಕಾಪಾಡಿಕೊಳ್ಳಲಿಕ್ಕೆ ಟ್ರಸ್ಟ್‌ನ ಹಣವನ್ನು ಉಪಯೋಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರೈತ ಕಲ್ಯಾಣ ಟ್ರಸ್ಟ್ ಆರಂಭಿಸಿದ್ದರಿಂದ ಹಾಲು ಉತ್ಪಾದಕ ರೈತರು ಅಕಾಲಿಕವಾಗಿ ನಿಧನ ಹೊಂದಿದ ಸಂದರ್ಭದಲ್ಲಿ ಸಂಕಷ್ಟಕ್ಕೆ ಸಿಲುಕಿದ ಕುಟುಂಬಕ್ಕೆ ಆರ್ಥಿಕ ನೆರವು ನೀಡಲು ಸಾಧ್ಯವಾಯಿತು. ರೈತರ ಮಕ್ಕಳ ವ್ಯಾಸಂಗಕ್ಕೆ ವಿದ್ಯಾರ್ಥಿ ನಿಲಯವನ್ನು ತೆರೆಯಲಾಗಿದೆ. ಸೇವಾವಧಿ ಮುಗಿದ ಬಳಿಕ ಬರಿಗೈಯಲ್ಲಿ ಸಂಘದಿಂದ ನಿರ್ಗಮಿಸುತ್ತಿದ್ದ ಕಾರ್ಯನಿರ್ವಾಹಕರು ಹಾಗೂ ನೌಕರರು ದುಡಿದದ್ದಕ್ಕೆ ಪ್ರತಿಫಲವಾಗಿ ಕೈಯಲ್ಲಿ ನಿವೃತ್ತಿ ಧನವನ್ನು ಹಿಡಿದುಕೊಂಡು ಹೋಗಿ ಕುಟುಂಬಕ್ಕೆ ಕೊಡುವಂತಾಗಿದೆ ಇಂತಹ ಉಪಯೋಗಿ ಯೋಜನೆಗಳನ್ನು ಕಾರ್ಯಗತಗೊಳಿಸುವಲ್ಲಿ ಮೈಮುಲ್ ಸಫಲವಾಗಿರುವುದು ನಿಜಕ್ಕೂ ಹೆಮ್ಮೆಯ ವಿಚಾರವೆಂದು ಸಿ.ಓಂಪ್ರಕಾಶ್ ತಿಳಿಸಿದರು.

ನಿರ್ದೇಶಕ ಹಾಗೂ ತಾ.ಪಂ ಮಾಜಿ ಅಧ್ಯಕ್ಷ ಆರ್.ಚಲುವರಾಜು ಮಾತನಾಡಿ, ಹಾಲು ಒಕ್ಕೂಟ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಬೃಹತ್ ಮಟ್ಟದಲ್ಲಿ ಬೆಳೆಯಲು ಹಾಲು ಉತ್ಪಾದಕರಂತೆ ಸಹಕಾರ ಸಂಘಗಳಲ್ಲಿ ದುಡಿಯುವ ನೌಕರರ ಪರಿಶ್ರಮವೂ ಅಡಗಿದೆ. ಈ ಹಿನ್ನೆಲೆಯಲ್ಲಿ ನಿವೃತ್ತಿಯಾದ ಬಳಿಕ ಗೌರವಿಸುವ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ಪ್ರಶಂಸಿಸಿದರು.

ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ಸಿದ್ದರಾಜು, ಮೈಮುಲ್ ಉಪ ವ್ಯವಸ್ಥಾಪಕ ಡಾ.ಸಿ. ದಿವಾಕರ, ಮಾರ್ಗ ವಿಸ್ತರಣಾಧಿಕಾರಿಗಳಾದ ಆರ್.ಪ್ರಮೋದ್, ಎನ್.ದಿವ್ಯಶ್ರೀ, ಎಸ್.ವೀಣಾ ಸೇರಿದಂತೆ ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರ ಸಂಘದ ಪದಾಧಿಕಾರಿಗಳು ಹಾಜರಿದ್ದರು.

ಬಾಬು ಜಗಜೀವನರಾಂ, ಅಂಬೇಡ್ಕರ್ ತತ್ವ-ಸಿದ್ಧಾಂತಗಳನ್ನು ಅಳವಡಿಸಿಕೊಳ್ಳಿ

ತರಗನಹಳ್ಳಿ ಗ್ರಾಮದಲ್ಲಿ ಶಾಸಕ ಬಿ.ಹರ್ಷವರ್ಧನ್ ಕರೆ



ಮಲ್ಕುಂಡಿ(ಚನ್ನಪ್ಪ)– ಸಮಾಜದ ಎಲ್ಲಾ ಶೋಷಿತ ಹಾಗೂ ಹಿಂದುಳಿದ ಅಭಿವೃದ್ಧಿಗೆ ದುಡಿದ ಮಹಾನ್ ವ್ಯಕ್ತಿಗಳಾದ ಬಾಬು ಜಗಜೀವನರಾಂ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬ ಯುವಕರು ಅಳವಡಿಸಿಕೊಳ್ಳಬೇಕು ಎಂದು ಶಾಸಕ ಬಿ.ಹರ್ಷವರ್ಧನ್ ಹೇಳಿದರು.

ನಂಜನಗೂಡು ತಾಲೂಕಿನ ತರಗನಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಬಾಬು ಜಗಜೀವನರಾಂ ಅವರ ಜಯಂತಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಾಬು ಜಗಜೀವನರಾಂ ಹಾಗೂ ಡಾ ಅಂಬೇಡ್ಕರ್ ಅವರು ಕೇವಲ ದಲಿತರ ಅಭಿವೃದ್ಧಿಗೆ ಮಾತ್ರ ಶ್ರಮಿಸಿಲ್ಲ. ಸಮಾಜದ ಎಲ್ಲಾ ಸಮುದಾಯದ ಅಭಿವೃದ್ಧಿಗೆ ದುಡಿದಿದ್ದಾರೆ ಎಂದರು.

ಈ ಇಬ್ಬರು ಮಹಾನ್ ವ್ಯಕ್ತಿಗಳು ತಾವು ಕಷ್ಟ ನೋವುಗಳನ್ನು ಅನುಭವಿಸಿ ತಮ್ಮ ಸಮುದಾಯದ ಜನರು ತಮ್ಮಂತೆ ನೋವನ್ನು ಅನುಭವಿಸಬಾರದೆಂದು ಅವರಿಗೆ ಉತ್ತಮ ಭವಿಷ್ಯ, ಸಾಮಾಜಿಕ ನ್ಯಾಯ ಒದಗಿಸಲು ದುಡಿದಿದ್ದಾರೆ. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಿ ತಮ್ಮ ಮಕ್ಕಳ ಭವಿಷ್ಯವನ್ನು ರೂಪಿಸಿ ಎಂದು ಕಿವಿ ಮಾತು ಹೇಳಿದರು. ತಾಲೂಕಿನಲ್ಲಿ ಬಾಬು ಜಗಜೀವನರಾಂ ಅವರ ಸಮುದಾಯ ಭವನ ನಿರ್ಮಾಣಕ್ಕೆ 2 ಕೋಟಿ ಅನುದಾನ ನೀಡಲಾಗಿದೆ. ಉತ್ತಮ ಸಮುದಾಯ ಭವನ ನಿರ್ಮಾಣವಾಗಲಿದೆ ಎಂದು ತಿಳಿಸಿದರು.

ಬಿಜೆಪಿ ರಾಜ್ಯ ಎಸ್ಸಿ ಮೋರ್ಚಾ ಉಪಾಧ್ಯಕ್ಷ ಚಿಕ್ಕರಂಗನಾಯಕ. ಗ್ರಾಪಂ ಅಧ್ಯಕ್ಷೆ ವಿದ್ಯಾ, ಶಕ್ತಿ ಕೇಂದ್ರದ ಅಧ್ಯಕ್ಷ ಪರಶಿವಮೂರ್ತಿ, ಗ್ರಾಪಂ ಸದಸ್ಯ ಗಂಗಾಧರ್, ಗ್ರಾಪಂ ಉಪಾಧ್ಯಕ್ಷೆ ಚಂದ್ರಕಲಾ, ಹುಲ್ಲಹಳ್ಳಿ ಗ್ರಾಪಂ ಅಧ್ಯಕ್ಷ ಮಹೇಶ್, ಮುಖಂಡ ಬಸವ ರಾಜ್, ಸುರೇಶ್ ಸೇರಿದಂತೆ ಬಾಬು ಜಗಜೀವನರಾಂ ಯುವಕ ಸಂಘದ ಯುವ ಬಳಗದವರು ಹಾಜರಿದ್ದರು.

ನಾಲೆ ಏರಿ ದುರಸ್ತಿಗೆ ಆಗ್ರಹಿಸಿ ಪ್ರತಿಭಟನೆ



ಹುಣಸೂರು, ಏ.13(ಕೆಕೆ)– ತಾಲೂಕಿನ ಬಿಳಿಕೆರೆ ಹೋಬಳಿ ಹುಸೇನ್‌ಪುರ ನಾಲೆಯ ಕೆಲ ಭಾಗಗಳಲ್ಲಿ ಏರಿ ಕುಸಿದು ಹೋಗಿದ್ದು, ಶೀಘ್ರ ದುರಸ್ತಿಗೊಳಿಸಬೇಕು ಎಂದು ಆಗ್ರಹಿಸಿ ರೈತರು ಪ್ರತಿಭಟನೆ ನಡೆಸಿದರು. ಶಿರಿಯೂರು ಅಣೆಕಟ್ಟು ವ್ಯಾಪ್ತಿಯ ಹುಸೇನ್‌ಪುರ ನಾಲೆ 9–10 ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಸರ್ವೇ ನಂಬರ್ 272/2, 275, 276 ಭಾಗಗಳಲ್ಲಿ ಏರಿ ಕುಸಿದಿದೆ. ಇದರಿಂದಾಗಿ 50–60 ಎಕರೆಗೆ ನೀರು ಹಾಯಿಸಲಾಗದೆ ಬೆಳೆಗಳು ಒಣಗುತ್ತಿವೆ. ತುಂಬಾ ಹಳೆಯದಾದ ಕಾಲುವೆ ಇದಾಗಿದ್ದು, ಅಲ್ಲಲ್ಲಿ ಕುಸಿದು ಬಿದ್ದು ಗದ್ದೆಗಳಿಗೆ ಸರಿಯಾಗಿ ನೀರಿನ ಸರಬರಾಜು ಆಗುತ್ತಿಲ್ಲ. ಸಣ್ಣ ನೀರಾವರಿ ಇಲಾಖೆ ಸುಪರ್ದಿಯಲ್ಲಿರುವ ಈ ನಾಲೆಯನ್ನು ಶೀಘ್ರ ದುರಸ್ತಿ ಮಾಡಬೇಕು ಎಂದು ಒತ್ತಾಯಿಸಿದರು.


ಸ್ಥಳಕ್ಕೆ ಆಗಮಿಸಿದ ಸಣ್ಣ ನೀರಾವರಿ ಇಲಾಖೆ ಎಇಇ ಸುರೇಶ್, ನಾಲೆಯ ಏರಿ ಹಾನಿಯಾಗಿರುವ ಕುರಿತು ಮಾಹಿತಿ ಬಂದಿದೆ. ಕಳೆದ ಡಿಸೆಂಬರ್‌ನಲ್ಲಿ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಅನುದಾನ ಮಂಜೂರಾದ ಕೂಡಲೇ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ ಬಳಿಕ ಪ್ರತಿಭಟನೆ ಹಿಂಪಡೆದರು. ಗ್ರಾಪಂ ಮಾಜಿ ಅಧ್ಯಕ್ಷ ಬಸವ ರಾಜು, ಸದಸ್ಯ ಕುಮಾರ್, ರೈತರಾದ ರಾಮೇಗೌಡ, ನಿಂಗೇಗೌಡ, ಶಂಕರೇಗೌಡ, ಶಿವಲಿಂಗೇಗೌಡ, ಶ್ರೀನಿವಾಸ್ ಇತರರಿದ್ದರು.

ಸುರೇಶ್ ನಿಧನ



ಹುಣಸೂರು, ಏ.13(ಕೆಕೆ)– ಹುಣಸೂರು ನಗರಸಭೆಯ ಕಂದಾಯಾಧಿಕಾರಿ ಅವರ ಬಾವಮೈದ ಹಾಗೂ ಛಾಯಾಗ್ರಾಹಕ ಸುರೇಶ್ (47) ಅವರು ಹೃದಯಾಘಾತದಿಂದ ನಿಧನರಾಗಿದ್ದಾರೆ.

ಪಟ್ಟಣದ ಸರಸ್ವತಿಪುರಂನ ವಾಸಿಯಾದ ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಮದ್ದೂರಿನಲ್ಲಿ ಬುಧವಾರ ಸಂಜೆ ನಡೆಯಿತು.



ಬನ್ನೂರಿಗೆ ಆಗಮಿಸಿದ್ದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ತಾಲೂಕು ಮುಸ್ಲಿಂ ಮುಖಂಡರು ಅಭಿನಂದಿಸಿದರು. ತಾಲೂಕು ಅಲ್ಪಸಂಖ್ಯಾತ ಅಧ್ಯಕ್ಷ ಆರೀಫ್, ಯೂಸೂಫ್ ಆಲಿ, ಜಮ್‌ರಾನ್, ಮಹಮದ್, ತಬ್ರೀಜ್, ಶೋಹೇಬ್, ರಹೀಬ್, ನಯಾಜುವುಲ್ಲಾ, ಮುಯೀನ್, ಫರ್‌ಖಾನ್, ಉಮರ್, ಮೊಕ್ತೆಯಾರ್, ಇರ್ಫಾನ್, ಮಜರ್, ಫೈರೋಜ್, ಶಕೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸವ್ವೆ ಗ್ರಾಪಂಗೆ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಶಶಿರೇಖಾ ಅಧ್ಯಕ್ಷೆ




ಎಚ್.ಡಿ.ಕೋಟೆ, ಏ.13(ಮಂಜು)– ತಾಲೂಕಿನ ಸವ್ವೆ ಗ್ರಾಮ ಪಂಚಾಯಿತಿಯಲ್ಲಿ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಶಶಿರೇಖಾ ಬೈರೇಗೌಡ ಆಯ್ಕೆಯಾಗಿದ್ದಾರೆ.

ಹಿಂದೆ ಅಧ್ಯಕ್ಷರಾಗಿದ್ದ ಸೋಮೇಗೌಡ ರಾಜೀನಾಮೆ ನೀಡಿದ್ದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನ ತೆರವಾಗಿತ್ತು. ಬುಧವಾರ ಸವ್ವೆ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ನಡೆದ ಚುನಾವಣೆಯಲ್ಲಿ ಲಾವಣ್ಯ ಮತ್ತು ಶಶಿರೇಖಾ ಬೈರೇಗೌಡ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರ ಹಿಂಪಡೆಯಲು ಅರ್ಧಗಂಟೆ ಕಾಲಾವಕಾಶ ನೀಡಲಾಗಿತ್ತು. ಯಾರೂ ನಾಮಪತ್ರ ವಾಪಸ್ಸು ಪಡೆಯದ ಹಿನ್ನೆಲೆಯಲ್ಲಿ ಚುನಾವಣೆಯನ್ನು ನಡೆಸಲಾಯಿತು. 12 ಸದಸ್ಯರು ಚುನಾವಣೆಯಲ್ಲಿ ಮತ ಚಲಾಯಿಸಿದರು. ಬೆಳಗನಹಳ್ಳಿ ಗ್ರಾಮದ ಶಶಿರೇಖಾ ಬೈರೇಗೌಡ ಪರ 7 ಮತ್ತು ಬೆಳ್ತೂರು ಗ್ರಾಮದ ಲಾವಣ್ಯ ಪರ 5 ಮತಗಳು ಬಿದ್ದವು. ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ ತಾರಕ ಕಾರ್ಯಪಾಲಕ ಅಭಿಯಂತರರಾದ ರಾಮೇಗೌಡ ಶಶಿರೇಖಾ ಅವರನ್ನು ಅಧ್ಯಕ್ಷರನ್ನಾಗಿ ಘೋಷಿಸಿದರು.

ಅಧ್ಯಕ್ಷರಾಗಿ ಆಯ್ಕೆಯಾದ ಶಶಿರೇಖಾ ಬೈರೇಗೌಡರನ್ನು ಎಲ್ಲ ಸದಸ್ಯರು ಅಭಿನಂದಿಸಿದರು. ಸವ್ವೆ ಗ್ರಾಮ ಪಂಚಾಯಿತಿ ಮುಂದೆ ಬೆಳಗನಹಳ್ಳಿ ಗ್ರಾಮದ ನೂರಾರು ಮಂದಿ ಸೇರಿ ವಿಜಯೋತ್ಸವ ಆಚರಿಸಿದರು.

ಬೆಳಗನಹಳ್ಳಿ ಗ್ರಾಮದ ಈಶ್ವರೇಗೌಡ, ಬಸವರಾಜಪ್ಪ, ನಾಗೇಶ, ಮಂಜುನಾಥ್, ಸಿದ್ದರಾಜು, ಶಿವರಾಜು, ಶಿವಪ್ಪ, ಸಿದ್ದೇಗೌಡ, ಪ್ರಭು, ಮರಿಸಿದ್ದನಾಯಕ, ಉಮೇಶ್, ರಮೇಶ್, ಸಣ್ಣೇಗೌಡ, ಕೂಸಣ್ಣ, ನಾಗರಾಜು, ಕುಮಾರಸ್ವಾಮಿ, ನಾಗರಾಜು, ವೆಂಕಟೇಶ್, ಮಹದೇವ, ಜೆ.ಪಿ. ಗೌಡ, ದಾಸೇಗೌಡ, ಅಶೋಕ್, ರವಿಗೌಡ, ಸುನಿಲ್, ಮಲ್ಲಿಕಾರ್ಜುನ್, ಬೋರೇಗೌಡ, ಮರಿಗೌಡ, ಗೋವಿಂದೇಗೌಡ, ಮಾಜಿ ಜಿ.ಪಂ. ಸದಸ್ಯ ವೆಂಕಟೇಶ್, ಗ್ರಾಮ ಪಂಚಾಯಿತಿ ಸದಸ್ಯರಾದ ಸಣ್ಣಮ್ಮ, ಬೆಟ್ಟನಾಯಕ, ಕಮಲಮ್ಮ ಇದ್ದರು.

ಮಾಡ್ರಹಳ್ಳಿ ಡೇರಿ ಅಭಿವೃದ್ಧಿಗೆ ಭೂಮಿಪೂಜೆ



ಮೂಗೂರು, ಏ. 13– ಹಿಂದುಳಿದಿರುವ ಸಹಕಾರ ಸಂಘವನ್ನು ಅಭಿವೃದ್ಧಿಯತ್ತ ಮುನ್ನಡೆಸುವ ಜವಾಬ್ದಾರಿ ಪ್ರತಿಯೊಬ್ಬ ಸದಸ್ಯರ ಮೇಲಿದೆ ಎಂದು ಮಾಡ್ರಹಳ್ಳಿ ಡೇರಿ ಅಧ್ಯಕ್ಷ ನಾಗೇಂದ್ರ ಹೇಳಿದರು.

ಮೂಗೂರು ಸಮೀಪದ ಮಾಡ್ರಹಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಜಿಲ್ಲಾ ಹಾಲು ಒಕ್ಕೂಟದ ಸಹಕಾರದಿಂದ 3.5 ಲಕ್ಷ ರೂ.ಗಳ ನೆರವಿನೊಂದಿಗೆ ಸಂಘದ ಸಭಾಂಗಣ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಸಂಘದ ಸದಸ್ಯರು ಹೈನುಗಾರಿಕೆಯನ್ನು ಉತ್ತೇಜಿಸಿ, ಉತ್ಪಾದನೆಯನ್ನು ಹೆಚ್ಚಿಸಿ ಸಂಘದ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಮಠಾಧೀಶರಾದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಗ್ರಾಪಂ ಅಧ್ಯಕ್ಷ ಮರಿಸ್ವಾಮಿ, ಡೇರಿ ಉಪಾಧ್ಯಕ್ಷ ಶಿವಣ್ಣ, ಕಾರ್ಯದರ್ಶಿ ನಂಜುಂಡಸ್ವಾಮಿ, ನಿರ್ದೇಶಕರಾದ ಪುಟ್ಟಬುದ್ಧಿ, ಲತಾ, ಮಹದೇವಪ್ಪ ಮಹದೇವಪ್ರಸಾದ್, ರಂಗಯ್ಯ, ಕೆಂಪರಾಜು, ಮಹದೇವಮ್ಮ ಇತರರು ಹಾಜರಿದ್ದರು.

ಸಪ್ತಪದಿಗೆ ಮರು ಚಾಲನೆ

ದುಂದುವೆಚ್ಚಕ್ಕೆ ಕಡಿವಾಣ ಹಾಕಲು ಸರ್ಕಾರದಿಂದ ನಿರ್ಧಾರ

ಬೆಂಗಳೂರು,ಏ.13(ಕೆಎಂಶಿ)–ಉಚಿತ ಸಾಮೂಹಿಕ ವಿವಾಹ–ಸಪ್ತಪದಿ ಕಾರ್ಯಕ್ರಮವನ್ನು ಮರು ಚಾಲನೆಗೊಳಿಸಲು ಆದೇಶ ಹೊರಡಿಸಲಾಗಿದೆ.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಮುಜರಾಯಿ ಸಚಿವೆ ಶಶಿಕಲಾ ಜೊಲ್ಲೆ, ಕೋವಿಡ್ ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಎರಡು ವರ್ಷಗಳಿಂದ ಈ ಕಾರ್ಯಕ್ರಮವನ್ನು ಸ್ಥಗಿತಗೊಳಿಸಲಾಗಿತ್ತು. ಸೋಂಕಿನ ಪ್ರಮಾಣ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಮತ್ತೆ ಇದಕ್ಕೆ ಚಾಲನೆ ನೀಡಿದ್ದೇವೆ ಎಂದಿದ್ದಾರೆ.



ಶಶಿಕಲಾ ಜೊಲ್ಲೆ

ಮದುವೆಗೆ ದುಂದು ವೆಚ್ಚ ಮಾಡಿ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಒಳಗಾಗುವುದನ್ನು ತಪ್ಪಿಸಲು ಸರ್ಕಾರ ಉಚಿತ ಸಪ್ತಪದಿ ಸಾಮೂಹಿಕ ವಿವಾಹ ಯೋಜನೆಯನ್ನು ಪ್ರಾರಂಭಿಸಿತ್ತು. ವಧು ಮತ್ತು ವರನಿಗೆ ಉಡುಗೆ, ಬಂಗಾರದ ಉಡುಗೊರೆ ನೀಡುವ ಜೊತೆಗೆ, ಎರಡೂ ಕಡೆಯ ಬಂಧುಗಳಿಗೆ ಊಟೋಪಚಾರದ ವ್ಯವಸ್ಥೆಯನ್ನು ದೇವಾಲಯ ಆಡಳಿತ ಮಂಡಳಿಗಳೇ ಮಾಡುವುದು ಈ ಯೋಜನೆಯ ವಿಶೇಷ. ಏಪ್ರಿಲ್ ಮತ್ತು ಮೇ, 2022ರ ಆಯ್ದ ಎ ದರ್ಜೆಯ ದೇವಸ್ಥಾನಗಳಲ್ಲಿ, ಕೋವಿಡ್ ನಿಯಮಾವಳಿಗಳನ್ನು ಪಾಲಿಸುವ ಮೂಲಕ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಸಪ್ತಪದಿ ನಡೆಸಲು ಆದೇಶಿಸಲಾಗಿದೆ. ಕೋವಿಡ್ ಕಾರಣವಾಗಿ ಸ್ಥಗಿತಗೊಳಿಸಲಾಗಿದ್ದ ಸಪ್ತಪದಿ ಕಾರ್ಯಕ್ರಮಗಳಿಗೆ ಮರುಚಾಲನೆ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ಏ.28, 2022 ಮತ್ತು ಮೇ 11 ಮತ್ತು 25, 2022ರಂದು ಆಯ್ದ ದೇವಸ್ಥಾನಗಳಲ್ಲಿ ಉಚಿತ ಸಾಮೂಹಿಕ ವಿವಾಹವನ್ನು ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆ ಲಾಭ ಪಡೆದುಕೊಳ್ಳಲಿ ಎನ್ನುವುದು ನಮ್ಮ ಆಶಯವಾಗಿದೆ.

ಏ.18ರಿಂದ ತಾಲೂಕು ಮಟ್ಟದ ಆರೋಗ್ಯ ಮೇಳ



ಮೈಸೂರು, ಏ.13(ಆರ್‌ಕೆ)–ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ, ಚಿಕಿತ್ಸಾ ಸೌಲಭ್ಯ ಒದಗಿಸಲು ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಏ.18ರಿಂದ 22ರವರೆಗೆ ಆರೋಗ್ಯ ಮೇಳ ಏರ್ಪಡಿಸಿದ್ದು, ಅದಕ್ಕೆ ಸಿದ್ಧತೆ ಹಾಗೂ ವ್ಯಾಪಕ ಪ್ರಚಾರ ಮಾಡುವಂತೆ ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪೂರ್ವ ಸಿದ್ಧತಾ ಸಭೆ ನಡೆಸಿದ ಅವರು, ಏ.18ರಂದು ಕೆ.ಆರ್.ನಗರ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ, 19 ರಂದು ಮೈಸೂರು ನಗರದ ತುಳಸಿದಾಸ ಆಸ್ಪತ್ರೆ, ಪಿರಿಯಾಪಟ್ಟಣ ಹಾಗೂ ಹುಣಸೂರು ಸಾರ್ವಜನಿಕ ಆಸ್ಪತ್ರೆಗಳಲ್ಲಿ, 21ರಂದು ನಂಜನಗೂಡು, 22ರಂದು ಹೆಚ್.ಡಿ.ಕೋಟೆ ಮತ್ತು ತಿ.ನರಸೀಪುರ ಸರ್ಕಾರಿ ಆಸ್ಪತ್ರೆಗಳಲ್ಲಿ ಆರೋಗ್ಯ ಮೇಳ ಏರ್ಪಡಿಸಿ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ನೀಡುವಂತೆ ತಿಳಿಸಿದರು.

ಕೋವಿಡ್–19 ಮುಂಜಾಗ್ರತೆಗಾಗಿ ಅರಿವು ಮೂಡಿಸುವ ಜೊತೆಗೆ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆ ಆಯುಷ್ ಇಲಾಖೆ ಮತ್ತು ಆರೋಗ್ಯ ಇಲಾಖೆ ಯೋಜನೆಗಳ ಅನುಕೂಲಗಳ ಬಗ್ಗೆ ಜನರಿಗೆ ಮಾಹಿತಿ ನೀಡಿ ಅರಿವು ಮೂಡಿಸಲು ಮೇಳದಲ್ಲಿ ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯುವಂತೆಯೂ ಜಿಲ್ಲಾಧಿಕಾರಿಗಳು ಸಲಹೆ ನೀಡಿದರು. ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಪಿ.ಶಿವಪ್ರಸಾದ್ ಹಾಗೂ ಇತರರು ಸಭೆಯಲ್ಲಿ ಹಾಜರಿದ್ದರು.

ಏ.16, ಕೋಮಲಾಪುರದಲ್ಲಿ ಡಿಸಿ ವಾಸ್ತವ್ಯ

ಮೈಸೂರು, ಏ.13– ಕಂದಾಯ ಇಲಾಖೆಯ ವತಿಯಿಂದ ಜಾರಿಗೆ ತಂದಿರುವ ಜಿಲ್ಲಾಧಿಕಾರಿಗಳ ನಡೆ ಗ್ರಾಮದ ಕಡೆ ಕಾರ್ಯಕ್ರಮದ ಅಂಗವಾಗಿ ಮೈಸೂರು ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಏ.16ರಂದು ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಹೋಬಳಿಯ ಕೋಮಲಾಪುರ ಗ್ರಾಮದಲ್ಲಿ ವಾಸ್ತವ್ಯ ಹೂಡುವರು ಎಂದು ಅಪರ ಜಿಲ್ಲಾಧಿಕಾರಿ ಡಾ.ಬಿ.ಎಸ್.ಮಂಜುನಾಥಸ್ವಾಮಿ ತಿಳಿಸಿದ್ದಾರೆ.

ಸರ್ಕಾರದ ನಿರ್ದೇಶನದಂತೆ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ತಹಸೀಲ್ದಾರ್ ಅವರು ಪ್ರತಿ ಮಾಹೆ 3ನೇ ಶನಿವಾರದಂದು ಗ್ರಾಮ ಭೇಟಿ ಕಾರ್ಯಕ್ರಮವನ್ನು ನಡೆಸುವರು. ಗ್ರಾಮಕ್ಕೆ ಸಂಬಂಧಿಸಿದಂತೆ ಸಮಸ್ಯೆಗಳಿದ್ದಲ್ಲಿ ಗ್ರಾಮಸ್ಥರಿಂದ ಅರ್ಜಿಗಳನ್ನು ಸ್ವೀಕರಿಸಿ ಶೀಘ್ರವಾಗಿ ಸಮಸ್ಯೆಗಳನ್ನು ಇತ್ಯರ್ಥಪಡಿಸಬೇಕು ಎಂದು ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳು ಭೇಟಿ ನೀಡಲಿರುವ ತಾಲೂಕನ್ನು ಹೊರತುಪಡಿಸಿ ಉಪವಿಭಾಗಾಧಿಕಾರಿಗಳು ಮತ್ತು ಅಯಾ ತಹಸೀಲ್ದಾರ್ ಕೆ.ಆರ್.ನಗರ ತಾಲೂಕಿನ ಮಿರ್ಲೆ ಹೋಬಳಿಯ ನರಚನಹಳ್ಳಿ, ಹೆಚ್.ಡಿ.ಕೋಟೆ ತಾಲೂಕಿನ ಕಸಬಾ ಹೋಬಳಿಯ ಹೆಬ್ಬಲಗುಪ್ಪೆ, ಸರಗೂರು ತಾಲೂಕಿನ ಕೋದಲಿಕೆ ಹೋಬಳಿಯ ಬೆದ್ದಲಪುರ, ಮೈಸೂರು ತಾಲೂಕಿನ ಜಯಪುರ ಹೋಬಳಿಯ ಕಾಡನಹಳ್ಳಿ, ಹುಣಸೂರು ತಾಲೂಕಿನ ಹನಗೋಡು ಹೋಬಳಿಯ ಶೆಟ್ಟಹಳ್ಳಿ, ತಿ.ನರಸೀಪುರ ತಾಲೂಕಿನ ಸೋಸಲೆ ಹೋಬಳಿಯ ಬಿನಕನಹಳ್ಳಿ ಗ್ರಾಮಗಳಲ್ಲಿ ಕಾರ್ಯಕ್ರಮಗಳನ್ನು ನಡೆಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಪಾಲಿಕೆಯಿಂದ ಸ್ವಚ್ಛತಾ ಕಾರ್ಯಕ್ಕೆ 26 ಹೊಸ ವಾಹನ

ಜಿಲ್ಲಾ ಉಸ್ತುವಾರಿ ಸಚಿವ ಸೋಮಶೇಖರ್‌ರಿಂದ ಹಸಿರು ನಿಶಾನೆ

ಮೈಸೂರು,ಏ.13(ಪಿಎಂ)–ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡುವ ಸಲುವಾಗಿ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ವಿವಿಧ ಅನುದಾನದಡಿ ಖರೀದಿಸಿರುವ ನಾನಾ ರೀತಿಯ 26 ವಾಹನಗಳಿಗೆ ಪಾಲಿಕೆ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಬುಧವಾರ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಕೇಂದ್ರ ಸರ್ಕಾರದ ಸ್ವಚ್ಛ ಭಾರತ ಅಭಿಯಾನದ ಅನುದಾನದಲ್ಲಿ 4.27 ಕೋಟಿ ರೂ. ವೆಚ್ಚದಲ್ಲಿ 12 ಕಾಂಪ್ಯಾಕ್ಟರ್ ಟ್ರಕ್‌ಗಳನ್ನು ಖರೀದಿಸಲಾಗಿದೆ. ಇವು ಮನೆ ಮನೆಗಳಿಂದ ಸಂಗ್ರಹಿಸಿದ ತ್ಯಾಜ್ಯವನ್ನು ವಿಲೇವಾರಿ ಘಟಕಕ್ಕೆ ಸಾಗಾಣಿಕೆ ಮಾಡಲು ಬಳಕೆಯಾಗಲಿವೆ.

ಅಲ್ಲದೆ, 15ನೇ ಹಣಕಾಸು ಯೋಜನೆಯಡಿ 2.10 ಕೋಟಿ ರೂ. ವೆಚ್ಚದಲ್ಲಿ 5 ಬ್ಯಾಕ್‌ಹೋ ಲೋಡರ್‌ಗಳು, 2 ಎಸ್ಕವೇಟರ್ ಹಾಗೂ 1.63 ಕೋಟಿ ರೂ. ವೆಚ್ಚದಲ್ಲಿ 7 ಮಿನಿ ಟಿಪ್ಪರ್‌ಗಳನ್ನು ಖರೀದಿಸಲಾಗಿದೆ. ಘನತ್ಯಾಜ್ಯ ಸಂಗ್ರಹಣೆ ಮತ್ತು ಸಾಗಾಣಿಕೆ, ಮಳೆ ನೀರು ಚರಂಡಿ ಹಾಗೂ ಖಾಲಿ ನಿವೇಶನ ಸಚ್ಛತೆಗಾಗಿ ಈ ವಾಹನಗಳನ್ನು ಖರೀದಿಸಲಾಗಿದೆ. ಇದರಿಂದ ಮಳೆ ನೀರು ಚರಂಡಿ ಹಾಗೂ ಖಾಲಿ ನಿವೇಶನ ಸಚ್ಛತೆಗೆ ವಾರ್ಷಿಕವಾರು ವ್ಯಯಿಸುತ್ತಿದ್ದ ವೆಚ್ಚದಲ್ಲಿ 4.86 ಕೋಟಿ ರೂ. ಉಳಿತಾಯವಾಗಲಿದೆ ಎಂದು ಪಾಲಿಕೆ ಪ್ರಕಟಣೆಯಲ್ಲಿ ಹೇಳಲಾಗಿದೆ.

ಆನ್‌ಲೈನ್ ರಹದಾರಿ ಸೇವೆಗೆ ಚಾಲನೆ: ಇದೇ ವೇಳೆ ಪಾಲಿಕೆಯ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಆನ್‌ಲೈನ್‌ನಲ್ಲಿ ಉದ್ದಿಮೆ ರಹದಾರಿ ಪಡೆಯುವ ವ್ಯವಸ್ಥೆಗೆ ಸಂಸದ ಪ್ರತಾಪ್ ಸಿಂಹ ಚಾಲನೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಉದ್ದಿಮೆ ರಹದಾರಿ ಪಡೆಯುವ ವಿಧಾನ ಪರಿಣಾಮಕಾರಿಗೊಳಿಸಲು ಮತ್ತು ಸುಲಭ ರೀತಿಯಲ್ಲಿ ಸೇವೆ ಲಭ್ಯವಾಗುವಂತೆ ಮಾಡುವ ಉದ್ದೇಶದಿಂದ ಪಾಲಿಕೆ ಈ ಸಂಬಂಧ ಆನ್‌ಲೈನ್ ತಂತ್ರಾಂಶ ಅಭಿವೃದ್ಧಿಪಡಿಸಿದೆ. ಪಾಲಿಕೆಯ ವೆಬ್‌ಸೈಟ್‌ಗೆ ಭೇಟಿ ನೀಡಿ ಈ ಸೇವೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಈ ವೇಳೆ ಸಾಂಕೇತಿಕವಾಗಿ ಒಬ್ಬರು ಉದ್ದಿಮೆದಾರರಿಗೆ ಉದ್ದಿಮೆ ಪರವಾನಗಿ ಪತ್ರವನ್ನು ಆನ್‌ಲೈನ್ ಮೂಲಕ ನೀಡಲಾಯಿತು.

ಈ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಸಂಸದ ಪ್ರತಾಪ್ ಸಿಂಹ, ಸ್ವಚ್ಛತಾ ಕಾರ್ಯಕ್ಕಾಗಿ ಸ್ವಚ್ಛ ಭಾರತ್ ಮತ್ತು 15ನೇ ಹಣಕಾಸು ಯೋಜನೆಯಡಿ ಅನುದಾನದಲ್ಲಿ ಖರೀದಿಸಿರುವ ವಾಹನಗಳಿಗೆ ಚಾಲನೆ ನೀಡಲಾಗಿದೆ. ಈ ಹಿಂದೆ ಅಗತ್ಯವಿದ್ದಾಗ ವಾಹನಗಳನ್ನು ಬಾಡಿಗೆಗೆ ತೆಗೆದುಕೊಳ್ಳುವ ವ್ಯವಸ್ಥೆ ಇತ್ತು. ಈಗ ಪಾಲಿಕೆಗೆ ಸ್ವಂತ ವಾಹನಗಳು ದೊರೆತಿವೆ ಎಂದು ಹರ್ಷ ವ್ಯಕ್ತಪಡಿಸಿದರು.



ಮೈಸೂರು ಮಹಾನಗರ ಪಾಲಿಕೆ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ಕಾಗಿ ನೂತನವಾಗಿ ಖರೀದಿಸಿರುವ ವಾಹನಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಹಸಿರು ನಿಶಾನೆ ತೋರಿದರು.

ಸಹಾಯ ಧನದ ಚೆಕ್ ವಿತರಣೆ: ಪಾಲಿಕೆಯ ಕಳೆದ ಬಜೆಟ್‌ನಲ್ಲಿ ಪತ್ರಕರ್ತರ ವೈದ್ಯಕೀಯ ಸಹಾಯ ಧನಕ್ಕಾಗಿ 25 ಲಕ್ಷ ರೂ. ಮೀಸಲಿಟ್ಟಿದ್ದು, ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಸಾಂಕೇತಿಕವಾಗಿ ಐವರು ಫಲಾನುಭವಿಗಳಿಗೆ ಸಹಾಯಧನದ ಚೆಕ್‌ಗಳನ್ನು ವಿತರಣೆ ಮಾಡಲಾಯಿತು. ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಸಮ್ಮುಖದಲ್ಲಿ ಚೆಕ್‌ಗಳನ್ನು ವಿತರಿಸಲಾಯಿತು.

ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಪಾಲಿಕೆ ಆರೋಗ್ಯಾಧಿಕಾರಿ ಡಾ.ನಾಗರಾಜ್, ಯಾವುದೇ ಮಾರಣಾಂತಿಕ ಕಾಯಿಲೆ ಅಥವಾ ಕೋವಿಡ್‌ಗೆ ತುತ್ತಾದವರು ಈ ಸಹಾಯಧನ ಪಡೆಯಲು ಅವಕಾಶ ಇದೆ. ಆಸ್ಪತ್ರೆಯ ಬಿಲ್‌ಗಳು ಹಾಗೂ ಬಿಡುಗಡೆಗೊಂಡ ಪತ್ರಗಳನ್ನು ಲಗತ್ತಿಸಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಮೂಲಕ ಅರ್ಜಿ ಸಲ್ಲಿಸಬಹುದು ಎಂದರು.



ಮೈಸೂರು ಪಾಲಿಕೆ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಪತ್ರಕರ್ತರಿಗೆ ನೀಡಿದ ವೈದ್ಯಕೀಯ ಸಹಾಯಧನದ ಚೆಕ್ ಅನ್ನು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಸಚಿವರಿಂದ ಸ್ವೀಕರಿಸಿದರು.

ಈವರೆಗೆ 24 ಅರ್ಜಿಗಳು ಬಂದಿದ್ದವು. ಈ ಪೈಕಿ ಇಂದು ಐವರಿಗೆ ಚೆಕ್ ವಿತರಣೆ ಮಾಡಲಾಗಿದೆ. ಉಳಿದ ಅರ್ಜಿಗಳನ್ನು ಪರಿಶೀಲಿಸಿ, ವಿಲೇವಾರಿ ಮಾಡಲಾಗುವುದು. ಕಳೆದ ಬಜೆಟ್‌ನಲ್ಲಿ ಮೀಸಲಿಟ್ಟಿರುವ 25 ಲಕ್ಷ ರೂ. ಅನುದಾನ ಲಭ್ಯವಿರುವವರೆಗೆ ಈ ವೈದ್ಯಕೀಯ ಸಹಾಯಧನ ನೀಡಲಾಗುವುದು. ಮುಂದಿನ ಬಜೆಟ್‌ನಲ್ಲಿ ಈ ವ್ಯವಸ್ಥೆ ಮುಂದುವರೆಸಲು ತೀರ್ಮಾನಿಸಿದರೆ, ಪತ್ರಕರ್ತರ ಮತ್ತೆ ಸೌಲಭ್ಯ ಪಡೆಯಬಹುದು ಎಂದರು. ಶಾಸಕರಾದ ತನ್ವೀರ್ ಸೇಠ್, ಎಲ್.ನಾಗೇಂದ್ರ, ಹರ್ಷವರ್ಧನ್, ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್, ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ್ ರೆಡ್ಡಿ, ಜಿಪಂ ಸಿಇಓ ಪೂರ್ಣಿಮಾ, ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಹಂಗಾಮಿ ಉಪ ಮೇಯರ್ ಅನ್ವರ್‌ಬೇಗ್, ಮಾಜಿ ಮೇಯರ್‌ಗಳಾದ ಅಯೂಬ್‌ಖಾನ್, ಆರೀಫ್ ಹುಸೇನ್, ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಬಿ.ರಾಘವೇಂದ್ರ, ಜಿಲ್ಲಾ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸುಬ್ರಹ್ಮಣ್ಯ, ಕಾರ್ಯದರ್ಶಿ ರಂಗಸ್ವಾಮಿ ಮತ್ತಿತರರು ಹಾಜರಿದ್ದರು.

ಬೃಹತ್ ಮೈಸೂರು ಮಹಾನಗರ ಪಾಲಿಕೆ ಸಂಬಂಧ ಮತ್ತೊಂದು ಸಭೆ

ತ್ವರಿತಗತಿಯಲ್ಲಿ ಪ್ರಸ್ತಾವನೆ ಸಿದ್ಧಪಡಿಸಲು ಸೂಚನೆ; ಸಂಸದ ಪ್ರತಾಪ್ ಸಿಂಹ

ಮೈಸೂರು,ಏ.13(ಪಿಎಂ)–ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಸಂಬಂಧ ತ್ವರಿತಗತಿಯಲ್ಲಿ ಪ್ರಸ್ತಾವನೆ ಸಿದ್ಧಪಡಿಸುವಂತೆ ಜಿಲ್ಲಾಧಿಕಾರಿಗಳು ಹಾಗೂ ಪಾಲಿಕೆ ಆಯುಕ್ತರಿಗೆ ಸೂಚನೆ ನೀಡಲಾಗಿದೆ ಎಂದು ಸಂಸದ ಪ್ರತಾಪ್ ಸಿಂಹ ಹೇಳಿದರು.

ಮೈಸೂರು ಮಹಾನಗರ ಪಾಲಿಕೆ ಆವರಣದಲ್ಲಿ ಬುಧವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಸಂಬಂಧ ಮತ್ತೊಂದು ಸುತ್ತಿನ ಸಭೆ ನಡೆಸಲಾಗಿದೆ ಎಂದರು.

ಹೂಟಗಳ್ಳಿ ನಗರಸಭೆ, ಬೋಗಾದಿ, ಶ್ರೀರಾಂಪುರ ಹಾಗೂ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ, ಚಾಮುಂಡಿಬೆಟ್ಟ, ಆಲನಹಳ್ಳಿ, ಸಿದ್ದಲಿಂಗಪುರ ಹಾಗೂ ಇಲವಾಲ ಗ್ರಾಮ ಪಂಚಾಯಿತಿ ಹಾಗೂ ಕಡಕೊಳ ಪಟ್ಟಣ ಪಂಚಾಯಿತಿ ಸೇರ್ಪಡೆಗೊಳಿಸಿ ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚಿಸಲು ಅಗತ್ಯವಿರುವ ಎಲ್ಲಾ ಸಿದ್ಧತೆ ಮಾಡಿಕೊಳ್ಳುವಂತೆ ಉಸ್ತುವಾರಿ ಸಚಿವರು ಸೂಚನೆ ನೀಡಿದ್ದಾರೆ. ಸರ್ಕಾರಕ್ಕೆ ಸಲ್ಲಿಸಲು ತ್ವರಿತಗತಿಯಲ್ಲಿ ಪ್ರಸ್ತಾವನೆ ಸಿದ್ಧಪಡಿಸಲು ಸಚಿವರು ನಿರ್ದೇಶನ ನೀಡಿದ್ದಾರೆ ಎದರು.

ರಾಜ್ಯದಲ್ಲಿ ಕೃಷಿ ನಿರ್ದೇಶನಾಲಯ ರಚನೆ

- ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಗುಡಿ ಕೈಗಾರಿಕೆಯಿಂದ ರೈತರಿಗೆ ಹೆಚ್ಚಿನ ಆದಾಯ, ಉದ್ಯೋಗ
- ಪ್ರಧಾನಿ ಮೋದಿ ಕನಸು ನನಸು ಮಾಡಿದ ಮೊದಲ ರಾಜ್ಯ: ಬಿ.ಸಿ.ಪಾಟೀಲ್

ಬೆಂಗಳೂರು, ಏ.13 (ಕೆಎಂಶಿ)– ರಾಜ್ಯದಲ್ಲಿ ಕೃಷಿ ನಿರ್ದೇಶನಾಲಯ (ಡೈರೆಕ್ಟರೇಟ್ ಆಫ್ ಸೆಕೆಂಡರಿ ಅಗ್ರಿಕಲ್ಚರ್) ರಚನೆ ಕುರಿತ ಪ್ರಧಾನಿಯವರ ಕನಸನ್ನು ರಾಜ್ಯದಲ್ಲಿ ಪ್ರಥಮ ಬಾರಿಗೆ ಅನುಷ್ಠಾನಗೊಳಿಸಲಾಗಿದೆ ಎಂದು ಕೃಷಿ ಸಚಿವ ಬಿ.ಸಿ. ಪಾಟೀಲ್ ಇಂದಿಲ್ಲಿ ತಿಳಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಪ್ರಾಣಿಜನ್ಯ ಉತ್ಪನ್ನಗಳ ಸಂಸ್ಕರಣೆ, ಗುಡಿ ಕೈಗಾರಿಕೆ ಮೂಲಕ ರೈತರಿಗೆ ಹೆಚ್ಚಿನ ಆದಾಯ, ಉದ್ಯೋಗ ಹೆಚ್ಚಳ ಸಾಧ್ಯವಾಗಿದೆ. ಕೃಷಿ ಉಪ ಉತ್ಪನ್ನಗಳ ತಯಾರಿಕೆಯೂ ಸಾಧ್ಯವಾಗುತ್ತಿದೆ ಎಂದರು.

ಆತ್ಮನಿರ್ಭರ್ ಯೋಜನೆಯಡಿ ಆಹಾರ ಸಂಸ್ಕರಣಾ ಘಟಕಗಳನ್ನು ರಚಿಸಲು ಸೆಕೆಂಡರಿ ಡೈರೆಕ್ಟರೇಟ್ ನೆರವಾಗಲಿದೆ. ಇದರಡಿ ಘಟಕಕ್ಕೆ ಪಡೆದ ಸಾಲಕ್ಕೆ ಶೇ.35ರಷ್ಟು ಸಬ್ಸಿಡಿ ಸಿಗಲಿದೆ ಎಂದು ತಿಳಿಸಿದರು. ಅಲ್ಲದೆ ರಾಜ್ಯ ಸರಕಾರವು ಶೇ.15 ಸಬ್ಸಿಡಿ ನೀಡಲಿದ್ದು, ಒಟ್ಟು 50 ಶೇ. ಸಬ್ಸಿಡಿ ಸಿಗಲಿದೆ ಎಂದು ನುಡಿದರು.

ಯಡಿಯೂರಪ್ಪನವರು ಮುಖ್ಯಮಂತ್ರಿ ಆಗಿದ್ದಾಗ ರೈತರ ಮಕ್ಕಳಿಗೆ ಕೃಷಿ ಕಾಲೇಜು ಸೇರಲು ಶೇ.40ರಷ್ಟು ಮೀಸಲಾತಿ ಇತ್ತು. 2021ರಲ್ಲಿ ಶೇ.50ಕ್ಕೆ ಮೀಸಲಾತಿಯನ್ನು ಹೆಚ್ಚಿಸಲಾಗಿದೆ. ಕಳೆದ ವರ್ಷ 186 ಜನ ರೈತರ ಮಕ್ಕಳಿಗೆ ಹೆಚ್ಚುವರಿ ಸೀಟು ಲಭಿಸಿದೆ. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾದ ಬಳಿಕ ರೈತ ವಿದ್ಯಾನಿಧಿ ಆರಂಭ ಮಾಡಿದ್ದು, ಇದರಿಂದ 7.13 ಲಕ್ಷ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ರೂ. 261 ಕೋಟಿ ವಿದ್ಯಾರ್ಥಿವೇತನ ಸಿಕ್ಕಿದೆ. ಇದು ಕೂಡ ದೇಶದಲ್ಲೇ ಮೊದಲು ಎಂದು ತಿಳಿಸಿದರು. ಇದರಲ್ಲಿ ಜಾತಿ ಧರ್ಮದ ಭೇದ ಇಲ್ಲ ಎಂದರು.

ಕರ್ನಾಟಕದಲ್ಲಿ ಒಟ್ಟು 742 ರೈತ ಸಂಪರ್ಕ ಕೇಂದ್ರಗಳಿದ್ದು, ಅದರಲ್ಲಿ 694 ಕೃಷಿ ಯಾಂತ್ರೀಕರಣ ಕೇಂದ್ರಗಳನ್ನು ಸ್ಥಾಪಿಸಿ 22 ಲಕ್ಷ ರೈತರು ಪ್ರಯೋಜನ ಪಡೆಯುತ್ತಿದ್ದಾರೆ. ಇಲ್ಲಿ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆಗೆ ಕೊಡಲಾಗುತ್ತಿದೆ. ಟ್ರ್ಯಾಕ್ಟರ್ ಮತ್ತಿತರ ಉಪಕರಣ ಇಲ್ಲದ ರೈತರಿಗೆ ಇದರಿಂದ ಪ್ರಯೋಜನ ಸಿಗುತ್ತಿದೆ ಎಂದು ವಿವರ ನೀಡಿದರು. ಕೃಷಿ ಯಂತ್ರೋಪಕರಣ ಬ್ಯಾಂಕ್ ಕೂಡ ಆರಂಭವಾಗಿದೆ ಎಂದರು.

ರಾಜ್ಯದಲ್ಲಿ ರಸಗೊಬ್ಬರದ ಯಾವುದೇ ಕೊರತೆ ಇಲ್ಲ. 50 ಸಾವಿರ ಮೆಟ್ರಿಕ್ ಟನ್ ಗೊಬ್ಬರವನ್ನು ಈ ವರ್ಷಕ್ಕಾಗಿ ನಾವು ದಾಸ್ತಾನು ಮಾಡಿದ್ದೇವೆ. ಯೂರಿಯಾ 30 ಸಾವಿರ ಮೆ.ಟನ್ ಇದ್ದು, ಡಿಎಪಿ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನಿದೆ. ಸೂಕ್ಷ್ಮ ನೀರಾವರಿಗೂ ಆದ್ಯತೆ ಕೊಡುತ್ತಿದ್ದು, ನೆರವು ನೀಡಲಾಗುತ್ತಿದೆ ಎಂದರು.

ರಿವಾರ್ಡ್ ರಿಜುವನೇಟಿಂಗ್ ವಾಟರ್‌ಶೆಡ್ ಫಾರ್ ಅಗ್ರಿಕಲ್ಚರ್ ಯೋಜನೆಯು ಕರ್ನಾಟಕಕ್ಕೆ ಸಿಕ್ಕಿದ್ದು, ರಾಜ್ಯದ 21 ಜಿಲ್ಲೆಗಳಲ್ಲಿ 600 ಕೋಟಿ ವೆಚ್ಚದಡಿ ಮುಂದಿನ 5 ವರ್ಷಗಳಲ್ಲಿ ಅನುಷ್ಠಾನಕ್ಕೆ ಬರಲಿದೆ. ನ್ಯೂ ಜನರೇಷನ್ ವಾಟರ್‌ಶೆಡ್ ಯೋಜನೆಯಡಿ 642 ಕೋಟಿ ಮೊತ್ತವನ್ನು 51 ತಾಲೂಕುಗಳಲ್ಲಿ ಖರ್ಚು ಮಾಡುತ್ತಿ ದ್ದೇವೆ. ಕಳಪೆ ರಸಗೊಬ್ಬರ, ಕಳಪೆ ಬಿತ್ತನೆ ಬೀಜ ಮಾರಾಟದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುತ್ತಿದ್ದೇವೆ ಎಂದರು. ಜಾಗೃತ ದಳವನ್ನು ಪೊಲೀಸ್ ಮಾದರಿಯಲ್ಲಿ ಜಾಗೃತಗೊಳಿಸಿ ಪರಿವರ್ತಿಸಲಾಗಿದೆ ಎಂದು ಬಿ.ಸಿ.ಪಾಟೀಲ್ ತಿಳಿಸಿದರು.

ರೈತರ ಟ್ರ್ಯಾಕ್ಟರ್ ಸಂಬಂಧ ಡೀಸೆಲ್‌ಗೆ ಸಬ್ಸಿಡಿ ನೀಡಲಾಗುತ್ತಿದೆ. ಇದು ಕೂಡ ದೇಶದಲ್ಲೇ ಮೊದಲ ಬಾರಿಗೆ ಜಾರಿಯಾಗಿದೆ. ಈ ಬಾರಿ ಬಳ್ಳಾರಿ ಜಿಲ್ಲೆಯ ಹಗರಿ ಹಾಗೂ ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ಕೃಷಿ ಕಾಲೇಜು ಆರಂಭವಾಗಲಿದೆ. ಮಹಿಳೆಯರಿಗೆ ಪ್ರತ್ಯೇಕ ಕೃಷಿ ಪಂಡಿತ ಪ್ರಶಸ್ತಿ ಕೊಡಲಾಗುವುದು ಎಂದರು.

2020–21ರಲ್ಲಿ ರಾಜ್ಯವು ಕೋವಿಡ್ ಸಂಕಷ್ಟದಲ್ಲಿದ್ದರೂ 160.55 ಲಕ್ಷ ಮೆಟ್ರಿಕ್ ಟನ್ ಆಹಾರವನ್ನು ಉತ್ಪಾದಿಸಲಾಗಿದೆ. ಇದು ಹಿಂದಿನ ವರ್ಷದ ಉತ್ಪಾದನೆಯಲ್ಲಿ ಶೇ.10ರಷ್ಟು ಹೆಚ್ಚಳದ ಸಾಧನೆಯಾಗಿದೆ. ಕೃಷಿಕರು ಕೋವಿಡ್ ಇದ್ದರೂ ಹಿಂದೆ ಸರಿಯದೆ ಇದ್ದುದಕ್ಕೆ ಇದು ಉದಾಹರಣೆ ಎಂದು ಮಾಹಿತಿ ನೀಡಿದರು.

ಫಸಲ್ ಬಿಮಾ ಯೋಜನೆಯಲ್ಲಿ ನಾವು 2019–20ನೇ ಸಾಲಿನಲ್ಲಿ 7.32 ಲಕ್ಷ ಫಲಾನುಭವಿಗಳಿಗೆ 843 ಕೋಟಿ, 20–21ರಲ್ಲಿ 4.60 ಲಕ್ಷ ರೈತರಿಗೆ 580 ಕೋಟಿ ಬೆಳೆ ವಿಮಾ ಪರಿಹಾರ ಕೊಡಲಾಗಿದೆ. 2021ರ ಮುಂಗಾರು ಹಂಗಾಮಿನಲ್ಲಿ 48 ಸಾವಿರಕ್ಕೂ ಹೆಚ್ಚು ಫಲಾನುಭವಿಗಳಿಗೆ ಬೆಳೆ ಹಾನಿಗೆ ಸಂಬಂಧಿಸಿ 25.15 ಕೋಟಿ ಬೆಳೆ ವಿಮೆ ಪರಿಹಾರವನ್ನು ಇತ್ಯರ್ಥ ಪಡಿಸಲಾಗಿದೆ ಎಂದರು.

ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ 2020–21 ಸಾಲಿನಲ್ಲಿ ರಾಜ್ಯದಿಂದ 49.18 ಲಕ್ಷ ರೈತರಿಗೆ 983.71 ಕೋಟಿ ಹಣವನ್ನು ನೇರ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿದೆ. 2021–22ರಲ್ಲಿ ಇದುವರೆಗೆ 50,035 ರೈತರಿಗೆ 1,977 ಕೋಟಿ ರೂ. ಆರ್ಥಿಕ ನೆರವು ನೀಡಲಾಗಿದೆ. ಕೇಂದ್ರ ಸರಕಾರ– ರಾಜ್ಯ ಸರಕಾರ ಸೇರಿ 2020–21 ಸಾಲಿನಲ್ಲಿ 52 ಲಕ್ಷಕ್ಕೂ ಹೆಚ್ಚು ರೈತರಿಗೆ 3,113 ಕೋಟಿ ಹಾಗೂ 2021–22ರಲ್ಲಿ 53 ಲಕ್ಷಕ್ಕೂ ಹೆಚ್ಚು ರೈತರಿಗೆ 2,809 ಕೋಟಿ ಹಣವನ್ನು ಇದುವರೆಗೆ ನೀಡಿದೆ ಎಂದರು.



ವಿಶ್ವರತ್ನ ಡಾ.ಅಂಬೇಡ್ಕರ್ ಅವರ 131ನೇ ಜಯಂತಿ ಪ್ರಯುಕ್ತ ಭಾರತ ಸಂವಿಧಾನದ ಪ್ರತಿಯನ್ನು ಮಂಡ್ಯ ಸಂಸದೆ ಸುಮಲತಾ ಅಂಬರೀಶ್, ಅವರ ಪುತ್ರ ಚಲನಚಿತ್ರ ನಟ ಜೂನಿಯರ್ ರೆಬಲ್ ಸ್ಟಾರ್ ಅಭಿಷೇಕ್ ಅಂಬರೀಶ್ ಹಾಗೂ ಆಕ್ಷನ್ ಪ್ರಿನ್ಸ್ ಧ್ರುವಸರ್ಜಾ ಅವರಿಗೆ ಅಶೋಕಪುರಂ ಯುವ ಮುಖಂಡ ಮದನ್ ನೀಡಿದರು.

ಪೌರಕಾರ್ಮಿಕರ ಪರ ಅನೇಕ ಯೋಜನೆ ನೀಡಿದ ಸರ್ಕಾರ; ಶ್ಲಾಘನೆ

ಮೈಸೂರು, ಏ.13(ಆರ್‌ಕೆಬಿ)– ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಅನೇಕ ಪ್ರೋತ್ಸಾಹಕ ಯೋಜನೆ ಪ್ರಕಟಿಸಿರುವುದಕ್ಕಾಗಿ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ರಾಜ್ಯ ಸಫಾಯಿ ಕರ್ಮಚಾರಿ, ಮ್ಯಾನ್ಯುವಲ್ ಸ್ಕ್ಯಾವೆಂಜರ್ ಉಸ್ತುವಾರಿ ಸಮಿತಿ ವತಿಯಿಂದ ಕೃತಜ್ಞತೆ ಸಲ್ಲಿಸುವುದಾಗಿ ರಾಜ್ಯ ಸಮಿತಿ ಸದಸ್ಯ ಎಂ.ವಿ.ವೆಂಕಟೇಶ್ ತಿಳಿಸಿದರು. ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಐಪಿಡಿ ಸಾಲಪ್ಪ ರಾಜ್ಯ ಪ್ರಶಸ್ತಿ ಘೋಷಣೆ, ಪೌರಕಾರ್ಮಿಕರು ಕ್ಲಿಷ್ಟಕರ ಹಾಗೂ ಅಪಾಯಕಾರಿ ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸುವುದನ್ನು ಗಮನದಲ್ಲಿರಿಸಿಕೊಂಡು ಮೊಟ್ಟ ಮೊದಲ ಬಾರಿಗೆ ಪ್ರತಿ ತಿಂಗಳು 2 ಸಾವಿರ ರೂ.ನಂತೆ ಸಂಕಷ್ಟ ಭತ್ಯೆ, ಬೆಳಗಿನ ಉಪಾಹಾರಕ್ಕೆ ಹಣವನ್ನು 20ರಿಂದ 35 ರೂ.ಗೆ ಹೆಚ್ಚಳ ಮಾಡಲಾಗಿದೆ. ಜೊತೆಗೆ ವಿವಿಧ ವಿಮೆಗೂ ಅವಕಾಶ ಮಾಡಿಕೊಡುವ ಮೂಲಕ ಸರ್ಕಾರ ಪೌರ ಕಾರ್ಮಿಕರ ಪರ ಇದೆ ಎಂಬುದನ್ನು ತೋರಿಸಿಕೊಟ್ಟಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸುಬ್ರಮಣಿ ಉಪಸ್ಥಿತರಿದ್ದರು.

ಶಿಕ್ಷಕರ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಸಂಬಂಧ ನಾಳೆ ಉಚಿತ ಸಂವಾದ

ಮೈಸೂರು, ಏ.13–ಕೃಷಿಕ್ ಸರ್ವೋದಯ ಫೌಂಡೇಷನ್ ಸಂಸ್ಥೆಯು ಶುಕ್ರವಾರ ಬೆಳಗ್ಗೆ 11 ಗಂಟೆಗೆ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ 15,000 ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿಗೆ ಸಂಬಂಧಿಸಿದಂತೆ ಉಚಿತ ಸಂವಾದ ಕಾರ್ಯಕ್ರಮವನ್ನು ಕೃಷಿಕ್ ಭವನ, ಸಿ.ಎ.–25, ಜ.ಕೆ.ಎಸ್.ತಿಮ್ಮಯ್ಯ ರಸ್ತೆ, ವಿಜಯನಗರ 2ನೇ ಹಂತ, ಮೈಸೂರು ಇಲ್ಲಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ನುರಿತ ವಿಷಯ ತಜ್ಞರು, ಸಂಪನ್ಮೂಲ ವ್ಯಕ್ತಿಗಳು ಹಾಗೂ ಇತ್ತೀಚೆಗೆ ತೇರ್ಗಡೆಗೊಂಡ ಅಭ್ಯರ್ಥಿಗಳು ಭಾಗವಹಿಸಲಿದ್ದಾರೆ. ಹೆಚ್ಚಿನ ಮಾಹಿತಿಗೆ ಮುಖ್ಯ ಸಂಯೋಜಕ ಡಾ. ಜಿ.ಗೋವಿಂದರಾಜು ಅವರನ್ನು ದೂ.ಸಂಖ್ಯೆ: 0821–2301564/9945752592/9611855309 ಸಂಪರ್ಕಿಸಬಹುದು.



ಭಾನುವಾರ (ಏ.17)ದಂದು ನಡೆಯಲಿರುವ 30 ಜೊತೆ ಕಾಟ ಕುಸ್ತಿ ಪಂದ್ಯಾವಳಿ ಹಿನ್ನೆಲೆಯಲ್ಲಿ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಈ ವೇಳೆ ಕಾಟ ಕುಸ್ತಿ ಸಂಘದ ಅಧ್ಯಕ್ಷ ಇಟ್ಟಿಗೆಗೂಡು ಚಂದ್ರಶೇಖರ್, ಕೆಜಿ ಕೊಪ್ಪಲು ಮಂಜುನಾಥ, ತರಬೇತುದಾರರಾದ ಶ್ರೀನಿವಾಸ್‌ಗೌಡ, ಪಡುವಾರಹಳ್ಳಿ ಪೈಲ್ವಾನ್ ಚಂದ್ರು, ಆರ್.ಕೆ.ರವಿ, ವೆಂಕಟೇಶ, ಗಿರೀಶ್ ಇನ್ನಿತರರು ಉಪಸ್ಥಿತರಿದ್ದರು.

ದ್ವಿತೀಯ ಪಿಯುಸಿ ಪರೀಕ್ಷೆ: ನಿಷೇಧಾಜ್ಞೆ

ಮೈಸೂರು, ಏ.13– ಮೈಸೂರು ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯಲಿದ್ದು, ಏ.22ರಿಂದ ಮೇ 18ರವರೆಗೆ (ರಜಾ ದಿನಗಳನ್ನು ಹೊರತುಪಡಿಸಿ) ಪರೀಕ್ಷೆಗಳು ನಡೆಯಲಿರುವ ಕೇಂದ್ರಗಳ ವ್ಯಾಪ್ತಿಯ ಸುತ್ತಲೂ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ಕಲಂ 144 ಸಿ.ಆರ್.ಪಿ.ಸಿ. ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ. ಈ ಪ್ರದೇಶಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸಂಚರಿಸಬಾರದು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳನ್ನು ಪರೀಕ್ಷಾ ಅವಧಿಯ ಅರ್ಧ ಗಂಟೆ ಮುಂಚೆ ಹಾಗೂ ಪರೀಕ್ಷೆ ಮುಗಿಯುವವರೆಗೆ ಮುಚ್ಚುವಂತೆ ಆದೇಶಿಸಿ ಮೈಸೂರು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಬಗಾದಿ ಗೌತಮ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದರ ಪರಿಷ್ಕರಣೆ: ಆಟೋ ಚಾಲಕರಿಗೆ ಸೂಚನೆ

ಮೈಸೂರು, ಏ.13– ಮೈಸೂರು ಜಿಲ್ಲೆಯಲ್ಲಿರುವ ಆಟೋರಿಕ್ಷಾಗಳ ಬಾಡಿಗೆ ದರ ಪರಿಷ್ಕರಣೆಯಾಗಿದ್ದು, ರಿಕ್ಷಾ ಮೀಟರ್‌ಗಳನ್ನು ಹೊಸ ದರಕ್ಕೆ ಅಳವಡಿಸಿಕೊಳ್ಳಲು ಮಾ.31ರವರೆಗೆ ಕಾಲಾವಕಾಶ ನೀಡಲಾಗಿತ್ತು. ಆದರೂ ಕೇವಲ 2000 ಆಟೋಗಳ ಮೀಟರ್‌ಗಳು ಮಾತ್ರ ದರ ಪರಿಷ್ಕರಣೆಯಾಗಿದೆ.

ಮೈಸೂರು ಜಿಲ್ಲೆಯಲ್ಲಿ ಸಂಚರಿಸುವ ಎಲ್ಲಾ ಆಟೋರಿಕ್ಷಾ ಮಾಲೀಕರು ಹಾಗೂ ಚಾಲಕರು ಆಟೋರಿಕ್ಷಾ ಮೀಟರ್‌ಗಳನ್ನು ಮೊದಲ 2 ಕಿ.ಮೀ.ಗಳಿಗೆ ಕನಿಷ್ಠ ದರವನ್ನು 30 ರೂಗೆ ಅಧಿಕೃತ ದುರಸ್ತಿದಾರರಿಂದ ಬದಲಾಯಿಸಿಕೊಂಡು ನಿಗದಿತ ದಿನಾಂಕದೊಳಗೆ ಸತ್ಯಾಪನೆ ಹಾಗೂ ಮುದ್ರೆ ಹಾಜರುಪಡಿಸಬೇಕು ಎಂದು ಮೈಸೂರು ವೃತ್ತದ ಕಾನೂನು ಮಾಪನಶಾಸ್ತ್ರ ಸಹಾಯಕ ನಿಯಂತ್ರಕರಾದ ಸರಳಾ ನಾಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಾಯ ಧನಕ್ಕೆ ಅರ್ಜಿ ಆಹ್ವಾನ

ಮೈಸೂರು, ಏ.13– ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಕಾರ್ಯಾಲಯ ವತಿಯಿಂದ 2021–22ನೇ ಸಾಲಿನ ಶೇ.24.10 ಮತ್ತು ಶೇ.7.25ರ ಸ್ಥಳಿಯ ಸಂಸ್ಥೆ ನಿಧಿಯ ಅನುದಾನದಡಿ ಮನೆಯ ಮೇಲ್ಛಾವಣಿ ದುರಸ್ತಿ ಸಾಮಗ್ರಿಗಳ ಖರೀದಿಗಾಗಿ ಸಹಾಯ ಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹತೆಯುಳ್ಳ ಫಲಾನುಭವಿಗಳು ದಾಖಲಾತಿಗಳೊಂದಿಗೆ ಏ.30ರ ಸಂಜೆ 4.30ರೊಳಗೆ ಪಟ್ಟಣ ಪಂಚಾಯಿತಿಗೆ ಅರ್ಜಿಗಳನ್ನು ಸಲ್ಲಿಸಲು ಪಂಚಾಯಿತಿ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿವಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ಶಿಬಿರಕ್ಕೆ ಚಾಲನೆ

ಪ್ರಾಮಾಣಿಕತೆಯಿಂದ ಎದುರಿಸಿದರೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಯಶಸ್ಸು ಸಾಧ್ಯ

ಹುಣಸೂರು ಉಪವಿಭಾಗಾಧಿಕಾರಿ ವರ್ಣಿತ್ ನೇಗಿ ಸಲಹೆ

ಮೈಸೂರು, ಏ.13(ಆರ್‌ಕೆಬಿ)– ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸುವವರು ಸ್ವಯಂ ನಂಬಿಕೆ, ಕಷ್ಟಪಟ್ಟು ಕೆಲಸ, ಪ್ರಾಮಾಣಿಕತೆ ಮತ್ತು ಸತತ ಪ್ರಯತ್ನ ಇವೆಲ್ಲವನ್ನು ಶ್ರದ್ಧೆಯಿಂದ ಮೈಗೂಡಿಸಿಕೊಂಡರೆ ಅದರಲ್ಲಿ ಯಶಸ್ವಿಯಾಗಲು ಸಾಧ್ಯ ಎಂದು ಹುಣಸೂರು ಉಪವಿಭಾಗಾಧಿಕಾರಿ ವರ್ಣಿತ್ ನೇಗಿ ತಿಳಿಸಿದರು.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ (ಕೆಎಸ್‌ಓಯು) ಆವರಣದಲ್ಲಿರುವ ಕಾವೇರಿ ಸಭಾಂಗಣದಲ್ಲಿ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ಆಯೋಜಿಸಿದ್ದ 50 ದಿನಗಳ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಶಿಬಿರಕ್ಕೆ ಬುಧವಾರ ಚಾಲನೆ ನೀಡಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಸೋಲಿನಿಂದ ಬೇಸರದಿಂದ ಸುಮ್ಮನೆ ಕೂರುವ ಬದಲು ಅದಕ್ಕೆ ಕಾರಣವೇನು? ಮೂರು ಪ್ರಯತ್ನಗಳಲ್ಲಿ ವಿಫಲವಾಗಲು ಕಾರಣವೇನು? ಎಂಬ ಬಗ್ಗೆ ವಿಶ್ಲೇಷಣೆ ಮಾಡಿಕೊಳ್ಳಬೇಕು. ಪರೀಕ್ಷೆಯಲ್ಲಿ ಪ್ರಬಂಧಗಳನ್ನು ಸುಲಭ ಇಂಗ್ಲಿಷ್‌ನಲ್ಲಿ ಬರೆಯಬೇಕು ಎಂದು ಸಲಹೆ ನೀಡಿದರು.

ಪ್ರತಿನಿತ್ಯ ದಿನಪತ್ರಿಕೆಗಳಲ್ಲಿ ಬರುವ ಪ್ರಮುಖ ವಿಷಯಗಳ ಕುರಿತ ಲೇಖನ, ಸುದ್ದಿಗಳನ್ನು ಓದಿ ಮನನ ಮಾಡಿಕೊಳ್ಳಬೇಕು. ಯಾರು ನಿಮ್ಮನ್ನು ಪ್ರೇರೇಪಿಸುತ್ತಾರೋ ಅವರಿಂದ ಹೆಚ್ಚಿನದನ್ನು ತಿಳಿದುಕೊಳ್ಳಿ. ನಂತರ ಪರೀಕ್ಷೆಯನ್ನು ಎದುರಿಸುವಂತೆ ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮುಕ್ತ ವಿವಿ ಕುಲಪತಿ ಪ್ರೊ.ಎಸ್. ವಿದ್ಯಾಶಂಕರ್ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಮುನ್ನ ತಾನು ಏನಾಗಬೇಕು ಎಂಬ ಬಗ್ಗೆ ಮೊದಲು ಮಾನಸಿಕವಾಗಿ ಒಂದು ನಿರ್ಧಾರಕ್ಕೆ ಬರಬೇಕು. ಡಾಕ್ಟರ್, ಇಂಜಿನಿಯರ್, ಕೆಎಎಸ್, ಐಪಿಎಸ್ ಪರೀಕ್ಷೆ ಎದುರಿಸಬೇಕೇ ಎಂಬ ಬಗ್ಗೆ ನಿರ್ಧಾರ ಕೈಗೊಳ್ಳಬೇಕು. ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ತರಬೇತಿ ಸಂದರ್ಭದಲ್ಲಿ ಉಪನ್ಯಾಸಕರು ಹೇಳಿಕೊಟ್ಟ ವಿಷಯಗಳನ್ನು ಚೆನ್ನಾಗಿ ಮನನ ಮಾಡಿಕೊಳ್ಳಬೇಕು. ದಿನಪತ್ರಿಕೆಗಳನ್ನು ಓದುವುದನ್ನು ರೂಢಿಸಿಕೊಳ್ಳಬೇಕು. ಅದರಲ್ಲೂ ಪತ್ರಿಕೆಗಳಲ್ಲಿ ಬರುವ ವಿಶೇಷ ಲೇಖನ, ಸಂಪಾದಕೀಯ ಲೇಖನಗಳನ್ನು ಓದುವುದನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದಲ್ಲಿ 60ಕ್ಕೂ ಹೆಚ್ಚು ಮಂದಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕುಲಸಚಿವ ಪ್ರೊ.ಆರ್.ರಾಜಣ್ಣ, ಕೆ.ಬಿ.ಪ್ರವೀಣ್ (ಪರೀಕ್ಷಾಂಗ ಕುಲಸಚಿವ), ಡೀನ್‌ಗಳಾದ ಅಶೋಕ್ ಕಾಂಬ್ಳಿ, ಡಾ.ಷಣ್ಮುಗ, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಕರಾಮುವಿ ಕಾವೇರಿ ಸಭಾಂಗಣದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಅಭ್ಯರ್ಥಿಗಳಿಗೆ ಮುಕ್ತ ವಿವಿ ಸ್ಪರ್ಧಾತ್ಮಕ ತರಬೇತಿ ಕೇಂದ್ರ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಶಿಬಿರವನ್ನು ಹುಣಸೂರು ಉಪವಿಭಾಗಾಧಿಕಾರಿ ವರ್ಣಿತ್ ನೇಗಿ ಉದ್ಘಾಟಿಸಿದರು. ಚಿತ್ರದಲ್ಲಿ ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್, ಕುಲಸಚಿವರಾದ ಪ್ರೊ.ಆರ್.ರಾಜಣ್ಣ, ಕೆ.ಬಿ.ಪ್ರವೀಣ್, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ ಇನ್ನಿತರರಿದ್ದಾರೆ.

ಮೆಗಾ ಫುಡ್‌ಪಾರ್ಕ್ ರೈತರಿಗೆ ಸಹಕಾರಿ



ಮಂಡ್ಯ,ಏ.13–ಮೆಗಾ ಫುಡ್ ಪಾರ್ಕ್‌ನಲ್ಲಿ ಸ್ಥಾಪಿತವಾಗುವ ಆಹಾರ ಸಂಸ್ಕರಣಾ ಘಟಕಗಳು ರೈತರಿಗೆ ಹೆಚ್ಚು ಸಹಕಾರಿಯಾಗಲಿದೆ ಎಂದು ಕೇಂದ್ರ ಸರ್ಕಾರದ ಆಹಾರ ಸಂಸ್ಕರಣಾ ಕೈಗಾರಿಕೆಗಳು ಮತ್ತು ಜಲ ಶಕ್ತಿ ಸಚಿವ ಪ್ರಹ್ಲಾದ್ ಸಿಂಗ್ ಪಟೇಲ್ ತಿಳಿಸಿದರು.

ಕೆ.ಆರ್.ಪೇಟೆ ತಾಲೂಕಿನ ಬಣ್ಣೇನಹಳ್ಳಿ ಗ್ರಾಮದಲ್ಲಿರುವ ಮೆಗಾ ಫುಡ್ ಪಾರ್ಕ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸಮಾರಂಭ ಪ್ರಾರಂಭಕ್ಕೂ ಮುನ್ನ ರೈತರೊಂದಿಗೆ ಚರ್ಚೆ ನಡೆಸಿದರು. ರೈತರ ಕುಂದು ಕೊರತೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಹಾಗೂ ಮೆಗಾ ಫುಡ್ ಪಾರ್ಕ್‌ನ ಮುಖ್ಯಸ್ಥರೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

ಆಹಾರ ಸಂಸ್ಕರಣಾ ಘಟಕಗಳು ರೈತರು ಬೆಳೆದಂತಹ ಧಾನ್ಯ, ಹಣ್ಣು ತರಕಾರಿ ಖರೀದಿಸುವುದರಿಂದ ರೈತರು ಆರ್ಥಿಕವಾಗಿ ಸದೃಢವಾಗುತ್ತಾರೆ. ರೈತರು ಬೆಳೆದಂತಹ ತರಕಾರಿ ಮತ್ತು ಹೂವುಗಳು ಕೆಲವೇ ದಿನಗಳಲ್ಲಿ ಕೊಳೆತು ಹೋಗುವುದರಿಂದ ಅವುಗಳಿಗೆ ಕೋಲ್ಡ್ ಸ್ಟೋರೇಜ್ ಅಥವಾ ಸಂಸ್ಕರಣೆ ವ್ಯವಸ್ಥೆ ಒದಗಿಸಿದರೆ ಹೆಚ್ಚು ದಿನ ಸಂರಕ್ಷಿಸಿ ತಾಜಾತನ ಕಾಪಾಡಬಹುದು. ರೈತರಿಗೆ ಹಾಗೂ ಮಾರಾಟಗಾರರಿಗೆ ಉಪಯೋಗವಾಗಲಿದೆ. ಇದೇ ಮೆಗಾ ಫುಡ್ ಪಾರ್ಕ್‌ನ ಉದ್ದೇಶವಾಗಿದೆ. ಕರ್ನಾಟಕ ಸರ್ಕಾರ ರೈತರನ್ನು ಆರ್ಥಿಕವಾಗಿ ಸದೃಢಗೊಳಿಸಲು ಮಿನಿ ಫುಡ್ ಪಾರ್ಕ್ ಪ್ರಾರಂಭಿಸಲು ಚಿಂತಿಸುತ್ತಿದೆ ಎಂದರು.

ಮೆಗಾ ಫುಡ್ ಪಾರ್ಕ್‌ನಲ್ಲಿ ಆಹಾರ ಸಂಸ್ಕರಣಾ ಕೈಗಾರಿಕೆಗಳು ಚುರುಕಾಗಿ ಕಾರ್ಯ ನಿರ್ವಹಿಸಬೇಕು. ಭಾರತ ದೇಶದಲ್ಲಿ ರೈತರು ಬೆಳೆಯುವಂತಹ ಬೆಳೆಗಳು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಮಾರಾಟವಾಗುವಂತೆ ಶ್ರಮಿಸಬೇಕಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಂಡವಪುರ ಉಪವಿಭಾಗಾಧಿಕಾರಿ ಬಿ.ಸಿ ಶಿವಾನಂದ ಮೂರ್ತಿ, ಕೆಆರ್ ಪೇಟೆ ತಹಸೀಲ್ದಾರ್ ಎಂ.ವಿ. ರೂಪ, ಫುಡ್‌ಪಾರ್ಕ್ ಆಫ್ ಫೆವರಿಚ್ ಇನ್ಫ್ರಾ ಪ್ರೈಲಿ ನ ನಿರ್ದೇಶಕರಾದ ಸಿ. ಜಯದೇವ ನಾಯ್ಡು, ಕೆ.ರವಿ, ಉಪಾಧ್ಯಕ್ಷರಾದ ದಯಾನಂದ ಕುಮಾರ್, ಫುಡ್ ಕರ್ನಾಟಕ ಲಿಮಿಟೆಡ್‌ನ ನಿರ್ದೇಶಕರಾದ ಮಹಮದ್ ಇರ್ಫಾನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕೆ.ಆರ್.ಎಸ್ ಅಣೆಕಟ್ಟು ಪುನಶ್ಚೇತನ ಕಾಮಗಾರಿಗಳ ಪರಿಶೀಲನೆ: ಜಲ ಶಕ್ತಿ ಸಚಿವ ಪ್ರಹ್ಲಾದ್ ಸಿಂಗ್ ಪಟೇಲ್ ಅವರು ಕೆಆರ್.ಎಸ್‌ಗೆ ಭೇಟಿ ನೀಡಿ ಕೆ.ಆರ್.ಎಸ್ ಅಣೆಕಟ್ಟಿನ ಡ್ರಿಪ್ ಕಾಮಗಾರಿಯ ಫೇಸ್–1 ಮತ್ತು ಫೇಸ್–2 ಕಾಮಗಾರಿಗಳನ್ನು ಪರಿಶೀಲಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿ ಮಾಹಿತಿ ಪಡೆದುಕೊಂಡರು.

ಸಂದರ್ಭದಲ್ಲಿ ರೇಷ್ಮೆ, ಯುವ ಮತ್ತು ಸಬಲೀಕರಣ ಮತ್ತು ಕ್ರೀಡಾ ಸಚಿವ ಕೆ.ಸಿ ನಾರಾಯಣಗೌಡ, ಶಾಸಕ ರಾಮದಾಸ್, ಜಿಲ್ಲಾಧಿಕಾರಿ ಎಸ್.ಅಶ್ವತಿ, ಕಾವೇರಿ ನೀರಾವರಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಜಂಯಪ್ರಕಾಶ್, ಮುಖ್ಯ ಅಭಿಯಂತರ ವಿಜಯ ಕುಮಾರ್, ಕೆ.ಆರ್.ಎಸ್‌ನ ಕಾರ್ಯಪಾಲಕ ಅಭಿಯಂತರರಾದ ರಾಮಮೂರ್ತಿ, ಡ್ರಿಪ್ ಉಸ್ತುವಾರಿ ಮಾಧವ್ ಇತರು ಉಪಸ್ಥಿತರಿದ್ದರು.

ಏ.16ಕ್ಕೆ ಜನತಾ ಜಲಧಾರೆ ಕಾರ್ಯಕ್ರಮ



ಶ್ರೀರಂಗಪಟ್ಟಣ,ಏ.13(ವಿನಯ್‌ಕಾರೇಕುರ)– ಜೆಡಿಎಸ್ ಪಕ್ಷದ ವತಿಯಿಂದ ಆರಂಭಿಸಲಾಗುತ್ತಿರುವ ಜನತಾ ಜಲಧಾರೆ ಕಾರ್ಯಕ್ರಮಕ್ಕೆ ಏ.16 ರಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಚಾಲನೆ ನೀಡಲಿದ್ದಾರೆ ಎಂದು ಶಾಸಕ ರವೀಂದ್ರ ಶ್ರೀಕಂಠಯ್ಯ ತಿಳಿಸಿದರು.

ಪಟ್ಟಣದ ಕೃಷ್ಣಮೂರ್ತಿ ಬಂಗಲೆ ಐಬಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಅಂದು ಮಾಜಿ ಪ್ರಧಾನಿ ದೇವೇಗೌಡರು ಕಾರ್ಯಕ್ರಮದಲ್ಲಿ ಕ್ಷೇತ್ರದ ಜನತೆಗೆ ಜಲಧಾರೆ ಕಾರ್ಯಕ್ರಮದ ಉದ್ದೇಶಗಳು ಹಾಗೂ ಪ್ರಯೋಜನಗಳನ್ನು ತಿಳಿಸಲಿದ್ದಾರೆ ಎಂದರು.

ಜಲಧಾರೆ ರಥ ಕೆ.ಆರ್.ಎಸ್.ನಲ್ಲಿ ಕಾವೇರಿ ನದಿಯ ಪುಣ್ಯ ನೀರಿನೊಂದಿಗೆ ಹೊರಟು ಹುಲಿಕೆರೆ ಗ್ರಾಮ, ಪೇಪರ್ ಮಿಲ್ ಸರ್ಕಲ್, ಬೆಳಗೊಳ, ಪಂಪ್ ಹೌಸ್ ಮಾರ್ಗವಾಗಿ ಪಾಲಹಳ್ಳಿ ಮೂಲಕ ಶ್ರೀರಂಗಪಟ್ಟಣದ ಸ್ನಾನ ಘಟ್ಟದಲ್ಲೂ ಕಾವೇರಿಯ ಪವಿತ್ರ ಜಲವನ್ನು ಸಂಗ್ರಹಿಸಿ ನಂತರ ಪಟ್ಟಣದ ಖಾಸಗಿ ಬಸ್ ನಿಲ್ದಾಣದಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಕಿರಂಗೂರು ಮಾರ್ಗವಾಗಿ ಕೆ.ಶೆಟ್ಟಹಳ್ಳಿ, ಗೌರಿಪುರ, ಟಿ.ಎಂ ಹೊಸೂರು ಗೇಟ್, ಗೌಡಹಳ್ಳಿ ಗೇಟ್ ನಂತರ ಯಲಿಯೂರು ಮಾರ್ಗವಾಗಿ ಪಾಂಡವಪುರ ತಾಲೂಕಿಗೆ ರಥಯಾತ್ರೆ ತೆರಳಲಿದೆ ಎಂದರು.

ಸಮಾಜದ ಅದರಲ್ಲೂ ನಮ್ಮ ರೈತರು ಜಾತಿ, ಧರ್ಮಗಳು ಮರೆತು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಬಡವರು ಹಾಗೂ ರೈತರ ಬಗ್ಗೆ ಕಾಳಜಿಯಿಂದ ಮಾಜಿ ಸಿಎಂ ಕುಮಾರಸ್ವಾಮಿಯವರ ಮಹದಾಸೆಯಂತೆ ರಾಜ್ಯದಲ್ಲಿ ಎಲ್ಲಾ ರೈತರ ಬೆಳೆಗೆ ನೀರು ಹಾಗೂ ಕುಡಿಯಲು ನೀರು ಸಿಗಬೇಕೆಂಬುದೇ ಕಾರ್ಯಕ್ರಮದ ಮೂಲ ಉದ್ದೇಶ. ರಾಜ್ಯದಲ್ಲಿ ಹಲವು ನೀರಾವರಿ ಸಮಸ್ಯೆಗಳಿದ್ದು, ಮಾಜಿ ಪ್ರಧಾನಿ ನೀರಾವರಿ ಸಮಸ್ಯೆಗಳಿಗೆ ಹಗಲಿರುಳು ದುಡಿದಿದ್ದಾರೆ. ಕುಮಾರಸ್ವಾಮಿ ಈ ಬಾರಿ ಜೆಡಿಎಸ್ ಪಕ್ಷಕ್ಕೆ ಬಲ ಕೊಡಿ ಶಾಶ್ವತವಾಗಿ ರಾಜ್ಯದ ನೀರಾವರಿ ಸಮಸ್ಯೆಗಳನ್ನು ನಿವಾರಿಸುತ್ತೇನೆ ಎಂದಿದ್ದಾರೆ. ಆದ್ದರಿಂದ ಕುಮಾರಸ್ವಾಮಿಯವರ ಕೈ ಬಲಪಡಿಸುವಂತೆ ಕಾರ್ಯಕರ್ತರಿಗೆ ಕರೆ ನೀಡಿದರು.

40 ಪರ್ಸೆಂಟ್ ಕಮಿಷನ್‌ನಿಂದಾಗಿ ಮೃತಪಟ್ಟ ಗುತ್ತಿಗೆದಾರನ ಸಾವಿನ ಬಗ್ಗೆ ಆರೋಪ ಎದುರಿಸುತ್ತಿರುವ ಸಚಿವರ ಮಾಧ್ಯಮ ಹೇಳಿಕೆಗಳು ಸರಿಯಲ್ಲ, ಒಬ್ಬ ಗುತ್ತಿಗೆದಾರ ಸತ್ತಿರುವುದು ನೋವಿನ ಸಂಗತಿ. ಈ ಸಾವಿನ ಸತ್ಯಾಂಶವನ್ನು ತನಿಖೆ ನಡೆಸಿ ಹೊರತೆಗೆಯಬೇಕು ಎಂದು ರವೀಂದ್ರ ಶ್ರೀಕಂಠಯ್ಯ ಆಗ್ರಹಿಸಿದರು.

ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ಪೈಮುಕುಂದ್, ಎಪಿಎಂಸಿ ಮಾಜಿ ಅಧ್ಯಕ್ಷ ಸ್ವಾಮಿಗೌಡ, ಜೆಡಿಎಸ್ ಮುಖಂಡ ನೆಲಮನೆ ದಯಣ್ಣ, ಟಿಎಪಿಸಿಎಂಎಸ್ ಮಾಜಿ ಸದಸ್ಯ ಕುಮಾರ್, ಜೆಡಿಎಸ್ ಯುವ ಘಟಕದ ಅಧ್ಯಕ್ಷ ಸಂಜಯ್, ಭುವನೇಶ್ವರಿ ಮರಿಗೌಡ, ಶೆಟ್ಟಹಳ್ಳಿ ಶೇಷಾಚಲ, ಪುರಸಭೆ ಉಪಾಧ್ಯಕ್ಷ ಎಂ. ಪ್ರಕಾಶ್, ಸದಸ್ಯರಾದ ಗಂಜಾಂ ಶಿವು, ರಾಜು, ಜೆಡಿಎಸ್ ಮುಖಂಡರಾದ ಹೊಸಹಳ್ಳಿ ವಿವೇಕ್, ಶಿವಸ್ವಾಮಿ ಸೇರಿದಂತೆ ತಾಲೂಕು ಜೆಡಿಎಸ್ ಕಾರ್ಯಕರ್ತರು ಇದ್ದರು.

ಹೊಟ್ಟೆ ನೋವು ತಾಳಲಾರದೇ ಗೃಹಿಣಿ ಆತ್ಮಹತ್ಯೆ



ನಾಗಮಂಗಲ,ಏ.13– ಕೆಲವು ದಿನಗಳಿಂದ ಕಾಡುತ್ತಿದ್ದ ಆರೋಗ್ಯ ಸಮಸ್ಯೆಯಿಂದಾಗಿ ಗೃಹಿಣಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡ ಘಟನೆ ತಾಲ್ಲೂಕಿನ ತುಪ್ಪದಮಡು ಗ್ರಾಮದಲ್ಲಿ ನಡೆದಿದೆ.

ಶ್ರವಣ ಬೆಳಗೊಳ ಬಳಿಯ ಅಜ್ಜೇನಪಾಳ್ಯ ಗ್ರಾಮದ ಯೋಗೇಶ್ ಮತ್ತು ವಸಂತ ದಂಪತಿ ಪುತ್ರಿ ಸುನೀತಾ ಆತ್ಮಹತ್ಯೆಗೆ ಶರಣಾದವರು. ಎರಡು ವರ್ಷದ ಹಿಂದೆ ತುಪ್ಪದಮಡು ಗ್ರಾಮದ ದೊಡ್ಡೇಗೌಡ– ಸರೋಜಮ್ಮ ಎಂಬವರ ಮಗ ಮಂಜುನಾಥನೊಂದಿಗೆ ಮದುವೆಯಾಗಿ ಒಂದು ಮಗುವು ಇದೆ. ಕೆಲವು ದಿನಗಳಿಂದ ಆಗಾಗ್ಗೆ ಬರುತ್ತಿದ್ದ ಹೊಟ್ಟೆ ನೋವಿಗೆ ಹಲವಾರು ಬಾರಿ ವೈದ್ಯರ ಬಳಿ ಚಿಕಿತ್ಸೆ ಪಡೆಯುತ್ತಿದ್ದರೆಂದು ತಿಳಿದು ಬಂದಿದೆ. ಆದರೆ ಗುಣವಾಗದ ಹಿನ್ನೆಲೆಯಲ್ಲಿ ಮಂಗಳವಾರ ಸಂಜೆ ಮಗುವನ್ನು ಬಿಟ್ಟು ಕೋಣೆಯೊಂದಕ್ಕೆ ಹೋಗಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡರೆನ್ನಲಾಗಿದೆ. ಈ ಬಗ್ಗೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ: ಗ್ರಾಮೀಣ ಕ್ರೀಡೆಗಳ ಪ್ರೋತ್ಸಾಹಕ್ಕೆ ಸಲಹೆ



ಕೆ.ಆರ್.ಪೇಟೆ,ಏ.13(ಶ್ರೀನಿವಾಸ್)– ಕ್ರಿಕೆಟ್ ಜೊತೆಗೆ ಗ್ರಾಮೀಣ ಕ್ರೀಡೆಗಳಾದ ಕಬಡ್ಡಿ, ಖೋಖೋ, ವಾಲಿಬಾಲ್, ವಿವಿಧ ಓಟದ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಗ್ರಾಮೀಣ ಜನರ ಆರೋಗ್ಯ ಕಾಪಾಡಲು ಗ್ರಾಮೀಣ ಭಾಗದ ಯುವಕರ ಸಂಘಟನೆಗಳು ಹೆಚ್ಚು ಕ್ರಿಯಾಶೀಲವಾಗಬೇಕು ಎಂದು ಮಿತ್ರ ಫೌಂಡೇಶನ್ ಅಧ್ಯಕ್ಷ ಬೂಕನಕೆರೆ ವಿಜಯ್ ರಾಮೇಗೌಡ ಯುವಕರಿಗೆ ಸಲಹೆ ನೀಡಿದರು. ಅವರು ತಾಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಶ್ರೀ ಮರಡಿಲಿಂಗೇಶ್ವರ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಾಜ್ಯಮಟ್ಟದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಕ್ರೀಡೆಗಳು ಮನುಷ್ಯನ ದೈಹಿಕ ಆರೋಗ್ಯವನ್ನು ಹೆಚ್ಚು ಬಲಿಷ್ಠಗೊಳಿಸುತ್ತವೆ. ದೈಹಿಕ ಆರೋಗ್ಯ ಇದ್ದರೆ ಮಾನಸಿಕ ಆರೋಗ್ಯ ಸದೃಢವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಯುವಕರು ಕೇವಲ ಟಿವಿ, ಮೊಬೈಲ್ ಎಂದು ಆರೋಗ್ಯ ಹಾಳು ಮಾಡಿಕೊಳ್ಳದೇ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಬೇಕು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕ್ರೀಡೆ ಸಂಜೀವಿನಿಯಾಗಿದೆ ಎಂದರು.

ಅಸಮಾನತೆ, ಅನಕ್ಷರತೆ, ಶೋಷಣೆ ನಿರ್ಮೂಲನೆಗೆ ಸಂವಿಧಾನದಿಂದ ಪರಿಹಾರ



ಚಾಮರಾಜನಗರ, ಏ.13– ಡಾ.ಬಿ.ಆರ್. ಅಂಬೇಡ್ಕರ್ ಅವರು ದೇಶದಲ್ಲಿದ್ದ ಜಾತೀಯತೆ, ಅಸಮಾನತೆ, ಅನಕ್ಷರತೆ ಹಾಗೂ ಶೋಷಣೆಗಳ ನಿರ್ಮೂಲನೆಗೆ ಸಂವಿಧಾನದ ಮೂಲಕ ಸೂಕ್ತ ಪರಿಹಾರ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ 131ನೇ ಜನ್ಮ ದಿನಾಚರಣೆ ಅಂಗವಾಗಿ ಏರ್ಪಡಿಸಲಾಗಿದ್ದ ವಿಚಾರ ಸಂಕಿರಣದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಾ.ಅಂಬೇಡ್ಕರ್ ಅವರು ಮಹಾನ್ ಮಾನವತಾವಾದಿಯಾಗಿದ್ದು, ಶೋಷಿತ ವರ್ಗದವರ ಆಶಾಕಿರಣ ಹಾಗೂ ಮಹಿಳೆಯರ ಪಾಲಿಗೆ ಸಮಾನತೆಯ ನಂದಾ ದೀಪವಾಗಿದ್ದಾರೆ. ಸೂರ್ಯ ಭೂಮಿಗೆ ಎಷ್ಟು ಮುಖ್ಯವೋ ಹಾಗೇ ಡಾ.ಬಿ.ಆರ್.ಅಂಬೇಡ್ಕರ್ ಅವರು ಭಾರತಕ್ಕೆ ಅಷ್ಟೇ ಮುಖ್ಯವಾಗಿದ್ದಾರೆ. ಸಾವಿರಾರು ವರ್ಷಗಳ ಕಾಲದಿಂದಲೂ ಇದ್ದ ಜಾತೀಯತೆ, ಅಸಮಾನತೆ, ಅನ್ಯಾಯ, ಶೋಷಣೆಗಳಿಗೆ ಸಂವಿಧಾನದಲ್ಲಿ ಕಾನೂನು ರೂಪಿಸುವ ಮೂಲಕ ಚಿಕಿತ್ಸೆ ನೀಡಿದ್ದಾರೆ ಎಂದರು. ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಮೈಸೂರಿನ ವಿಶ್ವಮೈತ್ರಿ ಬುದ್ಧ ವಿಹಾರದ ಡಾ.ಕಲ್ಯಾಣಸಿರಿ ಬಂತೇಜಿ ಮಾತನಾಡಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆಗಳು ಕೇವಲ ಆಚರಣೆಗಷ್ಟೇ ಸೀಮಿತವಾಗದೆ ಅನುಷ್ಠಾನಗೊಳ್ಳಬೇಕು. ಅಂಬೇಡ್ಕರ್ ಅವರ ಸಾರ್ವಕಾಲಿಕ ಚಿಂತನೆಗಳು, ಧ್ಯೇಯೋದ್ದೇಶಗಳನ್ನು ಮಂಥನ ಮಾಡಿಕೊಳ್ಳಬೇಕು ಎಂದರು.

'ಡಾ.ಬಿ.ಆರ್.ಅಂಬೇಡ್ಕರ್ ಅವರ ಸರ್ವಕಾಲಿಕ ಚಿಂತನೆಗಳ ಕುರಿತು ವಿಚಾರ ಮಂಡಿಸಿದ ಡಾ.ಜಗದೀಶ್ ಕೊಪ್ಪ ಮಾತನಾಡಿ, ಜಗತ್ತಿನಲ್ಲಿ ಮನುಕುಲದ ಬಗ್ಗೆ ಅತ್ಯಂತ ಗಂಭೀರವಾಗಿ ಆಲೋಚಿಸಿದ ಇಬ್ಬರು ಮಹನೀಯರೆಂದರೆ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಅಬ್ರಹಾಂ ಲಿಂಕನ್. ಇಡೀ ಬದುಕನ್ನು ಅಧ್ಯಯನಕ್ಕೆ ಮೀಸಲಿಟ್ಟು ದೇಶಕ್ಕೆ ಸಾಮಾಜಿಕ ಪ್ರಜ್ಞೆ, ಎಚ್ಚರ ಮೂಡಿಸಿದವರು ಅಂಬೇಡ್ಕರ್ ಅವರು ಎಂದು ತಿಳಿಸಿದರು.

ಅಂಬೇಡ್ಕರ್ ಅವರ ವಿದ್ವತ್ತು, ಅಧ್ಯಯನಶೀಲತೆ ಬೇರೆಯವರಲ್ಲಿ ಕಾಣಲು ಸಾಧ್ಯವಿಲ್ಲ. ವರ್ತಮಾನದ ಕಾಲಘಟ್ಟದಲ್ಲಿ ಬುದ್ಧ, ಬಸವ, ಅಂಬೇಡ್ಕರ್, ಗಾಂಧಿ ಅವರ ವಿಚಾರಧಾರೆಗಳನ್ನು ಕೊಂಡೊಯ್ಯುವ ಅವಶ್ಯಕತೆಯಿದೆ. ದೇಶದ ಪ್ರತಿಯೊಬ್ಬರಿಗೂ ಸವಲತ್ತುಗಳು ತಲುಪಬೇಕು ಎಂಬ ಆಶಯ ಹೊಂದಿದ್ದು, ನಾಗರಿಕ ಹಕ್ಕುಗಳ ಜೊತೆ ಕರ್ತವ್ಯಗಳ ಬಗ್ಗೆಯೂ ಅಂಬೇಡ್ಕರ್ ತಿಳಿಸಿ ಕೊಟ್ಟಿದ್ದಾರೆ ಎಂದು ಹೇಳಿದರು.

'ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಿಳಾ ಪರ ಚಿಂತನೆಗಳು' ಕುರಿತು ಮೈಸೂರು ಮಹಾರಾಜ ಕಾಲೇಜಿನ ಜಾನಪದ ವಿಭಾಗದ ಸಹ ಪ್ರಾಧ್ಯಾಪಕಿ ಡಾ.ವಿಜಯಲಕ್ಷ್ಮೀ ಮನಾಪುರ ಮಾತನಾಡಿ, ಮಹಿಳೆಯರ ಬದುಕಿಗೆ ಹೊಸ ಬೆಳಕು ಮೂಡಿಸುವ ನಿಟ್ಟಿನಲ್ಲಿ ಅಂಬೇಡ್ಕರ್ ಅವರು ಮುನ್ನಡೆ ಇಟ್ಟರು. ಮಹಿಳೆಯರ ಮೇಲಿನ ಶೋಷಣೆ ತಡೆಯಲು ಕಾನೂನಿನಿಂದ ಮಾತ್ರ ಸಾಧ್ಯ ಎಂದು ಅಂಬೇಡ್ಕರ್ ಅವರು ಅರಿತಿದ್ದರು. ಸಂವಿಧಾನಾತ್ಮಕವಾಗಿ ಮಹಿಳಾ ಪರ ಕಾನೂನುಗಳನ್ನು ರೂಪಿಸಿದರು ಎಂದರು.

ವಿಚಾರ ಸಂಕಿರಣವನ್ನು ಚಾಮರಾಜನಗರ ವಿರಕ್ತ ಮಠದ ಚೆನ್ನಬಸವ ಸ್ವಾಮೀಜಿ ಉದ್ಘಾಟಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಟಿ.ಪಿ.ಶಿವಕುಮಾರ್ ಮಾತನಾಡಿದರು ಇದೇ ವೇಳೆ ಅಂತರ್ಜಾತಿ ವಿವಾಹವಾಗಿರುವ ದಂಪತಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಪ್ರೋತ್ಸಾಹ ಧನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಪಂ ಸಿಇಓ ಕೆ.ಎಂ. ಗಾಯಿತ್ರಿ, ಎಡಿಸಿ ಎಸ್.ಕಾತ್ಯಾಯಿನಿದೇವಿ, ಎಎಸ್‌ಪಿ ಕೆ.ಎಸ್.ಸುಂದರ್‌ರಾಜ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಭಾಗೀರಥಿ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಗಣ್ಯರು ಪುಷ್ಪನಮನ ಸಲ್ಲಿಸಿದರು.

ಇಂದು ಡಾ.ಅಂಬೇಡ್ಕರ್ ಜನ್ಮ ದಿನಾಚರಣೆ

ಚಾಮರಾಜನಗರ, ಏ.13– ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ, ರಾಷ್ಟ್ರನಾಯಕ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ 131ನೇ ಜನ್ಮ ದಿನಾಚರಣೆಯನ್ನು ಏ.14ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ 9.30ಕ್ಕೆ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಲಾಗುತ್ತದೆ. ಬೆಳಗ್ಗೆ 10.30ಕ್ಕೆ ನಗರದ ಪ್ರವಾಸಿ ಮಂದಿರದಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರದ ಮೆರವಣಿಗೆ ಹೊರಡಲಿದೆ.

ಮಧ್ಯಾಹ್ನ 12 ಗಂಟೆಗೆ ನಗರದ ಪೇಟೆ ಪ್ರೈಮರಿ ಶಾಲಾ ಆವರಣದಲ್ಲಿ ವೇದಿಕೆ ಸಮಾರಂಭ ನಡೆಯಲಿದೆ. ಟಿ.ನರಸೀಪುರದ ನಳಂದ ಬುದ್ಧ ವಿಹಾರದ ಪೂಜ್ಯ ಬೋಧಿರತ್ನ ಬಂತೇಜಿರವರು ದಿವ್ಯಸಾನ್ನಿಧ್ಯ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ವಿ.ಸೋಮಣ್ಣ ಸಮಾರಂಭ ಉದ್ಘಾಟಿಸುವರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸುವರು. ಸಂಸದ ವಿ.ಶ್ರೀನಿವಾಸ ಪ್ರಸಾದ್ ಪಾಲ್ಗೊಳ್ಳುವರು. ಶಾಸಕರಾದ ಆರ್.ನರೇಂದ್ರ, ಎನ್.ಮಹೇಶ್, ಸಿ.ಎಸ್.ನಿರಂಜನ್ ಕುಮಾರ್, ವಿಧಾನಪರಿಷತ್ ಸದಸ್ಯರಾದ ಮರಿತಿಬ್ಬೇಗೌಡ, ಕೆ.ಟಿ.ಶ್ರೀಕಂಠೇಗೌಡ, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷ ಎಂ.ರಾಮಚಂದ್ರ, ನಗರಸಭೆ ಅಧ್ಯಕ್ಷೆ ಆಶಾ ನಟರಾಜು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಿ.ಬಿ.ಶಾಂತಮೂರ್ತಿ ಕುಲಗಾಣ, ನಗರಸಭೆ ಉಪಾಧ್ಯಕ್ಷೆ ಪಿ.ಸುಧಾ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಮುಖ್ಯ ಅತಿಥಿಗಳಾಗಿ ಸಮಾರಂಭದಲ್ಲಿ ಪಾಲ್ಗೊಳ್ಳುವವರು. ಬೆಂಗಳೂರಿನ ಕ್ರೈಸ್ಟ್ ಕಾಲೇಜಿನ ಪ್ರಾಧ್ಯಾಪಕ ಪ್ರೊ.ಹ.ರಾ.ಮಹೇಶ್ ಮುಖ್ಯ ಭಾಷಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

ಎಪಿಎಂಸಿ ಚುನಾವಣೆ: ಬಹಿರಂಗ ಪ್ರಚಾರ ನಿಷೇಧ

ಚಾಮರಾಜನಗರ, ಏ.13– ಚಾಮರಾಜನಗರ ಮತ್ತು ಗುಂಡ್ಲುಪೇಟೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಚುನಾವಣೆಯ ವೇಳಾಪಟ್ಟಿಯಂತೆ ಏ. 17ರಂದು ಮತದಾನ ನಡೆಯಲಿದ್ದು, ಚುನಾವಣೆಯು ಮುಕ್ತ, ನ್ಯಾಯ ಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಲು ಮತದಾನ ಪ್ರಾರಂಭವಾಗುವ ಮುಂಚಿನ 48 ಗಂಟೆಗಳ ಒಳಗೆ ಅಂದರೆ ಏಪ್ರಿಲ್ 15ರ ಬೆಳಗ್ಗೆ 7 ಗಂಟೆಯ ನಂತರ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಹಾಗೂ ಅಭ್ಯರ್ಥಿಗಳ ಪರವಾಗಿ ಯಾರೇ ಇತರರು ಯಾವುದೇ ವಿಧದಲ್ಲಿ ಬಹಿರಂಗ ಚುನಾವಣಾ ಪ್ರಚಾರ ನಡೆಸುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಲ್ಲಿ ಭರ್ಜರಿ ಮಳೆ: ಅವಾಂತರ



ಚಾಮರಾಜನಗರ, ಏ.13(ಎಸ್‌ಎಸ್)– ಜಿಲ್ಲೆಯ ಚಾಮರಾಜನಗರ, ಯಳಂದೂರು, ಸಂತೇಮರಳ್ಳಿ, ಕೊಳ್ಳೇಗಾಲ, ಹನೂರು ಹಾಗೂ ಗುಂಡ್ಲುಪೇಟೆ ಸೇರಿದಂತೆ ಹಲವೆಡೆ ಬುಧವಾರ ಸಂಜೆ ಗುಡುಗು ಸಹಿತ ಭರ್ಜರಿ ಮಳೆ ಸುರಿಯಿತು. ಸಂಜೆ 4.20ಕ್ಕೆ ಆರಂಭವಾದ ಮಳೆ 5.20ರವರೆಗೆ ಸುಮಾರು ಒಂದು ಗಂಟೆ ಭರ್ಜರಿಯಾಗಿ ಸುರಿಯಿತು. ಇದರಿಂದ ತಗ್ಗು ಪ್ರದೇಶಗಳಿಗೆ ನೀರು ಶೇಖರಣೆಗೊಂಡು ಸಾರ್ವಜನಿಕರು ಪರದಾಡುವಂತಾಯಿತು.

ಜಿಲ್ಲಾ ಕೇಂದ್ರದ ಜೋಡಿರಸ್ತೆಯಲ್ಲಿರುವ ಜಿಲ್ಲಾಡಳಿತ ಭವನದ ಮುಂಭಾಗ, ಭುವನೇಶ್ವರಿ ವೃತ್ತದಿಂದ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ತ್ಯಾಗರಸ್ತೆ ಜಲಾವೃತಗೊಂಡಿತ್ತು. ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ದ್ವಿಚಕ್ರ ವಾಹನಗಳು ಸ್ವಲ್ಪ ಭಾಗ ನೀರಿನಲ್ಲಿ ಮುಳುಗಡೆಯಾಗಿದ್ದರಿಂದ ವಾಹನ ಸವಾರರು ಪರದಾಡುವಂತಾಯಿತು. ಈ ರಸ್ತೆಯಲ್ಲಿರುವ ಜಿಲೇಬಿ ಮಾರಾಟ ಅಂಗಡಿಗೆ ನೀರು ನುಗ್ಗಿದ ಪರಿಣಾಮ ಅಂಗಡಿ ಮಾಲೀಕರು ಪರಿತಪಿಸಿದರು. ರಸ್ತೆ ತುಂಬಾ ನೀರು ಹರಿಯುತ್ತಿದ್ದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ಪರದಾಡುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ರೈಲ್ವೆ ಬಡಾವಣೆ ಸೇರಿದಂತೆ ತಗ್ಗು ಪ್ರದೇಶದಲ್ಲಿರುವ ಬಡಾವಣೆಗಳಲ್ಲಿರುವ ಮನೆಗಳಿಗೆ ನೀರು ನುಗ್ಗಿತು. ಇದರ ಪರಿಣಾಮ ಬಡಾವಣೆಯ ನಾಗರಿಕರು ಪರದಾಡಿದರು. ಗೂಳಿಪುರದಲ್ಲಿ ರೈತ ಪರ್ವತಪ್ಪ ಅವರಿಗೆ ಸೇರಿದ ಹಸು ಹೊಲದಲ್ಲಿ ಮೇಯಲು ಬಿಟ್ಟಿದ್ದಾಗ ಸಿಡಿಲು ಬಡಿದು ಸಾವನ್ನಪ್ಪಿದೆ.

ಯಳಂದೂರು: ತಾಲೂಕಿನ ಸುತ್ತಮುತ್ತ ಉತ್ತಮ ಮಳೆ ಸುರಿಯಿತು. ಮಳೆಗೆ ಸಿಲುಕಿದ ಚಾಮುಂಡೇಶ್ವರಿ ಭಕ್ತರು ಕಂದಹಳ್ಳಿ ಮಾದಪ್ಪ ದೇವಾಲಯದಲ್ಲಿ ಆಶ್ರಯ ಪಡೆದರು. ಇನ್ನೂ ಸಂತೇಮರಹಳ್ಳಿ ಹೋಬಳಿಯಾದ್ಯಂತ ಮಧ್ಯಾಹ್ನದಿಂದ ಸಾಧಾರಣವಾಗಿ ಮಳೆ ಸುರಿದಿದೆ. ಸಂತೇಮರಹಳ್ಳಿಯಲ್ಲಿ ಒಂದು ಗಂಟೆಗೂ ಹೆಚ್ಚುಕಾಲ ಮಳೆ ಸುರಿದಿದೆ.

ಹನೂರು: ಪಟ್ಟಣ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಮಳೆಯಾಯಿತು. **ಕೊಳ್ಳೇಗಾಲ:** ನಗರ ಸೇರಿದಂತೆ ತಾಲೂಕಿನಾದ್ಯಂತ ಮಳೆಯಾಗಿದೆ. ಬಸವವೇಶ್ವರ ನಗರದಲ್ಲಿ ನೀಲಗಿರಿ ಮರವೊಂದು ವಿದ್ಯುತ್ ತಂತಿಗಳ ಮೇಲೆ ಬಿದ್ದಿತ್ತು. ತಕ್ಷಣ ಸೆಸ್ಕ್, ನಗರಸಭೆ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಮರವನ್ನು ತೆರವುಗೊಳಿಸಿದರು.

ಗೌಡಿಕೆ ಕೆ.ಎನ್.ನಾಗರಾಜಪ್ಪ ನಿಧನ



ಆಲೂರು, ಏ.13– ಚಾಮರಾಜನಗರ ತಾಲೂಕಿನ ಕೆಂಪನಪುರ ಗ್ರಾಮದ ಗೌಡಿಕೆ ಕೆ.ಎನ್.ನಾಗರಾಜಪ್ಪ (79) ಮಂಗಳವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಪುತ್ರ ಎಲ್‌ಐಸಿ ಪ್ರತಿನಿಧಿ ಗಿರೀಶ್ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಮಧ್ಯಾಹ ಕೆಂಪನಪುರದ ಅವರ ತೋಟದಲ್ಲಿ ನಡೆಯಿತು.

ಸಚಿವ ಈಶ್ವರಪ್ಪ ಬಂಧನಕ್ಕೆ ಆಗ್ರಹಿಸಿ ಎಸ್‌ಡಿಪಿಐ ಪ್ರತಿಭಟನೆ



ಮಡಿಕೇರಿ, ಏ.13– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗಂಭೀರ ಆರೋಪ ಎದುರಿಸುತ್ತಿರುವ ಸಚಿವ ಕೆ.ಎಸ್.ಈಶ್ವರಪ್ಪ ಅವರನ್ನು ಸಚಿವ ಸ್ಥಾನದಿಂದ ಕೈಬಿಟ್ಟು ಬಂಧಿಸಬೇಕೆಂದು ಒತ್ತಾಯಿಸಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಪಕ್ಷ ಮಡಿಕೇರಿಯಲ್ಲಿ ಪ್ರತಿಭಟನೆ ನಡೆಸಿತು.

ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು ಈಶ್ವರಪ್ಪ ಅವರ ವಿರುದ್ಧ ಕೊಲೆ ಮೊಕದ್ದಮೆ ದಾಖಲಿಸಬೇಕೆಂದು ಒತ್ತಾಯಿಸಿದರು.

ಮೃತ ಗುತ್ತಿಗೆದಾರ ಸಚಿವ ಈಶ್ವರಪ್ಪ ಅವರಿಗೆ ಆತ್ಮೀಯರಾಗಿದ್ದರು, ಮಾತ್ರವಲ್ಲ ಬಿಜೆಪಿ ಕಾರ್ಯಕರ್ತರಾಗಿದ್ದರು. ಇವರ ಸ್ಥಿತಿಯೇ ಹೀಗಾದರೆ ಬೇರೆಯವರ ಗತಿ ಏನು, ಬಿಜೆಪಿ ಸರ್ಕಾರದ ಕರ್ಮಕಾಂಡಕ್ಕೆ ಇನ್ನೆಷ್ಟು ಜೀವ ಬಲಿಯಾಗಬೇಕು ಎಂದು ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಕಲೀಲ್ ಮಡಿಕೇರಿ ಪ್ರಶ್ನಿಸಿದರು. ಹಿಂದೂ ಕಾರ್ಯಕರ್ತನ ಆತ್ಮಹತ್ಯೆಗೆ ತಮ್ಮದೇ ಪಕ್ಷದ ಸಚಿವರು ಕಾರಣಕರ್ತರು ಎನ್ನುವ ಆರೋಪವಿದ್ದರೂ ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್, ಪ್ರಮುಖರಾದ ಸಿ.ಟಿ.ರವಿ, ಶೋಭಾ ಕರಂದ್ಲಾಜೆ, ಪ್ರತಾಪ್ ಸಿಂಹ ಮೌನಕ್ಕೆ ಶರಣಾಗಿದ್ದಾರೆ. ಮೃತನ ಕುಟುಂಬಕ್ಕೆ ಪರಿಹಾರವೂ ಇಲ್ಲ, ಸಾಂತ್ವನವೂ ಇಲ್ಲದಂತಾಗಿದೆ. ಬಿಜೆಪಿ ಆಡಳಿತದಲ್ಲಿ ಬಿಜೆಪಿ ಕಾರ್ಯಕರ್ತರಿಗೇ ರಕ್ಷಣೆ ಇಲ್ಲದಂತಾಗಿದೆ ಎಂದು ಆರೋಪಿಸಿದರು.

ಆತ್ಮಹತ್ಯೆಗೂ ಮೊದಲು ಮೃತ ಸಂತೋಷ್ ಪಾಟೀಲ್ ಬರೆದಿಟ್ಟ ಪತ್ರದಲ್ಲಿ ತನ್ನ ಸಾವಿಗೆ ಸಚಿವ ಈಶ್ವರಪ್ಪ ಅವರೇ ಕಾರಣ ಎಂದು ಸ್ಪಷ್ಟವಾಗಿ ಆರೋಪಿಸಿದ್ದಾರೆ. ರೂ.4 ಕೋಟಿ ಅಂದಾಜಿನ ಕಾಮಗಾರಿಯ ಹಣ ಬಿಡುಗಡೆ ಮಾಡದೆ ಇದ್ದರೆ ಜೀವ ಕಳೆದುಕೊಳ್ಳಬೇಕಾಗುತ್ತದೆ ಎಂದು ಈ ಹಿಂದೆಯೇ ಎಚ್ಚರಿಕೆ ನೀಡಿದ್ದಾರೆ. ಸಚಿವರ ವಿರುದ್ಧ ಕೊಲೆ ಮೊಕದ್ದಮೆ ದಾಖಲಿಸಲು ಇನ್ನು ಯಾವ ಸಾಕ್ಷಿ ಬೇಕು ಎಂದು ಪ್ರಶ್ನಿಸಿದರು.

ನಗರಸಭಾ ಸದಸ್ಯರಾದ ಮನ್ಸೂರ್, ಬಶೀರ್ ಅಹಮ್ಮದ್, ಎಸ್‌ಡಿಪಿಐ ಪ್ರಮುಖರಾದ ಮುಸ್ತಫ, ಜಲೀಲ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕುಶಾಲನಗರ ಸುತ್ತಮುತ್ತ ಧಾರಾಕಾರ ಮಳೆ



ಕುಶಾಲನಗರ, ಏ.13– ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬುಧವಾರ ಸಂಜೆ ಧಾರಾಕಾರ ಮಳೆ ಸುರಿಯಿತು. ಬಿಸಿಲಿನ ಬೇಗೆಯಿಂದ ತತ್ತರಿಸಿದ್ದ ಜನರಿಗೆ ವರ್ಷದ ಮೊದಲ ಮಳೆ ತಂಪನ್ನೆರೆಯಿತು. ಬೆಳಗ್ಗೆಯಿಂದ ವಿಪರೀತ ಸೆಕೆಯಿಂದ ಕೂಡಿದ್ದ ವಾತಾವರಣವಿತ್ತು. ಸಂಜೆಯ ವೇಳೆ ದಿಢೀರನೇ ವಾತಾವರಣದಲ್ಲಿ ಬದಲಾವಣೆ ಉಂಟಾಗಿ ಜೋರು ಗಾಳಿ ಬೀಸಲಾರಂಭಿಸಿತು. ಸಂಜೆ 6ಕ್ಕೆ ಗುಡುಗು, ಸಿಡಿಲಿನಿಂದ ಕೂಡಿದ್ದ ಮಳೆ ಸುರಿಯಲಾರಂಭಿಸಿತು. ಸುಮಾರು ಒಂದು ತಾಸಿಗೂ ಹೆಚ್ಚು ಕಾಲ ಬಿರುಸಿನಿಂದ ಮಳೆಯಾಯಿತು. ದಿಢೀರನೆ ಬಂದ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿತು. ಜೋರಾಗಿ ಸುರಿದ ಮಳೆಯಿಂದಾಗಿ ಚರಂಡಿಯಲ್ಲಿ ನೀರು ತುಂಬಿ ಹರಿಯಿತು. ಹೆಚ್ಚುವರಿ ನೀರು ರಸ್ತೆ ಮೇಲೆ ಹರಿಯುತ್ತಿದ್ದ ಪರಿಣಾಮ ವಾಹನ ಸಂಚಾರಕ್ಕೆ ತೊಂದರೆ ಉಂಟಾಯಿತು.

ಆಕಾಶವಾಣಿ ಕಾರ್ಯಕ್ರಮ ಮೊಟಕುಗೊಳಿಸಿದರೆ ಪ್ರತಿಭಟನೆ

ಕೊಡಗು ಆಮ್ ಆದ್ಮಿ ಪಾರ್ಟಿ ಎಚ್ಚರಿಕೆ

ಮಡಿಕೇರಿ, ಏ.13– ಮಡಿಕೇರಿ ಆಕಾಶವಾಣಿ ಕೇಂದ್ರದಲ್ಲಿ ಪ್ರಸಾರವಾಗುತ್ತಿದ್ದ ಕೊಡಗಿನ ಸಂಸ್ಕೃತಿಗೆ ಪೂರಕವಾದ ಕಾರ್ಯಕ್ರಮಗಳು ಮತ್ತು ನಿಧನ ಸುದ್ದಿಯನ್ನು ಯಾವುದೇ ಕಾರಣಕ್ಕೂ ಮೊಟಕುಗೊಳಿಸಬಾರದು ಎಂದು ಆಮ್ ಆದ್ಮಿ ಪಾರ್ಟಿಯ ಕೊಡಗು ಜಿಲ್ಲಾ ಘಟಕ ಒತ್ತಾಯಿಸಿದೆ.

ಪತ್ರಿಕಾ ಪ್ರಕಟಣೆ ನೀಡಿರುವ ಪಕ್ಷದ ಜಿಲ್ಲಾ ಉಸ್ತುವಾರಿಗಳಾದ ಉದಯಕುಮಾರ್, ಕೋಳಿಬೈಲು ಚಿಣ್ಣಪ್ಪ ವೆಂಕಟೇಶ್ ಹಾಗೂ ಜಿಲ್ಲಾ ಸಂಚಾಲಕ ಹೆಚ್.ಜಿ.ಬಾಲಸುಬ್ರಮಣ್ಯ, ಈ ಹಿಂದಿನಂತೆ ಕಾರ್ಯಕ್ರಮಗಳನ್ನು ಪ್ರಸಾರ ಮಾಡದಿದ್ದಲ್ಲಿ ಆಕಾಶವಾಣಿ ವಿರುದ್ಧ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಹಿಂದೆ ಇಂದಿರಾ ಗಜರಾಜ್ ಅವರು ಮಡಿಕೇರಿ ಆಕಾಶವಾಣಿ ನಿಲಯ ನಿರ್ದೇಶಕರಾಗಿ ನೇಮಕಗೊಂಡ ನಂತರ ಕೊಡಗಿಗೆ ಪೂರಕವಾದ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಸ್ಥಳೀಯ ಜನರ ಅಭಿಮಾನ ಗಳಿಸಿದ್ದರು. 1993ರಿಂದ ನಿಧನ ಸುದ್ದಿ ಪ್ರಸಾರವಾಗುತ್ತಿದ್ದು, ಗುಡ್ಡಗಾಡು ನಿವಾಸಿಗಳಿಗೆ ಇದು ಹೆಚ್ಚು ಸಹಕಾರಿಯಾಗಿದೆ. ಕೊಡಗಿನ ಯಾವುದೇ ಕುಗ್ರಾಮದ ಮೂಲೆಗೂ ತಮ್ಮ ಬಂಧು ಬಾಂಧವರ ನಿಧನ ಸುದ್ದಿ ಆಕಾಶವಾಣಿ ಮೂಲಕ ತಲುಪುತ್ತಿತ್ತು. ದೂರವಾಣಿ, ಮೊಬೈಲ್ ಸಂಪರ್ಕ ಇಲ್ಲದ ಗ್ರಾಮಗಳಿಗೂ ಸುದ್ದಿ ತಿಳಿಯುತ್ತಿತ್ತು.

ಮರಣ ಹೊಂದಿದ ಬಂಧುಗಳ ಮುಖವನ್ನು ಕೊನೆಯದಾಗಿ ನೋಡುವುದು ಪುಣ್ಯಕಾರ್ಯ ಎಂಬ ಭಾವನೆ ಕೊಡವ, ಗೌಡ ಸೇರಿದಂತೆ ಜಿಲ್ಲೆಯ ಎಲ್ಲಾ ಜಾತಿ, ಜನಾಂಗದ ಮಂದಿಯಲ್ಲಿದೆ. ನಿಧನ ಸುದ್ದಿ ಪ್ರಸಾರಕ್ಕೆ ಆಕಾಶವಾಣಿ ಕೇಂದ್ರದ ಮುಖ್ಯ ಕಚೇರಿಯ ಅನುಮತಿ ಇದ್ದರೂ ಮಡಿಕೇರಿ ಕೇಂದ್ರ ಮೊಟಕುಗೊಳಿಸಲು ಹೊರಟಿದೆ. ಪ್ರತಿದಿನ ಬೆಳಗ್ಗೆ ಮತ್ತು ಸಂಜೆ ಪ್ರಸಾರವಾಗುತ್ತಿದ್ದ ಸುದ್ದಿಯನ್ನು ಒಂದು ಬಾರಿಗೆ ಸೀಮಿತಗೊಳಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಕಾಟಾಚಾರಕ್ಕೆ ಸುದ್ದಿ ಬಿತ್ತರಿಸುವುದರಿಂದ ಯಾರಿಗೂ ಪ್ರಯೋಜನವಿಲ್ಲ. ಸೀಮಿತ ಅವಧಿಯಲ್ಲಿ ದಿನಕ್ಕೆ ಎರಡು ಬಾರಿ ನಿಧನ ಸುದ್ದಿ ಪ್ರಸಾರವಾದರೆ ಮಾತ್ರ ಜನರಿಗೆ ತಲುಪಲು ಸಾಧ್ಯ. ಜನರ ತೆರಿಗೆ ಹಣದಿಂದ ನಡೆಯುತ್ತಿರುವ ಆಕಾಶವಾಣಿ ಕೇಂದ್ರ ಜನರಿಗೆ ಉಪಯೋಗವಾಗುವ ರೀತಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಿ ಪ್ರಸಾರ ಮಾಡಬೇಕೆಂದು ಅವರುಗಳು ಒತ್ತಾಯಿಸಿದ್ದಾರೆ. ತಪ್ಪಿದಲ್ಲಿ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ತಿಳಿಸಿದ್ದಾರೆ.

ಗೋಣಿಮರೂರಲ್ಲಿ ಏ.16 ರಂದು ಡಿಸಿ ವಾಸ್ತವ್ಯ

ಮಡಿಕೇರಿ, ಏ.13– ಜಿಲ್ಲಾಧಿಕಾರಿಗಳ ನಡೆ ಹಳ್ಳಿಯ ಕಡೆ ಕಾರ್ಯಕ್ರಮದ ಪ್ರಯುಕ್ತ ಏ.16 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಯವರ ಗ್ರಾಮ ವಾಸ್ತವ್ಯ ಕಾರ್ಯಕ್ರಮವು ಸೋಮವಾರಪೇಟೆ ತಾಲೂಕಿನ ಗೋಣಿಮರೂರು ಸರ್ಕಾರಿ ಹಿರಿಯ ಪ್ರಾಥಮಿಕ/ ಪ್ರೌಢಶಾಲೆಯಲ್ಲಿ ನಡೆಯಲಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಲಿದ್ದು, ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ, ಏ.12ರೊಳಗೆ ತಮ್ಮ ಅಹವಾಲುಗಳ ಅರ್ಜಿಯನ್ನು ಸಂಬಂಧಪಟ್ಟ ನಾಡಕಚೇರಿ, ತಾಲೂಕು ಕಚೇರಿಗೆ ಸಲ್ಲಿಸುವಂತೆ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ನಂಜುಂಡೇಗೌಡ ಕೋರಿದ್ದಾರೆ.

ವಿ.ಪೇಟೆಯಲ್ಲಿ ಕ್ರಿಕೆಟ್ ತರಬೇತಿ ಕಾರ್ಯಾಗಾರ



ವಿರಾಜಪೇಟೆ, ಏ.13– ಕೊಡಗಿನ ಗ್ರಾಮೀಣ ಭಾಗದಲ್ಲಿ ಎಲೆ ಮರೆಯ ಕಾಯಿಯಂತಿರುವ ವಿದ್ಯಾರ್ಥಿಗಳು ಹಾಗೂ ಯುವಕರು ಕ್ರೀಡೆಯಲ್ಲಿ ಭಾಗವಹಿಸುವಂತಾಗಬೇಕು ಎಂದು ರಾಜ್ಯ ಕ್ರಿಕೆಟ್ ಆಟಗಾರ ಕೆ.ಪಿ.ಪ್ರಭು ಅಪ್ಪಣ್ಣ ಹೇಳಿದರು

ವಿರಾಜಪೇಟೆಯಲ್ಲಿರುವ 'ಪ್ರಗತಿ ಶಾಲೆಯ ವಿದ್ಯಾರ್ಥಿಗಳಿಗೆ ಶಾಲಾ ಆವರಣದಲ್ಲಿ ಏರ್ಪಡಿಸಲಾಗಿದ್ದ ಕ್ರಿಕೆಟ್ ತರಬೇತಿ ಕಾರ್ಯಾಗಾರ'ದಲ್ಲಿ ಬೌಲಿಂಗ್ ಮಾಡಿದ ಬಳಿಕ ಮಾತನಾಡಿ, ಈ ಹಿಂದೆ ಕ್ರಿಕೆಟ್ ತರಬೇತಿ ಪಡೆಯಲು ಪಾಲಿಬೆಟ್ಟಕ್ಕೆ ಹೋಗಬೇಕಾಗಿತ್ತು. ಆದರೆ ಇಂದು ತಾಲೂಕಿನಲ್ಲಿ 2–3 ಕಡೆಗಳಲ್ಲಿ ತರಬೇತಿ ನೀಡುತ್ತಿದೆ ವಿದ್ಯಾರ್ಥಿಗಳು ಹಾಗೂ ಯುವಕರು ಇಂದಿನ ತರಬೇತಿಯ ಸದುಪಯೋಗಪಡಿಸಿಕೊಳ್ಳಬೇಕು ಎಂದರಲ್ಲದೆ, ಐಪಿಎಲ್ ಆಟದಲ್ಲಿ ನಾನು 8 ಬಾರಿ ಭಾಗವಹಿಸಿರುವುದಾಗಿ ತಿಳಿಸಿದ ಪ್ರಭು ಅಪ್ಪಣ್ಣ ಅವರು ವಿದ್ಯಾರ್ಥಿಗಳು ಕ್ರಿಕೆಟ್ ಆಟದಲ್ಲಿ ಸದಾ ಭಾಗವಹಿಸಬೇಕು. ಇದಕ್ಕೆ ಗುರಿ ಮತ್ತು ಶ್ರದ್ಧೆ ಮುಖ್ಯವಾಗಿದೆ. ಇಲ್ಲಿ ತರಬೇತಿ ಪಡೆದ ಬಳಿಕ ಮಂಗಳೂರಿನಲ್ಲಿ ಸ್ಪರ್ಧೆಗೆ ಭಾಗವಹಿಸಿದ ನಂತರ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಭಾಗವಹಿಸುವಂತಾಗಬೇಕು ಎಂದರು.

ಪ್ರಗತಿ ಶಾಲೆಯ ಆಡಳಿತ ಅಧಿಕಾರಿ ರಗ್ಬಿ ಆಟಗಾರ ಮಾದಂಡ ತಿಮ್ಮಯ್ಯ ಅವರು ಮಾತನಾಡಿ, ವಿದ್ಯಾರ್ಥಿಗಳು ಕ್ರಿಕೆಟ್ ಆಟದ ಬಗ್ಗೆ ನುರಿತ ಆಟಗಾರರೊಂದಿಗೆ ಮಾಹಿತಿ ಪಡೆದುಕೊಳ್ಳಬೇಕು. ತಮ್ಮ ಮಕ್ಕಳು ಕ್ರೀಡೆಯಲ್ಲಿ ಉತ್ತಮ ರೀತಿ ಭಾಗವಹಿಸಲು ಪೋಷಕರು ಪ್ರೋತ್ಸಾಹ ನೀಡುವಂತಾಗಬೇಕು ಎಂದರು. ತರಬೇತಿ ಕಾರ್ಯಾಗಾರದಲ್ಲಿ ದೈಹಿಕ ಶಿಕ್ಷಕ ಕವಿನ್, ತರಬೇತುದಾರ ಶಿವಶಕ್ತಿ, ಪೋಷಕರಾದ ಚೇಂದಂಡ ಪ್ರವೀಣ್, ನವಿನ್, ಪೂವಯ್ಯ, ಕಲ್ಪನ ಪೊಣಚ್ಚ ಹಾಗೂ ಇತರರು ಭಾಗವಹಿಸಿದ್ದರು.

ಮೂರನೇ ಪುಟದಿಂದ

ಸಚಿವ ಈಶ್ವರಪ್ಪ–A1

ಮನವಿ ಸಲ್ಲಿಸಿದ್ದರು. ಈ ವೇಳೆ ಈಶ್ವರಪ್ಪನವರು ಎಷ್ಟೇ ಹಣ ಖರ್ಚಾದರೂ ಪರವಾಗಿಲ್ಲ ಕಾಮಗಾರಿ ಆರಂಭಿಸಿ, ನಾನು ಹಣ ಬಿಡುಗಡೆ ಮಾಡುತ್ತೇನೆ ಎಂದು ಭರವಸೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಹಿಂಡಲಗಾ ಗ್ರಾಪಂ ಅಧ್ಯಕ್ಷರು ಮತ್ತು ಮುಖಂಡರು ತಿಳಿಸಿದ ಮೇರೆಗೆ ಸಂತೋಷ್ ಪಾಟೀಲ್ ತನ್ನ ಸ್ವಂತ ಹಣದಲ್ಲಿ ಕಾಮಗಾರಿ ಮುಗಿಸಿದ್ದರು ಎಂದು ದೂರಿನಲ್ಲಿ ಹೇಳಲಾಗಿದೆ. ನಾಲ್ಕು ಕೋಟಿ ರೂ.ಗಳಿಗಿಂತ ಹೆಚ್ಚು ಮೊತ್ತದ ಕಾಮಗಾರಿ ನಡೆಸಿದ್ದ ಸಂತೋಷ್, ಬೆಂಗಳೂರಿಗೆ ತೆರಳಿ ಈಶ್ವರಪ್ಪನವರನ್ನು ಭೇಟಿ ಮಾಡಿ ಬಿಲ್ ಪಾಸ್ ಮಾಡುವಂತೆ ವಿನಂತಿಸಿದ್ದಾರೆ. ಆದರೆ ಈಶ್ವರಪ್ಪ, ಬಸವರಾಜು ಮತ್ತು ರಮೇಶ್ ಅವರು ಶೇ.40 ರಷ್ಟು ಕಮಿಷನ್ ಕೊಟ್ಟರೆ ಮಾತ್ರ ಬಿಲ್ ಪಾಸ್ ಮಾಡುವುದಾಗಿ ತಿಳಿಸಿದ್ದಾರೆ. ಈ ಸಂಬಂಧ ಬೆಳಗಾವಿ ಗುತ್ತಿಗೆದಾರರ ಸಂಘದವರು ಸರ್ಕಾರಕ್ಕೆ ದೂರು ಸಲ್ಲಿಸಿದ್ದಾರೆ. ಅಲ್ಲದೆ, ಸಂತೋಷ್ ಅವರು ಮಾರ್ಚ್ ತಿಂಗಳಿನಲ್ಲಿ ಸಚಿವ ಈಶ್ವರಪ್ಪ ಶೇ.40ರಷ್ಟು ಕಮಿಷನ್‌ಗೆ ಬೇಡಿಕೆ ಇಟ್ಟಿದ್ದಾರೆಂದು ಮಾಧ್ಯಮಗಳ ಮುಂದೆ ಆರೋಪಿಸಿದ್ದರು. ಅವರು ಈ ಕುರಿತು ರಾಜ್ಯ ಬಿಜೆಪಿ ಉಸ್ತುವಾರಿ ಅರುಣಸಿಂಗ್ ಹಾಗೂ ಪ್ರಧಾನಿ ಕಚೇರಿಗೆ ಮತ್ತು ದೆಹಲಿ ಮಟ್ಟದ ಬಿಜೆಪಿ ವರಿಷ್ಠರಿಗೆ ಮನವಿ ಸಲ್ಲಿಸಿದ್ದರು. ಆದರೂ ಕೂಡ ಸಂತೋಷ್ ಪಾಟೀಲ್ ನಡೆಸಿದ ಕಾಮಗಾರಿಯ ಬಿಲ್ ಪಾಸ್ ಮಾಡಿಲ್ಲ ಇದರಿಂದ ಮನನೊಂದ ಅವರು ತನ್ನ ಮೊಬೈಲ್‌ನಿಂದ ವಾಟ್ಸಾಪ್ ಮುಖೇನ ಡೆತ್‌ನೋಟ್ ಸಂದೇಶವನ್ನು ಮಾಧ್ಯಮಗಳಿಗೆ ಹಾಗೂ ಆಪ್ತರಿಗೆ ಕಳುಹಿಸಿ, ಉಡುಪಿಯ ಶಾಂಭವಿ ಲಾಡ್ಜ್‌ನ 7ನೇ ನಂಬರ್ ರೂಂನಲ್ಲಿ ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದು, ಇದಕ್ಕೆ ಸಚಿವರಾದ ಈಶ್ವರಪ್ಪ, ಅವರ ಆಪ್ತರಾದ ರಮೇಶ್ ಮತ್ತು ಬಸವರಾಜು ಕಾರಣರಾಗಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಬರೀ ವಾಟ್ಸಾಪ್ ಸಂದೇಶ

ನಾಯಕರ ವಿರುದ್ಧ ಈಶ್ವರಪ್ಪ ಆರೋಪಿಸಿದರು. ಸಂತೋಷ್ ಸಾವಿನ ಪ್ರಕರಣ ನಂತರ ಕೇಂದ್ರ ನಾಯಕರು ನನ್ನ ಬಳಿ ವಿವರಣೆ ಕೇಳಿಲ್ಲ, ಕೇಂದ್ರ ನಾಯಕರವರೆಗೆ ಈ ವಿಷಯ ಹೋಗೇ ಇಲ್ಲ, ನಾಳೆ ಅಥವಾ ನಾಡಿದ್ದು ಬೆಂಗಳೂರಿಗೆ ಹೋಗಿ ಸಿಎಂ ಬೊಮ್ಮಾಯಿಯವರನ್ನು ಖುದ್ದು ಭೇಟಿ ಮಾಡಿ ಮಾತುಕತೆ ನಡೆಸುತ್ತೇನೆ. ಈಗಾಗಲೇ ಸಮಗ್ರ ತನಿಖೆ ನಡೆಸಲು ಸಿಎಂ ಬಳಿ ಮನವಿ ಮಾಡಿದ್ದೇನೆ, ಸಂತೋಷ್ ಸಾವಿನ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ಒತ್ತಾಯಿಸಿದರು. ನಾನು ರಾಜಕಾರಣ ರೀತಿಯಲ್ಲಿಯೂ ಮಾತನಾಡಬಲ್ಲೆ, ಈ ಪ್ರಕರಣದಲ್ಲಿ ದಾಖಲೆ ಸಮೇತ ಮಾತನಾಡಿದ್ದೇನೆ, ವಿಧಾನ ಸೌಧದಲ್ಲಿ ಕಲಾಪ ವೇಳೆ ಕೂಡ ಉತ್ತರಿಸಿದ್ದೇನೆ. ಇದು ನನಗೇನು ಹೊಸದಲ್ಲ, ಇಂತಹ ನೂರಾರು ಕೇಸುಗಳನ್ನು ನೋಡಿದ್ದೇನೆ ಎಂದು ಸಚಿವ ಕೆ.ಎಸ್.ಈಶ್ವರಪ್ಪ ಸ್ಪಷ್ಟಪಡಿಸಿದ್ದಾರೆ.

ರಾಜ್ಯಪಾಲರಿಗೆ ಮನವಿ

ಬಂದಿದೆ. ಆದರೆ ಈಗ ಬಿಜೆಪಿ ಸರ್ಕಾರದ ದುರಾಡಳಿತ ಹಾಗೂ ಭ್ರಷ್ಟಾಚಾರ ವಿರುದ್ಧ ಗುತ್ತಿಗೆದಾರರ ಸಂಘ ಧ್ವನಿ ಎತ್ತಿದೆ. ಇದಕ್ಕೆ ಬಿಜೆಪಿ, ಹಿಂದೂ ಕಾರ್ಯಕರ್ತ ಹಾಗೂ ಗುತ್ತಿಗೆದಾರ ಸಚಿವ ಈಶ್ವರಪ್ಪನವರ ಭ್ರಷ್ಟಾಚಾರದ ಬಗ್ಗೆ ಕೇಂದ್ರ ಸಚಿವರು, ಬಿಜೆಪಿ ರಾಷ್ಟ್ರೀಯ ನಾಯಕರು ಹಾಗೂ ಸಿಎಂಗೆ ಪತ್ರ ಬರೆದಿರುವುದು ಸಾಕ್ಷಿಯಾಗಿದೆ ಎಂದರು.

ಈಗ ಸಂತೋಷ್ ಪಾಟೀಲ್ ಆತ್ಮಹತ್ಯೆ ಮಾಡಿಕೊಂಡು ತನ್ನ ಸಾವಿಗೆ ಸಚಿವರೇ ಕಾರಣ ಎಂದು ಬರೆದಿಟ್ಟಿದ್ದಾರೆ. ರಾಜ್ಯದಲ್ಲಿ ಗುತ್ತಿಗೆದಾರರಿಂದ 40% ಕಮಿಷನ್‌ಗಾಗಿ ಸರ್ಕಾರದ ಸಚಿವರು, ಶಾಸಕರು, ಸಂಸದರು, ಅಧಿಕಾರಿಗಳು ಆಗ್ರಹಿಸುತ್ತಿದ್ದಾರೆ ಎಂದು ಗುತ್ತಿಗೆದಾರ ಸಂಘದ ಅಧ್ಯಕ್ಷ ಕೆಂಪಣ್ಣ ಪ್ರಧಾನಿಗೆ ಪತ್ರ ಬರೆದಿದ್ದರು. ಈ ವಿಚಾರ ಬಹಿರಂಗ ಪಡಿಸಲು 40% ಕಮಿಷನ್ ಭ್ರಷ್ಟಾಚಾರದ ಬಗ್ಗೆ ಚರ್ಚೆ ಆಗಬೇಕು ಎಂದು ಅಧಿವೇಶನದಲ್ಲಿ ಗೊತ್ತುವಳಿ ಮಂಡನೆ ಮಾಡಿದರೂ ಚರ್ಚೆಗೆ ಅವಕಾಶ ನೀಡದೆ ವಜಾಗೊಳಿಸಿದರು. ಬಹುಶಃ ಆ ಚರ್ಚೆ ಆಗಿದ್ದರೆ ಇಂತಹ ಘಟನೆ ನಡೆಯುತ್ತಿರಲಿಲ್ಲ, ಸಂತೋಷ್ ಪಾಟೀಲ್ ಆತ್ಮಹತ್ಯೆ ಆಗುತ್ತಿರಲಿಲ್ಲ ಎಂದು ಭಾವಿಸುತ್ತೇನೆ. ನಾವು ಎಷ್ಟೇ ಮನವಿ, ಆಗ್ರಹ ಮಾಡಿದರೂ ಸರಕಾರ ಯಾವುದೇ ತನಿಖೆ ಮಾಡಲಿಲ್ಲ. ಕ್ರಮ ಕೈಗೊಳ್ಳಲಿಲ್ಲ ಎಂದು ಆಪಾದಿಸಿದರು.

ಮೃತ ಗುತ್ತಿಗೆದಾರ ಸಂತೋಷ್ ಪಾಟೀಲ್ ಕುಟುಂಬದ ಸದಸ್ಯರು ಹಾಗೂ ಅವರ ಪತ್ನಿಯ ನೋವನ್ನು ಎಲ್ಲರೂ ನೋಡುತ್ತಿದ್ದೀರಿ. ಸಂತೋಷ್ ಬಿಜೆಪಿಯ ವರಿಷ್ಠರನ್ನು ಭೇಟಿ ಮಾಡಲು ಉಡುಪಿಗೆ ಹೋಗಿದ್ದ ಎಂದು ಮಾಧ್ಯಮಗಳ ವರದಿ ಬಂದಿವೆ. ತನಗೆ ಯಾರಿಂದಲೂ ನ್ಯಾಯ ಸಿಗುವ ಸ್ಪಂದನೆ ಇಲ್ಲದ ಕಾರಣಕ್ಕೆ ಆತ ನೊಂದು ಭ್ರಷ್ಟಾಚಾರಕ್ಕೆ ಕಾರಣರಾದ ಸಚಿವರ ಹೆಸರು ಬರೆದು ಸಾವಿಗೆ ಶರಣಾಗಿದ್ದಾನೆ. ರಾಜ್ಯದಲ್ಲಿ ಇರುವ ಕಾನೂನಿನ ಪ್ರಕಾರ ನಡೆದುಕೊಳ್ಳಬೇಕು ಎಂದು ನಾವು ಆಗ್ರಹಿಸುತ್ತಿದ್ದೇವೆಯೇ ಹೊರತು ಹೆಚ್ಚಿನದಾಗಿ ಏನನ್ನೂ ಕೇಳುತ್ತಿಲ್ಲ. ಸಾಮಾನ್ಯ ಜನರ ಮೇಲೆ ಹೇಗೆ ಪ್ರಕರಣ ದಾಖಲಾಗಿ ಕ್ರಮ ಜರುಗಿಸಲಾಗುತ್ತದೆಯೋ ಅದೇ ರೀತಿ ಇಲ್ಲೂ ಕ್ರಮ ಜರುಗಿಸಬೇಕು. ಸಚಿವ ಈಶ್ವರಪ್ಪ ರಾಜ್ಯ ರಾಜಕೀಯದಲ್ಲಿ ಭ್ರಷ್ಟಾಚಾರದ ಪಿತಾಮಹ. ಕಳೆದ ಬಾರಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಅವರ ಮನೆಯಲ್ಲಿ ನೋಟು ಎಣಿಸುವ ಯಂತ್ರಗಳು ಸಿಕ್ಕಿದ್ದವು. ಅವರ ವಿರುದ್ಧ ಈಗ ಅವರದೇ ಪಕ್ಷದ ಕಾರ್ಯಕರ್ತ 40% ಕಮಿಷನ್ ಆರೋಪ ಮಾಡಿದ್ದಾನೆ. ಪ್ರಕರಣದಲ್ಲಿ ಎಫ್‌ಐಆರ್ ದಾಖಲಾಗಿದ್ದು, ಅವರ ಬಂಧನ ಆಗಬೇಕು. ಈ ಎಫ್‌ಐಆರ್ ಆಧಾರದ ಮೇಲೆ ಅವರನ್ನು ಬಂಧಿಸಬೇಕು. ಈ ಪ್ರಕರಣದ ವಿಚಾರಣೆಯನ್ನು ಯಾರು ಮಾಡುತ್ತಾರೋ ಮಾಡಲಿ. ಆದರೆ ಆತ್ಮಹತ್ಯೆಗೆ ಪ್ರಚೋದನೆ ಜತೆಗೆ ಭ್ರಷ್ಟಾಚಾರ ಪ್ರಕರಣ ದಾಖಲಿಸಿ ವಿಚಾರಣೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಪಾರ್ಥಿವ ಶರೀರ ಕುಟುಂಬದ ವಶಕ್ಕೆ

ಸದಸ್ಯರ ವಶಕ್ಕೆ ಇಂದು ರಾತ್ರಿ ಹಸ್ತಾಂತರಿಸಲಾಯಿತು. ಸಚಿವ ಈಶ್ವರಪ್ಪ ಮತ್ತು ಅವರ ಆಪ್ತರನ್ನು ಬಂಧಿಸುವವರೆಗೂ ಮೃತದೇಹವನ್ನು ಸ್ವೀಕರಿಸುವುದಿಲ್ಲ ಹಾಗೂ ಬೆಳಗಾವಿಗೆ ಕೊಂಡೊಯ್ಯುವುದಿಲ್ಲ ಎಂದು ಕುಟುಂಬ ಸದಸ್ಯರು ಪಟ್ಟು ಹಿಡಿದಿದ್ದರು. ಸ್ಥಳಕ್ಕೆ ಆಗಮಿಸಿದ ಪಶ್ಚಿಮ ವಲಯ ಐಜಿಪಿ ದೇವಜ್ಯೋತಿ ರೇ, ಆರೋಪಿಗಳನ್ನು ಬಂಧಿಸುವ ಭರವಸೆ ನೀಡಿದ ನಂತರ ಕುಟುಂಬದ ಸದಸ್ಯರು ದೇಹವನ್ನು ಸ್ವೀಕರಿಸಿ ಬೆಳಗಾವಿಗೆ ಕೊಂಡೊಯ್ದರು.

ಬಿಜೆಪಿ ವರಿಷ್ಠರಲ್ಲೇ ಗೊಂದಲ

ಬಸವರಾಜ ಬೊಮ್ಮಾಯಿ ಇಕ್ಕಟ್ಟಿಗೆ ಸಿಲುಕಿದ್ದಾರೆ. ಈಶ್ವರಪ್ಪ ಅವರ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಪಷ್ಟ ತೀರ್ಮಾನ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ. ಆದರೆ ಅವರು, ವರಿಷ್ಠರ ಜೊತೆ ನಿರಂತರವಾಗಿ ಸಂಪರ್ಕದಲ್ಲಿದ್ದಾರೆ. ಇದರ ಮಧ್ಯೆ ರಾಜ್ಯದ ಉಸ್ತುವಾರಿ ಹೊಣೆ ಹೊತ್ತ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್‌ಸಿಂಗ್, ಈಶ್ವರಪ್ಪ ರಾಜೀನಾಮೆ ಬಗ್ಗೆ ಶೀಘ್ರವೇ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ಕರ್ನಾಟಕದಲ್ಲಿ ನಡೆದಿರುವುದು ಸಣ್ಣ ಘಟನೆಯಲ್ಲ. ಇದರ ಹಿಂದೆ ದೊಡ್ಡ ಕೈವಾಡವಿದೆ. ಸಾವಿನ ಮನೆಯಲ್ಲಿ ಕಾಂಗ್ರೆಸ್ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಸಂತೋಷ್ ಪಾಟೀಲ್ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರು ಎಲ್ಲ ಆಯಾಮಗಳಿಂದ ತನಿಖೆ ನಡೆಸುತ್ತಿದ್ದಾರೆ. ಇದನ್ನು ನಾವು ಸಣ್ಣ ಘಟನೆ ಎಂದು ಪರಿಗಣಿಸಿಲ್ಲ. ಇದು ಗಂಭೀರ ವಿಷಯವಾಗಿದೆ. ಶೀಘ್ರದಲ್ಲೇ ಒಂದು ನಿರ್ಣಯಕ್ಕೆ ಬರುತ್ತೇವೆ ಎಂದು ತಿಳಿಸಿದ್ದಾರೆ.

ದರ ಇಳಿದರೂ ಲಸಿಕೆ ಪಡೆಯದ ಜನ

ಆಸ್ಪತ್ರೆಗಳು ಪಾವತಿಸಿದ ಹೆಚ್ಚುವರಿ ಹಣವನ್ನು ಸರಿದೂಗಿಸಲು ಲಸಿಕೆ ಕಂಪನಿಗಳು ನೀಡುವ ಉಚಿತ ಹೆಚ್ಚುವರಿ ಡೋಸ್‌ಗಳನ್ನು ಸ್ವೀಕರಿಸಿಲ್ಲ. ಬೆಲೆ, ಬೇಡಿಕೆಯ ಕೊರತೆ ಕೂಡ ಎದುರಾಗುತ್ತಿದ್ದು, ಲಸಿಕೆಗಳು ವ್ಯರ್ಥವಾಗುವ ಭಯ ಅವರಲ್ಲಿದೆ. ಇದೀಗ ಮರುಪಾವತಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆಂದು ಹೇಳಿದ್ದಾರೆ. ಈವರೆಗೂ 18ರಿಂದ 59 ವರ್ಷದೊಳಗಿನ 2,218 ಜನರೂ ಮಾತ್ರ ಲಸಿಕೆ ಪಡೆದುಕೊಂಡಿದ್ದಾರೆ, 4,07,88,909 ಜನರು ಮೊದಲ ಡೋಸ್ ಮತ್ತು 3,88,77,844 ಜನರು 2ನೇ ಡೋಸ್ ಲಸಿಕೆ ಪಡೆದುಕೊಂಡಿದ್ದಾರೆ. Covaxin ಮತ್ತು Covishield ಬೆಲೆಯನ್ನು ಶನಿವಾರ ಲಸಿಕಾ ಕಂಪನಿಗಳು 225 ರೂ.ಗೆ ಇಳಿಸಿದ್ದರೂ, ಈಗಾಗಲೇ ಹಳೆಯ ದರದಲ್ಲಿ ಲಸಿಕೆಗಳನ್ನು ಖರೀದಿಸಿದ ಖಾಸಗಿ ಆಸ್ಪತ್ರೆಗಳು ಹಳೆಯ ದರವನ್ನು ಮುಂದುವರಿಸಿವೆ.

ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಪ್ರಕರಣ

ನಾನು ರಾಜೀನಾಮೆ ಕೊಟ್ಟರೂ, ಕೊಡದಿದ್ದರೂ ತನಿಖೆಯಂತೂ ನಡೆಯುತ್ತೆ



ಬೆಂಗಳೂರಿಗೆ ಹೊರಡುವ ಮುನ್ನ ಮೈಸೂರಲ್ಲಿ ಸಚಿವ ಈಶ್ವರಪ್ಪ ಹೇಳಿಕೆ

ಮೈಸೂರು, ಏ.13(ಎಂಟಿವೈ)– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ನಾನು ಬಿಜೆಪಿ ಕಾರ್ಯಕರ್ತ. ಸಿಎಂ ರಾಜೀನಾಮೆ ಕೇಳಿದರೆ ಕೊಡಬೇಕು. ರಾಜೀನಾಮೆ ಕೊಟ್ಟರೂ, ಕೊಡದಿದ್ದರೂ ತನಿಖೆ ಆಗಬೇಕು. ಸತ್ಯಾಂಶ ಹೊರ ಬರಬೇಕು ಎಂದು ಸಚಿವ ಕೆ.ಎಸ್.ಈಶ್ವರಪ್ಪ ತಿಳಿಸಿದ್ದಾರೆ.

ಮೈಸೂರಿನ ಲಲಿತಮಹಲ್ ಹೋಟೆಲ್‌ನಲ್ಲಿ ವಿಭಾಗಮಟ್ಟದ ಬಿಜೆಪಿ ಕೋರ್ ಸಮಿತಿ ಸಭೆಯಲ್ಲಿ ಪಾಲ್ಗೊಂಡಿದ್ದ ಸಚಿವ ಕೆ.ಎಸ್.ಈಶ್ವರಪ್ಪ ಉಪಾಹಾರ ಸೇವಿಸಿದ ಬಳಿಕ ತುರ್ತಾಗಿ ಬೆಂಗಳೂರಿಗೆ ತೆರಳುವ ಮುನ್ನ ಪತ್ರಕರ್ತರೊಂದಿಗೆ ಮಾತನಾಡಿದರು.

ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣದಲ್ಲಿನ ವಾಟ್ಸ್ ಆಪ್ ಸಂದೇಶವನ್ನು ಡೆತ್‌ನೋಟ್ ಎನ್ನಲಾಗದು. ಆ ರೀತಿ ಯಾರು ಬೇಕಾದರೂ ಮಾಡಬಹುದು. ಡೆತ್ ನೋಟ್‌ನ್ನು ಕ್ರಿಯೇಟ್ ಮಾಡಲಾಗಿದೆ. ಸಂತೋಷ್ ಯಾರು ಎಂದು ನನಗೆ ಗೊತ್ತಿಲ್ಲ. ನನ್ನ ಭೇಟಿ ಮಾಡಿದ್ದೇನೆ ಎಂದು ಹೇಳಲು ಅವರಿಗೆ ಹೇಳಿ ಕೊಟ್ಟವರು ಯಾರು? ಹೇಳುವಂತೆ ಯಾರು ಹೇಳಿದರು? ಕೇಂದ್ರ ನಾಯಕರನ್ನು ಭೇಟಿ ಮಾಡಿಸಿದ್ದು ಯಾರು ಎಂಬುದು ಗೊತ್ತಾಗಬೇಕು ಎಂದು ಒತ್ತಾಯಿಸಿದರು.

ಸಂತೋಷ್ ಮೇಲೆ ನನಗೆ ಅನುಮಾನ ಇಲ್ಲ. ಅವರ ಸಾವಿನ ಹಿಂದೆ ಯಾರೋ ಇದ್ದಾರೆ. ಅವರ ಜೊತೆ ಇದ್ದವರು ಯಾರು, ಏನು ಕಥೆ ಎಲ್ಲ ಗೊತ್ತಾಗಬೇಕು. ಮುಖ್ಯಮಂತ್ರಿಯಾಗಲಿ, ಗೃಹಮಂತ್ರಿಯಾಗಲಿ ನನ್ನ ರಾಜೀನಾಮೆಯನ್ನು ಇದುವರೆಗೂ ಕೇಳಿಲ್ಲ. ಪ್ರಕರಣ ದಾಖಲಾಗಿ ತನಿಖೆ ನಡೆಯಲಿ. ಪ್ರಕರಣ ಮುಚ್ಚಿ ಹಾಕುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.

ಗಣಪತಿ ಪ್ರಕರಣದಲ್ಲಿ ಕೈಯಲ್ಲಿ ಪತ್ರ ಬರೆದು, ಜಾರ್ಜ್ ಹೆಸರು ಹೇಳಿ ಸಹಿ ಮಾಡಿದ್ದರು. ಆದರೆ ಇಲ್ಲಿ ಯಾರು ಬೇಕಾದರೂ ಟೈಪ್ ಮಾಡಿರಬಹುದು. ಹೀಗಾಗಿ ಇದರ ಹಿಂದೆ ಯಾರಿದ್ದಾರೆ ಎನ್ನುವುದರ ಕುರಿತು ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ವಿರೋಧ ಪಕ್ಷಗಳ ಒತ್ತಡಕ್ಕೆ ಮಣಿದು ಈಶ್ವರಪ್ಪ ರಾಜೀನಾಮೆ ನೀಡುವ ಪ್ರಸಂಗ ಬರುವುದಿಲ್ಲ

ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಸ್ಪಷ್ಟನೆ



ಮೈಸೂರು,ಏ.13(ಎಂಟಿವೈ)– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿರೋಧ ಪಕ್ಷಗಳ ಒತ್ತಡಕ್ಕೆ ಮಣಿದು ಸಚಿವ ಕೆ.ಎಸ್. ಈಶ್ವರಪ್ಪ ಅವರು ರಾಜೀನಾಮೆ ನೀಡುವ ಪ್ರಸಂಗ ಬರುವುದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಸ್ಪಷ್ಟಪಡಿಸಿದ್ದಾರೆ.

ಬಿಜೆಪಿ ಕಾರ್ಯಕಾರಿಣಿಯಲ್ಲಿ ಪಾಲ್ಗೊಂಡಿರುವ ನಳೀನ್ ಕುಮಾರ್ ಕಟೀಲ್ ಬುಧವಾರ ಬೆಳಗ್ಗೆ ಲಲಿತಮಹಲ್ ಪ್ಯಾಲೇಸ್ ಬಳಿ ಪತ್ರಕರ್ತರೊಂದಿಗೆ ಮಾತನಾಡಿ, ಕಾಂಗ್ರೆಸ್‌ನವರು ಒತ್ತಾಯಿಸಿದ ಮಾತ್ರಕ್ಕೆ ಸಚಿವ ಕೆ.ಎಸ್.ಈಶ್ವರಪ್ಪ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಾಧ್ಯವಿಲ್ಲ. ಈಶ್ವರಪ್ಪ ಅವರ ವಿರುದ್ಧ ದೂರು ನೀಡಲು ಕಾಂಗ್ರೆಸ್ ನಾಯಕರು ರಾಜ್ಯ ಪಾಲರನ್ನು ಭೇಟಿ ಮಾಡಿದ್ದಾರೆ. ಕಾಂಗ್ರೆಸ್ ನಾಯಕರು ಸಮಯವಿದ್ದರೆ ರಾಷ್ಟ್ರಪತಿಗಳನ್ನೇ ಭೇಟಿ ಮಾಡಲಿ. ಅದಕ್ಕೆ ನಮ್ಮದೇನು ಅಭ್ಯಂತರವಿಲ್ಲ ಎಂದು ಕಿಡಿಕಾರಿದರು.

ವಿರೋಧ ಪಕ್ಷಗಳು ಮೊದಲಿಂದ ಚಿಕ್ಕ ಚಿಕ್ಕ ವಿಚಾರವನ್ನು ಮುಂದಿಟ್ಟುಕೊಂಡು ರಾಜೀನಾಮೆ ಕೇಳುತ್ತಲೇ ಇವೆ. ಅವರು ಕೇಳಿದ್ದಕ್ಕೆಲ್ಲ ರಾಜೀನಾಮೆ ಕೊಡಲು ಸಾಧ್ಯವಿಲ್ಲ. ಈ ಹಿಂದೆ ಡಿವೈಎಸ್ಪಿ ಗಣಪತಿ ಆತ್ಮಹತ್ಯೆ ಪ್ರಕರಣದಲ್ಲಿ ಅಂದು ಸಚಿವರಾಗಿದ್ದ ಜಾರ್ಜ್ 7 ತಿಂಗಳ ಬಳಿಕ ರಾಜೀನಾಮೆ ನೀಡಿದ್ದರು. ಗಣಪತಿ ಕೇಸ್ ಬೇರೆ, ಗುತ್ತಿಗೆದಾರ ಸಂತೋಷ್ ಪಾಟೀಲ್ ಕೇಸ್ ಬೇರೆ. ಈ ಕೇಸ್ ಬೆಳಕಿಗೆ ಬಂದ ಕೂಡಲೇ ತನಿಖೆಗೆ ಆದೇಶಿಸಿದ್ದೇವೆ. ಆರೋಪ ಸಾಬೀತಾಗುವ ಮುನ್ನವೇ ರಾಜೀನಾಮೆ ಕೇಳುವುದು ಸೂಕ್ತವಲ್ಲ. ಈಶ್ವರಪ್ಪ ರಾಜೀನಾಮೆ ಪಡೆಯುವ ಸ್ಥಿತಿ ಈಗ ನಿರ್ಮಾಣವಾಗಿಲ್ಲ. ತನಿಖೆ ನಡೆಯಲಿ, ಯಾರೇ ತಪ್ಪಿತಸ್ಥರಿದ್ದರು ಅವರ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದರು.

ಹಳೆ ಮೈಸೂರು ಭಾಗದಲ್ಲಿ ಸಮರ್ಥ ಅಭ್ಯರ್ಥಿಗಾಗಿ ಶೋಧ



ಮೈಸೂರು,ಏ.13(ಎಂಟಿವೈ)– ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಬುಧವಾರ ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳನ್ನು ಭೇಟಿ ಮಾಡಿ, ಆಶೀರ್ವಾದ ಪಡೆದರು.

ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಮಠಕ್ಕೆ ಇಂದು ಬೆಳಗ್ಗೆ ಆಗಮಿಸಿದ ಜಗದೀಶ್ ಶೆಟ್ಟರ್, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರನ್ನು ಭೇಟಿ ಕೆಲ ಕಾಲ ಚರ್ಚಿಸಿದರು.

ಶ್ರೀಗಳ ಆಶೀರ್ವಾದ ಪಡೆದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೈಸೂರಿನ ಲಲಿತಮಹಲ್ ಹೋಟೆಲ್‌ನಲ್ಲಿ ಮೈಸೂರು ವಿಭಾಗ ಮಟ್ಟದ ಕಾರ್ಯಕಾರಿಣಿ ನಡೆಯುತ್ತಿದೆ. ಈ ಸಭೆಯಲ್ಲಿ ಪಕ್ಷದ ಸಂಘಟನೆ, ಮುಂದಿನ ಚುನಾವಣೆಗೆ ಕೈಗೊಳ್ಳಬೇಕಾದ ಸಿದ್ಧತೆ ಬಗ್ಗೆ ಚರ್ಚಿಸಲಾಗಿದೆ. 4 ತಂಡಗಳಲ್ಲಿ ಪಕ್ಷ ಸಂಘಟನೆಗೆ ಬಗ್ಗೆ ಚರ್ಚೆ ಮಾಡಲಾಗುತ್ತಿದೆ. ಇಂದು ಮೈಸೂರಲ್ಲಿ ಸಭೆ ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಬಳ್ಳಾರಿ ಹಾಗೂ ಬೆಂಗಳೂರು ಭಾಗದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರ ಸಭೆ ನಡೆಸಲಾಗುವುದು. ಈ ಸಭೆಯಲ್ಲಿ ಸಂಘಟನೆ ಬಗ್ಗೆ ಸಾಧಕ–ಬಾಧಕಗಳನ್ನು ಚರ್ಚಿಸಲಾಗಿದೆ. ಯಾವ ಕ್ಷೇತ್ರದಲ್ಲಿ ನಮಗೆ ಸಮರ್ಥ ಅಭ್ಯರ್ಥಿಗಳಿಲ್ಲ ಎಂಬ ಮಾಹಿತಿ ಕಲೆ ಹಾಕಲಾಗಿದೆ. ಅಂತಹ ಕ್ಷೇತ್ರಗಳಲ್ಲಿ ಗೆಲ್ಲುವ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆ ಬಗ್ಗೆ ಚರ್ಚಿಸಲಾಗಿದೆ ಎಂದರು.

ರಾಜ್ಯದಲ್ಲಿ ಅವಧಿಗೂ ಮುನ್ನ ಚುನಾವಣೆ ನಡೆಯುವುದಿಲ್ಲ. ನನ್ನ ರಾಜಕೀಯ ಅನುಭವದಲ್ಲಿ ಹಾಗೂ ರಾಜ್ಯದ ರಾಜಕೀಯ ಇತಿಹಾಸವನ್ನು ಅವಲೋಕಿಸಿದರೆ, ಅವಧಿಗೂ ಮುನ್ನ ಚುನಾವಣೆ ನಡೆದಿರುವುದು ವಿರಳ. ಈ ಹಿನ್ನೆಲೆಯಲ್ಲಿ ಈ ಬಾರಿಯೂ ಅವಧಿಗೂ ಮುನ್ನ ಚುನಾವಣೆ ನಡೆಯುತ್ತದೆ ಎನ್ನುವುದು ಕೇವಲ ಊಹಾಪೋಹ. ಈ ಬಗ್ಗೆ ಪಕ್ಷದ ಆಂತರಿಕ ವಲಯದಲ್ಲಿ, ಕೋರ್ ಕಮಿಟಿ ಸಭೆಯಲ್ಲಿ, ಹೈಕಮಾಂಡ್ ಅಂಗಳದಲ್ಲೂ ಚರ್ಚೆಯಾಗಿಲ್ಲ ಎಂದು ಸ್ಪಷ್ಟಪಡಿಸಿದರು.

ತನಿಖೆ ಆದಾಗ ಮಾತ್ರ ಸತ್ಯಾಂಶ ಹೊರಬರುತ್ತದೆ: ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರ ಹಾಗೂ ಸಚಿವ ಈಶ್ವರಪ್ಪ ಹೇಳಿಕೆ ನೀಡಿದ್ದಾರೆ. ಪ್ರಕರಣದ ಬಗ್ಗೆ ತನಿಖೆ ಆದಾಗ ಮಾತ್ರ ಸತ್ಯಾಂಶ ಹೊರಬರುತ್ತದೆ ವಿರೋಧ ಪಕ್ಷದವರು ತಮ್ಮ ಕೆಲಸ ಮಾಡುತ್ತಿದ್ದಾರೆ. ಸರ್ಕಾರದ ಕಡೆಯಿಂದ ನಡೆಯಬೇಕಾದ ಪ್ರಕ್ರಿಯೆಗಳು ನಡೆಯುತ್ತಿವೆ. ತನಿಖಾ ವರದಿ ಬಂದ ನಂತರವಷ್ಟೇ ಎಲ್ಲಾ ವಿಚಾರಗಳು ಬಯಲಾಗಲಿವೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಪಕ್ಷದ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಹೇಳಿಕೆ ನೀಡಿದ್ದಾರೆ ಎಂದು ತಿಳಿಸಿದರು.

ಸಾಕ್ಷ್ಯನಾಶ ತಡೆಯಲು ಈಶ್ವರಪ್ಪ ರಾಜೀನಾಮೆ ನೀಡಬೇಕು

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಆಗ್ರಹ



ಮೈಸೂರು,ಏ.13(ಎಂಟಿವೈ)– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಪತ್ನಿ ಹಾಗೂ ಪೋಷಕರು ಸಚಿವ ಕೆ.ಎಸ್.ಈಶ್ವರಪ್ಪ ಅವರ ಹೆಸರು ಪ್ರಸ್ತಾಪಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದ ಸಾಕ್ಷ್ಯನಾಶ ಮಾಡುವುದನ್ನು ತಡೆಗಟ್ಟಲು ರಾಜೀನಾಮೆ ಪಡೆಯಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ದ್ರುವನಾರಾಯಣ್ ಆಗ್ರಹಿಸಿದ್ದಾರೆ.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಸಚಿವ ಕೆ.ಎಸ್.ಈಶ್ವರಪ್ಪ ಒಂದು ವೇಳೆ ರಾಜೀನಾಮೆ ನೀಡದೇ, ಅಧಿಕಾರದಲ್ಲಿ ಮುಂದುವರೆದರೆ ಸಾಕ್ಷ್ಯನಾಶದ ಸಾಧ್ಯತೆ ಹೆಚ್ಚಾಗಿದೆ. ಈಗಾಗಲೇ ಈಶ್ವರಪ್ಪ ವಿರುದ್ಧ ಪ್ರಕರಣ ದಾಖಲಾಗಿದೆ. ಪ್ರಕರಣ ದಾಖಲಾದ ನಂತರ ಅಧಿಕಾರದಲ್ಲಿ ಮುಂದುವರೆದ ಉದಾಹರಣೆಗಳಿಲ್ಲ ಎಂದರು. ನ್ಯಾಯಯುತ ಹಾಗೂ ನಿಷ್ಪಕ್ಷಪಾತ ತನಿಖೆಗೆ ಸರ್ಕಾರ ಈ ಕೂಡಲೇ ಈಶ್ವರಪ್ಪ ಅವರಿಂದ ರಾಜೀನಾಮೆ ಪಡೆಯಬೇಕು. ಗುತ್ತಿಗೆದಾರರ ಸಂಘದ ಅಧ್ಯಕ್ಷರು ಈ ಹಿಂದೆ ಶೇ.40 ರಷ್ಟು ಕಮಿಷನ್ ನೀಡಬೇಕು ಎಂದು ಆರೋಪಿಸಿದ್ದರು. ಈಗ ಈ ಆತ್ಮಹತ್ಯೆ ಪ್ರಕರಣ ಆರೋಪಕ್ಕೆ ಪುಷ್ಟಿ ನೀಡಿದೆ. ಇದೊಂದು ಭ್ರಷ್ಟ ಸರ್ಕಾರ ಎನ್ನುವುದನ್ನು ಸಾಬೀತು ಮಾಡಿದೆ ಎಂದು ಕಿಡಿಕಾರಿದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನಾನು ತಿನ್ನುವುದಿಲ್ಲ, ತಿನ್ನುವವರಿಗೂ ಬಿಡುವುದಿಲ್ಲ ಎಂದಿದ್ದರು. ಆದರೆ ಈಗ ನರೇಂದ್ರ ಮೋದಿ ಅವರು ಮೌನಕ್ಕೆ ಶರಣಾಗಿದ್ದಾರೆ. ಇದರ ಅರ್ಥ ಏನು? ಕೂಡಲೇ ಈಶ್ವರಪ್ಪ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ನಿಷ್ಪಕ್ಷಪಾತ ತನಿಖೆಗೆ ಸಹಕಾರ ನೀಡಬೇಕು ಎಂದು ಒತ್ತಾಯಿಸಿದರು.

ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ಸಚಿವರ ಮೇಲೆ ಈ ರೀತಿಯ ಗಂಭೀರ ಆರೋಪ ಬಂದಾಗ ರಾಜೀನಾಮೆ ಕೊಡಲೇಬೇಕು. ಆ ಮೂಲಕ ಪಾರದರ್ಶಕ ತನಿಖೆಗೆ ಸಹಕರಿಸಬೇಕು. ಈಶ್ವರಪ್ಪನವರು ರಾಜೀನಾಮೆ ಕೊಡದೇ ಇದ್ದರೆ, ಮುಖ್ಯಮಂತ್ರಿಗಳು ಸ್ವತಃ ತಾವೇ ರಾಜೀನಾಮೆ ಪಡೆಯಬೇಕು. ಈಗಾಗಲೇ ಕಾಂಗ್ರೆಸ್ ನಾಯಕರು ರಾಜ್ಯಪಾಲರನ್ನು ಭೇಟಿ ಮಾಡಿ, ಈಶ್ವರಪ್ಪ ಅವರನ್ನು ಸಚಿವ ಸಂಪುಟದಿಂದ ಕೈ ಬಿಡುವಂತೆ ಮನವಿ ಮಾಡಿದ್ದೇವೆ ಮುಂದಿನ ದಿನಗಳಲ್ಲಿ ಬಿಜೆಪಿ ಸರ್ಕಾರ ಹಾಗೂ ಈಶ್ವರಪ್ಪ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣ

ಕಾನೂನು ಪ್ರಕಾರ ಈಶ್ವರಪ್ಪ ಬಂಧಿಸದಿದ್ದರೆ ರೈತ ಸಂಘದಿಂದ ರಾಜಭವನಕ್ಕೆ ಮುತ್ತಿಗೆ

ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಎಚ್ಚರಿಕೆ



ಮೈಸೂರು, ಏ.13(ಆರ್‌ಕೆಬಿ)– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣ ಇಡೀ ಕರ್ನಾಟಕ ತಲೆ ತಗ್ಗಿಸುವ ಪ್ರಕರಣ. ಶೇ.40ರಷ್ಟು ಕಮಿಷನ್ ಬಗ್ಗೆ ಪ್ರಧಾನಮಂತ್ರಿಗೆ ಪತ್ರ ಬರೆದಿದ್ದರೂ ಅವರು ಇದನ್ನು ಗಂಭೀರವಾಗಿ ಪರಿಗಣಿಸಲಿಲ್ಲವೆಂದರೆ ಏನರ್ಥ?. ಇದರ ಬಗ್ಗೆ ಗಂಭೀರವಾಗಿ ಪರಿಗಣಿಸಿದ್ದರೆ ಸಂತೋಷ್ ಪಾಟೀಲ್ ಸಾವು ಸಂಭವಿಸುತ್ತಿರಲಿಲ್ಲ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಮೈಸೂರು ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ಜನತಾ ಪಕ್ಷದಲ್ಲಿ ಮೇಲಿನ ನಾಯಕರಿಂದ ಹಿಡಿದು ಕೆಳ ನಾಯಕತ್ವದವರೆಗೂ ಭ್ರಷ್ಟಾಚಾರ, ಪಾಲುದಾರಿಕೆ ತುಂಬಿ ತುಳುಕಿದೆ. ಈ ಪ್ರಕರಣವನ್ನು ಕರ್ನಾಟಕ ರಾಜ್ಯ ರೈತ ಸಂಘ ಗಂಭೀರವಾಗಿ ತೆಗೆದುಕೊಂಡಿದ್ದು, ಸಚಿವ ಈಶ್ವರಪ್ಪ ನೈತಿಕತೆ ಹೊತ್ತು ಕೂಡಲೇ ರಾಜೀನಾಮೆ ನೀಡಬೇಕು. ಪ್ರಕರಣದ ನಿಷ್ಪಕ್ಷಪಾತ ತನಿಖೆ ಆಗಬೇಕು ಎಂದು ಆಗ್ರಹಿಸಿದರು.

ಕಾನೂನು ಪ್ರಕಾರ 306 ಪ್ರಕರಣ ದಾಖಲಾದ ತಕ್ಷಣವೇ ಅವರನ್ನು ಬಂಧಿಸಬೇಕೆಂದು ಕಾನೂನು ಹೇಳುತ್ತದೆ. ಆದರೆ ಅವರನ್ನು ಬಂಧಿಸಿಲ್ಲದಿರುವುದು ಸಮಾಜಕ್ಕೆ ತಪ್ಪು ಸಂದೇಶ ಹೋಗುತ್ತದೆ. ಮೇಲ್ನೋಟಕ್ಕೆ ಪ್ರಕರಣವನ್ನು ಮುಚ್ಚಿ ಹಾಕಲು ಹೊರಟರೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅದಕ್ಕೆ ಬೆಲೆ ತೆರಬೇಕಾಗುತ್ತದೆ. ಮುಖ್ಯಮಂತ್ರಿಗಳೇ ರಾಜೀನಾಮೆ ನೀಡಬೇಕಾಗುತ್ತದೆ. ಇದಕ್ಕಾಗಿ ರೈತ ಸಂಘ ರಾಜಭವನಕ್ಕೆ ಮುತ್ತಿಗೆ ಹಾಕಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕಾಯಿದೆ ಪ್ರಕಾರ ಡೆತ್‌ನೋಟ್ ಬಹಳ ಪ್ರಮುಖವಾದ ಸಾಕ್ಷ್ಯವಾಗಲಿದ್ದು, ಪ್ರಕರಣದ ಸಮಗ್ರ ತನಿಖೆ ಆಗಬೇಕು. ಜಾಮೀನುರಹಿತವಾದ ಭಾರತೀಯ ದಂಡ ಸಂಹಿತೆ 306 ದಾಖಲಾಗುತ್ತಿದ್ದಂತೆ ಅವರು ಆರೋಪಿ ಆಗಿರುವುದರಿಂದ ಅವರನ್ನು ಕಾನೂನು ಪ್ರಕಾರ ಬಂಧಿಸಬೇಕು ಎಂದು ಆಗ್ರಹಿಸಿದ್ದರು.

ಸುದ್ದಿಗೋಷ್ಠಿಯಲ್ಲಿ ರೈತಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೊಸಕೋಟೆ ಬಸವರಾಜು ಮತ್ತು ಪದಾಧಿಕಾರಿಗಳಾದ ಪಿ.ಮರಂಕಯ್ಯ, ನಾಗನಹಳ್ಳಿ ವಿಜಯೇಂದ್ರ, ಮಂಡಕಳ್ಳಿ ಮಹೇಶ್ ಉಪಸ್ಥಿತರಿದ್ದರು.

ಈಶ್ವರಪ್ಪ ರಾಜೀನಾಮೆಗೆ ಒತ್ತಾಯಿಸಿ ಆಮ್ ಆದ್ಮಿ ಪ್ರತಿಭಟನೆ



ಮೈಸೂರು, ಏ.13(ಎಂಕೆ)– ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣ ಸಂಬಂಧ ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ರಾಜೀನಾಮೆ ನೀಡುವಂತೆ ಒತ್ತಾಯಿಸಿ ಆಮ್ ಆದ್ಮಿ ಪಕ್ಷದ(ಎಎಪಿ) ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಜಮಾಯಿಸಿದ ಆಮ್ ಆದ್ಮಿ ಪಾರ್ಟಿ ಕಾರ್ಯಕರ್ತರು ಸರ್ಕಾರದ ಗುತ್ತಿಗೆ ಕಾಮಗಾರಿಗಳಲ್ಲಿ ಶೇ.40 ರಷ್ಟು ಕಮಿಷನ್ ದಂಧೆ ನಡೆಯುತ್ತಿದೆ ಎಂದು ಆರೋಪಿಸಿ ಪ್ರಧಾನಿಯವರಿಗೆ ಪತ್ರ ಬರೆದಿದ್ದ ಗುತ್ತಿಗೆದಾರ ಸಂತೋಷ್ ಪಾಟೀಲ್ ನಿಗೂಢವಾಗಿ ಮೃತಪಟ್ಟಿದ್ದು, ಸಾಯುವ ಮುನ್ನ ತಮ್ಮ ಸಾವಿಗೆ ಸಚಿವ ಈಶ್ವರಪ್ಪ ಅವರೇ ಕಾರಣ ಎಂದಿದ್ದಾರೆ. ಆದ್ದರಿಂದ ಕೂಡಲೇ ಅವರನ್ನು ಬಂಧಿಸಬೇಕು ಎಂದು ಒತ್ತಾಯಿಸಿದರಲ್ಲದೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಗೆ ಪತ್ರ ಬರೆದು ಮನವಿ ಮಾಡಿದರು.

ಎಎಪಿ ಜಿಲ್ಲಾಧ್ಯಕ್ಷೆ ಮಾಲವಿಕ ಗುಬ್ಬಿವಾಣಿ, ಮಾಧ್ಯಮ ಸಂಚಾಲಕ ವಿದ್ಯಾರಣ್ಯ, ರೇಣುಕಾ ಪ್ರಸಾದ್, ಮೊಹಮ್ಮದ್ ಇಸ್ಮಾಯಿಲ್, ರಂಗಯ್ಯ, ರವಿಚಂದ್ರ, ಗಿರೀಶ್ ಮಾಚಳ್ಳಿ ಮತ್ತಿತರರು ಉಪಸ್ಥಿತರಿದ್ದರು.

ಎಸ್‌ಡಿಪಿಐ ಪ್ರತಿಭಟನೆ: ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಸಂಬಂಧ ಸಚಿವ ಕೆ.ಎಸ್.ಈಶ್ವರಪ್ಪ ಅವರನ್ನು ಮಂತ್ರಿ ಸ್ಥಾನದಿಂದ ವಜಾಗೊಳಿಸುವಂತೆ ಒತ್ತಾಯಿಸಿ ಎಸ್‌ಡಿಪಿಐ ವತಿಯಿಂದ ಮೈಸೂರಿನ ಉದಯಗಿರಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು. ಎಸ್‌ಡಿಪಿಐ ರಾಜ್ಯ ಸಮಿತಿ ಸದಸ್ಯರಾದ ಫೈರೋಜ್, ಉಮರ್ ಶರೀಫ್, ವಕೀಲ ಇಬ್ರಾಹಿಂ ಪಠಾನ್, ಫರ್ದೀನ್ ಮತ್ತಿತರರಿದ್ದರು.

ಸಾಂಸ್ಕೃತಿಕ ನಗರಿ ಮೈಸೂರಲ್ಲಿ ಮಳೆ ಸಿಂಚನ

ಭಾರೀ ಗಾಳಿಗೆ ಉರುಳಿ ಬಿದ್ದ ತೆಂಗಿನ ಮರ: ಕಾರು ಜಖಂ




ಮೈಸೂರು, ಏ.13(ಆರ್‌ಕೆ)–ಮೈಸೂರಲ್ಲಿ ಇಂದು ಸಂಜೆ ಮಳೆ ಸಿಂಚನವಾಯಿತು. ಮಧ್ಯಾಹ್ನದ ನಂತರ ಮೋಡ ಮುಸುಕಿದ ವಾತಾವರಣ ನಿರ್ಮಾಣವಾಗಿ ಸಂಜೆ ವೇಳೆಗೆ ಮಳೆ ಆರಂಭವಾಯಿತು. ಇದರಿಂದ ಅಗ್ರಹಾರ, ಚಾಮುಂಡಿಪುರಂ, ದೇವರಾಜ ಮೊಹಲ್ಲಾ, ವಿವಿ. ಮೊಹಲ್ಲಾ, ಬನ್ನಿಮಂಟಪ ಸೇರಿದಂತೆ ಮೈಸೂರಿನ ಹಲವೆಡೆ ಸಾಧಾರಣ ಮಳೆ ಸುರಿಯಿತು.

